ಸಂಪುಟ: 04 ಸಂಚಿಕೆ: 112 ಪುಟಗಳು: 08 ಶುಕ್ರವಾರ 05 ಜುಲೈ 2024 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ಗುರು ಎಂದರೆ ವ್ಯಕ್ತಿಯಲ್ಲ, ಒಂದು ಶಕ್ತಿ. ಅಜ್ಞಾನದ ಕತ್ತಲೆಯ ಕಳೆದು ಸುಜ್ಞಾನದೆಡೆಗೆ ಕರೆದುಕೊಂಡು ಹೋಗುವ ಶಬ್ಧವೇ ಗುರು.

## ಮುಡಾ ಅಕ್ರಮ ಪ್ರಕರಣ: ಸಿಬಿಐ ತನಿಖೆ ಇಲ್ಲ; ಗೃಹ ಸಚಿವ

• ಉದಯವಾಹಿನಿ, ಬೆಂಗಳೂರು

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಮುಡಾ ಅಕ್ರಮ ಪ್ರಕರಣವನ್ನು ಸಿಬಿಐ ತನಿಖೆಗೆ ನೀಡುವಂತೆ ಬಿಜೆಪಿ ಆಗ್ರಹ ವಿಚಾರವಾಗಿ ಪ್ರತಿಕ್ರಿಯಿಸಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಮುಡಾ ಹಗರಣವನ್ನು ಸಿಬಿಐಗೆ ವಹಿಸುವ ಪ್ರಶ್ನೆ ಇಲ್ಲ ಎಂದು ಹೇಳಿದರು. ಬಿಜೆಪಿಯವರು ಕೇಳುತ್ತಾರೆ ಎಂದು ಎಲ್ಲಾವನ್ನೂ ಸಿಬಿಐ ತನಿಖೆಗೆ ನೀಡಲು ಸಾಧ್ಯವಿಲ್ಲ.

ಮುಡಾ ಅಕ್ರಮ ಪ್ರಕರಣ ಸಿಬಿಐಗೆ ಕೊಡಲು ಆಗಲ್ಲ ಎಂದು ಹೇಳಿದರು. ಇನ್ನು ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಬಿಜೆಪಿ ಒತ್ತಾಯ ವಿಚಾರವಾಗಿ ಪ್ರತಿಕ್ರಿಯಿಸಿದ ಸಚಿವರು, ಈ ಬಗ್ಗೆ ಈಗಾಗಲೇ ಸಿದ್ದರಾಮಯ್ಯ ಸ್ಪಷ್ಟನೆ ನೀಡಿದ್ದಾರೆ. ಬಿಜೆಪಿಯವರು ಹೇಳುತ್ತಾರೆಂದು ಎಲ್ಲಾವನ್ನೂ ಸಿಬಿಐಗೆ ಕೊಟ್ಟರೆ ಇಲ್ಲೇನು ಮಾಡುವ ಹಾಗಿಲ್ಲವೇ? ಎಂದು ಪ್ರಶ್ನಿಸಿದರು.

## ಶೀಘ್ರವೇ ರಾಜ್ಯ ಸರ್ಕಾರದಿಂದ ಬ್ಯಾಗ್, ಯೂನಿಫಾರ್ಮ್

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರದಿಂದ ಅಂಗನವಾಡಿ ಕೇಂದ್ರಗಳಲ್ಲಿ ಎಲ್ ಕೆಜಿ, ಯುಕೆಜಿ ಆರಂಭಿಸಲಾಗುತ್ತಿದೆ. ಈ ಬೆನ್ನಲ್ಲೇ ರಾಜ್ಯ ಸರ್ಕಾರದಿಂದ ಗುಡ್ ನ್ಯೂಸ್ ಎನ್ನುವಂತೆ ಅಂಗನವಾಡಿ ಮಕ್ಕಳಿಗೆ ರಾಜ್ಯ ಸರ್ಕಾರದಿಂದ ಬ್ಯಾಗ್, ಯೂನಿಫಾರ್ಮ್ ವಿತರಣೆಗೆ ಚಿಂತನೆ ನಡೆಸಿದೆ.

ಬೆಂಗಳೂರಿನ ಗೃಹಕಚೇರಿಯಲ್ಲಿ ಕರ್ನಾಟಕ ರಾಜ್ಯ ಅಂಗನವಾಡಿ ಕಾರ್ಯಕರ್ತೆಯರ ಹಾಗೂ ಸಹಾಯಕಿಯರ ಫೆಡರೇಶನ್ (ಎಐಟಿಯುಸಿ) ಕಾರ್ಯಕರ್ತರು ಭೇಟಿ ಮಾಡಿ, ತಮ್ಮ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಸಲ್ಲಿಸಿದ ಮನವಿ ಸ್ವೀಕರಿಸಿ ಅವರು ಮಾತನಾಡಿದಂತ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅವರು, ಅಂಗನವಾಡಿ ಮಕ್ಕಳಿಗೆ ಬ್ಯಾಗ್, ಯೂನಿಫಾರ್ಮ್ ಕೊಡುವ ಬಗ್ಗೆ ತೀರ್ಮಾನಿಸಿದೆ ಎಂದರು. ಕರ್ನಾಟಕ ಪಬ್ಲಿಕ್ ಶಾಲೆ (ಕೆ ಪಿಎಸ್) ಹಾಗೂ ಕಲ್ಯಾಣ ಕರ್ನಾಟಕ ಭಾಗದ ಶಾಲೆಗಳಲ್ಲಿ ಎಲ್ ಕೆಜಿ, ಯುಕೆಜಿ ತರಗತಿಗಳನ್ನು ಆರಂಭಿಸಲು ಸರ್ಕಾರ ತೀರ್ಮಾನಿಸಿದ್ದು, ಇದರಿಂದ ಅಂಗನವಾಡಿ ಶಿಕ್ಷಕರಿಗೆ ಯಾವುದೇ ತೊಂದರೆ ಆಗುವುದಿಲ್ಲ ಎಂದರು.

## ಸಿಎಂ ನೇತೃತ್ವದಲ್ಲಿನ ಸಂಪುಟ ಸಭೆ ಹಲವು ಮಹತ್ವದ ನಿರ್ಧಾರ

• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ಧರಾಮಯ್ಯ ನೇತೃತ್ವದಲ್ಲಿ ನಡೆದ ಕ್ಯಾಬಿನೆಟ್ ಸಭೆಯಲ್ಲಿ ಹಲವು ಮಹತ್ವದ ವಿಷಯಗಳ ಬಗ್ಗೆ ಚರ್ಚೆ ಮಾಡಲಾಗಿದೆ. ಸಚಿವ ಸಂಪುಟ ಸಭೆಯಲ್ಲಿ ಚರ್ಚೆಯಾದ ಹಲವು ನಿರ್ಧಾರಗಳ ಬಗ್ಗೆ ಸಚಿವ ಹೆಚ್‌ಕೆ ಪಾಟೀಲ್ ಮಾಧ್ಯಮದವರೊಂದಿಗೆ ಮಾತನಾಡಿದ್ದು, ಕೌನ್ಸಲಿಂಗ್ ಮೂಲಕ ಸಬ್‌ರಿಜಿಸ್ಟ್ರಾರ್ ವರ್ಗಾವಣೆ ಬಗ್ಗೆ ಸಂಪುಟ ಸಭೆಯಲ್ಲಿ ಮಹತ್ವದ ನಿರ್ಧಾರ ಕೈಗೊಳ್ಳಲಾಗಿದೆ ಎಂದರು.

ವಿಧಾನಸೌಧದಲ್ಲಿ ಸಂಪುಟ ಸಭೆ ಬಳಿಕ ಸಚಿವ ಹೆಚ್.ಕೆ.ಪಾಟೀಲ್ ಮಾಧ್ಯಮದವರೊಂದಿಗೆ ಮಾತನಾಡಿದ್ದು, ಹಿಂದುಳಿದ ವರ್ಗಗಳ ಇಲಾಖೆಯಡಿ ಭಕ್ತವತ್ಸಲ ವರದಿಯನ್ನು ತಿರಸ್ಕರಿಸಲು ಸಂಪುಟ ಸಭೆಯಲ್ಲಿ ನಿರ್ಧರಿಸಿದೆ. ಸರ್ಕಾರಿ ನೌಕರರ ವರ್ಗಾವಣೆಗೆ ಮಾರ್ಗಸೂಚಿ ಹೊರಡಿಸಲಾಗಿತ್ತು. ಗೈಡ್‌ಲೈನ್ಸ್‌ಗಳಿಗೆ ಸಂಪುಟ ಸಭೆಯಲ್ಲಿ ಘಟನೋತ್ತರ ಅನುಮೋದನೆ ಮಾಡಲಾಗಿದೆ ಎಂದು ತಿಳಿಸಿದರು. ಕೌನ್ಸಲಿಂಗ್ ಮೂಲಕ ಸಬ್‌ರಿಜಿಸ್ಟ್ರಾರ್ ವರ್ಗಾವಣೆ ಬಗ್ಗೆ ಸಂಪುಟ ಸಭೆಯಲ್ಲಿ ಮಹತ್ವದ ನಿರ್ಧಾರ ಕೈಗೊಳ್ಳಲಾಗಿದೆ. ಇದುವರೆಗೂ ನೇರವಾಗಿ ಸಬ್ ರಿಜಿಸ್ಟ್ರಾರ್ ವರ್ಗಾವಣೆ ಮಾಡಲಾಗುತ್ತಿತ್ತು. ಈಗಿನಿಂದಲೇ ಕೌನ್ಸಲಿಂಗ್ ಮೂಲಕ ವರ್ಗಾವಣೆಗೆ ಸರ್ಕಾರ ನಿರ್ಧರಿಸಿದೆ. ಆ ಮೂಲಕ ಅಕ್ರಮ ಹಾಗೂ ಭ್ರಷ್ಟಾಚಾರ ತಡೆಗಟ್ಟಲು ವರ್ಗಾವಣೆಗೆ ಹೊಸ ನೀತಿ ಜಾರಿ ಮಾಡಲಾಗಿದೆ.

## ಪದಾಧಿಕಾರಿ, ಕಾರ್ಯಕರ್ತರ ಗಮನಕ್ಕೆ: ಸಿಎಂ ಭೇಟಿಗೆ ಅವಕಾಶ

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯನವರು, ಕೆಪಿಸಿಸಿ ಅಧ್ಯಕ್ಷರು ಹಾಗೂ ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ಕೆಪಿಸಿಸಿ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರನ್ನು ಬೆಂಗಳೂರಿನ ಕ್ವೀನ್ಸ್ ರಸ್ತೆಯ ಕಾಂಗ್ರೆಸ್ ಕಚೇರಿಯಲ್ಲಿ ಜುಲೈ 6 ರಂದು ಶನಿವಾರ ಮಧ್ಯಾಹ್ನ 3 ರಿಂದ ಸಂಜೆ 5 ಗಂಟೆವರೆಗೆ ಭೇಟಿ ಮಾಡಿ, ಅವರ ಕುಂದುಕೊರತೆ ಹಾಗೂ ಅಹವಾಲುಗಳನ್ನು ಆಲಿಸಲಿದ್ದಾರೆ. ಸಿಎಂ ಹಾಗೂ ಡಿಸಿಎಂ ಅವರನ್ನು ಭೇಟಿ ಮಾಡಲು ಬಯಸುವವರು ಮೊಬೈಲ್ ಸಂಖ್ಯೆ 7899116899 ಅನ್ನು ಸಂಪರ್ಕಿಸಿ, ತಮ್ಮ ಹೆಸರು, ಪಕ್ಷದಲ್ಲಿನ ಹುದ್ದೆ ವಿವರಗಳ ಸಮೇತ ನೋಂದಾಯಿಸಿಕೊಳ್ಳಬೇಕು. ಮೊದಲು ಬಂದವರಿಗೆ ಮೊದಲ ಭೇಟಿ ಆದ್ಯತೆ. ಪದಾಧಿಕಾರಿಗಳು ಹಾಗೂ ಕಾರ್ಯಕರ್ತರಿಗೆ ಸೀಮಿತವಾಗಿ ಏರ್ಪಡಿಸಿರುವ ಭೇಟಿ ಇದಾಗಿದ್ದು, ಶಾಸಕರು ಸೇರಿದಂತೆ ಬೇರೆ ಯಾರೂ ಆಗಮಿಸುವಂತಿಲ್ಲ ಎಂದು ಕೆಪಿಸಿಸಿ ಅಧ್ಯಕ್ಷರು ಹಾಗೂ ಡಿಸಿಎಂ ಡಿ ಕೆ ಶಿವಕುಮಾರ್ ಅವರು ಮಾಧ್ಯಮ ಹೇಳಿಕೆಯಲ್ಲಿ ತಿಳಿಸಿದ್ದಾರೆ.



ಭಾರತೀಯ ಕ್ರಿಕೆಟ್ ತಂಡದ ಪಾಳೆಯದಲ್ಲಿ ಸಂಭ್ರಮವೋ ಸಂಭ್ರಮ. ಕುಣಿದು ಕುಪ್ಪಳಿಸಿದ ಆಟಗಾರರು. ಚಾಂಪಿಯನ್ ಪಟ್ಟ ಅಲಂಕರಿಸಿ ತಾಯ್ನಾಡಿಗೆ ಬಂದಿಳಿದ ಆಟಗಾರರಿಗೆ ಅದ್ದೂರಿ ಸ್ವಾಗತ. ಈ ಅಭೂತಪೂರ್ವ ಕ್ಷಣಗಳು ಕೆರೆಬಿಯನ್ ನಾಡಿನಿಂದ ದೆಹಲಿಯ ಇಂದಿರಾಗಾಂಧಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಿಳಿದ ಆಟಗಾರರ ಸಂಭ್ರಮಕ್ಕೆ ಸಾಕ್ಷಿಯಾಯಿತು. ವಿಶ್ವಕಪ್ ಜಯಸಿದ್ದ ಭಾರತ ತಂಡ ಸ್ವದೇಶಕ್ಕೆ ಆಗಮಿಸಲು ವೆಸ್ಟ್ ಇಂಡಿಸ್‌ನಲ್ಲಿ ಚಂಡಮಾರುತ ಅಡ್ಡಗಾಲು ಆಯಿತು. ಹೀಗಾಗಿ ಅಲ್ಲೆ ಉಳಿದು ೧೬ ತಾಸುಗಳ ಸುದೀರ್ಘ ಪ್ರಯಾಣದ ಬಳಿಕ ಭಾರತಕ್ಕೆ ಬಂದಿಳಿಯಿತು. ವಿಮಾನ ನಿಲ್ದಾಣದಲ್ಲಿ ಬಸ್‌ನಲ್ಲಿ ದೆಹಲಿಯ ಐಟಿಸಿ ಪಂಚತಾರಾ ಹೊಟೇಲ್‌ಗೆ ಬಂದಿಳಿಯಿತು. ಅಲ್ಲಿಯೂ ವಿಶ್ವಕಪ್ ವಿಜೇತ ವೀರರಿಗೆ ಭವ್ಯ ಸ್ವಾಗತ ಬರಮಾಡಿಕೊಳ್ಳಲಾಯಿತು. ಭಾರತ ತಂಡದ ಆಟಗಾರ ಧರಿಸುವ ಕೇಸರಿ ಮತ್ತು ನೀಲಿ ಬಣ್ಣದಲ್ಲೇ ಸಿದ್ಧಪಡಿಸಲಾಗಿದ್ದ ಕೇಕ್‌ನ್ನು ಕತ್ತರಿಸಿ ವಿಜಯೋತ್ಸವ ಆಚರಿಸಿದ್ದು, ಗಮನಸೆಳೆಯಿತು.

# ವಿಶ್ವವಿಜೇತ ವೀರರಿಗೆ ಭವ್ಯ ಸ್ವಾಗತ

**ವಿಜಯಯಾತ್ರೆ ಭಾರತಕ್ಕೆ ಅದ್ದೂರಿ ಜಾತ್ರೆ**

ವಿಶ್ವ ಗೆದ್ದ ವೀರರನ್ನು ಕಣ್ತುಂಬಿಕೊಂಡ ಅಭಿಮಾನಿಗಳು..!

ತಾಯ್ನಾಡಿಗೆ ಮರಳಿದ 'ವಿಶ್ವ 'ವಿಜೇತ ,ಅಭಿಮಾನಿಗಳಿಂದ ಅದ್ದೂರಿ ಸ್ವಾಗತ

ಸಮುದ್ರವನ್ನೂ ಮೀರಿಸಿದ ಅಭಿಮಾನಿಗಳ ಸಾಗರ..!

• ಉದಯವಾಹಿನಿ, ನವದೆಹಲಿ:

17 ವರ್ಷಗಳ ನಂತರ ವೆಸ್ಟ್ ಇಂಡೀಸ್‌ನ ಬಾರ್ಬೋಡಸ್‌ನಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ನಡೆದ 20-20 ವಿಶ್ವಕಪ್ ಫೈನಲ್ ಪಂದ್ಯದಲ್ಲಿ ಗೆದ್ದು ವಿಶ್ವ ಚಾಂಪಿಯನ್ ಆಗಿ ಹೊರಹೊಮಿದ ಟೀಂ ಇಂಡಿಯಾದ ಆಟಗಾರರು ತಾಯ್ನಾಡಿಗೆ ಆಗಮಿಸಿದರು.ದೆಹಲಿಯ ಇಂದಿರಾಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಮುಂಜಾನೆ ವಿಶೇಷ ವಿಮಾನದಲ್ಲಿ ಟೀಂ ಇಂಡಿಯಾ ನಾಯಕ ರೋಹಿತ್ ಶರ್ಮ ನೇತೃತ್ವದ ತಂಡ ಆಗಮಿಸುತ್ತಿದ್ದಂತೆ ಎಲ್ಲೆಲ್ಲೂ ಜಯಕಾರದ ಘೋಷಣೆಗಳು ಮೊಳಗಿದವು. ವಿಮಾನ ನಿಲ್ದಾಣದ ಹೊರಭಾಗದಲ್ಲಿ ಜಮಾಯಿಸಿದ್ದ ಭಾರೀ ಸಂಖ್ಯೆಯ ಅಭಿಮಾನಿಗಳು ಟೀಂ ಇಂಡಿಯಾ ಪರ ಜೈಕಾರದ ಘೋಷಣೆಗಳನ್ನು ಕೂಗಿ ರಾಷ್ಟ್ರ ಧ್ವಜ ಹಿಡಿದು ಅಭಿಮಾನವನ್ನು ಮೆರೆದರು.

ದೆಹಲಿಯಲ್ಲಿ ಬೆಳಗಿನಿಂದಲೇ ಸುರಿಯುತ್ತಿದ್ದ ತುಂತುರು ಮಳೆಯನ್ನು ಲೆಕ್ಕಿಸದೆ ಭಾರೀ ಸಂಖ್ಯೆಯಲ್ಲಿ ಅಭಿಮಾನಿಗಳು ಜಮಾಯಿಸಿದ್ದರು. ಈ ವೇಳೆ ರೋಹಿತ್ ಶರ್ಮಾ, ವಿರಾಟ್ ಕೊಹ್ಲಿ, ಬೂಮ್ರ, ಹಾರ್ದಿಕ್ ಪಾಂಡೆ, ರವೀಂದ್ರ ಜಡೇಜಾ ಸೇರಿ ಅಭಿಮಾನಿಗಳ ಜೊತೆ ಕುಣಿದು ಕುಪ್ಪಳಿಸಿದರು. ಇದೀಗ ಭಾರತದ ಆಟಗಾರರು ದೆಹಲಿಯ ಐಟಿಸಿ ಮೌರ್ಯ ಹೋಟೆಲ್ ತಲುಪಿದ್ದಾರೆ. ಎಲ್ಲಾ ಆಟಗಾರರು ಪ್ರಧಾನಿ ಮೋದಿ ಅವರನ್ನು ಭೇಟಿ ಮಾಡಿದರು.

**ಪ್ರಧಾನಿ ಜೊತೆ ಔತಣಕೂಟ:** ಹೊಟೇಲ್‌ನಲ್ಲಿ ವಿಶ್ರಾಂತಿ ಪಡೆದ ಆಟಗಾರರು ಪ್ರಧಾನ ಮಂತ್ರಿ ನರೇಂದ್ರ ಮೋದಿ ನಿವಾಸಕ್ಕೆ ತೆರಳಿದರು. ಮೋದಿಯವರೊಂದಿಗೆ ಟ್ರೋಫಿ ಹಿಡಿದುಕೊಂಡು ತಂಡದ ಆಟಗಾರರು ಸಂಭ್ರಮಿಸಿದರು. ಈ ಸಂದರ್ಭದಲ್ಲಿ ಬಿಸಿಸಿಐ ಅಧ್ಯಕ್ಷ ರೋಜರ್ ಭಿನ್ನಿ, ಕಾರ್ಯದರ್ಶಿ ಜೈಷಾ ತಂಡದ ತರಬೇತುದಾರ ರಾಹುಲ್ ದ್ರಾವಿಡ್ ಉಪಸ್ಥಿತರಿದ್ದರು. 17 ವರ್ಷಗಳ ಬಳಿಕ ಭಾರತಕ್ಕೆ ಟಿ-20 ವಿಶ್ವಕಪ್ ತಂದುಕೊಟ್ಟ ಭಾರತ ತಂಡದ ಆಟಗಾರರ ಸಾಧನೆಯನ್ನು ಮೋದಿಯವರು ಮುಕ್ತಕಂಠದಿಂದ ಶ್ಲಾಘಿಸಿದರು. ಈ ವೇಳೆ ಭಾರತೀಯ ಆಟಗಾರರೊಂದಿಗೆ ಮೋದಿಯವರು ಸಂಭ್ರಮದ ಕ್ಷಣವನ್ನು ಹಂಚಿಕೊಂಡರು.

**1** 2024ರ ಐಸಿಸಿ ಟಿ20 ವಿಶ್ವಕಪ್ ಟೂರ್ನಿಯಲ್ಲಿ ಭಾರತ ತಂಡ ಚಾಂಪಿಯನ್ ಆಗಿದೆ.

**2** ಟಿ20 ವಿಶ್ವಕಪ್ ಗೆಲುವಿನ ಬಳಿಕ ಪ್ರಧಾನಿ ಮೋದಿಯನ್ನು ಭೇಟಿಯಾದ ಭಾರತ ತಂಡ.

**3** ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರೊಂದಿಗಿನ ಫೋಟೋ ಹಂಚಿಕೊಂಡ ಕೊಹ್ಲಿ.



### ಟೀಂ ಇಂಡಿಯಾಗೆ ವಾಟರ್ ಸೆಲ್ಯೂಟ್

ಟಿ20 ವಿಶ್ವಕಪ್ ಗೆದ್ದು ಭಾರತಕ್ಕೆ ಬಂದಿಳಿದ ಟೀಂ ಇಂಡಿಯಾದ ಆಟಗಾರರಿಗೆ ಮುಂಬೈ ಏರ್‌ಪೋರ್ಟ್‌ನಲ್ಲಿ ಅದ್ದೂರಿ ಸ್ವಾಗತ ಮಾಡಲಾಯಿತು. ಈ ವೇಳೆ ಟೀಂ ಇಂಡಿಯಾದ ಆಟಗಾರರಿಗೆ ವಾಟರ್ ಸೆಲ್ಯೂಟ್ ಮಾಡಲಾಯಿತು. ಹದಿಮೂರು ವರ್ಷಗಳ ನಂತರ ರೋಹಿತ್ ಶರ್ಮ ನೇತೃತ್ವದ ಟೀಮ್ ಇಂಡಿಯಾ ವಿಶ್ವಕಪ್ ಗೆದ್ದು ಬೀಗಿದೆ.

**ಮೋದಿ ತೋಳಿನಲ್ಲಿ ಜೂನಿಯರ್ ಬುಮ್ರಾ...!** ಭಾರತೀಯ ಕ್ರಿಕೆಟಿಗರು ಮಾತ್ರವಲ್ಲ, ಕ್ರಿಕೆಟಿಗರ ಕುಟುಂಬಸ್ಥರು ಪ್ರಧಾನಿ ಮೋದಿ ಅವರ ನಿವಾಸಕ್ಕೂ ಭೇಟಿ ನೀಡಿದ್ದಾರೆ. ಟೀಂ ಇಂಡಿಯಾದ ಸ್ಟಾರ್ ವೇಗಿ ಜಸ್ಪ್ರೀತ್ ಬುಮ್ರಾ ಮತ್ತು ಅವರ ಪತ್ನಿಯೊಂದಿಗೂ ಮೋದಿ ಮಾತನಾಡಿದ್ದಾರೆ.ಜಸ್ಪ್ರೀತ್ ಬುಮ್ರಾ ಮತ್ತು ಸಂಜನಾ ಗಣೇಶನ್ ಅವರ ಮಗ ಜೊತೆಗಿದ್ದರು. ಇಡೀ ಕುಟುಂಬದೊಂದಿಗೆ ಬುಮ್ರಾ, ಅವರ ಮಗ ತನ್ನ ತೋಳುಗಳಲ್ಲಿ ಪ್ರಧಾನಿ ಚಿತ್ರಗಳನ್ನು ತೆಗೆದುಕೊಂಡರು. ಈ ಚಿತ್ರವನ್ನು ಸ್ವತಃ ಬುಮ್ರಾ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ. ಜಸ್ಪ್ರೀತ್ ಬುಮ್ರಾ ಇತ್ತೀಚೆಗೆ ಮುಕ್ತಾಯಗೊಂಡ ಟಿ20 ವಿಶ್ವಕಪ್‌ನಲ್ಲಿ ಭಾರತ ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಸರಣಿಯ ಆರಂಭದಿಂದ ಅಂತ್ಯದವರೆಗೂ ಉತ್ತಮವಾಗಿ ಬೌಲಿಂಗ್ ಮಾಡಿದರು. ಬುಮ್ರಾ ಟಿ20 ವಿಶ್ವಕಪ್‌ನ ಸರಣಿ ಶ್ರೇಷ್ಠರಾದರು.

### ಅವಮಾನವಾದ ಜಾಗದಲ್ಲೇ ಸನ್ಮಾನ

ಮಾಜಿ ನಾಯಕ ಎಂ.ಎಸ್ ಧೋನಿ ಅವರ ನಾಯಕತ್ವದಲ್ಲಿ ಭಾರತ ತಂಡ ಚೊಚ್ಚಲ ಟಿ20 ವಿಶ್ವಕಪ್ ಗೆಲುವನ್ನು ಕ್ರಿಕೆಟ್ ಜಗತ್ತು ಮರೆಯುವಂತಿಲ್ಲ. ಹೌದು 2007ರಲ್ಲಿ ಟೀಂ ಇಂಡಿಯಾಕ್ಕೆ ಅತ್ಯಂತ ಪ್ರತಿಷ್ಠೆಯ ಟೂರ್ನಿ ಅದಾಗಿತ್ತು. 2007ರ ಅದೇ ವರ್ಷ ವೆಸ್ಟ್ ಇಂಡೀಸ್ ಆತಿಥ್ಯದಲ್ಲಿ ಏಕದಿನ ವಿಶ್ವಕಪ್ ಟೂರ್ನಿಯೂ ನಡೆದಿತ್ತು. ಆ ಆವೃತ್ತಿಯಲ್ಲಿ ಟೀಂ ಇಂಡಿಯಾ ) ಲೀಗ್ ಹಂತದಲ್ಲೇ ಹೀನಾಯ ಸೋಲು ಕಂಡು ಹೊರಬಿದ್ದಿತ್ತು. ಇದಾದ ಬಳಿಕ ದೇಶಾದ್ಯಂತ ಪ್ರತಿಭಟನೆ ನಡೆದು, ಪ್ರಮುಖ ಆಟಗಾರರ ಮನೆಗಳ ಮೇಲೆ ಕಲ್ಲು ತೂರಾಟ ನಡೆದಿತ್ತು. ಇದಾದ ಕೆಲವೇ ದಿನಗಳಲ್ಲಿ ಚೊಚ್ಚಲ ಟಿ20 ವಿಶ್ವಕಪ್ ಟೂರ್ನಿಯೂ ನಿಗದಿಯಾಗಿತ್ತು. ಏಕದಿನ ಕ್ರಿಕೆಟ್‌ನಲ್ಲಿ ಆಡಿದ್ದ ಖ್ಯಾತನಾಮರು ಟಿ20 ಆಡಲು ಹಿಂದೇಟು ಹಾಕಿದ್ದ ಕಾರಣ ವಿಕೆಟ್ ಕೀಪರ್ ಮತ್ತು ಬ್ಯಾಟರ್ ಎಂ.ಎಸ್ ಧೋನಿ ಅವರಿಗೆ ನಾಯಕತ್ವದ ಹೊಣೆ ನೀಡಲಾಯಿತು. ಟೂರ್ನಿಯುದ್ಧಕ್ಕೂ ಸಂಘಟಿತ ಪ್ರದರ್ಶನದೊಂದಿಗೆ ಟೀಂ ಇಂಡಿಯಾ ಚೊಚ್ಚಲ ಆವೃತ್ತಿಯಲ್ಲೇ ಟ್ರೋಫಿ ಎತ್ತಿ ಹಿಡಿಯಿತು.

### ರೋಹಿತ್, ದ್ರಾವಿಡ್' ಕೈ ಹಿಡಿದ ಮೋದಿ

ಬಾರ್ಬಡೋಸ್‌ನಲ್ಲಿ ನಡೆದ ಟಿ 20 ವಿಶ್ವಕಪ್ ಗೆಲುವಿನ ನಂತರ ವಿಜಯಶಾಲಿ ಭಾರತೀಯ ಕ್ರಿಕೆಟ್ ತಂಡಕ್ಕೆ ಗುರುವಾರ ಪ್ರಧಾನಿ



ಮೋದಿಯವರ ನಿವಾಸ 7, ಲೋಕ ಕಲ್ಯಾಣ ಮಾರ್ಗದಲ್ಲಿ ಆತ್ಮೀಯ ಸ್ವಾಗತ ದೊರೆಯಿತು. ಕಳೆದ ಶನಿವಾರ ಬ್ರಿಡ್ಜ್ ಟೌನ್‌ನಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ಏಳು ರನ್‌ಗಳ ಐತಿಹಾಸಿಕ ವಿಜಯದ ಸಂಕೇತವಾಗಿ 'ಚಾಂಪಿಯನ್ಸ್' ಎಂದು ಬರೆಯಲಾದ ವಿಶೇಷ ಜರ್ಸಿಗಳನ್ನು ಧರಿಸಿದ ಟೀಂ ಇಂಡಿಯಾ ಆಟಗಾರರು ಪ್ರಧಾನಿ ಮೋದಿ ಅವರೊಂದಿಗೆ ಸಂಭ್ರಮಾಚರಣೆಯ ಸಭೆಯಲ್ಲಿ ಸೇರಿದ್ದರು. ಈ ವೇಳೆ 2024ರ ಟಿ20 ವಿಶ್ವಕಪ್ ಟ್ರೋಫಿಯನ್ನ ಹಿಡಿದು ಫೋಟೋಗೆ ಪೋಸ್ ನೀಡಿದ್ದು, ಪ್ರಧಾನಿ ಮೋದಿ ಟ್ರೋಫಿ ಬದಲಿಗೆ ನಾಯಕ ರೋಹಿತ್ ಶರ್ಮಾ ಮತ್ತು ಕೋಚ್ ರಾಹುಲ್ ದ್ರಾವಿಡ್ ಅವರ ಕೈಗಳನ್ನ ಹಿಡಿದಿದ್ದಾರೆ. ಇದು ಒಗ್ಗಟ್ಟು ಮತ್ತು ನಾಯಕತ್ವದ ಈ ಸಂಕೇತವು ಆಳವಾಗಿ ಪ್ರತಿಧ್ವನಿಸಿದ್ದು, ಇದು ಭಾರತವನ್ನ ವಿಜಯದತ್ತ ಮುನ್ನಡೆಸಿದ ಏಕತೆ ಮತ್ತು ಮನೋಭಾವವನ್ನ ಸಂಕೇತಿಸುತ್ತದೆ. ರೋಹಿತ್ ಶರ್ಮಾ, ರಾಹುಲ್ ದ್ರಾವಿಡ್ ಟ್ರೋಫಿ ಹಿಡಿದರೆ, ಮೋದಿ ತಮ್ಮ ಎರಡೂ ಕೈಗಳನ್ನು ಹಿಡಿದಿದ್ದಾರೆ. ಲೀಡರ್ ಎಂದು ಬರೆದಿದ್ದಾರೆ.

ಭಾರತ ತಂಡದ ಈ ವಿಜಯಯಾತ್ರೆಗೆ ಸಾಕ್ಷಿಯಾಗಲು ಮುಂಬೈನ ಏರ್‌ಪೋರ್ಟ್‌ನಿಂದ ವಾಂಖೆಡೆ ಸ್ಟೇಡಿಯಂವರೆಗೆ ರಸ್ತೆಯ ಎರಡೂ ಬದಿಯಲ್ಲಿ ಲಕ್ಷಾಂತರ ಅಭಿಮಾನಿಗಳು ಕಿಕ್ಕಿರಿದು ಜಮಾಯಿಸಿದ್ದಾರೆ. ಮುಂಬೈನ ನಾರಿಮನ್ ಪಾಯಿಂಟ್‌ಗೆ ಬಸ್‌ನಲ್ಲಿ ಆಟಗಾರರು

### ವಿಜಯೋತ್ಸವಕ್ಕೆ ಕಡಲ ಕಿನಾರೆಯಲ್ಲಿ ಜನ ಸಾಗರ



ತೆರಳುತ್ತಿದ್ದು, ರಸ್ತೆಯ ಎರಡೂ ಬದಿಯಲ್ಲಿ ಲಕ್ಷಾಂತರ ಅಭಿಮಾನಿಗಳು ಕಿಕ್ಕಿರಿದು ಸೇರಿದ್ದಾರೆ. ವಿಶ್ವಕಪ್ ಗೆದ್ದ ಹದಿಮೂರು ವರ್ಷಗಳ ನಂತರ ಐಸಿಸಿ ಟಿ20ಐ ವಿಶ್ವಕಪ್ ಮುಡಿಗೇರಿಸಿಕೊಂಡ ರೋಹಿತ್ ಶರ್ಮ ನೇತೃತ್ವದ ಟೀಮ್ ಇಂಡಿಯ ದೆಹಲಿಯಲ್ಲಿ ಬಂದಿಳಿದು ಪ್ರಧಾನಮಂತ್ರಿ ಮೋದಿಯವರನ್ನು ಭೇಟಿಯಾಗಿ ಅವರೊಂದಿಗೆ ಮಾತುಕತೆ ನಡೆಸಿ, ಅಲ್ಲಿದ ಮುಂಬೈಗೆ ಅಗಮಿಸಿದ ವಿಶ್ವಕಪ್ ಗೆದ್ದ ನೀಲಿ ಉಡುಗೆಯ ಹುಡುಗರನ್ನು ಸ್ವಾಗತಿಸಲು ವಿಮಾನ ನಿಲ್ದಾಣ ಮತ್ತು ರಸ್ತೆಗಳಲ್ಲಿ ಅಭಿಮಾನಿಗಳ ದಂಡು ನೆರೆದಿತ್ತು. ಆಟಗಾರರು ಒಬ್ಬರ ಹಿಂದೆ ಒಬ್ಬರಾಗಿ ನಿಲ್ದಾಣದಿಂದ ಹೊರಬರುವಾಗ ಜನರಿಂದ ಚಪ್ಪಾಳೆ, ಕೇಕೆ ಮತ್ತು ಲೋಕಲ್ ಬ್ಲ್ಯೂ ಬಾಯ್ ಹಾರ್ದಿಕ್ ಪಾಂಡ್ಯ ತನ್ನ ತಲೆಯ ಮೇಲೆ ಕಪ್ ಇಟ್ಟುಕೊಂಡು ನಗುತ್ತಾ ಹೊರಬಂದರು.



# ರಾಜ್ಯ ಕಾಂಗ್ರೆಸ್ ಸರ್ಕಾರ ಪತನ: ಅಚ್ಚರಿ ಹೇಳಿಕೆ ನೀಡಿದ ಬಿವೈ ವಿ

● ಕಾಂಗ್ರೆಸ್ ಪಾಪದ ಕೊಡ ತುಂಬುತ್ತಿದೆ ● ಕಾಂಗ್ರೆಸ್ ಸರಕಾರಕ್ಕೆ ತಕ್ಕ ಪಾಠ ಕಲಿಸಬೇಕು ● ಸರಕಾರ ಎಷ್ಟು ದಿನ ಇರುತ್ತದೆಯೋ ಗೊತ್ತಿಲ್ಲ


• ಉದಯವಾಹಿನಿ, ಬೆಂಗಳೂರು

ಸಿಎಂ ಸ್ಥಾನಕ್ಕಾಗಿ ಕೂಗು, ಉಪ ಮುಖ್ಯಮಂತ್ರಿಗಾಗಿ ಕೂಗು, ಅಭಿವೃದ್ಧಿಗಾಗಿ ಹಣ ಕೇಳಿ ಕೂಗು ಕೇಳಿಸುತ್ತಿದೆ. ರಾಜ್ಯದ ಕಾಂಗ್ರೆಸ್ ಸರಕಾರಕ್ಕೆ ಇನ್ನೆಷ್ಟು ದಿನ ಜೀವ ಇರುತ್ತದೋ ಗೊತ್ತಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ತಿಳಿಸಿದರು.

ಕಾಂಗ್ರೆಸ್ ಸರಕಾರದ ಪಾಪದ ಕೊಡ ತುಂಬುತ್ತಿದೆ. ಕಾಂಗ್ರೆಸ್ ಸರಕಾರಕ್ಕೆ ತಕ್ಕ ಪಾಠ ಕಲಿಸಬೇಕು ಎಂದ ಅವರು, ರಾಜ್ಯದ ಕಾಂಗ್ರೆಸ್ ಸರಕಾರ ಎಷ್ಟು ದಿನ ಇರುತ್ತದೆಯೋ ಗೊತ್ತಿಲ್ಲ. ಸರಕಾರಕ್ಕೆ ಅಸ್ಥಿರತೆ ಕಾಡುತ್ತಿದೆ. ಕಾಂಗ್ರೆಸ್ ಒಳಜಗಳ ಮಿತಿ ಮೀರಿದೆ. ಹಾದಿ ಬೀದಿ ಹೊಡೆದಾಟ ಮುಂದುವರೆದಿದೆ. ಸಿಎಂ ಸ್ಥಾನಕ್ಕಾಗಿ ಕೂಗು, ಉಪ ಮುಖ್ಯಮಂತ್ರಿಗಾಗಿ ಕೂಗು, ಅಭಿವೃದ್ಧಿಗಾಗಿ ಹಣ ಕೇಳಿ ಕೂಗು ಕೇಳಿಸುತ್ತಿದೆ ಎಂದು ಹೇಳಿದರು.

ನರೇಂದ್ರ ಮೋದಿಜೀ ಅವರು 3ನೇ ಬಾರಿಗೆ ಅಧಿಕಾರಕ್ಕೆ ಏರಿದ್ದಾರೆ. ಇದು ದೇಶದ ಕಾರ್ಯಕರ್ತರ ಪರಿಶ್ರಮದ ಫಲ; ಇದೊಂದು ಐತಿಹಾಸಿಕ ಗೆಲುವು ಎಂದರು. ಇಂಡಿ ಒಕ್ಕೂಟ ಪೊಳ್ಳು ಭರವಸೆ ಮೂಲಕ ಅಧಿಕಾರ ಪಡೆಯಲು ಯತ್ನಿಸಿತ್ತು. ಆದರೆ, ಪ್ರಜ್ಞಾವಂತ ಮತದಾರರು ಅವರ ಷಡ್ಯಂತ್ರವನ್ನು ಬೆಂಬಲಿಸಲಿಲ್ಲ ಎಂದು ತಿಳಿಸಿದರು. ಮಾನ್ಯ ನಡ್ಡಾಜೀ, ಅಮಿತ್ ಶಾ ಅವರ ನೇತೃತ್ವದಲ್ಲಿ ಇದು ಐತಿಹಾಸಿಕ ಜಯಭೇರಿ ಎಂದು ಹೆಮ್ಮೆಯಿಂದ ನುಡಿದರು.

**ಮಿತಿ ಮೀರಿದ ಕಾಂಗ್ರೆಸ್ ಒಳಜಗಳ**



ಅಧಿಕಾರ ದರ್ಪ, ಅಧಿಕಾರ ದುರುಪಯೋಗದಿಂದ 18ರಿಂದ 20 ಸ್ಥಾನ ಗೆಲ್ಲುವ ಭ್ರಮೆಯಲ್ಲಿದ್ದ ಕಾಂಗ್ರೆಸ್ ಸರಕಾರಕ್ಕೆ ನಮ್ಮ ಕಾರ್ಯಕರ್ತರು ಪಾಠ ಕಲಿಸಿದ್ದಾರೆ. ಅವರ ಪರಿಶ್ರಮದಿಂದ, ದಬ್ಬಾಳಿಕೆ ನಡುವೆ ಎನ್‌ಡಿಎ 19 ಸಂಸದರನ್ನು ಗೆದ್ದಿದೆ. ಅದರ ಶ್ರೇಯಸ್ಸು ಕಾರ್ಯಕರ್ತರಿಗೆ ಸಲ್ಲುತ್ತದೆ ಎಂದು ಹೇಳಿದರು. ಕರ್ನಾಟಕದ ಪೊಳ್ಳು ಭರವಸೆ, ಒಡೆದಾಳುವ ನೀತಿ, ತುಷ್ಟೀಕರಣದ ಕಾಂಗ್ರೆಸ್ ಸರಕಾರದ ನೀತಿಯನ್ನು ಜನರು ಧಿಕ್ಕರಿಸಿ ನಮಗೆ ಬೆಂಬಲ ನೀಡಿದ್ದಾರೆ. ಘಟಾಪಟ್ ಸುಳ್ಳಿನ ಭರವಸೆಯನ್ನು ಜನರು ತಿರಸ್ಕರಿಸಿದ್ದಾರೆ ಎಂದು ವಿವರಿಸಿದರು.

ಬಿಜೆಪಿ ಮತ ಪ್ರಮಾಣ ಹೆಚ್ಚಾಗಿದೆ. 9 ಸಂಸದರನ್ನು ಗೆದ್ದಿದ್ದಾಗಿ ತಮ್ಮ ಬೆನ್ನು ತಟ್ಟಲು ಕಾಂಗ್ರೆಸ್ ಸರಕಾರ ಮುಂದಾಗಿದೆ. ಬಿಜೆಪಿ-ಜೆಡಿಎಸ್ 142ರಷ್ಟು ವಿಧಾನಸಭಾ ಕ್ಷೇತ್ರಗಳಲ್ಲಿ ಲೀಡ್ ಪಡೆದಿದೆ. ಇದನ್ನು ಕಾಂಗ್ರೆಸ್ಸಿನ ಸಿಎಂಗೆ ನೆನಪು ಮಾಡುವುದಾಗಿ ಹೇಳಿದರು.

### ಜಮೀರ್ ಅಹ್ಮದ್ ಎಂಬ ಬೇಜವಾಬ್ದಾರಿ ಸಚಿವ

ಬಿಜೆಪಿ ಕಾರ್ಯಕರ್ತರ ಮೇಲಿನ ದೌರ್ಜನ್ಯವನ್ನು ಅವರು ಖಂಡಿಸಿದರು. ರಾಮೇಶ್ವರಂ ಕೆಫೆ ಸ್ಫೋಟ, ವಿಧಾನಸೌಧದಲ್ಲೇ ಪಾಕಿಸ್ತಾನ್ ಜಿಂದಾಬಾದ್ ಕೂಗಿದ ಪ್ರಕರಣವನ್ನು ಉಲ್ಲೇಖಿಸಿದರು. 900ಕ್ಕೂ ಹೆಚ್ಚು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಕೇಂದ್ರ ಸರಕಾರ ಕೊಟ್ಟ ಪರಿಹಾರ ಹಣವನ್ನು ಸರಿಯಾಗಿ ನೀಡಿಲ್ಲ ಎಂದು ಆಕ್ಷೇಪಿಸಿದರು. ಇದು ರೈತ ವಿರೋಧಿ ಸರಕಾರ ಎಂದು ದೂರಿದರು. ಮೇಕೆದಾಟು ಯೋಜನೆ ಪಾದಯಾತ್ರೆ, ಹೋರಾಟವನ್ನು ಪ್ರಸ್ತಾಪಿಸಿದ ಅವರು, ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಆ ಯೋಜನೆಗೆ ಒಂದೇ ಒಂದು ರೂಪಾಯಿಯನ್ನೂ ಮೀಸಲಿಟ್ಟಿಲ್ಲವೇಕೆ ಎಂದು ಕೇಳಿದರು. ಲೋಕಸಭಾ ವಿಪಕ್ಷ ನಾಯಕ ರಾಹುಲ್ ಗಾಂಧಿಯವರ ಭಾಷಣವನ್ನೂ ಅವರು ಪ್ರಸ್ತಾಪಿಸಿದರು. ಅವರು ಹಿಂದೂಗಳ ತೇಜೋವಧೆ, ಅವಮಾನ ಮಾಡಿದ್ದಾರೆ. ಜಮೀರ್ ಅಹ್ಮದ್ ಎಂಬ ಬೇಜವಾಬ್ದಾರಿ ಸಚಿವರಿದ್ದು, ಅವರ ಮಾತಿನಲ್ಲೂ ಅಹಂಕಾರದ ಹೇಳಿಕೆ ಇದೆ ಎಂದು ಖಂಡಿಸಿದರು.

ನಾಯಿ ಬಾಲ ಡೊಂಕು ಎಂಬಂತೆ ಪರಿಸ್ಥಿತಿ ಕಾಂಗ್ರೆಸ್ಸಿನದು. ವಾಲ್ಮೀಕಿ ನಿಗಮದಲ್ಲಿ ದಲಿತ ಸಮುದಾಯದ ಅನುಕೂಲಕ್ಕಾಗಿ ಕೊಟ್ಟ ಹಣವನ್ನು ಭ್ರಷ್ಟಾಚಾರಕ್ಕೆ ಬಳಸಿದ್ದಾರೆ. ಮೈಸೂರಿನ ಮೂಡಾ ಹಗರಣದಲ್ಲಿ ಸಿಎಂ ಕುಟುಂಬದವರ ಹೆಸರು ಕೇಳಿಬರುತ್ತಿದೆ. ಇದು ಸುಮಾರು 3ರಿಂದ 4 ಸಾವಿರ ಕೋಟಿ ಮೊತ್ತದ್ದು. ಕಾನೂನು- ಸುವ್ಯವಸ್ಥೆ ಸಂಪೂರ್ಣ ಕುಸಿದಿದೆ. ಜನವಿರೋಧಿ ಸರಕಾರ ಆಡಳಿತ ನಡೆಸುತ್ತಿದೆ ಎಂದು ವಿಜಯೇಂದ್ರ ಅವರು ಟೀಕಿಸಿದರು. ಲೂಟಿ ಮಾಡುವ, ಅಭಿವೃದ್ಧಿ ಶೂನ್ಯ ಸರಕಾರ ಇಲ್ಲಿದೆ. ಅಭಿವೃದ್ಧಿಗೆ ಹಣ ಕೊಟ್ಟಿಲ್ಲ. ಶಾಲೆ ಮಕ್ಕಳು ಓಡಾಟಕ್ಕೆ ಬಸ್ ಇಲ್ಲದೆ ಪರದಾಡುವಂತಾಗಿದೆ. ಬಂಡವಾಳ ಹೂಡಿಕೆ ಶೂನ್ಯ ಎಂಬ ಸ್ಥಿತಿಗೆ ತಲುಪಿದೆ ಎಂದು ವಿವರಿಸಿದರು. ಪೆಟ್ರೋಲ್, ಡೀಸೆಲ್, ಹಾಲಿನ ಬೆಲೆ ಏರಿಕೆ ಸೇರಿ ಎಲ್ಲಾ ದರ ಏರಿಕೆ ವಿರುದ್ಧ ಹೋರಾಟ ಮುಂದುವರೆಸುತ್ತೇವೆ ಎಂದು ಪ್ರಕಟಿಸಿದರು. ಅಧಿವೇಶನದಲ್ಲಿ ಜನವಿರೋಧಿ ಸರಕಾರದ ಕಿವಿ ಹಿಂಡಲಿದ್ದೇವೆ ಎಂದರು.

**ಈ ದಿನದ ದರ** ಪೆಟ್ರೋಲ್: 102.86 ₹/L ಡೀಸೆಲ್ : 88.94 ₹/L ಬಂಗಾರ: ₹7,309/Gram24ct ₹6,700/Gram22ct ಬೆಳ್ಳಿ: ₹93.00/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಸ್ಥಿತಿ ಚೇಷ್ಟೆ ಸಂಶಯಗತಿ ವಿಚಿತ್ರ ಜ್ಞಾನ

ನಿಜಗುಣರ ಪರಮಾನುಭವ ಬೋಧೆಯ ಮಾತು. ಸ್ಥೂಲದೇಹ ಅನ್ನಮಯಕೋಶ. ಇದು ಇದ್ದಲ್ಲಿ ಇರುವುದು. ಸ್ಥೂಲದೇಹದೊಳಡಗಿದ ವಾಯು ಪ್ರಾಣಮಯಕೋಶ. ಶ್ವಾಸ ದೇಹದ ಗಮನಾಗಮನ ಚೇಷ್ಟೆ ವಾಯುವಿನ ಕಾರ್ಯ. ಮನಸ್ಸು ಮನೋಮಯಕೋಶ. ಸಂಕಲ್ಪ ವಿಕಲ್ಪ ಅದಿದನ್ನು ಮಾಡಬೇಕು ಬಿಡಬೇಕೆಂಬ ಪ್ರವೃತ್ತಿ ನಿವೃತ್ತಿಮುಖ ಮನಸ್ಸಿನ ಕಾರ್ಯ. ಇಂದ್ರಿಯಗಳೊಂದಿಗೆ ಬೆರೆತು ಪ್ರಚೋದಿಸಿ ಅವುಗಳನ್ನು ನಾನಾ ವ್ಯಕ್ತಿ ವಸ್ತು ವಿಷಯ ಪರಿಕರದ ಜೊತೆ ಸಂಪರ್ಕಿಸುವುದು ಮನಸ್ಸು. ಬುದ್ಧಿ ವಿಜ್ಞಾನಮಯಕೋಶ. ಇಂದ್ರಿಯಗಳು ವಿಷಯಗಳೊಂದಿಗೆ ಬೆರೆತಾಗ ಅವುಗಳನ್ನು ಅರಿಯುವುದು ಬುದ್ಧಿ, ಅರಿವು ಜ್ಞಾನ ವಿಷಯಜ್ಞಾನ. ಅರಿವು ಇಂದ್ರಿಯ ವಿಷಯಗಳ ಸಂಯೋಗದಿಂದ ಉಂಟಾದರೆ ಅದು ಪ್ರತ್ಯಕ್ಷ. ವಿಷಯೇಂದ್ರಿಯ ಸಂಯೋಗದಿಂದುಂಟಾಗದ ಊಹೆಯಿಂದ ತೋರಿದರೆ ಅನುಮಾನ, ಹೋಲಿಕೆಯಿಂದ ತೋರಿದರೆ ಉಪಮಾನ, ಶಬ್ದದಿಂದ ತೋರಿದರೆ ಶಾಬ್ದ ಹೀಗೆ ವಿಭಿನ್ನ. ಲೌಕಿಕ ಜ್ಞಾನ ಅಲೌಕಿಕ ಜ್ಞಾನ ಇತ್ಯಾದಿ ಜ್ಞಾನ ವೈವಿಧ್ಯ ವೈಚಿತ್ರ್ಯ. ವಿಷಯೇಂದ್ರಿಯಗಳ ಸಂಯೋಗದಿಂದ ಉಂಟಾಗುವ ಆನಂದ ಆನಂದಮಯಕೋಶ.

# ಕಾವೇರಿ ನದಿ: ಅಧ್ಯಯನಕ್ಕೆ ಸಮಿತಿ ರಚಿಸಿ ಸರ್ಕಾರ ಆದೇಶ

## ನಮ್ಮ ರಾಜ್ಯ ಸರ್ಕಾರವು ಈ ನೆಲ, ಜಲ, ರೈತರ, ನಾಗರಿಕರ ರಕ್ಷಣೆಗೆ ಸದಾ ಒಂದು ಹೆಜ್ಜೆ ಮುಂದೆ

• **ಉದಯವಾಹಿನಿ, ಬೆಂಗಳೂರು**

ರಾಜ್ಯದ ಜೀವನದಿ ಕಾವೇರಿ ನದಿಗೆ ಒಳಚರಂಡಿ ನೀರು, ಘನ ತ್ಯಾಜ್ಯ, ಕೈಗಾರಿಕ ತ್ಯಾಜ್ಯ, ಇತರೆ ಸ್ವರೂಪದ ಮಲಿನಕಾರಕಗಳು ಸೇರ್ಪಡೆಗೊಂಡು ನೀರು ಕಲುಷಿತವಾಗಿ ನೈಸರ್ಗಿಕ ಗುಣ ಕಳೆದುಕೊಂಡು ಮಾಲಿನ್ಯ ಉಂಟಾಗುತ್ತಿರುವುದನ್ನು ಹಾಗೂ ನಾಗರಿಕರು ಮತ್ತು ಜಲಚರಗಳ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತಿರುವುದರ ಬಗ್ಗೆ ಶಾಸಕರಾದ ದಿನೇಶ್ ಗೂಳಿಗೌಡ ಅವರು ಪತ್ರ ಬರೆದು ಸರ್ಕಾರದ ಗಮನ ಸೆಳೆದ ಬೆನ್ನಲ್ಲೇ ಪೂರಕ ಕ್ರಮ ಕೈಗೊಂಡಿರುವ ರಾಜ್ಯ ಸರ್ಕಾರ, ತುರ್ತು ಮಾರ್ಗೋಪಾಯಗಳನ್ನು ಕಂಡುಕೊಳ್ಳಲು ಸಂಬಂಧಪಟ್ಟ ಇಲಾಖೆಗಳ ತಜ್ಞರನ್ನೊಳಗೊಂಡ ಸಮಿತಿಯನ್ನು ರಚಿಸಿ ಆದೇಶಿಸಿದೆ. ಕಾವೇರಿ ನದಿ ನೀರು ಕಲುಷಿತಗೊಳ್ಳುತ್ತಿರುವ ಬಗ್ಗೆ ಶಾಸಕರಾದ ದಿನೇಶ್ ಗೂಳಿಗೌಡ ಅವರು ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್, ಸಚಿವರಾದ ಎಂ.ಬಿ. ಪಾಟೀಲ್, ಈಶ್ವರ ಖಂಡ್ರೆ ಅವರಿಗೆ ಪತ್ರ ಬರೆದು ಸಮಸ್ಯೆಯ ತೀವ್ರತೆಯನ್ನು ವಿವರಿಸಿದ್ದರು.

> ಈ ಆದೇಶ ತಲುಪಿದ 10 ದಿನಗಳ ಒಳಗಾಗಿ ಸಮಿತಿಯು ಸರ್ಕಾರಕ್ಕೆ ವರದಿ ಸಲ್ಲಿಸಬೇಕು. ಈ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ದಿನದಂದು ಸಮಿತಿಯ ಕಾರ್ಯಾವಧಿ ಮುಕ್ತಾಯಗೊಳ್ಳುತ್ತದೆ ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ. ಸಚಿವರು, ಸರ್ಕಾರಕ್ಕೆ ಶಾಸಕರಿಗೆ ಅಭಿನಂದನೆ

> ನಮ್ಮ ರಾಜ್ಯ ಸರ್ಕಾರವು ಈ ನೆಲ, ಜಲ, ರೈತರ, ನಾಗರಿಕರ ರಕ್ಷಣೆಗೆ ಸದಾ ಒಂದು ಹೆಜ್ಜೆ ಮುಂದೆ ಇರುತ್ತದೆ ಎಂಬುದನ್ನು ಮತ್ತೊಮ್ಮೆ ಸಾಬೀತು ಮಾಡಿದೆ. ಜೀವನದಿ ಕಾವೇರಿ ಉಳಿವಿಗಾಗಿ ಈಗ ಸಮಿತಿಯನ್ನು ರಚನೆ ಮಾಡಿರುವುದು ಅಭಿನಂದನೀಯ ಕ್ರಮವಾಗಿದೆ. ಈ ಹಿನ್ನೆಲೆಯಲ್ಲಿ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ್, ಸಚಿವರಾದ ಎಂ.ಬಿ. ಪಾಟೀಲ್, ಈಶ್ವರ ಖಂಡ್ರೆ ಅವರಿಗೆ ಧನ್ಯವಾದಗಳನ್ನು ಹೇಳಬಯಸುತ್ತೇನೆ ಎಂದು ಪ್ರತಿಕ್ರಿಯೆ ನೀಡಿದ್ದಾರೆ.
>
> **ಶಾಸಕರಾದ ದಿನೇಶ್ ಗೂಳಿಗೌಡ**



ಈಗ ಅವರ ಸೂಚನೆ ಮೇರೆಗೆ ಸಮಿತಿಯನ್ನು ರಚನೆ ಮಾಡಿ ಆದೇಶಿಸಲಾಗಿದೆ.

ಕಾವೇರಿ ನದಿಗೆ ಒಳಚರಂಡಿ ನೀರು, ಘನ ತ್ಯಾಜ್ಯ, ಕೈಗಾರಿಕೆ ತ್ಯಾಜ್ಯ ಹಾಗೂ ಇತರೆ ಸ್ವರೂಪದ ಮಲಿನಕಾರಕಗಳು ಸೇರ್ಪಡೆಗೊಂಡು ನೀರು ಕಲುಷಿತವಾಗಿ ಪರಿಸರಕ್ಕೆ ಆಗಿರುವ ಅನಾಹುತದ ತಡೆಯ ಬಗ್ಗೆ ಪರಿಶೀಲಿಸಿ 10 ದಿನಗಳ ಒಳಗಾಗಿ ವರದಿ ಸಲ್ಲಿಸಲು ರಚಿಸಲಾದ ತಜ್ಞರ ಸಮಿತಿಗೆ ಅರಣ್ಯ ಇಲಾಖೆ ಸೂಚನೆಯನ್ನು ನೀಡಿದೆ.

- ನಿರಂಜನ್, ಮುಖ್ಯ ಪರಿಸರ ಅಧಿಕಾರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಬೆಂಗಳೂರು - ಅಧ್ಯಕ್ಷರು
- ಅಧೀಕ್ಷಕ ಅಭಿಯಂತರರು, ಕಾವೇರಿ ನೀರಾವರಿ ನಿಗಮ ನಿಯಮಿತ, ಮೈಸೂರು-ಸದಸ್ಯರು
- ಅಧೀಕ್ಷಕ ಅಭಿಯಂತರರು, ಕರ್ನಾಟಕ ನಗರ ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿ, ಮೈಸೂರು - ಸದಸ್ಯರು ಅಧೀಕ್ಷಕ ಅಭಿಯಂತರರು, ಮೈಸೂರು ಮಹಾನಗರ ಪಾಲಿಕೆ - ಸದಸ್ಯರು
- ವಿಭಾಗ ಮುಖ್ಯಸ್ಥರು(HOD), ಪರಿಸರ ವಿಜ್ಞಾನ ಸದಸ್ಯರು ಅಧ್ಯಯನ ವಿಭಾಗ, ಮೈಸೂರು ವಿಶ್ವವಿದ್ಯಾಲಯ ಮಾನಸ ಗಂಗೋತ್ರಿ - ಸದಸ್ಯರು
- ಡಾ. ಬಿ.ಮನೋಜ್‌ಕುಮಾರ್, ಪ್ರಾಧ್ಯಾಪಕರು, ಶ್ರೀ ಸದಸ್ಯರು ಜಯಚಾಮರಾಜೇಂದ್ರ ಎಂಜಿನಿಯರಿಂಗ್ ಕಾಲೇಜ್ ಆಫ್ ಮೈಸೂರು -ಸದಸ್ಯರು
- ಕಾರ್ಯನಿರ್ವಾಹಕ ಅಭಿಯಂತರರು, ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ, ಮೈಸೂರು - ಸದಸ್ಯರು
- ಎಂ.ಬಿ.ಪ್ರಕಾಶ್, ನಿವೃತ್ತ ಹಿರಿಯ ಪರಿಸರ ಅಧಿಕಾರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಮೈಸೂರು - ಸದಸ್ಯರು
- ಹಿರಿಯ ಪರಿಸರ ಅಧಿಕಾರಿ, ಪ್ರಾದೇಶಿಕ ಕಛೇರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮೈಸೂರು - ಸದಸ್ಯ ಸಂಯೋಜಕರು

### ದರ್ಶನ್ ಗ್ಯಾಂಗ್‌ಗೆ ಜು. 18 ರವರೆಗೆ ನ್ಯಾಯಾಂಗ ಬಂಧನ ವಿಸ್ತರಣೆ..!

• **ಉದಯವಾಹಿನಿ, ಬೆಂಗಳೂರು**

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್ ಗ್ಯಾಂಗ್ ಗೆ ಜುಲೈ 18 ರವರೆಗೆ ನ್ಯಾಯಾಂಗ ಬಂಧನ ವಿಧಿಸಿ ಕೋರ್ಟ್ ಆದೇಶ ಹೊರಡಿಸಿದೆ. ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್ ಗ್ಯಾಂಗ್ ಇಂದು ವಿಡಿಯೋ ಕಾನ್ಫರೆನ್ಸ್ ಮೂಲಕ ವಿಚಾರಣೆಗೆ ಹಾಜರಾಗಿದ್ದು, ವಿಚಾರಣೆ ನಡೆಸಿದ ಕೋರ್ಟ್ ಜುಲೈ 18 ರವರೆಗೆ ನ್ಯಾಯಾಂಗ ಬಂಧನಕ್ಕೆ ನೀಡಿ ಬೆಂಗಳೂರಿನ ಆರ್ಥಿಕ ಅಪರಾಧಗಳ ನ್ಯಾಯಾಲಯ ಆದೇಶಿಸಿದೆ. ಈ ಪ್ರಕರಣದಲ್ಲಿ ದರ್ಶನ್ ಗೆ ಸದ್ಯಕ್ಕೆ ಬೇಲ್ ಸಿಗುವ ಸಾಧ್ಯತೆ ಬಹಳ ಕಡಿಮೆ ಎಂದು ಹೇಳಲಾಗುತ್ತಿದೆ. 90 ದಿನದೊಳಗೆ ಪ್ರಕರಣದ ಬಗ್ಗೆ ಚಾರ್ಜ್ ಶೀಟ್ ಸಲ್ಲಿಸಲು ಪೊಲೀಸರಿಗೆ ಅವಕಾಶವಿದ್ದು, ಅಷ್ಟರೊಳಗೆ ಪೊಲೀಸರು ಚಾರ್ಜ್ ಶೀಟ್ ಸಲ್ಲಿಕೆ ಮಾಡಲಿದ್ದಾರೆ.ದರ್ಶನ್ ಗ್ಯಾಂಗ್ ನಿಂದ ಕೊಲೆಯಾದ ರೇಣುಕಾಸ್ವಾಮಿ ಪ್ರಕರಣ ಎಲ್ಲರನ್ನೂ ಬೆಚ್ಚಿ ಬೀಳಿಸಿದೆ. ಕೊಲೆ ಪ್ರಕರಣದಲ್ಲಿ ನಟ ದರ್ಶನ್ ಗ್ಯಾಂಗ್ ಪರಪ್ಪನ ಅಗ್ರಹಾರದಲ್ಲಿ ಬಂಧಿಯಾಗಿದೆ.

### ಚಾಲಕರಿಂದ ಆರ್‌ಟಿಒ ಕಚೇರಿಗೆ ಮುತ್ತಿಗೆ ಪೊಲೀಸರನ್ನೇ ತಳ್ಳಿ ಕಚೇರಿಗೆ ನುಗ್ಗಿ ಆಕ್ರೋಶ

• **ಉದಯವಾಹಿನಿ, ಬೆಂಗಳೂರು**

ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಆಟೋ, ಕ್ಯಾಬ್ ಚಾಲಕರು ಪ್ರತಿಭಟನೆ ತೀವ್ರಗೊಳಿಸಿದ್ದು, ಆರ್ ಟಿಒ ಕಚೇರಿಗೆ ಮುತ್ತಿಗೆ ಹಾಕಿ ಆಕ್ರೋಶ ವ್ಯಕ್ತಪಡಿಸಿದ ಘಟನೆ ಬೆಂಗಳೂರಿನ ಶಾಂತಿನಗರದಲ್ಲಿ ನಡೆದಿದೆ. ಶಾಂತಿನಗರದಲ್ಲಿರುವ ಸಾರಿಗೆ ಇಲಾಖೆಯ ಮುಖ್ಯಕಚೇರಿ ಕಚೇರಿ ಬಳಿ ಆಟೋ, ಕ್ಯಾಬ್ ಸಮೇತವಾಗಿ ಆಗಮಿಸಿದ ಚಾಲಕರು, ಸಾರಿಗೆ ಇಲಾಖೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಸರ್ಕಾರ ತಮ್ಮ ಬೇಡಿಕೆ ಈಡೇರಿಸುವಲ್ಲಿ ವಿಳಂಬ ಧೋರಣೆ ಅನುಸರಿಸುತ್ತಿದೆ ಎಂದು ಕಿಡಿಕಾರಿದರು. ಪ್ರತಿಭಟನಾ ನಿರತ ಆಟೋ ಚಾಲಕರು ಏಕಾಏಕಿ ಆರ್ ಟಿಒ ಮುಖ್ಯ ಕಚೇರಿಗೆ ಮುತ್ತಿಗೆ ಹಾಕಿದ್ದಾರೆ. ಈ ವೇಳೆ ಪ್ರತಿಭಟನಾಕಾರನ್ನು ತಡೆಯಲು ಮುಂದಾದ ಪೊಲೀಸ್ ಅಧಿಕಾರಿಗಳನ್ನು ತಳ್ಳಿ ಕಚೇರಿ ಒಳಗೆ ನುಗ್ಗಿ ಪ್ರತಿಭಟನೆ ನಡೆಸಿದರು. ಆಟೋ, ಕ್ಯಾಬ್ ಚಾಲಕರ ಪ್ರತಿಭಟನೆ ತೀವ್ರ ಸ್ವರೂಪ ಪಡೆಯುತ್ತಿದ್ದಂತೆ ಸಾರಿಗೆ ಅಧಿಕಾರಿಗಳು ಆಟೋ ಚಾಲಕರ ಜೊತೆ ಸಭೆ ನಡೆಸಿದೆ.

### ಬಹುಕೋಟಿ ಹಗರಣ ಪ್ರಕರಣ: ಪಶ್ಚಿಮ ವಲಯ ಜಂಟಿ ಆಯುಕ್ತರ ವರ್ಗಾವಣೆ

• **ಉದಯವಾಹಿನಿ, ಬೆಂಗಳೂರು**

ಬಿಬಿಎಂಪಿಯ ಪಶ್ಚಿಮ ವಲಯ ಕಲ್ಯಾಣ ಇಲಾಖೆಯಲ್ಲಿ ಬಹುಕೋಟಿ ಅಕ್ರಮ ನಡೆದಿರುವ ಆರೋಪ ಕೇಳಿಬಂದಿದ್ದು, ಇದೀಗ ರಾಜ್ಯ ಸರ್ಕಾರ ಪಶ್ಚಿಮ ವಲಯ ಜಂಟಿ ಆಯುಕ್ತರನ್ನು ವರ್ಗಾವಣೆ ಮಾಡಿ ಆದೇಶ ಹೊರಡಿಸಿದೆ.ಬಿಬಿಎಂಪಿ ಕಲ್ಯಾಣ ಇಲಾಖೆಯಲ್ಲಿ 102 ಕೋಟಿ ಹಗರಣ ನಡೆದಿದ್ದು, ಅಸ್ತಿತ್ವದಲ್ಲಿಯೇ ಇಲ್ಲದ ಸೊಸೈಟಿಗಳಿಗೆ ಹಣ ವರ್ಗಾವಣೆ ಮಾಡಲಾಗಿದೆ ಎಂಬ ಆರೋಪ ಕೇಳಿಬಂದಿದ್ದು, ಈ ಬಗ್ಗೆ ಲೋಕಾಯುಕ್ತದಲ್ಲಿಯೂ ದೂರು ದಾಖಲಾಗಿದೆ. 2020ರಿಂದ 2021ರ ಅವಧಿಯಲ್ಲಿ ಬಿಬಿಎಂಪಿ ಪಶ್ಚಿಮ ವಲಯದಲ್ಲಿ ಬಹುಕೋಟಿ ಹಗರಣ ನಡೆದಿದೆ. ಈ ಸಂಬಂಧ ಹಣಕಾಸು ವಿಭಾಗದ 9 ಅಧಿಕಾರಿಗಳ ವಿರುದ್ಧ ದೂರು ದಾಖಲಾಗಿದೆ. ಈ ಬೆಳವಣಿಗೆ ಬೆನ್ನಲ್ಲೇ ರಾಜ್ಯ ಸರ್ಕಾರ ಜಂಟಿ ಆಯುಕ್ತರನ್ನು ವರ್ಗಾವಣೆ ಮಾಡಿದೆ.

### ಸೆಕ್ಯೂರಿಟಿ ಗಾರ್ಡ್‌ನನ್ನೇ ಬರ್ಬರವಾಗಿ ಕೊಂದ ವಿದ್ಯಾರ್ಥಿ

• **ಉದಯವಾಹಿನಿ, ಬೆಂಗಳೂರು**

ಕಾಲೇಜು ವಿದ್ಯಾರ್ಥಿಯೊಬ್ಬ ಸೆಕ್ಯೂರಿಟಿ ಗಾರ್ಡ್ ಓರ್ವರನ್ನು ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ಬೆಂಗಳೂರಿನ ಅಮೃತಹಳ್ಳಿಯಲ್ಲಿ ನಿನ್ನೆ ನಡೆದಿದೆ. ಘಟನೆಯ ದೃಶ್ಯಾವಳಿ ಸಿಸಿಟಿವಿಯಲ್ಲಿ ಸೆರೆಯಾಗಿದ್ದು, ವಿಡಿಯೋ ಎಲ್ಲೆಡೆ ವೈರಲ್ ಆಗಿದೆ. ಅಮೃತಹಳ್ಳಿಯ ಸಿಂಧಿ ಕಾಲೇಜಿನಲ್ಲಿ ಈ ಘಟನೆ ನಡೆದಿದ್ದು, ಜೈಕಿಸನ್ ರಾಯ್ ಕೊಲೆಯಾದ ಸೆಕ್ಯೂರಿಟಿ ಗಾರ್ಡ್. ಭಾರ್ಗವ್ ಎಂಬ ವಿದ್ಯಾರ್ಥಿ ಚಾಕುವಿನಿಂದ ಇರಿದು ಸೆಕ್ಯೂರಿಟಿ ಗಾರ್ಡ್ ನನ್ನು ಹತ್ಯೆ ಮಾಡಿದ್ದಾನೆ. ಸ್ಥಳದಲ್ಲೇ ಸೆಕ್ಯೂರಿಟಿ ಗಾರ್ಡ್ ಮೃತಪಟ್ಟಿದ್ದಾರೆ. ಘಟನೆಯ ದೃಶ್ಯಾವಳಿ ಸಿಸಿಟಿವಿಯಲ್ಲಿ ಸೆರೆಯಾಗಿದ್ದು, ವಿಡಿಯೋ ಎಲ್ಲೆಡೆ ವೈರಲ್ ಆಗಿದೆ. ಕುಡಿದು ಬಂದ ವಿದ್ಯಾರ್ಥಿಗಳನ್ನು ಕಾಲೇಜು ಗೇಟ್ ನಿಂದ ತಡೆದ ಸೆಕ್ಯೂರಿಟಿ ಗಾರ್ಡ್ ನನ್ನು ಭಾರ್ಗವ್ ಎಂಬ ವಿದ್ಯಾರ್ಥಿ ಚಾಕುವಿನಿಂದ ಇರಿದು ಕೊಂದಿದ್ದಾರೆ ಎನ್ನಲಾಗಿದೆ.

### ರೀಲ್ಸ್ ಶೋಕಿಗಾಗಿ ನಕಲಿ ಗನ್ ಬಳಕೆ ಕೆಜಿಎಫ್ ಚಿತ್ರದ ತಂತ್ರಜ್ಞನಿಗೆ ನೋಟಿಸ್..!

• **ಉದಯವಾಹಿನಿ, ಬೆಂಗಳೂರು**

'ರೀಲ್ಸ್' ಶೋಕಿಗಾಗಿ ನಕಲಿ ಗನ್ ಬಳಕೆ ಸಂಬಂಧ ಕೆಜಿಎಫ್ ಚಿತ್ರದ ತಂತ್ರಜ್ಞನಿಗೆ ಪೊಲೀಸರು ನೋಟಿಸ್ ನೀಡಿದ್ದಾರೆ. ನಕಲಿ ಎಕೆ-47 ರೈಫಲ್, ಬಾಡಿಗಾರ್ಡ್ ಜೊತೆ ರೀಲ್ಸ್ ಮಾಡಿದ್ದಕ್ಕಾಗಿ ಬಂಧನಕ್ಕೊಳಗಾಗಿರುವ ಸ್ಟಾರ್ ಅರುಣ್ ಕೊಟಾರೆಗೆ ನಕಲಿ ಗನ್ ಪೂರೈಸಿದ್ದೇ ಸಿನಿಮಾದ ಟೆಕ್ನಿಷಿಯನ್ ಎಂಬುದು ತನಿಖೆ ವೇಳೆ ಬಯಲಾಗಿದೆ. ಈ ಹಿನ್ನೆಲೆ ತಂತ್ರಜ್ಞ ಸಾಹಿಲ್ ಗೆ ಪೊಲೀಸರು ನೋಟಿಸ್ ನೀಡಿದ್ದಾರೆ. ಕೆಜಿಎಫ್, ಕಬ್ಜ, ಭೈರತಿ ರಣಗಲ್ ಸೇರಿ ಹಲವು ಸಿನಿಮಾಗಳಿಗೆ ತಂತ್ರಜ್ಞನಾಗಿ ಕೆಲಸ ಮಾಡಿದ್ದ ಸಾಹಿಲ್ ಗೆ ಕೊತ್ತನೂರು ಪೊಲೀಸರು ನೋಟಿಸ್ ನೀಡಿದ್ದಾರೆ. ಅರುಣ್ ಕೊಟಾರೆ ಬಾಡಿಗಾರ್ಡ್ ಥರ ಕೆಲವರನ್ನು ಇಟ್ಟುಕೊಂಡು ಅವರ ಕೈಗೆ ಎಕೆ 47 ಗನ್ ಕೊಟ್ಟು ಶೋ ಕೊಡುತ್ತಿದ್ದನು. ಅಲ್ಲದೇ ಮೈ ಮೇಲೆ ನಕಲಿ ಚಿನ್ನ ಧರಿಸಿಕೊಂಡು ಶೋ ಕೊಡುತ್ತಾ ಜನರನ್ನು ಬೆದರಿಸುತ್ತಿದ್ದನು ಎಂಬ ಆರೋಪ ಕೇಳಿಬಂದಿತ್ತು.

## ರಾಜ್ಯದಲ್ಲಿ ಡೆಂಗ್ಯೂ ಪರೀಕ್ಷೆಗೆ ದರ ನಿಗದಿ

• **ಉದಯವಾಹಿನಿ, ಬೆಂಗಳೂರು**

'ರಾಜ್ಯದಲ್ಲಿ ಡೆಂಘಿ ಜ್ವರ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಡೆಂಘಿ ಪತ್ತೆ ಹಚ್ಚುವ ಎಲಿಸಾ ಪರೀಕ್ಷೆಗೆ 300 ರೂಪಾಯಿ ಮತ್ತು ರಾಪಿಡ್ ಪರೀಕ್ಷೆಗೆ 250 ರೂಪಾಯಿ ನಿಗದಿಗೊಳಿಸಿ ಆರೋಗ್ಯ ಇಲಾಖೆ ಆದೇಶ ಹೊರಡಿಸಿದೆ.

ಸಾರ್ವಜನಿಕರಿಗೆ ಹೊರೆಯಾಗದಂತೆ ಖಾಸಗಿ ಆಸ್ಪತ್ರೆಗಳು, ಪ್ರಯೋಗಶಾಲೆಗಳು ಹಾಗೂ ಡಯೋಗ್ನೋಸ್ಟಿಕ್ ಲ್ಯಾಬೋರೇಟರಿಗಳು ಸೇರಿದಂತೆ ರಾಜ್ಯಾದ್ಯಂತ ಏಕರೂಪದ ದರ ಕಡ್ಡಾಯಗೊಳಿಸಿ ಆದೇಶಿಸಲಾಗಿದೆ.

ರಾಜ್ಯದಲ್ಲಿ ಡೆಂಗಿಜ್ವರ ಪತ್ತೆ ಹಚ್ಚುವ ಪರೀಕ್ಷೆಗಳಾದ ಎಲಿಸಾ ಹಾಗೂ ರಾಪಿಡ್ ಟೆಸ್ಟ್ ಗಳ ದರವನ್ನು ನಿಗದಿಗೊಳಿಸಲಾಗಿತ್ತು. ಖಾಸಗಿ ಆಸ್ಪತ್ರೆಗಳು ಹಾಗೂ ಖಾಸಗಿ ಪ್ರಯೋಗಶಾಲೆಗಳು ಡಯಾಗೋಸ್ಟಿಕ್ ಲ್ಯಾಬೋರೇಟರಿಗಳು ಡೆಂಗಿಜ್ವರ ಪತ್ತೆಹಚ್ಚುವ ಪರೀಕ್ಷೆಗಳಿಗೆ ವಿವಿಧ ದರಗಳನ್ನು ವಿಧಿಸಲಾಗುತ್ತಿದೆ.



ಉದಯವಾಹಿನಿ ಚಿತ್ರ

ಪ್ರಸ್ತುತ ರಾಜ್ಯದಲ್ಲಿ ಡೆಂಗಿಜ್ವರ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ಮೇಲೆ ಓದಲಾದ ಕ್ರಮಾಂಕ (2)ರನ್ವಯ, ಡೆಂಗಿ ಜ್ವರ ಪತ್ತೆ ಹಚ್ಚುವ ELISA ಹಾಗೂ Rapid ಪರಿಷ್ಕರಿಸಲು ಉದ್ದೇಶಿಸಲಾಗಿರುತ್ತದೆ. ಪ್ರಸ್ತಾವನೆಯಲ್ಲಿ ತಿಳಿಸಿರುವ ಅಂಶಗಳ ಹಿನ್ನಲೆಯಲ್ಲಿ, ರಾಜ್ಯದ ಖಾಸಗಿ ಆಸ್ಪತ್ರೆಗಳಿಗೆ ಹಾಗೂ ಖಾಸಗಿ ಟೆಸ್ಟಿಂಗ್ ಲಾಬ್ಗಳಿಗೆ ಡೆಂಗಿಜ್ವರ ಪತ್ತೆ ಹಚ್ಚುವ ELISA ಹಾಗೂ Rapid card test ದರಗಳನ್ನು ಈ ಕೆಳಕಂಡಂತೆ ಪರಿಷ್ಕರಿಸಿ ಆದೇಶಿಸಿದೆ.

## ಪರಿಸರ ಪ್ರೀತಿಸುವ ಪರಿಪಾಠ ಪ್ರತಿಯೊಬ್ಬರೂ ರೂಢಿಸಿಕೊಳ್ಳಿ

• **ಉದಯವಾಹಿನಿ, ಬೆಂಗಳೂರು**

ಕನ್ನಡ ಸಾಹಿತ್ಯ ಹಾಗೂ ಪರಿಸರವನ್ನು ಪ್ರೀತಿಸುವ ಪರಿಪಾಠವನ್ನು ಪ್ರತಿಯೊಬ್ಬರೂ ರೂಢಿಸಿಕೊಳ್ಳುವಂತೆ ಪರಿಸರ ಜಾಗೃತಿಯ ಸಮ್ಮೇಳನಾಧ್ಯಕ್ಷರಾಗಿ ಆಯ್ಕೆಯಾದ ಡಾ. ಪರಿಸರ ಮಂಜು ಮನವಿ ಮಾಡಿದರು.

ನಗರದ ಕನ್ನಡ ಸಾಹಿತ್ಯ ಪರಿಷತ್ತಿನ ಅಕ್ಕಮಹಾದೇವಿ ಸಭಾಂಗಣದಲ್ಲಿ ಮೇಘ ಮೈತ್ರಿ ಕನ್ನಡ ಸಾಹಿತ್ಯ ಸಂಘ ಆಯೋಜಿಸಿದ ಪರಿಸರ ಜಾಗೃತಿ ಸಮ್ಮೇಳನದ ಅಧ್ಯಕ್ಷತೆ ವಹಿಸಿ, ಗಿಡ ನೆಟ್ಟು, ಸಸಿಗೆ ನೀರೆರೆದು ಮಾತನಾಡಿದ ಅವರು. ನಮ್ಮ ಇಷ್ಟದ ವ್ಯಕ್ತಿಗಳನ್ನು ಪ್ರೀತಿಸಿದಂತೆ, ನಾಡಿನ ಭಾಷೆ, ಸಾಹಿತ್ಯ, ನೆಲ, ಜಲ, ವನ್ಯಜೀವಿ ಹಾಗೂ ಪರಿಸರವನ್ನು ಸಹ ಪ್ರೀತಿಸಿ, ವಿಶ್ವಾಸ ಬೆಳೆಸಿಕೊಂಡರೆ ಪರಿಸರ ಜವಾಬ್ದಾರಿ ಜೊತೆಗೆ ಜಾಗೃತಿಯೂ ಹೆಚ್ಚಿದಂತೆ ಎಂದರು.



ಉದಯವಾಹಿನಿ ಚಿತ್ರ

ಈಗಾಗಲೇ ಕಾಶ್ಮೀರದಿಂದ ಕನ್ಯಾಕುಮಾರಿಯ ವರೆಗೆ ಮೇಘಮೈತ್ರಿಯಿಂದ ಕನ್ನಡ ಕೆಲಸ ನಡೆಯುತ್ತಿದ್ದು, ಇದಕ್ಕೆ ಜನರ ಬೆಂಬಲ ಅಗತ್ಯವಿದೆ ಎಂದು ಮನವಿ ಮಾಡಿದರು. ದೇವೇಳೆ ಪರಿಸರ ಕವಿಗೋಷ್ಠಿ, ಸಸಿ ವಿತರಣೆ, ಸಾಧಕರಿಗೆ ಪ್ರಶಸ್ತಿ ಪ್ರಧಾನ, ಪರಿಸರ ಗೀತಾಗಾಯನ, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಸಹ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಭೂ ವಿಜ್ಞಾನಿ ಟಿ.ಜೆ. ಡಾ. ರೇಣುಕಾ ಪ್ರಸಾದ್, ಸಾಹಿತಿ ಹನುಮಂತಯ್ಯ, ಕಸಾಪ ನಿಘಟಪೂರ್ವ ಬೆಂ.ನಗರ ಜಿಲ್ಲಾ ಅಧ್ಯಕ್ಷ ಮಾಯಣ್ಣ, ಸಾಲುಮರದ ತಿಮ್ಮಕ್ಕನವರ ಪುತ್ರ ಉಮೇಶ್, ಡಾ. ವೆ. ಅಜಿತ್ ಕುಮಾರ್, ಶ್ರೀಮತಿ ಭಾಗ್ಯಸರ್ವಣ್, ಟಿ. ವೀರಭದ್ರಪ್ಪ, ಸಿಂಹಾದ್ರಿ, ಡಾ.ಶಿವಣ್ಣ ಜಿ ,ವಿಕ್ರಮ್, ಶ್ವೇತಾ ಪ್ರಕಾಶ್, ದಿವ್ಯ ಶ್ರೀ ಇದ್ದರೂ.

> ದಶಕದಿಂದ ಯಾವುದೇ ಸ್ವಾರ್ಥವಿಲ್ಲದೆ, ಸರ್ಕಾರದ ಸಹಕಾರವಿಲ್ಲದೆ ನಿಷ್ಠೆಯಿಂದ ವರ್ಷಪೂರ್ತಿ ಪರಿಸರ ಕಾಯಕದಲ್ಲಿ ತೊಡಗಿಸಿಕೊಂಡ ಪರಿಸರ ಪ್ರೇಮಿ ಮಂಜು ಅವರನ್ನು ಸಮ್ಮೇಳನಾಧ್ಯಕ್ಷರಾಗಿ ಆಯ್ದೆ ಮಾಡಿದ್ದು ಸಾರ್ಥಕ ತಂದಿದೆ ಎಂದರು.
>
> **-ಮೇಘಮೈತ್ರಿ ಸಂಘದ ಅಧ್ಯಕ್ಷ ರಮೇಶ್ ಕಮತಗಿ**

## ಇಂಟರ್‌ಸಿಟಿ ಎಕ್ಸ್‌ಪ್ರೆಸ್ ರೈಲು ಮಾರ್ಗದಲ್ಲಿ ಬದಲಾವಣೆ!

• **ಉದಯವಾಹಿನಿ, ಬೆಂಗಳೂರು**

ರೈಲ್ವೆ ಕಾಮಗಾರಿ ನಡೆಯುತ್ತಿರುವ ಹಿನ್ನೆಲೆಯಲ್ಲಿ ಎರ್ನಾಕುಲಂ - ಬೆಂಗಳೂರು ನಡುವೆ ಸಂಚಾರ ನಡೆಸುವ ಇಂಟರ್‌ಸಿಟಿ ಎಕ್ಸ್‌ಪ್ರೆಸ್ ರೈಲಿನ ಮಾರ್ಗ ಬದಲಾವಣೆ ಮಾಡಲಾಗಿದೆ.ಈ ಬಗ್ಗೆ ಮಾಹಿತಿ ನೀಡಿರುವ ನೈರುತ್ಯ ರೈಲ್ವೆ ವಲಯ, ಸೇಲಂ ವಿಭಾಗದಲ್ಲಿ ಸುರಕ್ಷತೆ ಸಂಬಂಧಿತ ಕಾಮಗಾರಿ ನಡೆಯುತ್ತಿದೆ.

ಈ ಹಿನ್ನೆಲೆ ದಕ್ಷಿಣ ರೈಲ್ವೇ ಇಂಟರ್‌ಸಿಟಿ ಮಾರ್ಗ ಬದಲಾವಣೆ ಮಾಡಿ ಬದಲಿ ಮಾರ್ಗ ಹಾಗೂ ವೇಳಾಪಟ್ಟಿಯನ್ನು ನೀಡಿದೆ ಎನ್ನುತ್ತಾರೆ.

ಎರ್ನಾಕುಲಂ - ಬೆಂಗಳೂರು ಇಂಟರ್‌ಸಿಟಿ:ರೈಲು ಸಂಖ್ಯೆ 12678 ಎರ್ನಾಕುಲಂ-ಕೆಎಸ್‌ಆರ್ ಬೆಂಗಳೂರು ಇಂಟರ್ ಸಿಟಿ ಎಕ್ಸ್‌ಪ್ರೆಸ್ ಜುಲೈ 4, 6, 7, 9, 10, 11, 13, 14, 15, 16, 17, 18, 20, 21, 22, 23, 24, 25, 27, 28 ಹಾಗೂ 30 ರಂದು ಎರ್ನಾಕುಲಂನಿಂದ ಹೊರಡುತ್ತದೆ. ಪೊದನೂರು ಜಂಕ್ಷನ್, ಇರುಗೂರ್ ಮತ್ತು ಸುರತ್ಕಲ್ ನಿಲ್ದಾಣಗಳ ಮೂಲಕ ತೆರಳುತ್ತದೆ. ಮಾರ್ಗದಲ್ಲಿ ಕೊಯಮತ್ತೂರು ನಿಲ್ದಾಣದಲ್ಲಿ ನಿಲುಗಡೆ ಇರುವುದಿಲ್ಲ. ಪೋದನೂರು ಜಂಕ್ಷನ್‌ನಲ್ಲಿ ಹೆಚ್ಚುವರಿ ನಿಲುಗಡೆಯನ್ನು ಒದಗಿಸಲಾಗಿದೆ.



ಉದಯವಾಹಿನಿ ಚಿತ್ರ

ಬೆಂಗಳೂರು ಎರ್ನಾಕುಲಂ ಇಂಟರ್‌ಸಿಟಿ:ರೈಲು ಸಂಖ್ಯೆ 12677 ಕೆಎಸ್‌ಆರ್ ಬೆಂಗಳೂರು-ಎರ್ನಾಕುಲಂ ಇಂಟರ್ ಸಿಟಿ ಎಕ್ಸ್‌ಪ್ರೆಸ್ ಜುಲೈ 7, 8, 10, 14, 15, 17, 21, 22, 24, 28 ರಂದು ಕೆಎಸ್‌ಆರ್ ಬೆಂಗಳೂರಿನಿಂದ ಹೊರಡುತ್ತದೆ ಇರುಗೂರ್, ಪೊದನೂರ್ ನಿಲ್ದಾಣಗಳ ಮೂಲಕ ಸಂಚರಾ ನಡೆಸಲಿದೆ. ಕೊಯಮತ್ತೂರು ನಿಲ್ದಾಣಕ್ಕೆ ತೆರಳುವುದಿಲ್ಲ.

ರೈಲು ಸಂಖ್ಯೆ 06295 ಬೆಂಗಳೂರು-ಪಂಢರಪುರ ವಿಶೇಷ ಎಕ್ಸ್‌ಪ್ರೆಸ್ ಅನ್ನು ಜುಲೈ 5 ಮತ್ತು 7 ರಂದು ರದ್ದುಗೊಳಿಸಲಾಗಿದೆ. ರೈಲು ಸಂಖ್ಯೆ 06296 ಪಂಢರಪುರ-ಬೆಂಗಳೂರು ವಿಶೇಷ ಎಕ್ಸ್‌ಪ್ರೆಸ್ ಅನ್ನು ಜುಲೈ 6 ಮತ್ತು 8 ರಂದು ರದ್ದುಗೊಳಿಸಲಾಗಿದೆ.

ರೈಲು ಸಂಖ್ಯೆ 06297 ಬೆಂಗಳೂರು-ಪಂಢರಪುರ ವಿಶೇಷ ಎಕ್ಸ್‌ಪ್ರೆಸ್ ಅನ್ನು ಜುಲೈ 6 ರಂದು ರದ್ದುಗೊಳಿಸಲಾಗಿದೆ. ರೈಲು ಸಂಖ್ಯೆ 06298 ಪಂಢರಪುರ - ಬೆಂಗಳೂರು ವಿಶೇಷ ಎಕ್ಸ್‌ಪ್ರೆಸ್ ಅನ್ನು ಜುಲೈ 7 ರಂದು ರದ್ದುಗೊಳಿಸಲಾಗಿದೆ.

### ರೈಲುಗಳ ರದ್ದು ವಿಸ್ತರಣೆ

**ಗುಂಟೂರು ವಿಭಾಗದಲ್ಲಿ ನಡೆಯುತ್ತಿರುವ ಸುರಕ್ಷತಾ ಸಂಬಂಧಿತ ಕಾಮಗಾರಿ ಹಿನ್ನೆಲೆ ಹುಬ್ಬಳ್ಳಿ ವಿಜಯವಾಡ ರೈಲನ್ನು ವಿಸ್ತರಣೆ ಮಾಡಲಾಗಿ ದೆ.ರೈಲು ಸಂಖ್ಯೆ 17329 ಎಸ್‌ಎಸ್‌ಎಸ್ ಹುಬ್ಬಳ್ಳಿ-ವಿಜಯವಾಡ ಡೈಲಿ ಎಕ್ಸ್‌ಪ್ರೆಸ್ ಜುಲೈ 31, 2024 ರವರೆಗೆ ರದ್ದು.**

**ರೈಲು ಸಂಖ್ಯೆ 17330 ವಿಜಯವಾಡ-ಎಸ್‌ಎಸ್‌ಎಸ್ ಹುಬ್ಬಳ್ಳಿ ಡೈಲಿ ಎಕ್ಸ್‌ಪ್ರೆಸ್ ಆಗಸ್ಟ್ 1, 2024 ರವರೆಗೆ ರದ್ದು.**

## ಸಿಎಂ ಕಾನೂನು ಸಲಹೆಗಾರ, ಶಾಸಕ ಎ.ಎಸ್ ಪೊನ್ನಣ್ಣ

• **ಉದಯವಾಹಿನಿ, ಬೆಂಗಳೂರು**

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಮುಡಾ ಅಕ್ರಮಕ್ಕೆ ಸಂಬಂಧಿಸಿದಂತೆ ಪ್ರತಿಪಕ್ಷ ಬಿಜೆಪಿ ವಾಗ್ದಾಳಿ ಬೆನ್ನಲ್ಲೇ ಸಿಎಂ ಸಿದ್ದರಾಮಯ್ಯರ ಕಾನೂನು ಸಲಹೆಗಾರ, ಶಾಸಕ ಎಎಸ್ ಪೊನ್ನಣ್ಣ ಆ ಬಗ್ಗೆ ಸ್ಪಷ್ಟನೆ ನೀಡಿದ್ದಾರೆ.



ಉದಯವಾಹಿನಿ ಚಿತ್ರ

**ಮುಡಾ ಹಗರಣ ವಿಚಾರ**

ಸುದ್ದಿಗೋಷ್ಠಿ ನಡೆಸಿದ ಅವರು, ಕಳೆದ ಎರಡು ಮೂರು ದಿನಗಳಿಂದ ಪ್ರತಿಪಕ್ಷಗಳು ಮುಡಾ ಹಗರಣ ವಿಚಾರ ಪ್ರಸ್ತಾಪ ಮಾಡುತ್ತಿವೆ. ಸಿಎಂ ಧರ್ಮಪತ್ನಿಗೆ ಪರಿಹಾರ ನೀಡಿದ ವಿಚಾರದಲ್ಲಿ ಹಗರಣ ದೊಡ್ಡದಾಗಿದೆ ಎಂದು ಬಿಂಬಿಸುವ ಯತ್ನ ನಡೆಯುತ್ತಿದೆ.

ಮುಖ್ಯವಾಗಿ ಇದೊಂದು ಹಗರಣ ಎಂದು ತೋರಿಸುವ ಪ್ರಯತ್ನ ಆಗುತ್ತಿದೆ ಎಂದು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು. 1998 ರಲ್ಲಿ ಜಮೀನನ್ನು ಭೂ ಸ್ವಾಧೀನ ಪ್ರಕ್ರಿಯೆಯಿಂದ ಕೈ ಬಿಡಲಾಗಿತ್ತು. ನಿಂಗಣ್ಣ ಎನ್ನುವವರಿಗೆ ಆ ಜಮೀನು ಸೇರಿತ್ತು.

2004ರಲ್ಲಿ ಮಲ್ಲಿಕಾರ್ಜುನ ಸ್ವಾಮಿಗೆ ಸೇಲ್ ಡೀಡ್ ಆಗಿತ್ತು. ಮಲ್ಲಿಕಾರ್ಜುನ ಸ್ವಾಮಿ ಸಿಎಂ ಸಿದ್ದರಾಮಯ್ಯರ ಧರ್ಮ ಪತ್ನಿಯ ಸಹೋದರ. 2005ರಲ್ಲಿ ಮಲ್ಲಿಕಾರ್ಜುನ ಸ್ವಾಮಿ ಅದನ್ನು ವ್ಯವಸಾಯೇತರ ಜಮೀನಾಗಿ ಪರಿವರ್ತಿಸಿದ್ದರು. 2010ರಲ್ಲಿ ದಾನ ಪತ್ರದ ಮೂಲಕ ಅವರ ಸಹೋದರಿ ಪಾರ್ವತಿಯವರಿಗೆ ವರ್ಗಾವಣೆ ಆಗಿತ್ತು ಎಂದು ಪೊನ್ನಣ್ಣ ಮಾಹಿತಿ ನೀಡಿದರು.

## ಒಕ್ಕಲಿಗರ ಸಂಘದ ಅಧ್ಯಕ್ಷರಾಗಿ ಸಿ.ಎನ್ ಬಾಲಕೃಷ್ಣ ಆಯ್ಕೆ

• **ಉದಯವಾಹಿನಿ, ಬೆಂಗಳೂರು**

ಒಕ್ಕಲಿಗಸಮುದಾಯದಲ್ಲಿಸಂಚಲನ ಹುಟ್ಟುಹಾಕಿರುವ ರಾಜ್ಯ ಒಕ್ಕಲಿಗರ ಸಂಘದ ಚುನಾಚಣೆ ನಡೆದಿದ್ದು ಐವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ರಾಜ್ಯ ಒಕ್ಕಲಿಗರ ಸಂಘದ ಅಧ್ಯಕ್ಷ, ಉಪಾಧ್ಯಕ್ಷ, ಪ್ರಧಾನ ಕಾರ್ಯದರ್ಶಿ, ಕಾರ್ಯದರ್ಶಿ, ಖಜಾಂಚಿ ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಒಬ್ಬೊಬ್ಬರೆ ನಾಮಪತ್ರ ಸಲ್ಲಿಸಿರುವುದರಿಂದ ಅವಿರೋಧವಾಗಿ ಪದಾಧಿಕಾರಿಗಳು ಆಯ್ಕೆ ಆಗಿದ್ದಾರೆ .

ರಾಜ್ಯ ಒಕ್ಕಲಿಗರ ಸಂಘದ ಅಧ್ಯಕ್ಷರಾಗಿ ಶಾಸಕರಾದ ಸಿ.ಎನ್ ಬಾಲಕೃಷ್ಣ ಅವರು ಆಯ್ಕೆ ಆಗಿದ್ದು, ಉಪಾಧ್ಯಕ್ಷರ ಸ್ಥಾನಕ್ಕೆ ಇಬ್ಬರು ಆಯ್ಕೆ ಆಗಿದ್ದಾರೆ ಒಬ್ಬರು ಆರ್. ಪ್ರಕಾಶ್ ಹಾಗೂ ಮತ್ತೋರ್ವರಾಗಿ ರಾಘವೇಂದ್ರ ಅವರು ಆಯ್ಕೆ ಆಗಿದ್ದಾರೆ ಇನ್ನುಳಿದ ಹಾಗೆ ಪ್ರಧಾನ ಕಾರ್ಯದರ್ಶಿಯಾಗಿ ಸಿ.ದೇವರಾಜ್ ಆಯ್ಕೆಗೊಂಡಿದ್ದು ಆ ನಂತರ ಸಹಾಯಕ ಕಾರ್ಯದರ್ಶಿಯಾಗಿ ಆರ್. ಹನುಮಂತರಾಯಪ್ಪ ಆಯ್ಕೆಗೊಂಡಿದ್ದಾರೆ.

ಇನ್ನೂ ಖಜಾಂಚಿಯಾಗಿ ಎಂ.ಎಸ್. ಉಮಾಪತಿ ಅವರು ಆಯ್ಕೆ ಆಗಿದ್ದಾರೆ.



ಉದಯವಾಹಿನಿ ಚಿತ್ರ

# ದರ್ಶನ್ ಬಂಧನದ ಬಗ್ಗೆ ಪ್ರತಿಕ್ರಿಯೆ ನೀಡಿದ ಸುಮಲತಾ..!

## ಹಲವು ಮೂಲಗಳಿಂದ ಬರುವ ಎಲ್ಲಾ ಗೊಂದಲಮಯ ಸುದ್ದಿಗಳನ್ನು ಅರ್ಥಮಾಡಿಕೊಳ್ಳಲು ನನ್ನನ್ನು ನಾನೇ ಸಮಾಧಾನಗೊಳಿಸಬೇಕಿತ್ತು

• **ಉದಯವಾಹಿನಿ, ಬೆಂಗಳೂರು**

ನಟ ದರ್ಶನ್ ಬಂಧನದ ಬಳಿಕ ಸುಮಲತಾ ಮೊದಲ ಬಾರಿ ಪ್ರತಿಕ್ರಿಯೆ ನೀಡಿದ್ದಾರೆ. ಎಕ್ಸ್ ಖಾತೆಯಲ್ಲಿ ಸುಮಲತಾ ಭಾವನಾತ್ಮಕವಾಗಿ ಪೋಸ್ಟ್ ಹಂಚಿಕೊಂಡಿದ್ದಾರೆ. ಎಲ್ಲರಿಗೂ ನಮಸ್ಕಾರ ನಾನು 44 ವರ್ಷಗಳಿಂದ ನಟಿಯಾಗಿ, ಕಲಾವಿದೆಯಾಗಿ ಸಾರ್ವಜನಿಕ ಜೀವನದಲ್ಲಿದ್ದೇನೆ ಮತ್ತು ಕಳೆದ 5 ವರ್ಷಗಳಿಂದ ಸಂಸದೆಯಾಗಿದ್ದೆ.

**ಸಿನಿಮಾ ರಾಜಕೀಯ ಘಟನೆಯಲ್ಲ**

ಅಲ್ಲದೇ, ನಾನು ಕಲಾವಿದೆಯಾಗಿ, ಪತ್ನಿಯಾಗಿ , ತಾಯಿಯಾಗಿ ಅಥವಾ ಸಂಸದೆಯಾಗಿ ಮತ್ತು ಒಂದು ವ್ಯಕ್ತಿಯಾಗಿ ನನ್ನ ಜೀವನದಲ್ಲಿ ಪ್ರತಿಯೊಂದು ಜವಾಬ್ದಾರಿಯನ್ನು ಗಂಭೀರವಾಗಿ ತೆಗೆದುಕೊಂಡಿದ್ದೇನೆ. ಸಮಾಜದಲ್ಲಿ ಜವಾಬ್ದಾರಿಯುತ ವ್ಯಕ್ತಿಯಾಗಿ, ನನ್ನ ಬಳಿ ಯಾವುದೇ ಸತ್ಯ ಅಥವಾ ಮಾಹಿತಿಯಿಲ್ಲದೆ ನಾನು ಅಸಡ್ಡೆಯ, ಅನಗತ್ಯ, ಬೇಜವಾಬ್ದಾರಿ ಹೇಳಿಕೆಗಳನ್ನು ನೀಡಲು ಸಾಧ್ಯವಿಲ್ಲ. ನಾನು ಕೆಲವು ಸಂಗತಿಗಳನ್ನು ಸ್ಪಷ್ಟಪಡಿಸಲು, ನನ್ನ ಆಲೋಚನೆಗಳು ಮತ್ತು ನೋವನ್ನು ಹಂಚಿಕೊಳ್ಳಲು ಪೋಸ್ಟ್ ಮಾಡುತ್ತಿದ್ದೇನೆ ಏಕೆಂದರೆ ಮಾಧ್ಯಮ ಅಥವಾ ಸಾಮಾಜಿಕ ಮಾಧ್ಯಮದಲ್ಲಿ ಯಾವುದೇ ಹೆಚ್ಚಿನ ಊಹಾಪೋಹಗಳನ್ನು ಪ್ರೋತ್ಸಾಹಿಸಲು ಅಥವಾ ನನ್ನ ನಿಲುವಿನ ಬಗ್ಗೆ ಅಭಿಮಾನಿಗಳಲ್ಲಿ ಯಾವುದೇ ಗೊಂದಲಗಳಿಗೆ ಎಡೆ ಮಾಡಿಕೊಡಲು ನಾನು ಬಯಸುವುದಿಲ್ಲ. ಆಘಾತ ಮತ್ತು ಯಾತನೆಯ ಮನಸ್ಸಿನ ಸ್ಥಿತಿಯಿಂದ ಹೊರಬರಲು ಮತ್ತು ಹಲವು ಮೂಲಗಳಿಂದ ಬರುವ ಎಲ್ಲಾ ಗೊಂದಲಮಯ ಸುದ್ದಿಗಳನ್ನು ಅರ್ಥಮಾಡಿಕೊಳ್ಳಲು ನನ್ನನ್ನು ನಾನೇ ಸಮಾಧಾನಗೊಳಿಸಬೇಕಿತ್ತು. ಇದು ನಾನು ಸಾಂದರ್ಭಿಕವಾಗಿ ಪ್ರತಿಕ್ರಿಯಿಸಲು ಯಾವುದೋ ಸಿನಿಮಾ ಅಥವಾ ರಾಜಕೀಯ ಘಟನೆಯಲ್ಲ. ಈ ಬಗ್ಗೆ ಚರ್ಚಿಸಲು ಅಥವಾ ಅಂತಹ ಅಪರಾಧದಲ್ಲಿ ಆರೋಪಿಯಾಗಿ ದರ್ಶನ್ ನಿಂತಿರುವುದನ್ನು ನೋಡುವುದು ನನಗೆ ತುಂಬಾ ನೋವಿನ ಸಂಗತಿ ಎಂದು ಜನರು ಅರ್ಥಮಾಡಿಕೊಳ್ಳುತ್ತಾರೆ ಎಂದು ನಾನು ಭಾವಿಸುತ್ತೇನೆ. ಆರೋಪಿಯಾಗಿರುವುದು ಎಂದರೆ ಅವನು ಅಪರಾಧಿ ಎಂದು ಅರ್ಥವಲ್ಲ ಎಂಬುದನ್ನು ನೆನಪಿನಲ್ಲಿಡೋಣ. ಬೇರೆಯವರಂತೆ ಕಾನೂನಾತ್ಮಕವಾಗಿ ತನ್ನನ್ನು ತಾನು ಸಮರ್ಥಿಸಿಕೊಳ್ಳುವ ಹಕ್ಕು ಅವರಿಗೂ ಇದೆ.

ದರ್ಶನ್ ಯಾವಾಗಲೂ ನನ್ನನ್ನು ಮದರ್ ಇಂಡಿಯಾ ಎಂದು ಕರೆಯುತ್ತಾರೆ ಮತ್ತು ನಾನು ಬದುಕಿರುವವರೆಗೂ ಅವನು ನನ್ನ ಹಿರಿಯ ಮಗನಾಗಿರುತ್ತಾನೆ. ನಮ್ಮ ಬಂಧ ಒಂದೇ ಮತ್ತು ಯಾವುದೂ ಅದನ್ನು ಬದಲಾಯಿಸಲು ಸಾಧ್ಯವಿಲ್ಲ.



> ಯಾವ ತಾಯಿಯೂ ತನ್ನ ಮಗುವನ್ನು ಈ ರೀತಿಯ ಪರಿಸ್ಥಿತಿಯಲ್ಲಿ ನೋಡುವುದನ್ನು ಸಹಿಸುವುದಿಲ್ಲ. ನಾನು ದರ್ಶನ್ ಅವರನ್ನು ಪ್ರೀತಿಸುವ ಹೃದಯ ಹೊಂದಿರುವ, ಅತ್ಯಂತ ಕಾಳಜಿಯುಳ್ಳ ಮತ್ತು ಉದಾರ ವ್ಯಕ್ತಿ ಎಂದು ತಿಳಿದಿದ್ದೇನೆ. ಪ್ರಾಣಿಗಳ ಬಗ್ಗೆ ಅವನ ಸಹಾನುಭೂತಿ ಮತ್ತು ಸಹಾಯ ಮಾಡುವ ಮನೋಭಾವವು ಯಾವಾಗಲೂ ಅವನ ಸ್ವಭಾವದ ಭಾಗವಾಗಿದೆ. ಈ ಕೃತ್ಯವನ್ನು ಮಾಡುವ ವ್ಯಕ್ತಿತ್ವ ದರ್ಶನ್ ಅವರದ್ದಲ್ಲ ಎಂದು ನಾನು ನಂಬಿದ್ದೇನೆ. ಈ ಪ್ರಕರಣ ನ್ಯಾಯಾಲಯದಲ್ಲಿರುವುದರಿಂದ ಈ ಬಗ್ಗೆ ಸದ್ಯಕ್ಕೆ ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ.

> ನಮ್ಮಲ್ಲಿ ಯಾರೂ ಕಾನೂನಿಗಿಂತ ಮೇಲಲ್ಲ ಮತ್ತು ನಾವು ಅದನ್ನು ಗೌರವಿಸಬೇಕು, ಮತ್ತು ತಾಳ್ಮೆಯಿಂದ ಕಾಯಬೇಕು. ಒಳ್ಳೆಯ ಸಮಯ ಮರಳಲು ಪ್ರಾರ್ಥಿಸಬೇಕು. ನಮ್ಮ ಕಾನೂನು ವ್ಯವಸ್ಥೆಯ ಮೇಲೆ ನಂಬಿಕೆ ಇರಲಿ. ದೇವರಲ್ಲಿ ನಂಬಿಕೆಯಿರಲಿ. ಎಲ್ಲವೂ ಸರಿಯಾಗುತ್ತವೆ. ಸತ್ಯಮೇವ ಜಯತೇ..
>
> **ಶ್ರೀಮತಿ ಸುಮಲತಾ ಅಂಬರೀಶ್**

ಅವರ ತಾಯಿಯಾಗಿ ನಾನು ಸತ್ಯ ಹೊರಬರಲಿ ಮತ್ತು ಎಲ್ಲರಿಗೂ ನ್ಯಾಯ ಸಿಗಲಿ ಎಂದು ದೇವರಲ್ಲಿ ನಿರಂತರವಾಗಿ ಪ್ರಾರ್ಥಿಸುತ್ತಿದ್ದೇನೆ. ಅವರು ತಮ್ಮನ್ನು ತಾವು ನಿರಪರಾಧಿ ಎಂದು ಸಾಬೀತುಪಡಿಸಿ ಹೊರಬರುತ್ತಾರೆ ಮತ್ತು ಚಿತ್ರೀಕರಣ, ಸಾಮಾನ್ಯ ಜೀವನವನ್ನು ಪುನರಾರಂಭಿಸುತ್ತಾರೆ ಎಂದು ನಾನು ಭರವಸೆ ಹೊಂದಿದ್ದೇನೆ. ದರ್ಶನ್ ಅಭಿಮಾನಿಗಳಿಗೆ ಒಂದು ಹೃತ್ಪೂರ್ವಕ ವಿನಂತಿ, ದಯವಿಟ್ಟು ಶಾಂತವಾಗಿರಿ ಮತ್ತು ಈ ಕ್ಷಣದಲ್ಲಿ ಹೇಳಿಕೆಗಳನ್ನು ನೀಡಬೇಡಿ ಅಥವಾ ಯಾವುದೇ ನಕಾರಾತ್ಮಕತೆಗೆ ಪ್ರತಿಕ್ರಿಯಿಸಬೇಡಿ. ಅದು ಅವರ ಕುಟುಂಬ ಅಥವಾ ಹತ್ತಿರದವರ ಮೇಲೆ ಪರಿಣಾಮ ಬೀರಬಹುದು. ಇದು ಕೇವಲ ಕೆಟ್ಟ ಹಂತ, ಆದರೆ ಅವರಿಗೆ ನಮ್ಮೆಲ್ಲರ ನೈತಿಕ ಬೆಂಬಲದ ಅಗತ್ಯವಿದೆ. ಆದ್ದರಿಂದ ಎದೆಗುಂದಬೇಡಿ.

# ಜಿಲ್ಲೆಯಲ್ಲಿ 686 ಮಂದಿಗೆ ರಕ್ತಪರೀಕ್ಷೆ: 57 ಡೆಂಗಿ ಪ್ರಕರಣ ದೃಢ

## • ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿಯೇ ಪರೀಕ್ಷೆ ನಡೆಸಿ 10 ನಿಮಿಷದಲ್ಲಿ ಫಲಿತಾಂಶ ತಿಳಿದುಕೊಳ್ಳಬಹುದಾಗಿದೆ

• ಉದಯವಾಹಿನಿ ಕೋಲಾರ

ಮಳೆಗಾಲ ಕಾರಣ ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಡೆಂಗಿ ಜ್ವರ ಪ್ರಕರಣಗಳು ಏರಿಕೆಯಾಗುತ್ತಿದ್ದು, ಕೋಲಾರ ಜಿಲ್ಲೆಯಲ್ಲಿ ತಕ್ಕಮಟ್ಟಿಗೆ ನಿಯಂತ್ರಣದಲ್ಲಿದೆ. ಇದೇ ವರ್ಷದ ಜನವರಿಯಿಂದ ಜೂನ್ ಅಂತ್ಯದವರೆಗೆ ಜಿಲ್ಲೆಯಲ್ಲಿ 686 ಮಂದಿಯ ರಕ್ತಪರೀಕ್ಷೆಗಳನ್ನು ಮಾಡಿದ್ದು, ಇದರಲ್ಲಿ 57 ಪ್ರಕರಣಗಳಲ್ಲಿ ಡೆಂಗಿ ಇರುವುದು ದೃಢಪಟ್ಟಿದೆ. ಎಲ್ಲೂ ಸಾಮೂಹಿಕ ಜ್ವರದಿಂದ ಬಳಲುತ್ತಿರುವ ಪ್ರಕರಣ ಕಂಡುಬಂದಿಲ್ಲ.

ಆರೋಗ್ಯ ಇಲಾಖೆಯು ಜ್ವರದಿಂದ ಬಳಲುತ್ತಿರುವವರು ಮತ್ತು ಸಂಶಯಾಸ್ಪದ ಪ್ರಕರಣಗಳ ಮೇಲೆ ಕಣ್ಗಾವಲು ಇರಿಸಿ ಪರೀಕ್ಷೆ ಮಾಡುತ್ತಿದೆ. ರಕ್ತದ ಮಾದರಿ ಸಂಗ್ರಹಿಸಿ ಅವುಗಳನ್ನು ಕೋಲಾರ ನಗರದ ಎಸ್‌ಎನ್‌ಆರ್ ಜಿಲ್ಲಾಸ್ಪತ್ರೆ ಆವರಣದಲ್ಲಿರುವ ಪ್ರಯೋಗಾಲಯದಲ್ಲಿ ಪರೀಕ್ಷೆ ನಡೆಸಲಾಗುತ್ತಿದೆ. ಪಾಸಿಟಿವ್ ಬಂದರಷ್ಟೇ ಅವುಗಳನ್ನು ಆರೋಗ್ಯ ಇಲಾಖೆ ಡೆಂಗಿ ಎಂದು ದೃಢಪಡಿಸಿ ವರದಿ ರವಾನೆ ಮಾಡುತ್ತದೆ. ಈಚೆಗೆ ತುರ್ತು ಕಿಟ್ ನೀಡಿದ್ದು, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿಯೇ ಪರೀಕ್ಷೆ ನಡೆಸಿ 10 ನಿಮಿಷದಲ್ಲಿ ಫಲಿತಾಂಶ ತಿಳಿದುಕೊಳ್ಳಬಹುದಾಗಿದೆ.

**ಆಶಾ ಕಾರ್ಯಕರ್ತೆಯರು ಜಾಗೃತಿ**

**ಪ್ರತಿ ಗ್ರಾಮಗಳಲ್ಲಿ ಆಶ್ರಿತ ರೋಗಗಳ ನಿಯಂತ್ರಣ ಸಂಬಂಧ ಸಿಬ್ಬಂದಿ ಹಾಗೂ ಆಶಾ ಕಾರ್ಯಕರ್ತೆಯರು ಜಾಗೃತಿ ಮೂಡಿಸುವ ಜೊತೆಗೆ ನಿಗಾವಹಿಸಿದ್ದಾರೆ. ಹಳ್ಳಿಗಳಿಗೆ ತೆರಳಿ ಲಾರ್ವಾ ಸರ್ವೆ ಕೆಲಸ ಮಾಡುತ್ತಿದ್ದಾರೆ. ಪ್ರತಿ ಗ್ರಾಮಕ್ಕೆ, ಬಡಾವಣೆಗಳಿಗೆ ತಿಂಗಳಿಗೆ ಎರಡು ಬಾರಿ ತೆರಳಿ ಸರ್ವೆ ನಡೆಸಲಾಗುತ್ತಿದೆ. ನಿಂತ ನೀರಲ್ಲಿ 15 ದಿನಗಳೊಗೊಮ್ಮೆ ಮೊಟ್ಟೆ ಇರುತ್ತದೆ. ಮರಿಯಾಗುವುದರೊಳಗೆ ನಾಶ ಮಾಡುವುದು ನಮ್ಮ ಉದ್ದೇಶ' ಎಂದರು.**

ಖಾಸಗಿ ಆಸ್ಪತ್ರೆಯಲ್ಲಿಯೂ ಡೆಂಗಿ ಪ್ರಕರಣಗಳು ವರದಿಯಾಗುತ್ತಿವೆ. ಖಾಸಗಿ ಆಸ್ಪತ್ರೆಗಳಲ್ಲಿ ಪರೀಕ್ಷೆ ಮಾಡಿಸಿಕೊಂಡವರು ಕಡ್ಡಾಯವಾಗಿ ಮಾಹಿತಿ ನೀಡಬೇಕು ಎಂದು ಈಗಾಗಲೇ ಇಲಾಖೆ ಎಲ್ಲಾ ಆಸ್ಪತ್ರೆಗಳ ಮುಖ್ಯಸ್ಥರಿಗೆ ಸೂಚಿಸಿದೆ. ಈಗ ಸಂಗ್ರಹಿಸುತ್ತಿರುವ ರಕ್ತದ ಮಾದರಿ ಯಲ್ಲಿ ಡೆಂಗಿ, ಮಲೇರಿಯಾ, ಚಿಕುನ್ ಗುನ್ಯಾ ಪತ್ತೆ ಪರೀಕ್ಷೆಯನ್ನು ಮಾಡಲಾಗುತ್ತಿದೆ. ಜಿಲ್ಲೆಯಲ್ಲಿ 22 ಚಿಕುನ್ ಗುನ್ಯ ಪ್ರಕರಣ ಹಾಗೂ ಎರಡು ಮಲೇರಿಯಾ ಪ್ರಕರಣ ಪತ್ತೆಯಾಗಿವೆ. ಜಿಲ್ಲೆಯಲ್ಲಿ ಕೋಲಾರ ನಗರದಲ್ಲಿ ಅಧಿಕ ಡೆಂಗಿ ಎಸ್‌ಎನ್‌ಆರ್ ಜಿಲ್ಲಾಸ್ಪತ್ರೆ ಆವರಣದಲ್ಲಿ ಪ್ರಯೋಗಾಲಯ 15 ದಿನಗಳಿಗೊಮ್ಮೆ ಲಾರ್ವಾ ಸರ್ವೆ ಡಾ.ರವಿಕುಮಾರ್ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಜಿಲ್ಲೆಯಲ್ಲಿ ಡೆಂಗಿ ನಿಯಂತ್ರಣದಲ್ಲಿದೆ. ಅಲ್ಲೊಂದು ಇಲ್ಲೊಂದು ಪತ್ತೆಯಾಗುತ್ತಿದೆ. ಉಳಿದ ಜಿಲ್ಲೆಗಳ ರೀತಿ ಒಂದೇಕಡೆ ಹೆಚ್ಚು ಪ್ರಕರಣ ಇಲ್ಲ. ದಿನ ಬಳಕೆಯ ತೊಟ್ಟಿ ಮತ್ತು ಡ್ರಂಗಳನ್ನು ವಾರಕ್ಕೊಮ್ಮೆ ತೊಳೆದು ಒಣಗಿಸಿ ಡ್ರೈ ಡೇ ಆಚರಿಸಬೇಕು, ನೀರಿನ ಟ್ಯಾಂಕ್ ಹಾಗೂ ಓವರ್ ಹೆಡ್ ಟ್ಯಾಂಕ್‌ಗಳನ್ನು ನಿಯಮಿತವಾಗಿ ಸ್ವಚ್ಛಗೊಳಿಸಬೇಕು, ಖಾಲಿ ನಿವೇಶನ ಸ್ವಚ್ಛಗೊಳಿಸುತ್ತಿಲ್ಲ. ಚರಂಡಿಗಳು ಕಟ್ಟಿಕೊಂಡು ರಸ್ತೆಗೆ ಹರಿಯುತ್ತಿದ್ದರೂ ಕೇಳುವವರಿಲ್ಲ' ಎಂದೂ ದೂರುತ್ತಿದ್ದಾರೆ. ಸೊಳ್ಳೆ ಕಾಟ ಹೆಚ್ಚುತ್ತಿದ್ದು ಜಿಲ್ಲೆಯಲ್ಲಿ ಹೆಚ್ಚು ಡೆಂಗಿ ಪ್ರಕರಣ ಇರುವುದು ಕೋಲಾರದಲ್ಲೇ. ಸೊಳ್ಳೆಗಳ ನಿಯಂತ್ರಣಕ್ಕೆ ಫಾಗಿಂಗ್ ಕೂಡ ಮಾಡುತ್ತಿಲ್ಲ ಎಂದಿದ್ದಾರೆ.


ಉದಯವಾಹಿನಿ ಚಿತ್ರ

**ಈಡಿಸ್ ಎಂಬ ಸೊಳ್ಳೆಯಿಂದ ಡೆಂಗಿ ಹರಡುತ್ತದೆ. ಈ ಸೊಳ್ಳೆಯು ಡೆಂಗಿ ಇದ್ದವರಿಗೆ ಕಚ್ಚಿ ಆರೋಗ್ಯವಂತರಿಗೆ ಕಚ್ಚಿದರೆ ವಾರದ ಮೇಲೆ ಡೆಂಗಿ. ಮೈಕೈ ನೋವು, ತಲೆನೋವು, ಜ್ವರ, ಸ್ನಾಯು ಮತ್ತು ಕೀಲುಗಳ ನೋವು ಬರುತ್ತದೆ ಎಂದು ವೈದ್ಯರು ಹೇಳಿದ್ದಾರೆ.**

**ಜಿಲ್ಲೆಯಲ್ಲಿ ಮಲೇರಿಯಾ, ಡೆಂಗಿ ಹಾಗೂ ಚಿಕನ್ ಗುನ್ಯಾದಂತಹ ಸಮುದಾಯ ರೋಗಗಳು ತೀರಾ ಕಡಿಮೆ. ಹೊರ ರಾಜ್ಯಗಳಿಂದ ಬರುವವರಿಂದ ರೋಗಗಳು ಹರುಡುತ್ತಿವೆ. ಆದ್ದರಿಂದ ಆರೋಗ್ಯ ಇಲಾಖೆಯು ಇಂತಹವರನ್ನು ಗಮನಿಸಿ ರಕ್ತ ಪರೀಕ್ಷೆ ನಡೆಸುತ್ತಿದೆ. ಶ್ರೀನಿವಾಸಪುರ ತಾಲ್ಲೂಕಿನ ಮಾವಿನ ಮಂಡಿಯಲ್ಲಿ ಉತ್ತರಪ್ರದೇಶದ ಇಬ್ಬರಿಗೆ ಮಲೇರಿಯಾ ದೃಢ ಪಟ್ಟ ಹಿನ್ನಲೆ, ಸುತ್ತಮುತ್ತ 72ಕ್ಕೂ ಅಧಿಕ ವ್ಯಕ್ತಿಗಳಿಗೆ ರಕ್ತ ಪರೀಕ್ಷೆ ನಡೆಸಲಾಯಿತು. ಉಳಿದವರಲ್ಲಿ ಕಾಣಿಸಿಕೊಂಡಿಲ್ಲ**

**-ಡಾ.ರವಿಕುಮಾರ್, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ**

**ಸಂಶಯಾಸ್ಪದ ಪ್ರಕರಣಗಳ ಮೇಲೆ ಕಣ್ಗಾವಲು**

# ಜಲ ಜೀವನ್ ನಲ್ಲಿಗಳಲ್ಲಿ ನೀರಿಲ್ಲ, ಗ್ರಾಮಸ್ಥರ ಕಣ್ಣಲ್ಲಿ ಬರುತ್ತಿದೆ ನೀರು

• ಉದಯವಾಹಿನಿ ಕೋಲಾರ

ಮನೆ ಮನೆಗೆ ಶುದ್ಧ ಕುಡಿಯುವ ನೀರಿನ ನೀರು ಒದಗಿಸುವ ಸಲುವಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಪಾಲುದಾರಿಕೆ ಅನುದಾನದ ಮೂಲಕ ಜಾರಿಗೊಳಿಸಿರುವ ಜಲ ಜೀವನ್ ಮಿಷನ್ ಯೋಜನೆಯಿಂದ ನಲ್ಲಿಗಳಿಂದ ನೀರು ಬರುತ್ತಿಲ್ಲ, ಆದರೆ ಜನರ ಕಣ್ಣಿಂದ ನೀರು ಬರುತ್ತಿದೆ ಎಂದು ಎನ್ ಲೋಕೇಶ್ ರವರು ಆರೋಪಿಸಿದರು.

ಇದೇ ಸಂದರ್ಭದಲ್ಲಿ ನರಸಾಪುರ ಗ್ರಾಮದ ಪತ್ರಿಕಾ ವರದಿಗಾರರಾದ ಎನ್ ಲೋಕೇಶ್‌ರವರು ಮಾತನಾಡಿ ತಾಲ್ಲೂಕಿನ ನರಸಾಪುರ ಗ್ರಾಮದಲ್ಲಿ ಜಲ ಜೀವನ್ ಮಿಷನ್ ಯೋಜನೆಯ ಮೂಲಕ ಪ್ರತಿ ಮನೆ ಮನೆಗೂ ನಲ್ಲಿಯ ಮೂಲಕ ನೀರನ್ನು ನೀಡುವ ಕಾಮಗಾರಿ ಪ್ರಾರಂಭವಾಗಿ ಎಂಟು ತಿಂಗಳುಗಳಾಗಿದೆ ಇದುವರೆಗೂ ಮುಗಿದಿಲ್ಲ, ಕಾಮಗಾರಿ ಪಡೆದ ಗುತ್ತಿಗೆದಾರ ಪ್ರಾರಂಭದಲ್ಲಿ ಗ್ರಾಮದ ಎಲ್ಲಾ ರಸ್ತೆಗಳನ್ನು ಪೈಪ್‌ಲೈನ್ ಅಳವಡಿಸಲು ಯಂತ್ರಗಳ ಮೂಲಕ ಸಿಮೆಂಟ್ ರಸ್ತೆಗಳನ್ನು ಕತ್ತರಿಸಿದ್ದು ಪ್ರಾರಂಭದಲ್ಲಿ ತೋರಿದ ಆಸಕ್ತಿ ಮರೆತುಹೋಗಿದ್ದಾರೆ ಎಂದು ಆರೋಪಿಸಿದರು.


ಉದಯವಾಹಿನಿ ಚಿತ್ರ

ಇದರಿಂದ ಕಾಮಗಾರಿ ಪೂರ್ಣಗೊಳ್ಳದೆ ಸಾರ್ವಜನಿಕರು ಹಾಗೂ ದ್ವಿಚಕ್ರ ವಾಹನಗಳು ಓಡಾಡಲು ಆಗುತ್ತಿಲ್ಲ, ರಸ್ತೆಗಳು ಕುಸಿದು ಹಳ್ಳ ಬಿದ್ದಿವೆ, ಸಂಬಂಧ ಪಟ್ಟ ಇಲಾಖೆ ಅಧಿಕಾರಿಗಳನ್ನು ಸಂಪರ್ಕಿಸಿದಾಗ ಲೋಕಸಭಾ ಚುನಾವಣೆಯ ನೆಪ ಹೇಳುತ್ತಿದ್ದರು.

ಚುನಾವಣಾ ನೀತಿ ಸಂಹಿತೆ ಆರಂಭಕ್ಕೆ ಮೊದಲೇ ಕಾಮಗಾರಿ ಕೈಗೊಂಡಿದ್ದರೆ ಮುಂದುವರೆಸಲು ಯಾವುದೇ ರೀತಿಯ ಅಡ್ಡಿ ಇರಲಿಲ್ಲ ಆದರೆ ಅಧಿಕಾರಿಗಳಿಗೆ ಲೋಕಸಭಾ ಚುನಾವಣೆಯ ನೆಪ ಸಿಕ್ಕಿತು, ಆದರೂ ಚುನಾವಣೆ ಮುಗಿದು ಫಲಿತಾಂಶ ಬಂದು ಒಂದು ತಿಂಗಳಾಗಿದೆ ಆದರೂ ಗುತ್ತಿಗೆದಾರ ಕಾಮಗಾರಿಯತ್ತ ಇದುವರೆಗೂ ನೋಡಿಲ್ಲ. ಕಾಮಗಾರಿ ಮುಂದುವರೆಸುವಂತೆ ಗುತ್ತಿಗೆದಾರನ ಮೇಲೆ ಒತ್ತಡ ಹಾಕುವ ಕೆಲಸವನ್ನು ಅಧಿಕಾರಿಗಳು ಮಾಡುತ್ತಿಲ್ಲ ಎಂದರು.

**ಈಗ ಮಳೆಗಾಲ ಪ್ರಾರಂಭವಾಗಿದೆ ಮುಂದಿನ ದಿನಗಳಲ್ಲಿ ಮಳೆ ಇನ್ನೂ ಹೆಚ್ಚಾಗಲಿದೆ. ಮಳೆ ಬಂದರೆ ರಸ್ತೆಗಳಲ್ಲಿನ ಹಳ್ಳಗಳಲ್ಲಿ ನೀರು ನಿಂತು ಮತ್ತಷ್ಟು ಅವ್ಯವಸ್ಥೆ ಉಂಟಾಗುತ್ತಿದೆ. ಇನ್ನಾದರೂ ಅಧಿಕಾರಿಗಳು ಎಚ್ಚೆತ್ತು ಕಾಮಗಾರಿ ಆರಂಭಿಸಿ ಶೀಘ್ರದಲ್ಲೇ ಮುಗಿಸುವತ್ತ ಗಮನಹರಿಸಬೇಕು -ಎನ್ ಲೋಕೇಶ್**

# ಬಿಕ್ಕಟ್ಟುಗಳ ಮಧ್ಯೆ ಗರಿಗೆದರಿದ ಭತ್ತದ ಕೃಷಿ

• ಉದಯವಾಹಿನಿ ಗೋಣಿಕೊಪ್ಪಲು

ದಕ್ಷಿಣ ಕೊಡಗಿನಾದ್ಯಂತ ಉತ್ತಮವಾಗಿ ಸುರಿದ ಆರಿದ್ರ ಮಳೆಗೆ ಭತ್ತದ ಕೃಷಿ ಚಟುವಟಿಕೆ ಗರಿಗೆ ದರಿದೆ. ಕೃಷಿಕರು ಗದ್ದೆ ಹದ ಮಾಡಿಕೊಂಡು ಭತ್ತ ಬಿತ್ತನೆ ಕಾರ್ಯದಲ್ಲಿ ತೊಡಗಿದ್ದಾರೆ. ಈ ಭಾಗದಲ್ಲಿ ಬಿಕ್ಕಟ್ಟುಗಳಿಂದ ಕೂಡಿದ್ದ ಭತ್ತದ ಕೃಷಿ ಮತ್ತೊಮ್ಮೆ ಚಿಗುರೊಡೆಯುತ್ತಿದೆ.

ಭತ್ತದ ಕೃಷಿ ದುಬಾರಿ ಎನ್ನುವ ಕಾರಣಕ್ಕೆ ಶೇ 60ರಷ್ಟು ಕೃಷಿಕರು ಗದ್ದೆಗಳನ್ನು ಈ ಭಾಗದಲ್ಲಿ ಪಾಳು ಬಿಟ್ಟಿದ್ದರು. ಮತ್ತೆ ಕೆಲವರು ಗದ್ದೆಗಳನ್ನು ಅಡಿಕೆ, ಬಾಳೆ, ಕಾಫಿ ತೋಟವಾಗಿ ಪರಿವರ್ತಿಸಿದ್ದರು. ನಗರದ ಸೆರಗಿನಲ್ಲಿರುವ ಗದ್ದೆಗಳು ಬಡಾವಣೆಗಳಾಗಿದ್ದವು. ಹೀಗೆ ಇಂತಹ ಬಿಕ್ಕಟ್ಟುಗಳನ್ನು ಎದುರಿಸುತ್ತಿದ್ದ ಭತ್ತದ ಕೃಷಿ ಕಳೆದ ಬಾರಿ ದಕ್ಷಿಣ ಕೊಡಗಿನಲ್ಲಿ ಆವರಿಸಿದ ಭೀಕರ ಬರದಿಂದಾಗಿ ಮತ್ತಷ್ಟು ಸೊರಗಿತ್ತು. ಆದರೆ, ಈಚೆಗೆ ಸುರಿಯುತ್ತಿರುವ ಮಳೆಯಿಂದ ಮತ್ತೆ ಕೃಷಿಕರು ಭತ್ತದ ಕೃಷಿಯತ್ತ ಒಲವು ತೋರಿದ್ದಾರೆ. ಕೃಷಿ ಬಗ್ಗೆ ನಿಜವಾದ ಒಲವು ಬೆಳೆಸಿಕೊಂಡಿರುವ ರೈತರು ಲಾಭನಷ್ಟದ ಲೆಕ್ಕ ಹಾಕದೆ ಕೃಷಿಯಲ್ಲಿ ತೊಡಗಿ ತಮ್ಮ ಕೃಷಿ ಪ್ರೇಮ ಮೆರೆದಿದ್ದಾರೆ. ಮಳೆ ನೀರಿನ ಆಶ್ರಯದಲ್ಲಿ ಕೃಷಿ ಮಾಡುವ ರೈತರು ಹಳ್ಳದ ಗದ್ದೆಗಳಲ್ಲಿ ತುಂಬಿದ್ದ ನೀರನ್ನು ಸಂಗ್ರಹಿಸಿಕೊಂಡು ಗದ್ದೆ ಉಳುಮೆ ಮಾಡಿದ್ದರು. ಇದೀಗ ಬೀಜ ಬಿತ್ತನೆ ಮಾಡುವ ಮೂಲಕ ಕೃಷಿ ಕಾರ್ಯಕ್ಕೆ ಚಾಲನೆ ನೀಡಿದ್ದಾರೆ. ಕೆಲವರು ನೇರವಾಗಿ ಗದ್ದೆಗೆ ಭತ್ತದ ಬೀಜ ಎರಚಿದ್ದರೆ, ಮತ್ತೆ ಕೆಲವರು ಸಸಿಮಡಿ ಮಾಡಿ ಬೀಜ ಬಿತ್ತಿದ್ದಾರೆ. ಒಂದು ತಿಂಗಳು ಕಳೆದ ಬಳಿಕ ಸಸಿ ಬಂದ ಮೇಲೆ ನಾಟಿ ಕಾರ್ಯ ಶುರುವಾಗಲಿದೆ. ಅಲ್ಲಿಯವರೆಗೆ ನಾಟಿ ಮಾಡುವ ಗದ್ದೆಗಳನ್ನು ಉಳುಮೆ ಮಾಡಿ ಹದ ಮಾಡಿಕೊಳ್ಳಲಿದ್ದಾರೆ.


ಉದಯವಾಹಿನಿ ಚಿತ್ರ

# ಪ್ರತಿಭಟನೆ ಮಾಡಿದೆ ಎಂದು ತನ್ನ ಜಾನುವಾರಿಗೆ ಸರಿಯಾದ ಚಿಕಿತ್ಸೆ ನೀಡುತ್ತಿಲ್ಲ: ನೀಲಕಂಠ ಅಗ್ರಹಾರ ರೈತ ಶ್ಯಾಮಣ್ಣ

• ಉದಯವಾಹಿನಿ ಮಾಲೂರು

ಪ್ರತಿಭಟನೆ ಮಾಡಿದೆ ಎಂದು ತನ್ನ ಜಾನುವಾರಿ ಗೆ ಸರಿಯಾದ ಚಿಕಿತ್ಸೆ ನೀಡುತ್ತಿಲ್ಲ ಜಾನುವಾರು ಕಾಲು ಸರಿ ಹೋಗುವವರಿಗೂ ಪಶು ಆಸ್ಪತ್ರೆಯ ಆವರಣದಲ್ಲಿಯೇ ರಾತ್ರಿ ಹಗಲು ಇರುವುದಾಗಿ ಪ್ರಗತಿಪರ ರೈತ ನೀಲಕಂಠ ಅಗ್ರಹಾರ ಶ್ಯಾಮಣ್ಣ ಪಶುವೈದ್ಯ ಸಹಾಯಕ ನಿರ್ದೇಶಕಿ ವೀಣಾ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ನೀಲಕಂಠ ಅಗ್ರಹಾರ ಗ್ರಾಮದ ಪ್ರಗತಿ ಪರ ರೈತ ಶ್ಯಾಮಣ್ಣ ರವರು ಮಾಧ್ಯಮದವರೊಂದಿಗೆ ಮಾತನಾಡಿ ತನ್ನ ಹಸು ಒಂದು ವಾರದ ಹಿಂದೆ ಕಾಲಿಗೆ ಗಾಯವಾಗಿ ನೆಡಯಲು ಸಹ ಅಗದ ಪರಿಸ್ಥಿತಿ ಯಲ್ಲಿ ಪಶು ವೈದ್ಯರ ಬಳಿ ಹೇಳಿದಾಗ ತಕ್ಷಣಕ್ಕೆ ಯಾವು ದೋ ಒಂದು ಇಂಜೆಕ್ಷನ್ ಹಾಕಿದರು ಆದರೆ ಸರಿಯಾದ ರೋಗ ಯಾವುದು ಯಾವ ಚಿಕಿತ್ಸೆ ಎಂದು ತಿಳಿಸಿಲ್ಲ ಗಾಯವು ವಾಸಿಯಾಗಿಲ್ಲ ಪಶು ವೈದ್ಯರ ಬಳಿ ಬಂದು ಹಸು ನಡೆಯಲು ಸಾಧ್ಯವಾಗುತ್ತಿಲ್ಲ. ಹಾಗೂ ಪಶು ಆಸ್ಪತ್ರೆಯಲ್ಲಿ ಸಿಬ್ಬಂದಿ ಕೊರತೆ ಇರುವುದಾಗಿ ದಲಿತ ಸಂಘಟನೆ ಮುಖಾಂತರ ಪ್ರತಿಭಟನೆ ನಡೆಸಿದ್ದರ ಹಿನ್ನೆಲೆಯಲ್ಲಿ ಚಿಕಿತ್ಸೆಗೆ ಕೇಳಿದರೆ ಅಂಬುಲೇನ್ಸ್ ವೈದ್ಯರ ಬಳಿ ತೋರಿಸಿಕೋ ಹೋಗು ಎಂದು ನಿರ್ಲಕ್ಷ್ಯ ತೋರಿದ್ದಾರೆ. ಹಸು ಕರತಬೇಕಾದರೆ 2 ಕೀ.ಮಿ ನಡೆಯಲು ಸಾಧ್ಯ ಅಗುತ್ತಿಲ್ಲ ಎಂದು ಹೇಳಿದರು. ಅಂಬುಲೇನ್ಸ್ ವೈದ್ಯರ ಬಳಿ ಹಾಗೂ ಎಂದು ತಾತ್ಸಾರ ಲೇವಡಿ ಮಾಡಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.



ಉದಯವಾಹಿನಿ ಚಿತ್ರ

ರೈತರ ಕಷ್ಟಗಳಿಗೆ ಸ್ಪಂದಿಸಿದ ವೈದ್ಯರು ಬೇಕಾಗಿಲ್ಲ ನಮ್ಮ ಹಸುವಿನ ಕಾಲು ಸರಿ ಹೋಗುವವರಿಗೆ ಜಾನುವಾರು ಪಶು ಆಸ್ಪತ್ರೆಯ ಆವರಣದಲ್ಲಿ ಕಟ್ಟಿ ಹಾಕಿ ರಾತ್ರಿ ಹಗಲು ನಾನು ಆಸ್ಪತ್ರೆಯಲ್ಲೆ ವಾಸ ಮಾಡಿ ಪ್ರತಿಭಟಿಸುವುದಾಗಿ ಹೇಳಿದರು.

# ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿಯೂ ಡೆಂಗಿ ಪೀಡಿತರ ಸಂಖ್ಯೆ ಹೆಚ್ಚಳ

• ಉದಯವಾಹಿನಿ ಚಿಕ್ಕಬಳ್ಳಾಪುರ

ರಾಜ್ಯದಲ್ಲಿ ಜನರನ್ನು ಡೆಂಗಿ ಜ್ವರ ತೀವ್ರವಾಗಿಯೇ ಬಾಧಿಸುತ್ತಿದೆ. ಕೆಲವು ಜಿಲ್ಲೆಗಳಲ್ಲಿ ಡೆಂಗಿ ಪೀಡಿತರ ಸಂಖ್ಯೆ ಹೆಚ್ಚುತ್ತಲೇ ಇದೆ. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿಯೂ ಡೆಂಗಿ ಪೀಡಿತರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. 2024ರ ಜನವರಿಯಿಂದ ಇಲ್ಲಿಯವರೆಗೆ ಜಿಲ್ಲೆಯಲ್ಲಿ 89 ಮಂದಿಗೆ ರೋಗ ತಗುಲಿದೆ.

ಚಿಕ್ಕಬಳ್ಳಾಪುರ ತಾಲ್ಲೂಕಿನಲ್ಲಿಯೇ ಗರಿಷ್ಠ ಪ್ರಕರಣಗಳು ದಾಖಲಾಗಿವೆ. ಗುಡಿಬಂಡೆ ತಾಲ್ಲೂಕಿನಲ್ಲಿ ಕಡಿಮೆ ಪ್ರಕರಣಗಳು ವರದಿಯಾಗಿವೆ. ಆರೋಗ್ಯ ಇಲಾಖೆ ಜಿಲ್ಲೆಯಲ್ಲಿ ಡೆಂಗಿ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಆಶಾ ಕಾರ್ಯಕರ್ತೆಯರು ಮತ್ತು ಗ್ರಾಮ ಪಂಚಾಯಿತಿ ಸಹಯೋಗದಲ್ಲಿ ಜಾಗೃತಿ ಮೂಡಿಸುತ್ತಿದೆ. ಪ್ರತಿ ಶುಕ್ರವಾರ ಒಣ ದಿನವನ್ನಾಗಿ ಆಚರಿಸಲಾಗುತ್ತಿದೆ. ವಾರಕ್ಕೆ ಒಂದು ದಿನ- ಪ್ರತಿ ಶುಕ್ರವಾರ ಈಡಿಸ್ ಸೊಳ್ಳೆ ಉತ್ಪತ್ತಿ ತಾಣಗಳನ್ನು ನಾಶ ಮಾಡುವ ದಿನವನ್ನಾಗಿ ಆಚರಿಸಲು ಆರೋಗ್ಯ ಇಲಾಖೆ ಸೂಚನೆ ಸಹ ನೀಡಿದೆ. ಈ ಪ್ರಕಾರ ಕಳೆದ ಶುಕ್ರವಾರ ನಗರದ ವಾಪಸಂದ್ರ ವಾರ್ಡ್‌ನಲ್ಲಿ ಸಮುದಾಯದೊಂದಿಗೆ ಸೇರಿ ಡೆಂಗಿ ಜ್ವರವನ್ನು ನಿಯಂತ್ರಿಸೋಣ ಎಂಬ ಘೋಷ ವಾಕ್ಯದೊಂದಿಗೆ ಅರಿವು ಮೂಡಿಸಲಾಯಿತು. ಪ್ರತಿ ಶುಕ್ರವಾರವೂ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಆರೋಗ್ಯ ಇಲಾಖೆ ಮುಂದಾಗಿದೆ.ರೋಗದ ಗುಣಲಕ್ಷಣಗಳನ್ನು ನೋಡಿ ರಕ್ತ ಪರೀಕ್ಷೆ ಮಾಡಿಸಲಾಗುತ್ತಿದೆ. ಹೀಗೆ ರಕ್ತ ಪರೀಕ್ಷೆಗೆ ಒಳಪಟ್ಟವರಲ್ಲಿ ಡೆಂಗಿ ರೋಗ ಪತ್ತೆಯಾಗುತ್ತಿದೆ.


ಉದಯವಾಹಿನಿ ಚಿತ್ರ

ಸತತವಾಗಿ ಮಳೆ ಬರುತ್ತಿರುವುದರಿಂದ ನೀರಿನ ಮೂಲಗಳಲ್ಲಿ ನೀರು ಸಂಗ್ರಹವಾಗುತ್ತಿದೆ. ಸೊಳ್ಳೆಗಳು ಉತ್ಪತ್ತಿಯಾಗುತ್ತಿವೆ. ಈ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಶಾಲಾ ಕಾಲೇಜು ವಿದ್ಯಾರ್ಥಿಗಳು, ಸ್ವಯಂ ಸೇವಾ ಸಂಸ್ಥೆಗಳ ನೆರವಿನೊಂದಿಗೆ ಕಾರ್ಯಕ್ರಮವು ಸಹ ಜಿಲ್ಲೆಯಲ್ಲಿ ಜಾರಿಯಲ್ಲಿವೆ.

**ಆರೋಗ್ಯ ಇಲಾಖೆ ಜೊತೆಗೆ ಇತರೆ ಇಲಾಖೆ ಅಧಿಕಾರಿಗಳು ಕೈಜೋಡಿಸಬೇಕು. ರೋಗ ತಡೆಗೆ ವಹಿಸಲಾಗಿರುವ ಕ್ರಮಗಳ ಕುರಿತು ಅನುಪಾಲನ ವರದಿ ಸಲ್ಲಿಸಬೇಕು. ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರ್, ತಾಲ್ಲೂಕು ಪಂಚಾಯಿತಿ ಅಧಿಕಾರಿಗಳು ವ್ಯಾಪಕವಾಗಿ ಭೇಟಿ ನೀಡಿ ಪರಿಶೀಲಿಸಬೇಕು. ಸಭೆಗಳನ್ನು ನಡೆಸಿ ರೋಗ ಪ್ರಕರಣಗಳು ಉಲ್ಬಣಗೊಳ್ಳದಂತೆ ಮುನ್ನೆಚ್ಚರಿಕೆ ಕ್ರಮ ತೆಗೆದುಕೊಳ್ಳಬೇಕು**

**-ಪಿ.ಎನ್.ರವೀಂದ್ರ, ಜಿಲ್ಲಾಧಿಕಾರಿ**

# ಸಾಂಕ್ರಾಮಿಕ ರೋಗದ ಭೀತಿಯಲ್ಲಿ ಗ್ರಾಮಸ್ಥರು

• ಉದಯವಾಹಿನಿ ಬಂಗಾರಪೇಟೆ

ತಾಲ್ಲೂಕಿನ ಬೂದಿಕೋಟೆ ಹೋಬಳಿಯ ಬಲಮಂದೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚತ್ತಗುಟ್ಲಹಳ್ಳಿ ಗ್ರಾಮಕ್ಕೆ ಮೂಲಭೂತ ಸೌಲಭ್ಯಗಳು ಮರೀಚಿಕೆಯಾಗಿವೆ.

ಇದು ಕಾಡಂಚಿನ ಗ್ರಾಮವಾಗಿದ್ದು, ಸೌಲಭ್ಯಗಳಿಲ್ಲದೆ ಸೊರಗುತ್ತಿದೆ. ಗ್ರಾಮದಲ್ಲಿ ಹುಡುಕಿದರೂ ಒಳಚರಂಡಿಯಿಲ್ಲ. ಚರಂಡಿ ನೀರು ನಿತ್ಯ ರಸ್ತೆ ಮೇಲೆ ಹರಿಯುತ್ತಿದ್ದು, ಗ್ರಾಮಸ್ಥರು ಮೂಗು ಮುಚ್ಚಿಕೊಂಡು ಓಡಾಡುವಂತಾಗಿದೆ. ಕಸ ಸಂಗ್ರಹಕ್ಕೆ ಪಂಚಾಯಿತಿಯಿಂದ ವಾಹನ ಬಾರದ ಕಾರಣ ಎಲ್ಲಂದರಲ್ಲಿ ಕಸದ ರಾಶಿ ಇದ್ದು, ಸಾಂಕ್ರಾಮಿಕ ರೋಗದಲ್ಲಿ ಗ್ರಾಮಸ್ಥರು ದಿನ ಕಳೆಯುವಂತಾಗಿದೆ.

ಗ್ರಾಮಕ್ಕೆ ಚುನಾವಣೆ ಸಂದರ್ಭದಲ್ಲಿ ಮಾತ್ರ ಜನಪ್ರತಿನಿಧಿಗಳು ಭೇಟಿ ನೀಡಿ ಮತಯಾಚಿಸಿದರೆ, ನಂತರ ಮತ್ತೆ ಚುನಾವಣಾ ಸಮಯಕ್ಕೆ ಗ್ರಾಮದತ್ತ ಜನಪ್ರತಿನಿಧಿಗಳು ಮುಖ ಮಾಡುವುದಾಗಿದೆ. ಜತೆಗೆ ಗ್ರಾಮ ಪಂಚಾಯಿತಿ ಸದಸ್ಯರಿದ್ದರೂ ಅಭಿವೃದ್ಧಿ ಕಾರ್ಯಗಳು ಯಾವುದೂ ನಡೆದಿಲ್ಲ.


ಉದಯವಾಹಿನಿ ಚಿತ್ರ

ಗ್ರಾಮಕ್ಕೆ ಸರಿಯಾದ ರಸ್ತೆ ಇಲ್ಲದ ಕಾರಣ ಗ್ರಾಮಕ್ಕೆ ಸರ್ಕಾರಿ ಬಸ್ ಮುಖ ಮಾಡಿಯೇ ಇಲ್ಲ. ಪ್ರತಿದಿನ ನಗರಕ್ಕೆ ಹೋಗಬೇಕಾದರೆ 3.ಕಿ.ಮೀ ನಡೆದುಕೊಂಡು ಬಂದು ಬಸ್ ಹತ್ತಬೇಕಾಗಿದೆ. ಜತೆಗೆ ಮಕ್ಕಳು ಪ್ರೌಢಶಾಲೆಗೆ ಪ್ರತಿನಿತ್ಯ ಕನಮನಹಳ್ಳಿಗೆ ನಡೆದುಕೊಂಡೇ ಹೋಗಬೇಕಿದೆ.

ಗ್ರಾಮದ ಜನರು ಅನಾರೋಗ್ಯವಾದರೆ 8 ಕಿ.ಮೀ ದೂರದ ತೊಪ್ಪನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ನಡೆದುಕೊಂಡೇ ಕಾಡಿನಲ್ಲಿ ಹೋಗಬೇಕು. ಗ್ರಾಮಸ್ಥರ ಒತ್ತಾಯಕ್ಕೆ ಮಣಿದು ಗ್ರಾಮದಲ್ಲೇ ಸರ್ಕಾರಿ ಉಪ ನ್ಯಾಯಬೆಲೆ ಅಂಗಡಿ ತೆರೆಯಲಾಗಿದೆ. ಆದರೆ, ಸರ್ವರ್ ಸಿಗದೆ ಅಂಗಡಿ ಮಾಲೀಕ ಪ್ರತಿ ತಿಂಗಳು ಪಡಿತರ ವಿತರಿಸಲು ಹೆಣಗಾಡಬೇಕಾಗಿದೆ. ದಿನವಿಡೀ ಸಾಲಾಗಿ ನಿಂತರೂ ಪಡಿತರ ಸಿಗುವುದು ಕಷ್ಟವಾಗಿದೆ.

**ಸೌಲಭ್ಯವಂಚಿತ ಗ್ರಾಮ**

**ಗ್ರಾಮ ಪಂಚಾಯಿತಿಯಾಗಲಿ, ತಾಲ್ಲೂಕು ಆಡಳಿತವಾಗಲಿ ಇಲ್ಲಿನ ಜನರ ಕಷ್ಟ ಕೇಳುವವರೇ ಇಲ್ಲ. ನರೇಗಾ ಯೋಜನೆ ಅಡಿಯಲ್ಲಿ ಅಗತ್ಯ ಸೌಲಭ್ಯಗಳನ್ನು ಕೈಗೊಳ್ಳಬಹುದು. ಆದರೆ, ಗ್ರಾಮ ಪಂಚಾಯಿತಿ ಸದಸ್ಯರು ಮತ್ತು ಪಂಚಾಯಿತಿ ಆಡಳಿತ ಮಂಡಳಿ ನಿರ್ಲಕ್ಷ್ಯದಿಂದ ಚತ್ತಗುಟ್ಲಹಳ್ಳಿ ಕಡೆಗಣಿಸಲ್ಪಟ್ಟಿದ್ದು, ಸೌಲಭ್ಯಗಳಿಂದ ವಂಚಿತ ಗ್ರಾಮವಾಗಿದೆ.**

# ಭೂದಾಖಲೆ-ಸರ್ವೆ ಇಲಾಖೆಯಲ್ಲಿ ಶೇ 50ಕ್ಕೂ ಹೆಚ್ಚು ಸಿಬ್ಬಂದಿ ಕೊರತೆ, ಸಾರ್ವಜನಿಕರಿಗೆ ಸಮಸ್ಯೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಮಡಿಕೇರಿ

ಬಾಣೆ' ಜಮೀನುಗಳನ್ನು ಕಂದಾಯ ಇಲಾಖೆಗೆ ಒಳಪಡಿಸಬೇಕೆಂಬುದು ಕೊಡಗಿನ ರೈತರ ಬಹುಮುಖ್ಯ ಬೇಡಿಕೆಯಾಗಿದೆ. 'ಬಾಣೆ' ಜಮೀನಿನ ಸರ್ವೆ ನಡೆಸಿ ಸಮಸ್ಯೆ ಬಗೆಹರಿಸುವುದಾಗಿ ಸಂಬಂಧಪಟ್ಟ ಅಧಿಕಾರಿಗಳು ಭರವಸೆ ನೀಡಿದ್ದರೂ ಜಿಲ್ಲೆಯಲ್ಲಿ ಭೂ ದಾಖಲೆ ಮತ್ತು ಸರ್ವೆ ಇಲಾಖೆಯಲ್ಲಿ ಸಿಬ್ಬಂದಿ ಕೊರತೆಯಿಂದ ನೂರಾರು ರೈತರು ಹಾಗೂ ಇತರೆ ನಿವಾಸಿಗಳಿಗೆ ಸಮಯಕ್ಕೆ ಸರಿಯಾಗಿ ಕೆಲಸವಾಗದೆ ತೊಂದರೆಯಾಗಿದೆ. ಜಿಲ್ಲಾ ಭೂದಾಖಲೆಗಳು ಮತ್ತು ಸರ್ವೆ ಇಲಾಖೆಗೆ ಕ್ಲರ್ಕ್ ಹುದ್ದೆಗಳು ಸೇರಿದಂತೆ ಒಟ್ಟು 101 ಹುದ್ದೆಗಳನ್ನು ನಿಗದಿಪಡಿಸಲಾಗಿದೆ. ಆದರೆ, ಇಲಾಖೆಯಲ್ಲಿ ಒಟ್ಟು 59 ಹುದ್ದೆಗಳು ಖಾಲಿ ಬಿದ್ದಿದ್ದು, ಇಲಾಖೆ ಕಾರ್ಯವೈಖರಿಗೆ ತೀವ್ರ ಸಮಸ್ಯೆಯಾಗಿದೆ. ಇದಲ್ಲದೇ ಜಿಲ್ಲೆಯಲ್ಲಿ ಹೊಸದಾಗಿ ಅಸ್ತಿತ್ವಕ್ಕೆ ಬಂದಿರುವ ಕುಶಾಲನಗರ, ಪೊನ್ನಂಪೇಟೆ ತಾಲ್ಲೂಕು ಸೇರಿದಂತೆ ಐದು ತಾಲ್ಲೂಕುಗಳಿದ್ದರೂ ಹೊಸ ತಾಲ್ಲೂಕುಗಳಿಗೆ ಇಲಾಖೆಗೆ ಯಾವುದೇ ಹುದ್ದೆ ಮಂಜೂರಾಗಿಲ್ಲ.

ಶೇಕಡಾ 50ಕ್ಕೂ ಅಧಿಕ ಸಿಬ್ಬಂದಿ ಕೊರತೆಯ ನಡುವೆ ಈಗಿರುವ ಅಧಿಕಾರಿಗಳನ್ನು ಹೊಸ ತಾಲ್ಲೂಕುಗಳಿಗೆ ಪ್ರಭಾರಿ ಸರ್ವೇ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ.

ಮೂಲಗಳ ಪ್ರಕಾರ ವಿರಾಜಪೇಟೆ ತಾಲ್ಲೂಕಿನಲ್ಲಿ ಭೂಮಾಪನ ಮತ್ತು ಅಳತೆಗೆ ಸಂಬಂಧಿಸಿದ 700ಕ್ಕೂ ಅಧಿಕ ಕಡತಗಳು ಸರ್ವೆ ಅಧಿಕಾರಿಗಳ ಅಲಭ್ಯತೆಯಿಂದಾಗಿ ಹಲವು ತಿಂಗಳುಗಳಿಂದ ಬಾಕಿ ಉಳಿದಿವೆ. ಪೊನ್ನಂಪೇಟೆ ತಾಲ್ಲೂಕಿನಲ್ಲಿ ಪ್ರತಿದಿನ ಹೊಸ ಅರ್ಜಿಗಳು ಹರಿದು ಬರುತ್ತಿದ್ದರೂ ಒಟ್ಟು 831 ಭೂಮಾಪನ ಕಡತಗಳು ಬಾಕಿ ಉಳಿದಿವೆ.

# ಕೊಡಗು ಮಳೆಯಿಂದ 100 ಅಡಿ ತಲುಪಿದ ಕೃಷ್ಣರಾಜಸಾಗರ

## • ಹತ್ತು ಸಾವಿರಕ್ಕೂ ಅಧಿಕ ಕ್ಯೂಸೆಕ್ ನೀರು ಒಳ ಬರುತ್ತಿರುವುದರಿಂದ ಜಲಾಶಯದ ನೀರಿನ ಮಟ್ಟ ಏರಿಕೆ ಕಂಡಿದೆ

• ಉದಯವಾಹಿನಿ ಮಂಡ್ಯ

ಕೊಡಗಿನಲ್ಲಿ ನಿರಂತರವಾಗಿ ಸುರಿಯುತ್ತಿರುವ ಮಳೆಯ ಪರಿಣಾಮ ಮಂಡ್ಯ ಕೃಷ್ಣರಾಜಸಾಗರ ಜಲಾಶಯದಲ್ಲಿ ಕಾಣುತ್ತಿದೆ. ಅದೂ ಕಳೆದ ಮುಂಗಾರು ಹಂಗಾಮಿನಲ್ಲಿ ಪೂರ್ಣ ತುಂಬದೇ ಆತಂಕ ಸೃಷ್ಟಿಸಿದ್ದ ಕೃಷ್ಣರಾಜಸಾಗರ ಜಲಾಶಯ ಈ ಬಾರಿ ಜುಲೈ ಮೊದಲ ವಾರದಲ್ಲೇ ನೂರು ಅಡಿ ತಲುಪಿದೆ.

ನಿರಂತರವಾಗಿ ಮಳೆಯಾದ ಪರಿಣಾಮ ಕಾವೇರಿ ನದಿ ಮೂಲಕ ಹೆಚ್ಚಿನ ಪ್ರಮಾಣದಲ್ಲಿ ನೀರು ಹರಿದು ಬರುತ್ತಲೇ ಇದೆ. ಸತತ ಹದಿನೈದು ದಿನಗಳಿಂದ ಮಳೆ ಸುರಿಯುತ್ತಿದೆ. ಒಂದೆರಡು ದಿನ ಬಿಡುವು ಕೊಟ್ಟರೂ ಕೆಆರ್‌ಎಸ್ ಜಲಾಶಯಕ್ಕೆ ಬರುತ್ತಿರುವ ಒಳ ಹರಿವಿನ ಪ್ರಮಾಣದಲ್ಲಿ ಇಳಿಕೆಯೇನೂ ಕಂಡು ಬಂದಿಲ್ಲ. ಹತ್ತು ಸಾವಿರಕ್ಕೂ ಅಧಿಕ ಕ್ಯೂಸೆಕ್ ನೀರು ಒಳ ಬರುತ್ತಿರುವುದರಿಂದ ಜಲಾಶಯದ ನೀರಿನ ಮಟ್ಟ ಏರಿಕೆ ಕಂಡಿದೆ. ಹಿಂದಿನ ವರ್ಷಕ್ಕೆ ಇದೇ ದಿನಕ್ಕೆ ಹೋಲಿಸಿದರೆ ಜಲಾಶಯದಲ್ಲಿ 22 ಅಡಿ ನೀರು ಸಂಗ್ರಹವಾಗಿದೆ. ಕೃಷ್ಣರಾಜಸಾಗರ ಜಲಾಶಯ ಹಿಂದೆಲ್ಲಾ ಆಗಸ್ಟ್ ವೇಳೆ ತುಂಬಿದ ಉದಾಹರಣೆ ಇದೆ. ಮಧ್ಯೆ ನಾಲ್ಕೈದು ಅವಧಿಯಲ್ಲಿ ತುಂಬದ ಉದಾಹರಣೆಗಳೂ ಇವೆ.

**ಮಂಡ್ಯ, ಮೈಸೂರು ಬೆಂಗಳೂರು ಜನರಿಗೆ ನೆಮ್ಮದಿ**

ಒಂದು ವರ್ಷ ತುಂಬದೇ ಇದ್ದರೆ ಮುಂದಿನ ಮೂರ್ನಾಲ್ಕು ವರ್ಷ ಉತ್ತಮ ಮಳೆಯಾಗಿ ತುಂಬಿದ ಸನ್ನಿವೇಶಗಳನ್ನೂ ಕಂಡಿದ್ದೇವೆ. ಕಳೆದ ವರ್ಷ ಕೆಆರ್‌ಎಸ್ ನೂರು ಅಡಿ ತುಂಬುವುದು ಪ್ರಯಾಸ ಎನ್ನುವಷ್ಟರ ಮಟ್ಟಿಗೆ ಮಳೆ ಕೊರತೆ ಎದುರಾಗಿತ್ತು. ಕೊಡಗಿನಲ್ಲಿ ಹಾಗೂ ಕಾವೇರಿ ಕಣಿವೆ ಪ್ರದೇಶದಲ್ಲಿ ಮಳೆಯಾಗಿರಲೇ ಇಲ್ಲ.

ಇದರಿಂದಾಗಿ ಕೆಆರ್‌ಎಸ್ ಜಲಾಶಯದಲ್ಲಿ ನೀರಿನ ಕೊರತೆಯಾಗಿತ್ತು. ಕೊನೆಗೆ ಮುಂಗಾರು ಕೃಪೆ ತೋರಿದ್ದರಿಂದ ನೂರು ಅಡಿ ದಾಟಿತ್ತು. 113 ಅಡಿ ವರೆಗೂ ಮಾತ್ರ, ಜಲಾಶಯದ ಗರಿಷ್ಠ ಮಟ್ಟ ತಲುಪಿ 11 ಅಡಿ ಕೊರತೆ ಉಂಟಾಗಿತ್ತು. ಆದರೂ ಅಧಿಕಾರಿಗಳು ಹಾಗೂ ಸಿಬ್ಬಂದಿ ನಿರ್ವಹಣೆ ಮಾಡಿದ್ದರಿಂದ ಭಾರೀ ಸಮಸ್ಯೆಯೇನೂ ಈ ಭಾಗದಲ್ಲಿ ಕುಡಿಯುವ ನೀರಿಗೆ ಆಗಲಿಲ್ಲ. ಆದರೆ ಈ ಬಾರಿ ಪರಿಸ್ಥಿತಿ ಭಿನ್ನವಾಗಿಯೇ ಇದೆ. ಜುಲೈ ಮೊದಲ ವಾರದಲ್ಲಿಯೇ ಜಲಾಶಯದಲ್ಲಿ ಗಣನೀಯ ನೀರು ಕಂಡು ಬಂದು ನೀರಿನ ಮಟ್ಟವು ನೂರು ಅಡಿ ತಲುಪಿದೆ. ಸತತ ಮಳೆಯಿಂದಾಗಿ ಜಲಾಶಯಕ್ಕೆ ನಿತ್ಯ ಹತ್ತು ಸಾವಿರಕ್ಕೂ ಹೆಚ್ಚು ಕ್ಯೂಸೆಕ್ ನೀರು ಹರಿದು ಬರುತ್ತಿದೆ. ಇದು ನೂರು ಅಡಿ ಮಟ್ಟ ತಲುಪುವಂತೆ ಮಾಡಿದೆ.


ಉದಯವಾಹಿನಿ ಚಿತ್ರ

**ಕಳೆದ ವರ್ಷ ಇನ್ನು ಮಳೆ ಚುರುಕಾಗಿರಲಿಲ್ಲ. ಈ ಕಾರಣದಿಂದ ಕೆಆರ್‌ಎಸ್ ಜಲಾಶಯದ ನೀರಿನ ಮಟ್ಟವು 78.22 ಅಡಿ ಮಾತ್ರ ಇತ್ತು. ಹತ್ತು ಟಿಎಂಸಿ ನೀರು ಮಾತ್ರ ಇತ್ತು. ಈ ಬಾರಿ ಎರಡು ಪಟ್ಟು ಜಾಸ್ತಿಯಿದೆ. ನೂರು ಅಡಿ ಕೂಡ ಬೇಗನೇ ತುಂಬಿದೆ. ಇದು ಮಂಡ್ಯ, ಮೈಸೂರು ಭಾಗದ ಜನರ ಜತೆಗೆ ಬೆಂಗಳೂರು ಜನರಿಗೂ ನೆಮ್ಮದಿ ತಂದಿದೆ.**

**ಜಲಾಶಯದಲ್ಲಿ 22.267 ಟಿಎಂಸಿ ನೀರು ಸಂಗ್ರಹ**

**ಜಲಾಶಯದಲ್ಲಿ ಗುರುವಾರ ಬೆಳಿಗ್ಗೆ ಹೊತ್ತಿಗೆ 99.30 ಅಡಿ ಇದ್ದ ನೀರಿನ ಮಟ್ಟವು ಸಂಜೆ ಹೊತ್ತಿಗೆ ನೂರು ಅಡಿಗೆ ತಲುಪಿತು. ಜಲಾಶಯಕ್ಕೆ ಈಗಲೂ 11189 ಕ್ಯೂಸೆಕ್ ನೀರು ಹರಿದು ಬರುತ್ತಿದೆ. ಜಲಾಶಯದ ಗರಿಷ್ಠ ಮಟ್ಟ 124.80 ಅಡಿ. ಜಲಾಶಯದಲ್ಲಿ 22.267 ಟಿಎಂಸಿ ನೀರು ಸಂಗ್ರಹವಾಗಿದೆ. ಜಲಾಶಯದಲ್ಲಿ ಸಂಗ್ರಹಿಸಬಹುದಾದ ನೀರಿನ ಸಾಮರ್ಥ್ಯ 49.452 ಟಿಎಂಸಿ. ಸದ್ಯ ಜಲಾಶಯದಿಂದ 540 ಕ್ಯೂಸೆಕ್ ನೀರನ್ನು ಮಾತ್ರ ಕುಡಿಯುವ ನೀರಿನ ಉದ್ದೇಶಕ್ಕಾಗಿ ಹರಿಸಲಾಗುತ್ತಿದೆ.**

**ತುಂಬಲು ಇನ್ನೂ 24 ಅಡಿ ಬೇಕು**

**ಹತ್ತು ದಿನದ ಹಿಂದೆ ಅಂದರೆ 2024ರ ಜೂನ್ 25ರಂದು ಜಲಾಶಯದ ನೀರಿನ ಮಟ್ಟ 87.72 ಅಡಿ ಇತ್ತು. ಒಳ ಹರಿವು ಹೆಚ್ಚಿದ್ದರಿಂದ ವಾರದೊಳಗೆ ಹತ್ತು ಅಡಿ ನೀರು ಹರಿದು ಬಂದಿದೆ. ಈವರೆಗೂ ಸುಮಾರು 30 ಅಡಿ ನೀರು ಈ ಹಂಗಾಮಿನಲ್ಲಿ ಹರಿದು ಬಂದಿದೆ. ತುಂಬಲು ಇನ್ನೂ 24 ಅಡಿ ಬೇಕು. ಇದೇ ಪ್ರಮಾಣದಲ್ಲಿ ಮಳೆಯಾದರೆ ಜಲಾಶಯ ಮಾಸಾಂತ್ಯದಲ್ಲಿ ತುಂಬಬಹುದು ಎನ್ನುವುದು ಅಧಿಕಾರಿಗಳ ವಿವರಣೆ.**

## ಮಿನಿ ನ್ಯೂಸ್

### ಕಲರ್ ಬಳಸಿ ತಯಾರಿಸಿದ ಸ್ವೀಟ್ ವಶಕ್ಕೆ

• ಉದಯವಾಹಿನಿ ಕೋಲಾರ


ಕೆಜಿಎಫ್ ನಗರಸಭೆ ವ್ಯಾಪ್ತಿಯಲ್ಲಿ ಸ್ವೀಟ್‌ಅಂಗಡಿಗಳ ಮೇಲೆ ನಗರಸಭೆ ಪೌರಾಯುಕ್ತ ಪವನ್ ಕುಮಾರ್ ನೇತೃತ್ವದಲ್ಲಿ ದಾಳಿ ನಡೆಸಲಾಗಿತ್ತು. ಈ ವೇಳೆ ಕ್ಯಾನ್ಸರ್ ಕಾರಕ ಕಲರ್ ಬಳಸಿ ತಯಾರು ಮಾಡಿದ್ದ ಸ್ವೀಟ್ ಹಾಗೂ ತಿಂಡಿಗಳನ್ನು ವಶಕ್ಕೆ ಪಡೆಯಲಾಯಿತು.

ಜೊತೆಗೆ ಆಹಾರ ಸುರಕ್ಷತೆ ನಿಯಮ ಪಾಲಿಸದೆ ಸ್ವೀಟ್ ತಯಾರು ಮಾಡುತ್ತಿದ್ದ ಅಂಗಡಿಗಳಿಗೆ ನೋಟೀಸ್ ನೀಡಿ ದಂಡ ವಿಧಿಸಲಾಗಿದೆ. ಇನ್ನು ಅಧಿಕಾರಿಗಳು, ಕಲರ್ ಬಳಸಿ ತಯಾರು ಮಾಡಿದ್ದ ಸ್ವೀಟ್ ಹಾಗೂ ಇನ್ನಿತರ ವಸ್ತುಗಳನ್ನು ವಶಕ್ಕೆ ಪಡೆದು ಕಸದ ಲಾರಿಗೆ ತುಂಬಿಸಿದ್ದಾರೆ. ಇತ್ತೀಚೆಗಷ್ಟೇ ಕೋಲಾರದ ಕೆಜಿಎಫ್ ನಗರಸಭೆ ಅಧಿಕಾರಿಗಳು ಗೋಬಿ ಮಂಜೂರಿ, ಕಬಾಬ್ ಸೆಂಟರ್‌ಗಳ ಮೇಲೆ ದಾಳಿ ನಡೆಸಿ ಪರಿಶೀಲನೆ ನಡೆಸಿದ್ದರು.

ಈ ವೇಳೆ ಅವುಗಳಲ್ಲಿ ಬಳಸಲಾಗುತ್ತಿದ್ದ ಬಣ್ಣದ ಐಟಂಗಳನ್ನು ಬ್ಯಾನ್ ಮಾಡಿದ್ದರು. ಜೊತೆಗೆ ಕಲರ್ ಬಳಸುವ ಎಲ್ಲಾ ಗೋಬಿ ಮಂಚೂರಿ, ಕಬಾಬ್ ಸೆಂಟರ್‌ಗಳಿಗೆ ಭೇಟಿ ನೀಡಿ ಸರ್ಕಾರದ ಆದೇಶದಂತೆ ನಿಷೇಧಿತ ಕಲರ್ ಬಳಸದಂತೆ ಎಚ್ಚರಿಕೆ ನೀಡಿದ್ದರು. ಇದರ ಬೆನ್ನಲ್ಲೇ ಇಂದು ಸ್ವೀಟ್ ಅಂಗಡಿಗಳ ಮೇಲೆ ದಾಳಿ ನಡೆಸಿದ್ದಾರೆ.

### ಜಮೀನಿಗೆ ತೆರಳುತ್ತಿದ್ದ ವ್ಯಕ್ತಿ ಮೇಲೆ ಕರಡಿ ದಾಳಿ: ಗಂಭೀರ ಗಾಯ

• ಉದಯವಾಹಿನಿ ಮಾಗಡಿ


ಉದಯವಾಹಿನಿ ಚಿತ್ರ

ಜಮೀನಿಗೆ ತೆರಳುತ್ತಿದ್ದ ವ್ಯಕ್ತಿ ಮೇಲೆ ಕರಡಿ ದಾಳಿ ನಡೆಸಿದ ಘಟನೆ ಮಾಗಡಿ ತಾಲ್ಲೂಕಿನ ಚಕ್ಕಳ್ಳಿ ಗ್ರಾಮದ ಟಿ.ಎನ್. ಕೆರೆ ಬಳಿ ನಡೆದಿದೆ.45 ವರ್ಷದ ಮಹೇಂದ್ರ ಎಂಬವರ ಮೇಲೆ ಕರಡಿ ದಾಳಿ ನಡೆಸಿದೆ. ಮಹೇಂದ್ರ ಅವರು ಗಂಭೀರ ಗಾಯಗೊಂಡಿದ್ದಾರೆ. ಮಹೇಂದ್ರ ಅವರು ಬೆಳಗ್ಗೆ ಜಮೀನಿಗೆ ತೆರಳುವಾಗ ಕರಡಿ ಏಕಾಏಕಿ ದಾಳಿ ಮಾಡಿದೆ. ಕರಡಿಯು ತಲೆ ಭಾಗಕ್ಕೆ ದಾಳಿ ಮಾಡಿ ಗಂಭೀರ ಗಾಯ ಮಾಡಿದೆ.ಅವರನ್ನು ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಸ್ಥಳಕ್ಕೆ ತಾಲೂಕು ಅರಣ್ಯಾಧಿಕಾರಿ ಚೈತ್ರ ಭೇಟಿ ನೀಡಿದ್ದಾರೆ. ಕುದೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಲಾಗಿದೆ.

### ಪ್ರಾಮಾಣಿಕತೆ ಮೆರೆದ ಕಂಡಕ್ಟರ್

• ಉದಯವಾಹಿನಿ ಹುಣಸೂರು


ಉದಯವಾಹಿನಿ ಚಿತ್ರ

ಬಸ್ಸಿನಲ್ಲಿ ಮೊಬೈಲ್ ಕಳೆದುಕೊಂಡಿದ್ದ ಪ್ರಯಾಣಿಕರಿಗೆ ಹಿಂದಿರುಗಿಸಿರುವ ಕಂಡಕ್ಟರ್ ಪ್ರಾಮಾಣಿಕತೆ ಮೆರೆದಿದ್ದಾರೆ. ಹುಣಸೂರು ಡಿಪೋದ ಕಂಡಕ್ಟರ್ ರಾಜಾರಾವ್ ಮೊಬೈಲ್ ಹಿಂದಿರುಗಿಸಿದವರು. ಹುಣಸೂರಿನಿಂದ ಮೈಸೂರಿಗೆ ತೆರಳುತ್ತಿದ್ದ ವೇಳೆ ಸಾತನೂರು ಶಿವಕುಮಾರ್ ಎಂಬುವವರು ಬಸ್‌ನಿಂದ ಇಳಿಯುವಾಗ ಮೊಬೈಲ್ ಸೀಟಿನಲ್ಲೇ ಬಿಟ್ಟು ಇಳಿದಿದ್ದರು. ಪ್ರಯಾಣಿಕರು ಇಳಿದ ನಂತರ ಸೀಟ್‌ನಲ್ಲಿ ಮೊಬೈಲ್ ಇದ್ದುದ್ದನ್ನು ಕಂಡ ಕಂಡಕ್ಟರ್ ರಾಜಾರಾವ್ ತಮ್ಮ ಬಳಿ ಇಟ್ಟುಕೊಂಡಿದ್ದ ವೇಳೆ, ಈ ನಂಬರ್‌ಗೆ ಕರೆ ಮಾಡಿದವರಿಗೆ ಹುಣಸೂರು ಬಸ್ ನಿಲ್ದಾಣದ ಟಿ.ಸಿ ಕಚೇರಿಯಲ್ಲಿ ದಾಖಲಾತಿ ನೀಡಿ ಪಡೆದುಕೊಳ್ಳುವಂತೆ ಸೂಚಿಸಿದ್ದರ ಮೇರೆಗೆ ಶಿವಕುಮಾರ್‌ರ ಸಂಬಂಧಿ ಹುಣಸೂರಿನ ಉಲ್ಲಾಸ್ ಟಿ.ಸಿ. ಕಚೇರಿಯಲ್ಲಿ ಟಿ.ಸಿ. ಶಿವಕುಮಾರ್ ಸಮ್ಮುಖದಲ್ಲಿ ಮೊಬೈಲ್‌ನ್ನು ಕಂಡಕ್ಟರ್ ರಾಜಾರಾವ್‌ರಿಂದ ಪಡೆದುಕೊಂಡರು. ರಾಜಾರಾವ್‌ರ ಪ್ರಾಮಾಣಿಕತೆಗೆ ಸಾರ್ವಜನಿಕರು ಪ್ರಶಂಸಿಸಿದ್ದಾರೆ.

### 19 ವರ್ಷದ ಬಳಿಕ ನಕ್ಸಲ್ ಚಂದ್ರು ಸೆರೆ

• ಉದಯವಾಹಿನಿ ತುಮಕೂರು



ತಾಲ್ಲೂಕಿನ ನಾಗಲಮಡಿಕೆ ಹೋಬಳಿ ವೆಂಕಟಮ್ಮನಹಳ್ಳಿ ಗ್ರಾಮದ ಪೊಲೀಸ್ ಕ್ಯಾಂಪ್ ಮೇಲೆ ನಡೆದ ನಕ್ಸಲ್ ದಾಳಿ ಪ್ರಕರಣಕ್ಕೆ ಸಂಬಂಧಿಸಿದಂತೆ 19 ವರ್ಷದಿಂದ ತಲೆ ಮರೆಸಿಕೊಂಡಿದ್ದ 75ನೇ ಆರೋಪಿಯನ್ನು ಪೊಲೀಸರು ಬೆಂಗಳೂರಿನಲ್ಲಿ ಬಂಧಿಸಿದ್ದಾರೆ. ಆಂಧ್ರಪ್ರದೇಶದ ಅನಂತಪುರ ಜಿಲ್ಲೆ, ಸಿಂಗಲಮಲ್ಲ ತಾಲ್ಲೂಕು ಕೇಶವ ಪುರಂ ಗ್ರಾಮದ ಕೊಡಮುಲ ಮುತ್ಯಾಲಚಂದ್ರು, ಬಿನ್ ಬಾಯನ್ನ (38) ಬಂಧಿತ ಆರೋಪಿ.

ಆರೋಪಿಯನ್ನು ಪಾವಗಡ ಜೆಎಂಎಫ್‌ಸಿ ನ್ಯಾಯಾಲಯಕ್ಕೆ ಹಾಜರುಪಡಿಸಿ ಬೆಂಗಳೂರಿನ ಪರಪ್ಪನ ಅಗ್ರಹಾರ ಕಾರಾಗೃಹಕ್ಕೆ ಕರೆದೊಯ್ಯಲಾಗಿದೆ. ವೆಂಕಟಮ್ಮನಹಳ್ಳಿ ಪೊಲೀಸ್ ಹತ್ಯಾಕಾಂಡ ಪ್ರಕರಣ ಕುರಿತು ಪಾವಗಡ ಮತ್ತು ಮಧುಗಿರಿ ನ್ಯಾಯಾಲಯದಲ್ಲಿ ಇನ್ನೂ ವಿಚಾರಣೆ ನಡೆಯುತ್ತಿದೆ. ಬಹುತೇಕ ಆರೋಪಿಗಳ ವಿರುದ್ಧ ಕೋರ್ಟ್ ಜಾಮೀನು ರಹಿತ ವಾರಂಟ್ ಹೊರಡಿಸಿದೆ. ಕೆಲವು ಆರೋಪಿಗಳು ಆಂಧ್ರಪ್ರದೇಶ, ಬೆಂಗಳೂರಿನ ಬಿಬಿಎಂಪಿಯಲ್ಲಿ 12 ವರ್ಷದಿಂದ ಪತಿ, ಪತ್ನಿ ಇಬ್ಬರೂ ಪೌರ ಕಾರ್ಮಿಕರಾಗಿ ಜೀವನ ಸಾಗಿಸುತ್ತಿದ್ದಾರೆ. ಪ್ರಕರಣದ ಸಂಬಂಧ ಪೊಲೀಸರು ಆರೋಪಿಗಳನ್ನು ಹಂತ ಹಂತವಾಗಿ ಬಂಧಿಸಿ ನ್ಯಾಯಾಲಯಕ್ಕೆ ಹಾಜರು ಪಡಿಸುತ್ತಿದ್ದಾರೆ.

### ನೂತನ ಎಸ್‌ಪಿಯಾಗಿ ಬಿ. ನಿಖಿಲ್ ನೇಮಕ

• ಉದಯವಾಹಿನಿ ಕೋಲಾರ



ಜಿಲ್ಲೆಗೆ ನೂತನ ಜಿಲ್ಲಾ ರಕ್ಷಣಾಧಿಕಾರಿಯಾಗಿ ಬಿ.ನಿಖಿಲ್ ಅವರನ್ನು ಬುಧವಾರ ಸರ್ಕಾರ ನೇಮಕ ಮಾಡಿದ್ದು, ಪೊಲೀಸ್ ವರಿಷ್ಠಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಎಂ.ನಾರಾಯಣ್ ಅವರನ್ನು ಉತ್ತರಕನ್ನಡ ಜಿಲ್ಲೆಗೆ ವರ್ಗಾವಣೆ ಮಾಡಲಾಗಿದೆ. ರಾಯಚೂರಿನಲ್ಲಿ ಎಸ್‌ಪಿಯಾಗಿ ಉತ್ತಮ ಕಾರ್ಯನಿರ್ವಹಿಸಿರುವ ಬಿ.ನಿಖಿಲ್ ಅವರನ್ನು ಕೋಲಾರಕ್ಕೆ ವರ್ಗಾವಣೆ ಮಾಡಲಾಗಿದೆ. ನೇರ ಐಪಿಎಸ್ ಗ್ರೇಡ್ ಅಧಿಕಾರಿಯಾಗಿದ್ದ ಕಾರ್ತಿಕ್‌ರೆಡ್ಡಿ ಕೋಲಾರದಿಂದ ವರ್ಗಾವಣೆಯಾದ 4 ವರ್ಷಗಳ ನಂತರ ಬಿ.ನಿಖಿಲ್‌ರನ್ನು ನೇರ ಐಪಿಎಸ್ ಗ್ರೇಡ್ ಅಧಿಕಾರಿಯಾಗಿ ಕೋಲಾರಕ್ಕೆ ಸರ್ಕಾರ ನೇಮಿಸಿದೆ.

ಪೊಲೀಸ್ ಇಲಾಖೆ ಧೃತಿಗೆಡದೆ ಧೈರ್ಯವಾಗಿ ಪ್ರಕರಣ ಭೇದಿಸುವ ಕೆಲಸ ಮಾಡುತ್ತಿದ್ದರೂ ಜಿಲ್ಲೆಯಲ್ಲಿ ಅಪರಾಧ ಪ್ರಕರಣಗಳು ಎಗ್ಗಿಲ್ಲದಂತೆ ನಡೆಯುತ್ತಿವೆ. ಇದರಿಂದ ಸಾರ್ವಜನಿಕರಲ್ಲಿ ಭೀತಿಯ ವಾತಾವರಣ ನಿರ್ಮಾಣವಾಗಿತ್ತು. ಪೊಲೀಸ್ ಇಲಾಖೆಯು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕೆಲಸ ಮಾಡುತ್ತಲೇ ಇತ್ತು. ಆದರೆ ಅಪರಾಧ ಪ್ರಕರಣಗಳ ಸಂಖ್ಯೆ ದಿನೇದಿನೆ ಏರುಮುಖವಾಗತೊಡಗಿದವು. ಇದರಿಂದ ಖಡಕ್ ಅಧಿಕಾರಿ ಒಬ್ಬರನ್ನು ಜಿಲ್ಲೆಗೆ ವರ್ಗಾವಣೆ ಮಾಡಬೇಕೆಂದು ಇಲಾಖೆ ಚಿಂತನೆಯಲ್ಲಿತ್ತು. ಜತೆಗೆ ಜಿಲ್ಲೆಯ ಜನಪ್ರತಿನಿಧಿಗಳೂ ಒಬ್ಬ ಖಡಕ್ ಅಧಿಕಾರಿಯನ್ನು ನೇಮಕ ಮಾಡುವಂತೆ ಇಲಾಖೆಗೆ ಒತ್ತಾಯಿಸಿದ್ದರು ಎನ್ನಲಾಗಿದೆ.

ಅಂತರಾಳದಿಂದ.. EDITORIAL

# ಹಾಥರಸ್‌ನಲ್ಲಿ ಕಾಲ್ತುಳಿತ ದುರಂತ

## ಮತ್ತೆ ಮತ್ತೆ ಲೋಪ, ಕಲಿಯದ ಪಾಠ

ಉತ್ತರಪ್ರದೇಶ ರಾಜ್ಯದ ಹಾಥರಸ್ ಜಿಲ್ಲೆಯ ಫೂಲರಾಯ್ ಗ್ರಾಮದಲ್ಲಿ ಆಯೋಜನೆ ಆಗಿದ್ದ ಸತ್ಸಂಗ ಕಾರ್ಯಕ್ರಮದಲ್ಲಿ ನಡೆದ ಕಾಲ್ತುಳಿತದಲ್ಲಿ 121 ಮಂದಿ ಪ್ರಾಣ ಕಳೆದುಕೊಂಡಿರುವುದು ತಲ್ಲಣ ಮೂಡಿಸುವಂಥದ್ದು. ಧಾರ್ಮಿಕ ಕಾರ್ಯಕ್ರಮದ ವೇಳೆ ಇಂತಹ ದುರ್ಘಟನೆ. ಇಷ್ಟು ಜನರ ಪ್ರಾಣಹಾನಿ ಈಚಿನ ದಿನಗಳಲ್ಲಿ ಸಂಭವಿಸಿದ ನಿದರ್ಶನ ಇಲ್ಲ. ಈ ಘಟನೆಯಲ್ಲಿ ಹಲವರಿಗೆ ಗಾಯಗಳಾಗಿವೆ. ದೇಶದ ಹಲವು ಭಾಗಗಳಲ್ಲಿ ಕಾಲ್ತುಳಿತ ದುರಂತಗಳು ನಡೆದಿವೆ. ಜನರು ಭಾರಿ ಸಂಖ್ಯೆಯಲ್ಲಿ ಸೇರುವ ಸಂದರ್ಭಗಳಲ್ಲಿ ಇಂಥವು ನಡೆದಿವೆ. ಅದರಲ್ಲೂ ಮುಖ್ಯವಾಗಿ, ಧಾರ್ಮಿಕ ಕಾರ್ಯಕ್ರಮಗಳ ಸಂದರ್ಭಗಳಲ್ಲಿ, ಯಾತ್ರಾ ಸ್ಥಳಗಳಲ್ಲಿ ಇಂತಹ ಕೆಟ್ಟ ಘಟನೆಗಳು ಹಲವು ಬಾರಿ ನಡೆದಿವೆ. ಏಕೆಂದರೆ, ಇಂತಹ ಕಾರ್ಯಕ್ರಮಗಳಲ್ಲಿ ಹಾಗೂ ಸ್ಥಳಗಳಲ್ಲಿ ಮೂಲಸೌಕರ್ಯದ ವ್ಯವಸ್ಥೆಯನ್ನು ಸರಿಯಾಗಿ ಕಲ್ಪಿಸಿರುವುದಿಲ್ಲ. ಅಲ್ಲಿಗೆ ಬರುವ ಜನರ ಸಂಖ್ಯೆಯ ಮೇಲೆ ಯಾರಿಗೂ ನಿಯಂತ್ರಣ ಕೂಡ ಇರುವುದಿಲ್ಲ. ಹಾಥರಸ್‌ನಲ್ಲಿ ಆಗಿರುವುದು ಕೂಡ ಇದೇ. ಸಾಕಾರ ವಿಶ್ವಹರಿ ಭೋಲೆಬಾಬಾ ಎನ್ನುವ ಧಾರ್ಮಿಕ ಬೋಧಕರೊಬ್ಬರು ಸಣ್ಣ ಗ್ರಾಮದಲ್ಲಿ ಬಹಳ ದೊಡ್ಡ ಮಟ್ಟದ ಕಾರ್ಯಕ್ರಮ ಆಯೋಜಿಸಿದ್ದರು.


ಉದಯವಾಹಿನಿ ಚಿತ್ರ

ಭೋಲೆಬಾಬಾ ಅವರು ಈ ಪ್ರದೇಶದಲ್ಲಿ ಈಚೆಗೆ ಬಹಳ ಜನಪ್ರಿಯತೆ ಪಡೆದಿದ್ದಾರೆ ಎನ್ನಲಾಗಿದೆ. ಆದರೆ ಕಾರ್ಯಕ್ರಮ ನಡೆದ ಸ್ಥಳದಲ್ಲಿ ಜನಜಂಗುಳಿಯನ್ನು ನಿಯಂತ್ರಿಸಲು ವ್ಯವಸ್ಥೆ ಇರಲಿಲ್ಲ. ಅಲ್ಲಿ ವೈದ್ಯಕೀಯ ಸೌಲಭ್ಯಗಳೂ ಲಭ್ಯವಿರಲಿಲ್ಲ ಎಂದು ವರದಿಗಳು ಹೇಳುತ್ತವೆ.ಹಾಥರಸ್‌ನಲ್ಲಿ ನಡೆದ ಈ ಸಂಗದ ಸಂದರ್ಭದಲ್ಲಿ ಏನೆಲ್ಲ ಎಡವಟ್ಟುಗಳು ಆಗಬಹುದೋ ಅವೆಲ್ಲವೂ ಆಗಿಹೋದವು. ಅಲ್ಲಿ ಸೇರಿದ್ದ ಜನರ ನಿಖರ ಸಂಖ್ಯೆ ಎಷ್ಟು ಎಂಬ ಮಾಹಿತಿ ಇಲ್ಲ. ಸತ್ಸಂಗ ಕಾರ್ಯಕ್ರಮಕ್ಕೆ ಅಂದಾಜು ಒಂದು ಲಕ್ಷ ಮಂದಿ ಸೇರಿದ್ದರು ಎನ್ನಲಾಗಿದೆ.

ಅಲ್ಲದೆ, ಗ್ರಾಮದಲ್ಲಿನ ಸಣ್ಣ ಸಭಾಂಗಣದಲ್ಲಿ ಅಷ್ಟೊಂದು ಜನರನ್ನು ಸೇರಿಸಲು ಆಗುತ್ತಿರಲಿಲ್ಲ ಎಂದೂ ಹೇಳಲಾಗಿದೆ.

ಕಾರ್ಯಕ್ರಮ ಆಯೋಜಿಸಲು ಸ್ಥಳೀಯ ಆಡಳಿತದಿಂದ ಅನುಮತಿ ಪಡೆಯಲಾಗಿತ್ತೇ ಎಂಬ ವಿಚಾರದಲ್ಲಿ ಖಚಿತತೆ ಇಲ್ಲ. ಕಾರ್ಯಕ್ರಮದಲ್ಲಿ ಎಷ್ಟು ಜನ ಸೇರಬಹುದು ಎಂಬ ಅಂದಾಜು ಆಧರಿಸಿಯೇ, ಕಾರ್ಯಕ್ರಮ ಆಯೋಜನೆಗೆ ಅನುಮತಿ ನೀಡಲಾಗುತ್ತದೆ.

**ದುರಂತದಲ್ಲಿ ಪ್ರಾಣ ಕಳೆದುಕೊಂಡವರ ಪೈಕಿ ಬಹುತೇಕರು ಬಡ ಹಾಗೂ ದುರ್ಬಲ ವರ್ಗಗಳಿಗೆ ಸೇರಿರುವ ಸಾಧ್ಯತೆ ಇದೆ. ಏಕೆಂದರೆ, ಭೋಲೆಬಾಬಾ ಅವರ ಅನುಯಾಯಿಗಳಲ್ಲಿ ಹೆಚ್ಚಿನವರು ಈ ವರ್ಗಗಳಿಗೆ ಸೇರಿದವರು. ಮೃತರಲ್ಲಿ ಕೆಲವರನ್ನು ಗುರುತುಹಿಡಿಯುವುದೂ ಕಷ್ಟವಾಗಬಹುದು. ಈ ದುರಂತ ನಡೆಯಲು ಕಾರಣರಾದ ಕಾರ್ಯಕ್ರಮ ಸಂಘಟಕರು, ಬೇರೆ ಬೇರೆ ಹಂತಗಳ ಅಧಿಕಾರಿಗಳು ಭೋಲೆಬಾಬಾ ಸೇರಿದಂತೆ ಎಲ್ಲರನ್ನೂ ಉತ್ತರದಾಯಿಗಳನ್ನಾಗಿಸಬೇಕು. ಅವರಿಂದ ಆಗಿರಬಹುದಾದ ಲೋಪಕ್ಕೆ ಶಿಕ್ಷೆ ವಿಧಿಸಬೇಕು. ಆದರೆ ಹೀಗೆ ಶಿಕ್ಷೆಗೆ ಗುರಿಪಡಿಸುವ ಕೆಲಸವು ಸಾಮಾನ್ಯ ಸಂದರ್ಭಗಳಲ್ಲಿ ಆಗುವುದೇ ಇಲ್ಲ. ವಿಚಾರಣೆ ನಡೆಸಲಾಗುತ್ತದೆ ಎಂಬ ಘೋಷಣೆ ಆಗುತ್ತದೆಯಾದರೂ ಅದು ತಾರ್ಕಿಕ ಅಂತ್ಯ ಮುಟ್ಟುವುದಿಲ್ಲ, ಭೋಲೆಬಾಬಾ ಅವರಿಗೆ ರಾಜಕೀಯ ಸಂಪರ್ಕ ಇದೆ ಎಂಬ ಮಾತಿದೆ.**

ಆದರೆ ಜನ ಯಾವ ಪ್ರಮಾಣದಲ್ಲಿ ಸೇರಬಹುದು ಎಂಬುದನ್ನು ಗಣನೆಗೆ ತೆಗೆದುಕೊಂಡಂತೆ ಕಾಣುವುದಿಲ್ಲ. ಭೋಲೆಬಾಬಾ ಅವರ ಬೆಂಗಾವಲು ವಾಹನಗಳಿಗೆ ಸಾಗಲು ಅವಕಾಶ ಕಲ್ಪಿಸುವ ಉದ್ದೇಶದಿಂದ ಸಭಾಂಗಣದ ಒಂದು ದ್ವಾರವನ್ನು ಮುಚ್ಚಲಾಗಿತ್ತು. ಇದು ಕೂಡ ಕಾಲ್ತುಳಿತಕ್ಕೆ ಕಾರಣವಾಯಿತು ಎಂದು ವರದಿಗಳು ಹೇಳಿವೆ..

ಗಾಯಗೊಂಡವರಿಗೆ ಚಿಕಿತ್ಸೆ ನೀಡಲು ಸ್ಥಳದಲ್ಲಿ ವೈದ್ಯಕೀಯ ಸೌಲಭ್ಯ, ಗಾಯಗೊಂಡವರನ್ನು ಆಸ್ಪತ್ರೆಗೆ ಕರೆದೊಯ್ಯುವ ವ್ಯವಸ್ಥೆಯೂ ಇರಲಿಲ್ಲ. ತುರ್ತು ಪರಿಸ್ಥಿತಿಯೊಂದರ ಸಂದರ್ಭದಲ್ಲಿ ಸ್ಪಂದಿಸುವುದು ಹೇಗೆ ಎಂಬ ಬಗ್ಗೆ ಕಾರ್ಯಕ್ರಮದ ಆಯೋಜಕರಿಗಾಗಲಿ, ಅಲ್ಲಿದ್ದ ಇತರ ಯಾರಿಗೇ ಆಗಲಿ ಗೊತ್ತಿರಲಿಲ್ಲ. ಇಂತಹ ಘಟನೆಗಳು ನಡೆದ ನಂತರ ಮೂಲಸೌಕರ್ಯದ ಬಗ್ಗೆ, ಸುರಕ್ಷತಾ ಕ್ರಮಗಳ ಬಗ್ಗೆ ಹಾಗೂ ಮುಂಜಾಗರೂಕತಾ ಕ್ರಮಗಳ ಬಗ್ಗೆ ಬಹಳಷ್ಟು ಮಾತುಗಳನ್ನು ಆಡಲಾಗುತ್ತದೆ. ಆದರೆ ಅವುಗಳನ್ನು ಬಹಳ ಬೇಗ ಮರೆಯಲಾಗುತ್ತದೆ.

ಜನ ಭಾರಿ ಸಂಖ್ಯೆಯಲ್ಲಿ ಸೇರುವ ಎಲ್ಲಾ ಸಂದರ್ಭಗಳಲ್ಲಿಯೂ ಮೂಲಸೌಕರ್ಯವನ್ನು ಖಾತರಿಪಡಿಸುವ, ಅಗತ್ಯ ನೆರವು ವ್ಯವಸ್ಥೆಗಳನ್ನು ಸಜ್ಜುಗೊಳಿಸಿ ಇರಿಸುವ ಕೆಲಸ ಆಗದೇ ಇದ್ದರೆ ಇಂತಹ ದುರಂತಗಳು ಮತ್ತೆ ಮತ್ತೆ ನಡೆಯುತ್ತಿರುತ್ತವೆ. ಈ ರೀತಿಯ ದುರಂತಗಳಿಗೆ ಮನುಷ್ಯನೇ ಕಾರಣ. ಇಂಥವುಗಳಲ್ಲಿ ಜನ ಜೀವ ಕಳೆದುಕೊಳ್ಳುತ್ತಾರೆ. ಹಲವರು ಗಾಯಗೊಳ್ಳುತ್ತಾರೆ. ಹಲವರು ಅನಾಥರಾಗುತ್ತಾರೆ. ಹೀಗಿದ್ದರೂ ಇಂಥವುಗಳಿಂದ ಪಾಠ ಕಲಿತುಕೊಳ್ಳದೇ ಇರುವುದು ತೀರಾ ದುರದೃಷ್ಟಕರ.



# ಸ್ವಾಮಿ ವಿವೇಕಾನಂದರ ಪುಣ್ಯಸ್ಮರಣೆ

## ಹಿಂದೂ ಜನಜಾಗೃತಿ ಸಮಿತಿಯ ವಿಶೇಷ ಲೇಖನ !

• ಉದಯವಾಹಿನಿ, ವಿಶೇಷ

• ಶ್ರೀ. ಮೋಹನ ಗೌಡ,

### ಸ್ವಾಮಿ ವಿವೇಕಾನಂದರ ಗುರುಭಕ್ತಿ

ಸ್ವಾಮಿ ವಿವೇಕಾನಂದರ ಗುರುಭಕ್ತಿ ಸರ್ವ ಧರ್ಮ ಸಮ್ಮೇಲನಕ್ಕಾಗಿ ಸ್ವಾಮಿ ವಿವೇಕಾನಂದರು ಭಾರತದ ಪ್ರತಿನಿಧಿಯಾಗಿ ಚಿಕಾಗೋ, ಅಮೇರಿಕಾಗೆ ಹೋಗಿದ್ದರು. ಅಲ್ಲಿ ಸ್ವಾಮಿ ವಿವೇಕಾನಂದರು ಎಲ್ಲಾ ಶ್ರೋತೃಗಳ ಮನಸ್ಸನ್ನು ಗೆದ್ದು ನ ಭೂತೋ ನ ಭವಿಷ್ಯತಿ' ಎಂಬಂತೆ ಎಲ್ಲರ ಮೇಲೆ ಪ್ರಭಾವಬೀರಿದರು. ಇದರಿಂದಾಗಿ ಸನಾತನ ಹಿಂದೂ ಧರ್ಮದ ಶ್ರೇಷ್ಠತೆ ಪಾಶ್ಚಾತ್ಯರಿಗೆ ತಿಳಿಯಿತು. ಆಗ ಸ್ವಾಮಿ ವಿವೇಕಾನಂದರಿಗೆ ಅನೇಕ ಸಂಸ್ಥೆಗಳಿಂದ ವ್ಯಾಖ್ಯಾನ ನೀಡಬೇಕೆಂದು ಆಮಂತ್ರಣ ಬರಲು ಶುರುವಾಯಿತು. ಅಲ್ಲಿ ಅವರು ಜ್ಞಾನಯೋಗ, ಭಕ್ತಿಯೋಗ, ಕರ್ಮಯೋಗ ಮತ್ತು ರಾಜಯೋಗದ ಬಗ್ಗೆಅನೇಕ ವಿಷಯಗಳನ್ನುಮಂಡಿಸಿದರು. ಎಲ್ಲಾ ಶ್ರೋತೃಗಳು ಮಂತ್ರಮುಗ್ಧರಾಗಿ, ಸಮಯದರಿವಿಲ್ಲದೆ ಸ್ವಾಮೀಜಿಯವರ ಮಾತನ್ನು ಕೇಳುತ್ತಿದ್ದರು. ಜನರಿಗೆ ಇನ್ನೂ ಮುಂದಿನ ವಿಷಯ ಕೇಳಬೇಕೆಂದು ತೀವ್ರ ಇಚ್ಛೆ ಉಂಟಾಗುತ್ತಿತ್ತು.

ಇಂತಹ ಒಂದು ಕಾರ್ಯಕ್ರಮ ಮುಗಿದ ನಂತರ ಶ್ರೋತೃಗಳು ಸ್ವಾಮಿ ವಿವೇಕಾನಂದರನ್ನು ತೀವ್ರ ಜಿಜ್ಞಾಸೆಯಿಂದ ಪ್ರಶ್ನೆಗಳನ್ನು ಕೇಳಿದರು, ಹೇ ಮಹಾನ ಸಂನ್ಯಾಸಿ, ನೀವು ಈ ಅಲೌಕಿಕ ಜ್ಞಾನವನ್ನು ಯಾವ ಶಾಲೆಯಲ್ಲಿ ಅಥವಾ ವಿಶ್ವವಿದ್ಯಾಲಯದಲ್ಲಿ ಕಲಿತಿರಿ ಕೃಪೆ ಮಾಡಿ ನಮಗೆ ವಿಸ್ತಾರವಾಗಿ ಹೇಳಿರಿ. ಅದಕ್ಕೆ ಸ್ವಾಮಿ ವಿವೇಕಾನಂದರು, ಅವಶ್ಯವಾಗಿ, ಈ ಜ್ಞಾನವು ನನಗೆ ಕೇವಲ ನನ್ನ ಗುರುಗಳಿಂದ ಸಿಕ್ಕಿದೆ ಎಂದು ಹೇಳಿದರು. ಆಗ ಶ್ರೋತೃಗಳು ಅಧೀರರಾಗಿ, ನಿಮ್ಮ ಗುರುಗಳು ಯಾರು ? ಎಂದು ಕೇಳಿದರು. ಆಗ ಸ್ವಾಮಿ ವಿವೇಕಾನಂದರು ಹೇಳಿದರು, ನಿಮಗೆ ಈ ಬಗ್ಗೆ ತಿಳಿಯಲು ತೀವ್ರ ಜಿಜ್ಞಾಸೆ ಇದ್ದರೆ ನಾನು ಅವಶ್ಯವಾಗಿ ಹೇಳುವೆನು. ಅದೇ ದಿವಸ ಸ್ವಾಮಿ ವಿವೇಕಾನಂದರ ವಿಶೇಷ ಪ್ರವಚನದ ಆಯೋಜನೆಯನ್ನು ಮಾಡಲಾಯಿತು.

ಪ್ರವಚನದ ಹೆಸರು ನನ್ನ ಗುರು, ಇದರ ಕುರಿತು ವರ್ತಮಾನ ಪತ್ರಿಕೆಗಳಲ್ಲಿ ಪ್ರಸಿದ್ಧಿಯನ್ನು ನೀಡಲಾಯಿತು. ಹಾಗಾಗಿ ಕುತೂಹಲದಿಂದ ಶ್ರೋತೃಗಳ ಸಾಗರವೇ ಅಲ್ಲಿ ನಿರ್ಮಾಣವಾಯಿತು. ಪ್ರವಚನ ಶುರುವಾಗುವ ವೇಳೆ ಸ್ವಾಮಿ ವಿವೇಕಾನಂದರು ಎದ್ದು ವ್ಯಾಸಪೀಠಕ್ಕೆ ಬರುತ್ತಿದ್ದರು, ಆಗ ಒಮ್ಮೆಲೆಶಾಂತಿನಿರ್ಮಾಣವಾಯಿತು. ನೆರೆದಿರುವ ಜನಸಾಗರವನ್ನು ನೋಡಿ ಸ್ವಾಮಿ ವಿವೇಕಾನಂದರಿಗೆ ಸದ್ಗುರುಗಳ ಬಗ್ಗೆ ಕೃತಜ್ಞತೆಯು ಉಕ್ಕಿ ಬಂತು. ಅವರು ಮಾತಾಡಲು ಶೂರು ಮಾಡಿದಾಗ ಮೊದಲು ಹೇಳಿದ್ದು 'ನನ್ನ ಗುರುದೇವ ಈ ವಾಕ್ಯವನ್ನು ಅತ್ಯಂತ ಭಾವಾವಸ್ಥೆಯಲ್ಲಿಉದ್ಗರಿಸಿದ್ದರು. ಅವರು ಭಾವದಲ್ಲಿ ಹೇಳಿದ ಕಾರಣ ಅವರ ಕಣ್ಣಿನ ಮುಂದೆ ಸಾಕ್ಷಾತ್ ಗುರುಗಳ ರೂಪ ಕಾಣಿಸಿತು. ಇದರಿಂದಾಗಿ ಅವರ ಕಂಠ ಗದ್ಗದಿತವಾಯಿತು. ಕಣ್ಣುಗಳಿಂದ ಅಶ್ರುಗಳು ಬರಲಾರಂಭಿಸಿಮತ್ತುರೋಮಾಂಚಿತವಾಗಿ ನಡುಗಲಾರಂಭಿಸಿದರು. ಇದರಿಂದಾಗಿ ಅವರು 10 ನಿಮಿಷ ಏನೂ ಹೇಳಲೇ ಇಲ್ಲ.

ಅವರ ಈ ಅವಸ್ಥೆಯನ್ನು ನೋಡಿಶ್ರೋತೃಗಳು ಆಶ್ಚರ್ಯಚಕಿತರಾಗಿದ್ದರು. ಇದಕ್ಕೆ ಮುಂಚೆ ದೇಹಕ್ಕೆ ನೋವಾದಾಗ, ತುಂಬಾ ದುಃಖಕರ ಪ್ರಸಂಗ ನಡೆದಾಗ ಅಥವಾ ತಂದೆ?ತಾಯಿ, ನೆಂಟರ ಮೃತ್ಯುವಾದಾಗ ಮಾತ್ರ ಕಣ್ಣಲ್ಲಿ ನೀರು ಬರುವುದನ್ನು ಜನರು ನೋಡಿದ್ದರು. ಇದರಿಂದಾಗಿ ಜನರು ಸ್ವಾಮಿ ವಿವೇಕಾನಂದರನ್ನು ಹುಚ್ಚರಂತೆ ನೋಡಿದರು.

**ಪ್ರತಿಯೊಬ್ಬರೂ ಗುರುಗೋವಿಂದ ಸಿಂಗರಾಗಬೇಕು :** ಗುರುಗೋವಿಂದ ಸಿಂಗರು ತಮ್ಮ ಬಾಂಧವರಿಗಾಗಿ ಅಪರಿಮಿತ ಕಷ್ಟಗಳನ್ನು ಸಹಿಸಿಕೊಂಡರು, ಅಂತಹದ್ದೇನಾದರೂ ನಮ್ಮ ಹಿಂದೂ ಬಾಂಧವರಿಗಾಗಿ ಸಹಿಸುವಂತಹ ತಯಾರಿಯು ನಿಮ್ಮಲ್ಲಿದ್ದರೆ ಮಾತ್ರ ನೀವು ಹಿಂದೂಗಳೆನ್ನಬಹುದು. ಹಿಂದೂ ಧರ್ಮಕ್ಕಾಗಿ ಗುರುಗೋವಿಂದ ಸಿಂಗರು ರಣರಂಗವನ್ನು ತಮ್ಮ ರಕ್ತದಿಂದ ಸಿಂಚನಗೊಳಿಸಿದರು. ತಮ್ಮ ಇಬ್ಬರು ಪುತ್ರರನ್ನು ರಣಾಂಗಣದಲ್ಲಿ ಬಲಿ ನೀಡಿದರು. ಒಂದು ವೇಳೆ ನಿಮ್ಮಲ್ಲಿ ಭರತಖಂಡದ ಹಿತವಾಗಬೇಕೆಂಬ ಇಚ್ಛೆಯಿದೆ ಎಂದಾದರೆ ಪ್ರತಿಯೊಬ್ಬ ಹಿಂದೂವು ಗುರುಗೋವಿಂದ ಸಿಂಗರಾಗಬೇಕು' ಎಂದು ಸ್ವಾಮಿ ವಿವೇಕಾನಂದರು ನುಡಿದಿದ್ದಾರೆ.

**ಸರ್ವತೋಮುಖ ಕ್ರಾಂತಿಗಾಗಿ ಭಾರತೀಯ ಯುವಕರೇ, ಸಂಘಟಿತರಾಗಿರಿ :** ಭಾರತಮಾತೆಗೆ ಅವಳ ಸರ್ವಶ್ರೇಷ್ಠ ಮತ್ತು ಸರ್ವೋತ್ಕೃಷ್ಠವಾದ ಸಂತಾನದ ಬಲಿದಾನದ ಅವಶ್ಯಕತೆಯಿದೆ. ಈ ಪೃಥ್ವಿಯಲ್ಲಿನ ಅತ್ಯಂತ ಪರಾಕ್ರಮೀ ಮತ್ತು ಸರ್ವಜನರು ಬಹುಜನಹಿತಾಯ ಬಹುಜನಸುಖಾಯ ಇದಕ್ಕಾಗಿ ಆತ್ಮಬಲಿದಾನ ಮಾಡಲೇಬೇಕಾಗುತ್ತದೆ. ಉತ್ಸಾಹೀ, ಶ್ರದ್ಧಾವಂತ ಮತ್ತು ನಿಷ್ಕಪಟರಾದ ಯುವಕರು ಸಿಕ್ಕರೆ ಅವರು ಇಡಿ ಜಗತ್ತಿನಲ್ಲಿ ಸರ್ವತೋಮುಖ ಕ್ರಾಂತಿ ಮಾಡಬಲ್ಲರು. ಹಿಂದೂಸ್ಥಾನಕ್ಕಾಗಿ ತಮ್ಮ ತನು, ಮನ, ಪ್ರಾಣ ಅರ್ಪಿಸಲು ಸಿದ್ಧರಿರುವ ಯುವಕರನ್ನು ಸಂಘಟಿಸಿರಿ' ಎಂದಿದ್ದಾರೆ.

### ಸ್ವಾಮಿ ವಿವೇಕಾನಂದರ ಕ್ಷಾತ್ರಧರ್ಮ

**ಕಬ್ಬಿಣದ ಬಾಹುಗಳು, ಗಟ್ಟಿಯಾದ ದೇಹ ಮತ್ತು ಅದರ ಅಂತರ್ಯದೊಳಗೆ ವಾಸಿಸುವ ವಜ್ರದಂತಹ ಮನಸ್ಸು ಇಂತಹ ಹಿಂದೂವು ಸ್ವಾಮಿ ವಿವೇಕಾನಂದರಿಗೆ ಬೇಕಾಗಿತ್ತು. ಕ್ಷಾತ್ರಧರ್ಮದ ಮಹತ್ವವನ್ನು ವಿವರಿಸುವಾಗ ಸ್ವಾಮಿ ವಿವೇಕಾನಂದರು, 'ಬಾಹುಗಳು ಶಕ್ತಿಶಾಲಿಯಾಗುವುದರಿಂದ ಗೀತೆಯು ಇನ್ನೂ ಹೆಚ್ಚು ಉತ್ತಮವಾಗಿ ಅರ್ಥವಾಗುತ್ತದೆ. ನಮ್ಮ ಧರ್ಮೀಯರಲ್ಲಿ ರಕ್ತವು ತೇಜದಿಂದ ಕುದಿಯತೊಡಗಿತು ಎಂದರೆ ಭಗವಂತ ಶ್ರೀಕೃಷ್ಣನಂತಹ ಮಹಾಪುರುಷರ ವಿರಾಟ ಪ್ರಜ್ಞೆ ಮತ್ತು ಅಪೂರ್ವ ಸಾಮರ್ಥ್ಯಗಳು ಅರ್ಥವಾಗತೊಡಗುತ್ತವೆ' ಎಂದಿದ್ದಾರೆ.**

# ಸ್ವಾಮಿ ವಿವೇಕಾನಂದ

• ಉದಯವಾಹಿನಿ, ವಿಶೇಷ

ಹುಟ್ಟು ಸಾವು ಯಾರಿಗಿಲ್ಲ
ಬದುಕುವುದು ಸಾರ್ಥಕ್ಕಲ್ಲ
ಎಂದ ವಿವೇಕಾನಂದರ ಅನುಸರಸೋಣ
ಬನ್ನಿರೋ ಬನ್ನಿರೋ
ರೋಗಿಗಳಿಗೆ ಸೇವೆ ಯೋಗಿ
ಮಾಡ್ಯಾರೋ ಶಿಕ್ಷಣ, ಅನ್ನ ಬಡವರಿಗೆ
ನೀಡ್ಯಾರೋ ಜಾತಿ ಶೋಷಣೆ
ಮಾಡಬೇಡಿರೆಂದ್ಯಾರೋ
ಆಧ್ಯಾತ್ಮ ಶಿಕ್ಷಣ ಸರ್ವರಿಗೆ
ನೀಡಲು ಬಂದ್ಯಾರೋ
ಹಿಂದೂ ಧರ್ಮಕ್ಕೆ
ಶಕ್ತಿಯನ್ನು ತುಂಬ್ಯಾರೋ
ಎಲ್ಲಾ ಧರ್ಮಕ್ಕೆ ತಿರಭಾಗಿ
ನಮಿಸ್ಯಾರೋ ಬಡವರ
ಉದ್ದಾರ ರಾಷ್ಟ್ರದ ಉದ್ದಾರ
ಧರ್ಮದ ಪ್ರಚಾರ ವೇದಾಂತಗಳ ಸಾರ
ಎಂದ ವೀರ ಸನ್ಯಾಸಿಯ ತಿಳಿಯೋಣ
ಬನ್ನಿರೋ ಬನ್ನಿರೋ, ಬನ್ನಿರೋ
॥ಹುಟ್ಟುಸಾವು॥
ಗುಡುಗು ಸಿಡಿಲಂತೆ ಜಗದಲ್ಲಿ
ಮಿಂಚ್ಯಾರೋ ಸರ್ವರ ಉದ್ಧಾರಕ್ಕೆ
ಟೊಂಕಕಟ್ಟಿ ನಿಂತ್ಯಾರೋ ದೇವರು, ಧರ್ಮ
ಕಚ್ಚಾಡದೆ ಇರೋಣ ಮಾನವ ಧರ್ಮವ
ಸಾರಿ ಹೇಳೋಣ ಎಂದ ವಿಶ್ವವಿಜೇತನ
ಸ್ಮರಿಸೋಣ ಬನ್ನಿರೋ ಬನ್ನಿರೋ, ಬನ್ನಿರೋ
॥ಹುಟ್ಟುಸಾವು
ರಾಮಕೃಷ್ಣರ ಶಕ್ತಿ, ಶಾರದಾದೇವಿಯರ
ಭಕ್ತಿ ವೇದ ವೇದಾಂತಗಳ ಮಹಾನ್‌ಶಕ್ತಿ
ಸಹೋದರ ಸಹೋದರಿಯರೆಂಬ ಪ್ರೀತಿಯ
ಸಂದೇಶ ಏಳಿ ಎದ್ದೇಳಿ ಗುರಿ ಮುಟ್ಟುವ ತನಕ
ನಿಲ್ಲದಿರಿ ಎಂದ ವಿಶ್ವಮಾನವರ ಅರಿಯೋಣ
ಬನ್ನಿರೋ ಬನ್ನಿರೋ, ಬನ್ನಿರೋ
॥ಹುಟ್ಟುಸಾವು॥
ಧರ್ಮದಿಂದ,
ದಾಸೋಹ, ಕರ್ಮದಿಂದ
ಜೀವನ ರಾಮಕೃಷ್ಣರೆ
ನಮಗೆ ಆದರ್ಶ
ಜೀವನ ಅನುಸರಿಸಿ
ಬಾಳಿದರೆ ಜೀವನ
ಪಾವನ ಎಂದ ರಾಷ್ಟ್ರಸಂತನ
ಜಪಿಸೋಣ ಬನ್ನಿರೋ ಬನ್ನಿರೋ, ಬನ್ನಿರೋ
॥ಹುಟ್ಟುಸಾವು॥
ಗಾಯನ, ವಾಚನ, ಓತಪ್ರೋತ
ಭಾಷಣ ಜನಕ್ಕೆ ಅರಿವು ಮೂಡಿಸಿದ ಗುರುವು
ವಿಜ್ಞಾನಿ, ಸಂತ, ಸಮಾಜ ಸುಧಾರಕ
ದೇಶದ ಚಿಂತಕ, ನಮ್ಮ ಬಾಳಿನ ಉದ್ದಾರಕ
ಆತ್ಮನೋ ಮೋಕ್ಷಾರ್ಥಂ, ಜಗದ್ಧಿತಾಯಚ
ಎಂದ ವಿಶ್ವಗುರುವ ನೆನೆಯೋಣ ಬನ್ನಿರೋ
ಬನ್ನಿರೋ, ಬನ್ನಿರೋ ॥ಹುಟ್ಟುಸಾವು॥



ರಚನೆ-ಡಾ.ಸತ್ಯಮೂರ್ತಿ

# ನಡಿಗೆ ಆರೋಗ್ಯದೆಡೆಗೆ



ವಿಶ್ವಾಸ್.ಡಿ.ಗೌಡ

• ಉದಯವಾಹಿನಿ, ವಿಶೇಷ

ನಡಿಗೆಯನ್ನು ಪ್ರತಿಯೊಬ್ಬ ವ್ಯಕ್ತಿಗೂ ಪ್ರಯೋಜನಕಾರಿ ಎಂದು ಪರಿಗಣಿಸಲಾಗುತ್ತದೆ; ಆದರೆ ವಯಸ್ಸಾದವರು ಎಷ್ಟು ನಡೆಯಬೇಕು ಎಂಬುದನ್ನು ತಿಳಿದುಕೊಳ್ಳುವುದು ಬಹಳ ಮುಖ್ಯ.

ನಡಿಗೆ ನಿಮ್ಮ ಇಡೀ ದೇಹಕ್ಕೆ ಒಳ್ಳೆಯದು. ಮೂವತ್ತು ನಿಮಿಷಗಳ ನಡಿಗೆ ನಿಮ್ಮ ಹೃದಯವನ್ನು ಆರೋಗ್ಯಕರವಾಗಿರಿಸುತ್ತದೆ, ಸ್ನಾಯುಗಳ ಬಲವನ್ನು ಹೆಚ್ಚಿಸುತ್ತದೆ. ಇದು ಹೃದ್ರೋಗ, ಟೈಪ್ 2 ಮಧುಮೇಹ ಆಸ್ಟಿಯೊಪೊರೋಸಿಸ್ ಮತ್ತು ಕೆಲವು ಕ್ಯಾನ್ಸರ್‌ಗಳ ಅಪಾಯವನ್ನು ಕಡಿಮೆ ಮಾಡುತ್ತದೆ.

ದಿನವೂ ವಾಕಿಂಗ್ ಮಾಡಿದರೆ ಬೇರೆ ವ್ಯಾಯಾಮ ಬೇಕಾಗಿಲ್ಲ. ಕೆಲವು ಅಂಕಿಅಂಶಗಳ ಪ್ರಕಾರ ಪುರುಷರು ಮಹಿಳೆಯರಿಗಿಂತ ಹೆಚ್ಚು ನಡೆಯುತ್ತಾರೆ.

ನೀವು ಚಿಕ್ಕವರಿದ್ದಾಗ ಯಾವುದೇ ದೊಡ್ಡ ಆರೋಗ್ಯ ಸಮಸ್ಯೆಗಳಿರಲಿಲ್ಲ ಎಂಬುದು ನಿಮಗೆ ನೆನಪಿರಬಹುದು. ಇದಕ್ಕೆ ಕಾರಣ ಮಕ್ಕಳು ದಿನವಿಡೀ ಚಟುವಟಿಕೆಯಿಂದ ಇರುತ್ತಾರೆ. ಜನರು ಬೆಳೆದಾಗ, ಜನರು ಸೋಮಾರಿತನ ಹಾಗೂ ಸಮಯದ ಕೊರತೆಯ ನೆಪದಲ್ಲಿ ನಡೆಯುವುದನ್ನು ತಪ್ಪಿಸುತ್ತಾರೆ. ನಿಮ್ಮ ದಿನಚರಿಯಲ್ಲಿ ನಡೆಯುವುದು, ಮೆಟ್ಟಿಲುಗಳನ್ನು ಹತ್ತುವುದು, ಕ್ರೀಡೆಯನ್ನು ಆಡುವುದು, ಈಜು ಅಥವಾ ಸೈಕ್ಲಿಂಗ್‌ನಂತಹ ಚಟುವಟಿಕೆಗಳನ್ನು ಸೇರಿಸುವ ಮೂಲಕ ನೀವು ಆರೋಗ್ಯವಂತರಾಗಬಹುದು. ವಾಕಿಂಗ್‌ನಿಂದ ಆಗುವ ಪ್ರಯೋಜನಗಳ ಬಗ್ಗೆ ಸ್ವಲ್ಪ ಹೆಚ್ಚು ತಿಳಿಯೋಣ.

ಯಾವ ವಯಸ್ಸಿನಲ್ಲಿ ನಡೆಯುವುದು ಪ್ರಯೋಜನಕಾರಿ

ಎಲ್ಲಾ ವಯೋಮಾನದವರಿಗೂ ನಡಿಗೆ ಪ್ರಯೋಜನಕಾರಿ 50 ರಿಂದ 60ರ ವಯಸ್ಸಿನಲ್ಲಿ ಕಡ್ಡಾಯವಾಗಿ ನಡೆಯಬೇಕು ಮಕ್ಕಳು ಯಾವ ವಯಸ್ಸಿನಲ್ಲಿ ನಡೆಯಬೇಕು ಎಂಬುದು ಮುಖ್ಯ. 5 ರಿಂದ 18 ವರ್ಷಗಳು - ನೀವು 5 ರಿಂದ 18 ವರ್ಷ ವಯಸ್ಸಿನವರಾಗಿದ್ದರೆ, ನೀವು 16,000 ಹೆಜ್ಜೆಗಳನ್ನು ನಡೆಯಬೇಕು. ಅದೇ ಸಮಯದಲ್ಲಿ ಹುಡುಗಿಯರು 13 ಸಾವಿರ ಹೆಜ್ಜೆಗಳನ್ನು ನಡೆಯಬಹುದು.

19 ರಿಂದ 40 ವರ್ಷಗಳು - ನೀವು 19 ರಿಂದ 40 ವರ್ಷ ವಯಸ್ಸಿನವರಾಗಿದ್ದರೆ, ಈ ವಯಸ್ಸಿನ ಪುರುಷರು ಮತ್ತು ಮಹಿಳೆಯರು ಒಂದು ದಿನದಲ್ಲಿ 13,000 ಕ್ಕಿಂತ ಹೆಚ್ಚು ಹೆಜ್ಜೆಗಳನ್ನು ನಡೆಯಬೇಕು. 40 ವರ್ಷಕ್ಕಿಂತ ಮೇಲ್ಪಟ್ಟ ಜನರು - 12 ಸಾವಿರ ಹೆಜ್ಜೆಗಳು 40 ವರ್ಷಗಳ ನಂತರ ಜನರಿಗೆ ಸೂಕ್ತವೆಂದು ಪರಿಗಣಿಸಲಾಗುತ್ತದೆ. 50 ವರ್ಷಗಳು - ನೀವು 50 ವರ್ಷಕ್ಕಿಂತ ಮೇಲ್ಪಟ್ಟವರಾಗಿದ್ದರೆ ನೀವು ಪ್ರತಿದಿನ 9000 ರಿಂದ 10000 ಹೆಜ್ಜೆಗಳನ್ನು ತೆಗೆದುಕೊಳ್ಳಬೇಕು.

60 ವರ್ಷಕ್ಕಿಂತ ಮೇಲ್ಪಟ್ಟವರು - ನೀವು 60 ವರ್ಷಕ್ಕಿಂತ ಮೇಲ್ಪಟ್ಟವರಾಗಿದ್ದರೆ, ಆರೋಗ್ಯವಾಗಿರಲು ನೀವು ದಿನಕ್ಕೆ 7000 ರಿಂದ 8000 ಹೆಜ್ಜೆಗಳನ್ನು ನಡೆಯಬೇಕು. ಇಲ್ಲಿ ನಾವು ಎಚ್ಚರಿಕೆ ವಹಿಸಬೇಕು, ವಯಸ್ಸಿಗೆ ಬಂದ ನಂತರ ನಮಗೆ ದಣಿವು ಬರದಂತೆ ನಡೆಯಬೇಕು. ನಡಿಗೆ ಅಥವಾ ಓಟದ ಪ್ರಯೋಜನಗಳನ್ನು ತಿಳಿಯಿರಿ ಎರಡೂ ದೇಹಕ್ಕೆ ಪ್ರಯೋಜನಕಾರಿ. ರಕ್ತ ಪರಿಚಲನೆ ಸರಿಯಾಗಿ ಇರುತ್ತದೆ. ಇದು ಹೃದ್ರೋಗ ಮತ್ತು ರಕ್ತದೊತ್ತಡವನ್ನು ಸಹ ನಿಯಂತ್ರಿಸುತ್ತದೆ. ಇದಲ್ಲದೇ ಪಾರ್ಶ್ವವಾಯು, ಮಧುಮೇಹ, ಬೊಜ್ಜು, ಖಿನ್ನತೆ, ಕ್ಯಾನ್ಸರ್ ನಂತಹ ಸಮಸ್ಯೆಗಳು ಉದ್ಭವಿಸುವುದಿಲ್ಲ. ಯಾವುದೇ ವಯಸ್ಸಿನಲ್ಲಿ, ಪ್ರತಿ ವಯಸ್ಸಿನಲ್ಲಿಯೂ ಫಿಟ್ ಆಗಿರಲು, ನಾವು ನಡೆದಾಗ ಮಾತ್ರ, ನಾವು ರೋಗಗಳಿಂದ ಮುಕ್ತರಾಗುತ್ತೇವೆ.



**■ ಹೃದಯದ ಆರೋಗ್ಯಕ್ಕೆ ಅತ್ಯಗತ್ಯ**

**ದಿನಕ್ಕೆ 30 ನಿಮಿಷ, ವಾರಕ್ಕೆ 5 ದಿನ ನಡೆಯುವುದರಿಂದ ನಿಮ್ಮ ಹೃದಯವನ್ನು ಸುಧಾರಿಸಬಹುದು ಎಂದು ಸಂಶೋಧನೆ ತೋರಿಸುತ್ತದೆಆರೋಗ್ಯವಾಗಿರಿ.**

**■ ಸಕ್ಕರೆ ನಿಯಂತ್ರಣ**

**ಪ್ರತಿದಿನ 45 ನಿಮಿಷ ನಡೆಯುವುದರಿಂದ ನಿಮ್ಮ ಸಕ್ಕರೆಯ ಮಟ್ಟ ಕಡಿಮೆಯಾಗುತ್ತದೆ.**

**■ ಮಾನಸಿಕ ಆರೋಗ್ಯಕ್ಕಾಗಿ**

**ಪ್ರತಿದಿನ ಅರ್ಧ ಗಂಟೆ ನಡೆದರೆ ಮಾನಸಿಕ ಆರೋಗ್ಯ ಚೆನ್ನಾಗಿರುತ್ತದೆ. ಇದು ನಿಮ್ಮ ಮನಸ್ಥಿತಿಯನ್ನು ಸುಧಾರಿಸುತ್ತದೆ. ಬಲವಾದ ರೋಗನಿರೋಧಕ ಶಕ್ತಿ ನಿಯಮಿತವಾಗಿ ನಡೆದರೆ ನೀವು ರೋಗ ಪ್ರತಿರೋಧ ಶಕ್ತಿ ಹೆಚ್ಚುತ್ತದೆ.**

ಕ್ಯಾಲೋರಿಗಳನ್ನು ಸುಡಲು ದೇಹವು ಎಷ್ಟು ಕ್ಯಾಲೊರಿಗಳನ್ನು ಸುಡುತ್ತದೆ ಎಂಬುದು ನೀವು ನಡೆಯುವ ದೂರ ಮತ್ತು ನಿಮ್ಮ ತೂಕದಂತಹ ಅಂಶಗಳ ಮೇಲೆ ಅವಲಂಬಿತವಾಗಿರುತ್ತದೆ. ಆದರೆ, ದೇಹದ ಕೊಬ್ಬನ್ನು ಕಳೆದುಕೊಳ್ಳಲು ಇದು ಸುಲಭವಾದ ಮಾರ್ಗವಾಗಿದೆ.

**ನಡೆಯುವುದು ಹೇಗೆ? ಸ್ಥಾಯಿ ವಿಧಾನ:** ನಡೆಯುವಾಗ ನಾವು ನಿಂತಿರುವ ಭಂಗಿಯತ್ತ ಗಮನ ಹರಿಸಬೇಕು. ಮುಂದಕ್ಕೆ ಬಾಗಿ ನಿಲ್ಲುವುದು ಬೆನ್ನು ಅಸ್ವಸ್ಥತೆಯನ್ನು ಹೆಚ್ಚಿಸಬಹುದು. ಆದ್ದರಿಂದ ಮೊದಲು ನೇರವಾಗಿ ನಿಲ್ಲಲು ಪ್ರಯತ್ನಿಸಿ.

**ಕೈಗಳ ಸ್ಥಾನವೂ ಅಗತ್ಯ:** ನೀವು ನಡೆಯುವಾಗ ನಿಮ್ಮ ಕೈಗಳನ್ನು ಮುಕ್ತವಾಗಿಡಿ. ಕೈಗಳನ್ನು ಕಟ್ಟಿಕೊಂಡು ನಡೆಯುವುದರಿಂದ ನಮಗೆ ನಡೆದಾಡುವ ಅನುಕೂಲ ಸಿಗುವುದಿಲ್ಲ ಮತ್ತು ಭುಜದ ನೋವು ಕೂಡ ಆರಂಭವಾಗಬಹುದು. ಕೈಯಲ್ಲಿ ಮೊಬೈಲ್ ನೋಡುತ್ತಾ ನಡೆಯಬೇಡಿ. ನಡಿಗೆಯ ಸಮಯದಲ್ಲಿ ಕೈಗಳ ಮುಕ್ತ ಚಲನೆ ಹೆಚ್ಚಿನ ಲಾಭವನ್ನು ನೀಡುತ್ತದೆ.

**ಒಂದು ಗುರಿ ದೃಢೀಕರಿಸಿ :** - ವಯಸ್ಸಿನ ಹೊರತಾಗಿ, ನೀವು ನಡೆಯುವಾಗಲೆಲ್ಲಾ, ಗುರಿಯನ್ನು ಹೊಂದಿಸಲು ಮರೆಯದಿರಿ. ಪ್ರತಿದಿನ 25 ರಿಂದ 30 ನಿಮಿಷಗಳ ನಡಿಗೆ ಒಳ್ಳೆಯದು.

**ವಯಸ್ಸು ಹೆಚ್ಚಾದಂತೆ ಶಕ್ತಿಯ ಮಟ್ಟವೂ ಹೆಚ್ಚುತ್ತದೆ:** ಆರೋಗ್ಯಕರ ದೇಹಕ್ಕೆ ವಯಸ್ಸಿಗಿಂತ ಚಲನೆ ಮುಖ್ಯವಾಗಿದೆ. 5 ವರ್ಷದ ಮಗು ಅಥವಾ 60 ವರ್ಷ ವಯಸ್ಸಿನ ಹಿರಿಯರ ಬಗ್ಗೆ ಮಾತನಾಡಿ. ಅವರು ತೆಗೆದುಕೊಂಡ ಕ್ರಮಗಳು ಸ್ನಾಯುವಿನ ಒತ್ತಡವನ್ನು ಕಡಿಮೆ ಮಾಡುತ್ತದೆ. ವಾಕಿಂಗ್ ನಿಮ್ಮ ಜೀವನವನ್ನು ವಿಸ್ತರಿಸಬಹುದು. ಆದ್ದರಿಂದ, ನಡಿಗೆಯಿಂದ ಯಾವಾಗಲೂ ಆರೋಗ್ಯವಾಗಿ ಮತ್ತು ಫಿಟ್ ಆಗಿರಿ.



# ಮಹಾಭಾರತ

## ಸೌಪ್ತಿಕಪರ್ವ

• ಹಿಂದಿನ ಸಂಚಿಕೆಯಿಂದ

ಚಿರಕಾಲ ನರಕದಲ್ಲಿರುವುದೇ ನಿನಗೆ ಯೋಗ್ಯವಾದದ್ದು ಎಂದು ನೇಣನ್ನು ಬಿಗಿಗೊಳಿಸಿದನು; ಪ್ರಾಣ ಹೋಗುವವರೆಗೂ ಅವನನ್ನು ಒದೆಯುತ್ತಿದ್ದನು.

ಈ ಗಲಭೆಯಿಂದ ಸುತ್ತಮುತ್ತಣ ಜನರೆಲ್ಲ ಎಚ್ಚೆತ್ತರು. ಪಾಳೆಯಕ್ಕೆ ಯಾವನೋ ರಾಕ್ಷಸ ಬಂದಿರುವನೆಂದು ಭಾವಿಸಿದರು. ಎದ್ದು ಬಂದ ಪಾಂಚಾಲರನ್ನೆಲ್ಲ ಅಶ್ವತ್ಥಾಮನು ಒಬ್ಬರನ್ನೂ ಬಿಡದೆ ಕೊಂದುಹಾಕಿದನು. ದ್ರೌಪದಿಯ ಮಕ್ಕಳು ತಮ್ಮಿಂದಾದಷ್ಟೂ ಹೋರಾಡಿದರು. ಆದರೆ ಪಾಳೆಯದಲ್ಲಿದ್ದವರನ್ನೆಲ್ಲ ಅಶ್ವತ್ಥಾಮನು ಸುಲಭವಾಗಿ ಕೊಂದುಬಿಟ್ಟನು. ಈವರೆಗೆ ಯುದ್ಧದಲ್ಲಿ ಪೆಟ್ಟಾಗದೆ ಉಳಿದಿದ್ದ ಯುಧಾಮನ್ಯು, ಉತ್ತಮೌಜಸ್ ತಮ್ಮ ನಿದ್ರೆಯಲ್ಲಿಯೇ ಸತ್ತರು. ಶಿಖಂಡಿಯನ್ನು ಕೊಲೆ ಮಾಡಲಾಯಿತು.

ಯಾರೂ ಓಡಿಹೋಗದಂತೆ ಕೃಪ ಕೃತವರ್ಮರು ನೋಡಿಕೊಂಡರು. ಎಲ್ಲರೂ ಸತ್ತಮೇಲೆ ಕೃಪನು ಪಾಳೆಯಕ್ಕೆ ಮೂರು ಕಡೆಗಳಿಂದ ಬೆಂಕಿ ಹಚ್ಚಿದನು. ಇದರಿಂದಾಗಿ ಅಶ್ವತ್ಥಾಮನ ವಿನಾಶಕಾರ್ಯ ಇನ್ನೂ ಸುಲಭವಾಯಿತು. ಅಂದು ಈ ಮೂವರು ಕ್ರೂರಪ್ರಾಣಿಗಳಗಿಂತಲೂ ಕ್ರೂರರಾಗಿದ್ದರು. ಪ್ರಾಣಿಗಳು ತಮ್ಮವೇ ಪ್ರಭೇದಗಳನ್ನು ಕೊಲ್ಲುವುದಿಲ್ಲ; ಅಲ್ಲದೆ ಅಪಾಯ ಎದುರಾದಾಗ ಅಥವಾ ಆಹಾರ ಬೇಕಾದಾಗ ಮಾತ್ರ ಕೊಲ್ಲುತ್ತವೆ. ಆದರೆ ಈ ಅಮಾನುಷ ಮಧ್ಯರಾತ್ರಿಯ ಕಗ್ಗೊಲೆ, ಮನುಷ್ಯರೆಂದು ಕರೆಯಬಾರದ ಮನುಷ್ಯರಿಂದ ನಡೆದೇ ಹೋಯಿತು.

ಮಹಾಕಾರ್ಯವನ್ನು ಮಾಡಿ ಮುಗಿಸಿದ ಆನಂದೋದ್ರೇಕದಿಂದ ಕುಣಿಯುತ್ತ ಈ ಮೂವರೂ ದುರ್ಯೋಧನ ಸಾಯುತ್ತಿದ್ದಲ್ಲಿಗೆ ಓಡಿದರು. ಅವನ ಪ್ರಾಣ ಇನ್ನೂ ಹೋಗಿರಲಿಲ್ಲ. ಅವರು ಬರುತ್ತಿದ್ದ ಶಬ್ದವನ್ನು ಕೇಳಿ ಅವನು ತಲೆಯೆತ್ತಿದ.

ಕಾಡುಪ್ರಾಣಿಗಳು ಈಗಾಗಲೇ ಅವನ ಹತ್ತಿರ ಬರಲಾರಂಭಿಸಿದ್ದವು. ಆತ್ಮರಕ್ಷಣೆಗಾಗಿ ಅವುಗಳನ್ನು ನಿವಾರಿಸಿಕೊಳ್ಳುವುದು ಅವನಿಗೆ ಬಹುದುಸ್ತರವಾಗಿದ್ದಿತು. ಮೂವರೂ ಇವನ ಬಳಿ ಬಂದು ಕುಳಿತರು. ದುರ್ಯೋಧನನ ಏಕಮಾತ್ರ ಸಂಗಾತಿಯಾಗಿ ಅವನ ಗದೆ ಬಳಿಯಲ್ಲಿ ಬಿದ್ದಿತ್ತು. ಅಶ್ವತ್ಥಾಮನು, ''ದುರ್ಯೋಧನ, ನಾನು ಹೇಳುವುದನ್ನು ಗಮನವಿಟ್ಟು ಕೇಳು. ನಾನು ಪಾಂಡವ ಪಾಳೆಯವನ್ನೂ ಸಂಪೂರ್ಣವಾಗಿ ನಾಶಮಾಡಿ ಬಂದಿದ್ದೇನೆ. ಅವರು ಕಡೆ ಬದುಕಿ ಉಳಿದಿರುವುದು ಪಂಚಪಾಂಡವರು, ಕೃಷ್ಣ, ಸಾತ್ಯಕಿ ಇಷ್ಟೇ ಜನ; ನಮ್ಮ ಕಡೆ ನಾವು ಮೂವರು ಉಳಿದಿದ್ದೇವೆ ಎಂದನು. ಇದನ್ನು ಕೇಳಿ ದುರ್ಯೋಧನನಿಗೆ ಸಂತೋಷವಾಯಿತು. ''ಭೀಷ್ಮ ದ್ರೋಣ ರಾಧೇಯರುಗಳಿಂದಾಗದ ಕೆಲಸವನ್ನು ಇಂದು ನೀನು ಸಾಧಿಸಿರುವೆ ಅಶ್ವತ್ಥಾಮ. ನಿನ್ನ ಬಗ್ಗೆ ನನಗೆ ಹೆಮ್ಮೆ ಎನಿಸಿದೆ. ನಿನಗೆ ಶುಭವಾಗಲಿ. ನಾನು ಈಗ ಪ್ರಾಣತ್ಯಾಗ ಮಾಡಲು ಸಿದ್ಧನಾಗಿರುವೆ. ಸ್ವರ್ಗದಲ್ಲಿ ಎಲ್ಲರೂ ಒಟ್ಟಿಗೆ ಸೇರೋಣ. ಈಗ ನಾನು ಹೋಗುತ್ತೇನೆ ಎಂದನು. ಅವನ ಪ್ರಾಣಪಕ್ಷಿ ಹಾರಿಹೋಗಿತ್ತು.

ಮುಂದುವರಿಯುವುದು...

# ಆಸ್ತಿ ತೆರಿಗೆ ಹೆಚ್ಚಿಸಿಲ್ಲ: ಶೇ.5 ರಿಯಾಯಿತಿ ಅವಧಿ ವಿಸ್ತರಣೆ ಬಿಬಿಎಂಪಿ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಬೃಹತ್ ಬೆಂಗಳೂರ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಹೆಚ್ಚಳವಾಗಲಿದೆ. ನಿವಾಸಿಗಳಿಗೆ ಬಿಬಿಎಂಪಿ ಟ್ಯಾಕ್ಸ್ ಶಾಕ್ ನೀಡಿದೆ ಎಂದೆಲ್ಲ ವರದಿ ಆಗಿವೆ. ಆದರೆ ಇದ್ಯಾವುದೇ ನಿಜವಲ್ಲ, ಯಾರೂ ನಂಬಬಾರದು ಎಂದು ಖುದ್ದು ಬಿಬಿಎಂಪಿ ಅಧಿಕಾರಿಗಳೇ ಮಾಹಿತಿ ನೀಡಿದ್ದಾರೆ.

ಹೌದು ಆಸ್ತಿ ತೆರಿಗೆ ಹೆಚ್ಚಳ ಕುರಿತು ಸ್ಪಷ್ಟೀಕರಣ ನೀಡಿರುವ ಬಿಬಿಎಂಪಿಯು, ಪಾಲಿಕೆ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಹೆಚ್ಚಳ ಸಂಬಂಧ ಕೆಲವು ಮಾಧ್ಯಮಗಳು ವರದಿ ಮಾಡಿವೆ.

ಆಸ್ತಿ ತೆರಿಗೆ ಹೆಚ್ಚಳ ಸಂಬಂಧ ಯಾವುದೇ ಪ್ರಸ್ತಾವನೆ ಆಗಲಿ, ಚಿಂತನೆ ಆಗಲಿ ಸರ್ಕಾರದ ಮುಂದೆ ಇಲ್ಲ ಎಂದು ಕಂದಾಯ ವಿಭಾಗದ ವಿಶೇಷ ಆಯುಕ್ತ ಮನೀಷ್ ಮೌದ್ಗಿಲ್ ತಿಳಿಸಿದ್ದಾರೆ. ಬೆಂಗಳೂರು ನಿವಾಸಿಗಳು ಗಮನಿಸಬೇಕು, ನಮ್ಮ (ಪಾಲಿಕೆ) ವ್ಯಾಪ್ತಿಯಲ್ಲಿ ಆಸ್ತಿ, ಕಟ್ಟಡಗಳ ತೆರಿಗೆ ಏರಿಕೆ ಪ್ರಸ್ತಾವನೆ ಇಲ್ಲ. ಇದೆಲ್ಲ ಊಹಾಪೋಹವಾಗಿದ್ದು, ಜನರು ವದಂತಿಗಳನ್ನು ನಂಬಬಾರದು ಎಂದು ಅವರು ಸಾರ್ವಜನಿಕರಲ್ಲಿ ಮನವಿ ಮಾಡಿಕೊಂಡಿದ್ದಾರೆ. ಇನ್ನು ಕರ್ನಾಟಕದ ನಗರ ಸ್ಥಳೀಯ ಸಂಸ್ಥೆಗಳಲ್ಲಿ 2024-25ನೇ ಸಾಲಿನ ಆಸ್ತಿ ತೆರಿಗೆ ಪಾವತಿಗೆ ಏಪ್ರಿಲ್ ತಿಂಗಳಿನಲ್ಲಿ ಶೇ. 5% ರಿಯಾಯಿತಿ 2024 ಜುಲೈ 31ರವರೆಗೆ ವಿಸ್ತರಿಸಲು ಪೌರಾಡಳಿತ ನಿರ್ದೇಶನಾಲಯ ಸರ್ಕಾರ ಮುಂದೆ ಪ್ರಸ್ತಾವನೆ ಇಟ್ಟಿದೆ. ಈ ಮನವಿಯನ್ನು ಪುರಸ್ಕರಿಸಿರುವ ರಾಜ್ಯ ಸರ್ಕಾರ, ಮಹಾನಗರ ಪಾಲಿಕೆ ಆಸ್ತಿ ತೆರಿಗೆ ಪಾವತಿಯನ್ನು ಹೆಚ್ಚಿಸಲು ಮತ್ತು ಸ್ವಯಂ ತೆರಿಗೆ ಪಾವತಿ ಉತ್ತೇಜಿಸುವ ಸಲುವಾಗಿ ಆರ್ಥಿಕ ವರ್ಷದ ಪ್ರಾರಂಭದ 30 ದಿನಗಳಲ್ಲಿ ಪೂರ್ಣ ಪ್ರಮಾಣದ ಆಸ್ತಿ ತೆರಿಗೆ ಪಾವತಿಗೆ, ಶೇಕಡಾ 5% ರಿಯಾಯಿತಿ ನೀಡುವ ಅವಕಾಶವನ್ನು ಜುಲೈ 31ರವರೆಗೆ ವಿಸ್ತರಿಸಿ ಆದೇಶಿಸಿದೆ.


**ಸದ್ಯ ಬಿಬಿಎಂಪಿಯು ಆ ಆಸ್ತಿ ಮಾಲೀಕರಿಗೆ OTSಗೆ ಅವಕಾಶ ಕಲ್ಪಿಸಿದೆ. ಯಾರೆಲ್ಲ ತೆರಿಗೆ ಬಾಕಿ ಉಳಿಸಿಕೊಂಡಿದ್ದೀರೋ ಅವರೆಲ್ಲ 'ಒನ್ ಟೈಮ್ ಸೆಟಲ್‌ಮೆಂಟ್' OTSಗೆ ಅವಕಾಶ ನೀಡಲಾಗುತ್ತದೆ. ಈ ಒಟಿಎಸ್ ಯೋಜನೆ ಇದೇ ವರ್ಷ ಫೆಬ್ರವರಿಯಿಂದ ಜಾರಿಗೆ ಬಂದಿದೆ. ಇದರಡಿ ತೆರಿಗೆ ಪಾವತಿಸಿದರೆ, ಬಡ್ಡಿ ಮನ್ನಾ ಆಗಲಿದೆ. ಆದ್ದರಿಂದ ಯಾರೆಲ್ಲ ನೋಟಿಸ್ ಪಡೆದಿದ್ದೀರಾ ಅವರೆಲ್ಲ, ಇದೇ ಜುಲೈ 15ರೊಳಗೆ ಬಾಕಿ ತೆರಿಗೆ ಕಟ್ಟುವಂತೆ ಬಿಬಿಎಂಪ ಸೂಚನೆ ನೀಡಿದೆ.**



ಪೌರಾಡಳಿತ ನಿರ್ದೇಶನಾಲಯ ನೀಡಿರುವ ಪ್ರಸ್ತಾವನೆಗಳಲ್ಲಿ ವಿವರಿಸಿರುವ ಪ್ರಸ್ತಾವನೆ ಸಭೆ, ನಗರ ಸ್ಥಳೀಯರ ಆಸ್ತಿ ತೆರಿಗೆ ಪಾವತಿಯನ್ನು ಹೆಚ್ಚಿಸಲು ಹಾಗೂ ಸ್ವಯಂ ತೆರಿಗೆ ಪಾವತಿಯನ್ನು ಉತ್ತೇಜಿಸುವ ಆಧುನಿಕ ಕರ್ನಾಟಕ ಪೌರ ಸಂಸ್ಥೆಗಳು 1964ರ ಕಲಂ 105(1)ರನ್ವಯ ವಿಸ್ತರಣೆ ಮಾಡಲಾಗಿದೆ. ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ (ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಆರ್ಥಿಕ ಸಂಸ್ಥೆ) ವರ್ಷದ ಪ್ರಾರಂಭದ 30 ದಿನಗಳಲ್ಲಿ ಪೂರ್ಣ ಪ್ರಮಾಣದ ಆಸ್ತಿ ತೆರಿಗೆ ಪಾವತಿ ಮಾಡಿದಲ್ಲಿ, ಶೇಕಡಾ 5ರಷ್ಟು ರಿಯಾಯಿತಿ ಪಡೆಯಲು ಅವಕಾಶ ಇದೆ. ಯಾರೆಲ್ಲ ಇನ್ನೂವರೆಗೂ ಆಸ್ತಿ ತೆರಿಗೆ ಪಾವತಿಸಿಲ್ಲವೋ ಅಂತವರೂ ಕೂಡಲೇ ಪಾವತಿಸಿ ರಿಯಾಯಿತಿ ಪಡೆಯಬಹುದು ಎಂದು ರಾಜ್ಯ ಸರ್ಕಾರ ತಿಳಿಸಿದೆ. ಇದಷ್ಟೇ ಅಲ್ಲದೇ ಬೆಂಗಳೂರಿನಲ್ಲಿ ವಿವಿಧ ಕಟ್ಟಡಗಳ ಆಸ್ತಿ ತೆರಿಗೆ ಪಾವತಿಯಲ್ಲಿ ವ್ಯತ್ಯಾಗಳು ಕಂಡು ಬಂದ ಹಿನ್ನೆಲೆಯಲ್ಲಿ ಬಿಬಿಎಂಪಿ ಅಧಿಕಾರಿಗಳು ಖುದ್ದು ಸರ್ವೇ ನಡೆಸಿದರು. ಈ ವೇಳೆ 100ಕ್ಕೂ ಹೆಚ್ಚು ಕಟ್ಟಡಗಳ ತೆರಿಗೆ ಪಾವತಿಯಲ್ಲಿ ಅಕ್ರಮ ಕಂಡು ಬಂದಿದೆ. ಅಂಥಹ ಆಸ್ತಿ ಮಾಲೀಕರಿಗೆ ಈಗಾಗಲೇ ನೋಟಿಸ್ ಜಾರಿ ಮಾಡಲಾಗಿದೆ.

# ಶ್ರೀ ಗುರುರಾಯರ ಸನ್ನಿಧಿಯಲ್ಲಿ ಆರಾಧನಾ ಮಹೋತ್ಸವ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಶ್ರೀ 1008 ಶ್ರೀ ವಿಜಯೀಂದ್ರ ತೀರ್ಥ ಶ್ರೀ ಪಾದರ ಆರಾಧನಾ ಮಹೋತ್ಸವ ಶ್ರೀ ಗುರು ರಾಯರ ಸನ್ನಿಧಿಯಲ್ಲಿ ಬೆಂಗಳೂರಿನ ಜಯನಗರದ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮ ಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಅನುಗ್ರಹ ಆದೇಶದಂತೆ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಆರ್ ಕೆ ವಾಧೀಂದ್ರಾಚಾರ್ಯರ ನೇತೃತ್ವದಲ್ಲಿ ಶ್ರೀ1008 ಶ್ರೀ ವಿಜಯೀಂದ್ರತೀರ್ಥ ಶ್ರೀಪಾದರ ಆರಾಧನಾಮಹೋತ್ಸವವು ವಿಶೇಷ ಪಲ್ಲಕ್ಕಿ ಉತ್ಸವ, ಗಜವಾಹನೋತ್ಸವ, ರಥೋತ್ಸವದೊಂದಿಗೆ ನೆರವೇರಿತು ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದರು,

ಈ ಸಂದರ್ಭದಲ್ಲಿ ಭಕ್ತಾದಿಗಳು ಪೂಜಾ ಸೇವೆಯಲ್ಲಿ ಭಾಗವಹಿಸಿ ತೀರ್ಥ ಪ್ರಸಾದವನ್ನು ಸ್ವೀಕರಿಸಿ ಶ್ರೀ ಹರಿವಾಯು ಗುರುಗಳ ಅನುಗ್ರಹಕ್ಕೆ ಪಾತ್ರರಾದರು.

# ಚಿತ್ರದುರ್ಗ ನಗರಸಭೆ: ಕಸ ವಿಂಗಡಣೆಗೆ ವಿನೂತನ ಪ್ರಯೋಗ

## ಹಸಿ ಕಸ, ಒಣ ಕಸ ಮನೆಯಲ್ಲಿ ವಿಂಗಡಿಸಿ ನೀಡುವ ಕಾರ್ಡ್: ರಾಜ್ಯದಲ್ಲಿ ಮೊದಲ ಬಾರಿಗೆ ಚಿತ್ರದುರ್ಗ ನಗರಸಭೆ ವಿತರಣೆ

• **ಉದಯವಾಹಿನಿ, ಚಿತ್ರದುರ್ಗ**

ಮನೆ, ಅಂಗಡಿಗಳಲ್ಲಿ ಹಸಿ ಕಸ, ಒಣ ಕಸ ವಿಂಗಡಿಸಿ ನೀಡುವ ಕಾರ್ಡ್‌ಗಳನ್ನು ರಾಜ್ಯದಲ್ಲಿಯೇ ಮೊದಲ ಬಾರಿಗೆ ಚಿತ್ರದುರ್ಗ ನಗರಸಭೆಯು ವಿತರಿಸಿದೆ. ಚಿತ್ರದುರ್ಗ ನಗರಸಭೆ ವ್ಯಾಪ್ತಿಯ ಪ್ರತಿ ಮನೆಗಳಿಗೂ ಹಸಿ ಕಸ ಮತ್ತು ಒಣ ಕಸ ವಿಂಗಡಣೆ ಮಾಡಿ, ನಗರಸಭೆಯ ವಾಹನಗಳಿಗೆ ನೀಡುವ ಬಗ್ಗೆ "ಸ್ವಚ್ಛ ಸರ್ವೇಕ್ಷಣೆ-2024ರ ಅಂಗವಾಗಿ ಮನೆ, ಅಂಗಡಿಗಳಲ್ಲಿ ಹಸಿ ಕಸ ಮತ್ತು ಒಣ ಕಸ ವಿಂಗಡಿಸಿ ನೀಡುವ ಕಾರ್ಡ್‌ಗಳನ್ನು ರಾಜ್ಯದಲ್ಲಿಯೇ ಮೊದಲ ಬಾರಿಗೆ ವಿತರಿಸಲಾಗಿದ್ದು, ಮೂಲದಲ್ಲಿಯೇ ಕಸ ವಿಂಗಡಿಸಿ, ಸಂಗ್ರಹಿಸುವ ವಿನೂತನ ಪ್ರಯೋಗಕ್ಕೆ ನಗರಸಭೆ ಮುಂದಾಗಿದೆ.

ಪ್ರಾಯೋಗಿಕವಾಗಿ ನಾಲ್ಕು ತಿಂಗಳ ಅವಧಿಗೆ ಮುದ್ರಿಸಿ, ಏಪ್ರಿಲ್ ಮಾಹೆಯಲ್ಲಿ ವಾರ್ಡ್ ನಂ. 9 ರಿಂದ 17 ಒಟ್ಟು 9 ವಾರ್ಡ್‌ಗಳಲ್ಲಿ ಬರುವ ಎಲ್ಲಾ ಮನೆಗಳಿಗೂ ಹಂಚಲಾಗಿರುತ್ತದೆ. ಹಾಗೂ ಈ ಕುರಿತು





ಉದಯವಾಹಿನಿ ಚಿತ್ರ

ಮೊದಲ ಬಾರಿಗೆ ಕಾರ್ಡ್ ವಿತರಣೆ

ಪ್ರತಿನಿತ್ಯ ಪರಿಶೀಲನೆ ನಡೆಸಿದ್ದು, ಇದನ್ನು ಇತರೆ ವಾರ್ಡ್‌ಗಳಿಗೆ ಅನ್ವಯಿಸಲು ಯೋಚಿಸಿ, ಮೇ ಮಾಹೆಯಲ್ಲಿ ವಾರ್ಡ್ ನಂ.5, 6, 7, 24, 25, 26, 27 ಒಟ್ಟು 7 ವಾರ್ಡ್ ಮನೆಗಳಿಗೂ ಹಂಚಿ ಒಟ್ಟು 16 ವಾರ್ಡ್‌ಗಳಿಗೆ ನಾಲ್ಕು ತಿಂಗಳ ಕಾರ್ಡ್‌ನ್ನು ಹಂಚಲಾಗಿರುತ್ತದೆ. ಮುಂದುವರೆದು ಚಿತ್ರದುರ್ಗ ನಗರಸಭೆ ವ್ಯಾಪ್ತಿಯ 35 ವಾರ್ಡ್‌ಗಳಿಗೂ ಈ ಸೌಲಭ್ಯ ನೀಡಲು ಜುಲೈ ಮಾಹೆಯಲ್ಲಿ ಆರು ತಿಂಗಳ ಅವಧಿಗೆ ಅಂದರೆ 2024ರ ಡಿಸೆಂಬರ್ ಅಂತ್ಯದವರೆಗೆ ಕಾರ್ಡ್‌ಗಳನ್ನು ಉಳಿದ 19 ವಾರ್ಡ್ ಗಳಿಗೆ ಅಂದರೆ ವಾರ್ಡ್ ನಂ.1, 2, 3, 4, 8, 18, 19, 20, 21, 22, 23, 28, 29, 30, 31, 32, 33, 34, 35 ವಾರ್ಡ್‌ಗಳ ಪ್ರತಿ ಮನೆಗೂ ಕಾರ್ಡ್‌ನ್ನು ವಿತರಣೆ ಮಾಡಲಾಗಿರುತ್ತದೆ. ಸಾರ್ವಜನಿಕರು ಈ ಕಾರ್ಯಕ್ಕೆ ಸಹಕರಿಸಿ, ಪ್ರತಿನಿತ್ಯವೂ ಹಸಿ ಕಸ, ಒಣ ಕಸ ವಿಂಗಡಣೆ ಮಾಡಿ ನಗರಸಭೆಯ ವಾಹನಗಳಿಗೆ ನೀಡಿ, ತಮಗೆ ವಿತರಿಸಿರುವ ಕಾರ್ಡ್‌ಗಳಲ್ಲಿ ದಾಖಲಿಸಲು ಮನವಿ ಮಾಡಿದೆ. ಒಂದು ವೇಳೆ ನಗರಸಭೆಯ ವಾಹನ ಪ್ರತಿ ದಿನ ಅಥವಾ 2 ದಿನಕ್ಕೊಮ್ಮೆ ನಿರಂತರವಾಗಿ ಬರುತ್ತಿರುವ ಬಗ್ಗೆ ಸಹ ಈ ಕಾರ್ಡ್‌ನಲ್ಲಿ ಮನೆಯ ಮಾಲೀಕರ ಸಹಿ ಹಾಕುವುದರಿಂದ ತಿಳಿದುಬರುತ್ತದೆ. ಎರಡು-ಮೂರು ತಿಂಗಳ ಅವಧಿಯಲ್ಲಿ ಸಾರ್ವಜನಿಕರಿಗೆ ನಗರಸಭೆಯ ಸಿಬ್ಬಂದಿಗಳು ಹಾಗೂ ಆರೋಗ್ಯ ನಿರೀಕ್ಷಕರು ಅರಿವು ಮೂಡಿಸಲು ಸೂಚಿಸಲಾಗಿರುತ್ತದೆ. ಆ ನಂತರವೂ ಸಹ ಸಾರ್ವಜನಿಕರು ಕಸವನ್ನು ವಿಂಗಡಿಸಿ ನಗರಸಭೆಯ ವಾಹನಗಳಿಗೆ ನೀಡದೇ ಇದ್ದರೆ, ದಂಡ ವಿಧಿಸಲು ಚಿಂತಿಸಲಾಗಿರುತ್ತದೆ.

> **ಚಿತ್ರದುರ್ಗ ನಗರವು ಐತಿಹಾಸಿಕ ನಗರವಾಗಿದ್ದು, ನಗರ ವ್ಯಾಪ್ತಿಯಲ್ಲಿ ಸ್ವಚ್ಛತೆ ಕಾಪಾಡುವುದು ಎಲ್ಲರ ಹೊಣೆ. ಇದಕ್ಕೆ ಸಾರ್ವಜನಿಕರ ಸಹಕಾರ ಅಗತ್ಯ. ಪ್ರತಿ ದಿನ ಮನೆ, ಅಂಗಡಿಗಳಲ್ಲಿ ಉತ್ಪತ್ತಿಯಾಗುವ ತ್ಯಾಜ್ಯವನ್ನು ರಸ್ತೆಗೆ, ಚರಂಡಿಗೆ ಹಾಕದೇ ಹಸಿ ಕಸ, ಒಣ ಕಸವನ್ನಾಗಿ ಬೇರ್ಪಡಿಸಿ ನಗರಸಭೆಯ ವಾಹನ ಮನೆ ಬಾಗಿಲಿಗೆ ಬಂದಾಗ ನೀಡಲು ಪ್ರತಿ ನಿತ್ಯ ಕಸದ ವಾಹನಗಳಲ್ಲಿ ಪ್ರಚಾರ ಮಾಡಲಾಗುತ್ತಿದೆ. ಆದರೂ ಸಹ ಇನ್ನೂ ಪೂರ್ಣ ಪ್ರಮಾಣದಲ್ಲಿ ಹಸಿ ಕಸ, ಒಣ ಕಸ ವಿಂಗಡಿಸಿ, ನಗರಸಭೆಯ ವಾಹನಗಳಿಗೆ ನೀಡದೇ ರಸ್ತೆ, ಚರಂಡಿ ಮತ್ತು ಖಾಲಿ ನಿವೇಶನಗಳಲ್ಲಿ ಸಾರ್ವಜನಿಕರು ಎಸೆಯುತ್ತಿರುವುದು ಕಂಡುಬಂದಿರುತ್ತದೆ. ಹಸಿ ಕಸ, ಒಣ ಕಸವನ್ನಾಗಿ ವಿಂಗಡಿಸಿ, ನಗರಸಭೆಯ ವಾಹನಗಳಿಗೆ ನೀಡಿದರೆ, ಚಿತ್ರದುರ್ಗ ನಗರವನ್ನು ಸ್ವಚ್ಛ, ಸುಂದರ ನಗರವನ್ನಾಗಿ ಮಾಡಲು ನಗರಸಭೆಯೊಂದಿಗೆ ಸಾರ್ವಜನಿಕರು ಸಹಕರಿಸಬೇಕು**
>
> **-ಎಂ.ರೇಣುಕಾ, ಚಿತ್ರದುರ್ಗ ನಗರಸಭೆ ಪೌರಾಯುಕ್ತ**

# ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಸ್ಥಾನಕ್ಕೆ 07 ಜನ ನಾಮಪತ್ರ ಸಲ್ಲಿಕೆ

• **ಉದಯವಾಹಿನಿ, ಚಿಂಚೋಳಿ**

ತಾಲ್ಲೂಕಿನ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಾಲ್ಲೂಕಾ ಘಟಕಕ್ಕೆ ನಡೆಯುತ್ತಿರುವ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಶರಣುಪಾಟೀಲ ಮೋತಕಪಳ್ಳಿರವರು ಉಪ ಚುನಾವಣಾಧಿಕಾರಿಯವರಿಗೆ ನಾಮಪತ್ರ ಸಲ್ಲಿಸಿದ್ದರು.

ಒಟ್ಟಾರೆ ತಾಲ್ಲೂಕಾ ಅಧ್ಯಕ್ಷ ಸ್ಥಾನಕ್ಕೆ ಸಂತೋಷ ಕುಮಾರ ಶಂಕರ ಗಡಂತಿ, ಭೀಮಶೆಟ್ಟಿ ಬಂಡಪ್ಪಾ ಕಲ್ಲೂರ ರೋಡ್, ಶರಣುಪಾಟೀಲ ವೈಜಿನಾಥ ಮೋತಕಪಳ್ಳಿ, ಚಿತ್ರಶೇಖರ ಶಂಕ್ರಪ್ಪಾ ಪಾಟೀಲ, ಶರಣಪ್ಪಾ ಚನ್ನಬಸಪ್ಪಾ,ದಿನೇಶ ನಾಗ ಶೇಟ್ಟಿ ದುಗ್ಗಾಣಿ, ಲಿಂಗಶೇಟ್ಟಿ ಶರಣಪ್ಪಾ ತಟ್ಟೆಪಳ್ಳಿ, ಸೇರಿ 07 ಜನ ನಾಮಪತ್ರಗಳು ಸಲ್ಲಿಕೆಯಾಗಿವೆ.



ಉದಯವಾಹಿನಿ ಚಿತ್ರ

ತಾಲ್ಲೂಕಾ ಕಾರ್ಯನಿರ್ವಾಹಕ ಸಮಿತಿ ಸದಸ್ಯತ್ವಕ್ಕೆ ಮಲ್ಲಿಕಾರ್ಜುನ ಬಸವಣಪ್ಪಾ ಪಾಲಾಮೋರ್, ಶಿವಕುಮಾರ ಬಸವರಾಜ ಐನೋಳ್ಳಿ, ಶರಣಮ್ಮಾ ಶರಣಪ್ಪಾ ಐನೋಳ್ಳಿ ಸೇರಿದಂತೆ 03 ಜನ ನಾಮಪತ್ರ ಸಲ್ಲಿಸಿದ್ದಾರೆ ಎಂದು ತಾಲ್ಲೂಕಾ ಉಪ ಚುನಾವಣಾಧಿಕಾರಿ ನಂದಕುಮಾರ ಆವುಂಟಗಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಡಾ.ಜ್ಯೋತಿರ್ಲಿಂಗ ಸುಗೂರು, ನೀಲಕಂಠ ಸೀಳಿನ, ಉಮಾಪಾಟೀಲ, ಸುಭಾಷ್ಚಂದ್ರ ಎಂಪಳ್ಳಿ, ವೀರೇಶ ಎಂಪಳ್ಳಿ, ಆನಂದ ಹಿತ್ತಲ, ಕಾಶಿನಾಥ ಪಾಟೀಲ ಎಂಪಳ್ಳಿ, ಗುಂಡಯ್ಯಸ್ವಾಮಿ, ಕಾಶಿನಾಥಸ್ವಾಮಿ, ಸಂಗಮೇಶ ಮೂಲಿಮನಿ, ಸಂತೋಷ ಕೆಕೆ, ಶಂಕರ ಶಿವಪೂರಿ, ಜಗನ್ನಾಥ ಬೀರನಳ್ಳಿ, ಸುರೇಶ ದೇಶಪಾಂಡೆ, ಸಂಜುಪಾಟೀಲ, ಮಹಾಂತೇಶ ಸ್ವಾಮಿ, ಸಂತೋಷ, ಮಲ್ಲಿಕಾರ್ಜುನಸ್ವಾಮಿ, ಮಲ್ಲಿಕಾರ್ಜುನ ಬುಶೇಟ್ಟಿ ಅಣವಾರ ಸೇರಿದಂತೆ ಅನೇಕರಿದ್ದರು.

# ಚಾನೆಲ್ ಶೇಖರ್ ನಾಮಪತ್ರ ಸಲ್ಲಿಕೆ

• **ಉದಯವಾಹಿನಿ, ಬಳ್ಳಾರಿ**

ಜುಲೈ 4. ಅಖಿಲ ಭಾರತ ವೀರಶೈವ ಮಹಾಸಭಾ ಜಿಲ್ಲಾಧ್ಯಕ್ಷ ಸ್ಥಾನಕ್ಕೆ ಇದೇ ತಿಂಗಳು 21ರಂದು ಚುನಾವಣೆ ನಡೆಯಲಿದ್ದು. ಅಧ್ಯಕ್ಷ ಸ್ಥಾನಕ್ಕೆ ಚಾನಳ ಶೇಖರ್ ನಾಮಪತ್ರ ಸಲ್ಲಿಸಿದರು. ಅಖಿಲ ಭಾರತ ವೀರಶೈವ ಮಹಾಸಭಾದ ಚುನಾವಣೆಗೆ ಜುಲೈ 4ರಂದು ನಾಮಪತ್ರ ಸಲ್ಲಿಸಲು ಕೊನೆ ದಿನವಾಗಿದ್ದು, ಪರಿಶೀಲನೆಗೆ ಜುಲೈ 5, ಹಿಂಪಡೆಯಲು ಜುಲೈ 8ರ ಮಧ್ಯಾಹ್ನ 3:00ವರೆಗೆ ಸಮಯ ಇರುತ್ತದೆ.

ಜುಲೈ 21ರಂದು ಬೆಳಿಗ್ಗೆ 8 ರಿಂದ ಸಂಜೆ 5 ರವರೆಗೆ, ಮತದಾನದ ನಡೆಯಲಿದ್ದು ನಂತರ ಮತಗಳ ಎಣಿಕೆ ಆರಂಭವಾಗಲಿದೆ ಎಂದು ಚುನಾವಣಾ ಅಧಿಕಾರಿ ತಿಳಿಸಿದರು. ಈ ಸಂದರ್ಭದಲ್ಲಿ ಮಾಧ್ಯಮದ ಜೊತೆ ಮಾತನಾಡಿದ ಶೇಖರ್, ನನಗೆ ಇದೊಂದು ಬಾರಿ ವೀರಶೈವ ಸಮಾಜದ ಜನರು ಅವಕಾಶ ನೀಡಿದಲ್ಲಿ ಸಮಾಜದಲ್ಲಿ ಇರುವ ಬಡವರಿಗೆ ವಿದ್ಯಾಭ್ಯಾಸ ಉದ್ಯೋಗವನ್ನು ಕಲ್ಪಿಸಿಕೊಡಲು ಪ್ರಯತ್ನಿಸುತ್ತೇನೆ ಎಂದರು.



ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ಕುರಿಹಟ್ಟಿ ರಾಜಣ್ಣ ಮಂಜುನಾಥ್ ಮೇಟಿ ದಿವಾಕರ್ ಗೌಡ, ಅವರ ಅಪಾರ ಅಭಿಮಾನಿಗಳು, ವೀರಶೈವ ಸಮಾಜದ ಮುಖಂಡರು, ಸೇರಿದಂತೆ ಹಲವಾರು ಜನರಿದ್ದರು.

# ರಾಜ್ಯದಲ್ಲಿ ಆತಂಕ ಮೂಡಿಸಿದ 'ಡೆಂಘಿ' ಉತ್ತರ ಕನ್ನಡ ಜಿಲ್ಲೆಯಲ್ಲಿ ಮೊದಲ ಬಲಿ

• **ಉದಯವಾಹಿನಿ, ಉತ್ತರಕನ್ನಡ**

ರಾಜ್ಯದಲ್ಲಿ ಇದೀಗ ಡೇಂಗಿ ಪ್ರಕರಣಗಳ ಸಂಖ್ಯೆ ಜನರಿಂದ ದಿನಕ್ಕೆ ಹೆಚ್ಚುತ್ತಿದ್ದು ಕಳೆದ ಹಲವು ದಿನಗಳಿಂದ ರಾಜ್ಯದಲ್ಲಿ ಡೇಂಗಿ ಸೋಂಕಿಗೆ ಬಲಿಯಾಗುತ್ತಿದ್ದವರ ಸಂಖ್ಯೆ ಕೂಡ ಹೆಚ್ಚುತ್ತಿದೆ ಇದೀಗ ಉತ್ತರ ಕನ್ನಡ ಜಿಲ್ಲೆಯಲ್ಲಿ ಡೇಂಗಿ ಸೋಂಕಿಗೆ ಮೊದಲ ಬಲಿಯಾಗಿರುವ ಪ್ರಕರಣ ವರದಿಯಾಗಿದೆ.

ಹೌದು ಉತ್ತರ ಕನ್ನಡ ಜಿಲ್ಲೆಯಲ್ಲಿ ಡೆಂಘಿ ಸೋಂಕಿಗೆ ಮೊದಲ ಬಲಿಯಾಗಿದ್ದು ಡೆಂಘಿಯಿಂದ ಹರೇ ರಾಮ ಗೋಪಾಲ ಭಟ್ (32) ಸಾವನ್ನಪ್ಪಿದ್ದಾರೆ. ಅಂಕೋಲಾದ ಬಾವಿಕೇರಿ ನಿವಾಸಿ ಹರೇ ರಾಮ ಗೋಪಾಲ್ ಭಟ್ ಒಂದು ವಾರದಿಂದ ಬೆಳಗಾವಿಯಲ್ಲಿ ಅವರು ಚಿಕಿತ್ಸೆ ಪಡೆಯುತ್ತಿದ್ದರು ಆದರೆ ಚಿಕಿತ್ಸೆ ಫಲಿಸದೆ ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದಾರೆ ಎನ್ನಲಾಗಿದೆ.




ಉದಯವಾಹಿನಿ ಚಿತ್ರ


ರಾಜ್ಯದಲ್ಲಿ ಡೆಂಗಿ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿಯಲ್ಲಿ ವಿಡಿಯೋ ಕಾನ್ಫರೆನ್ಸ್‌ಗಳ ಮೂಲಕ ಡಿಸಿ ಮತ್ತು ಜಿಲ್ಲಾ ಆರೋಗ್ಯ ಅಧಿಕಾರಿಗಳ ಜೊತೆಗೆ ವಿಕಾಸ ಸೌಧದಲ್ಲಿ ಸಚಿವ ದಿನೇಶ್ ಗುಂಡೂರಾವ್ ಸಭೆ ನಡೆಸುತ್ತಿದ್ದಾರೆ.

ಡೆಂಘಿ ನಿಯಂತ್ರಣಕ್ಕೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಚರ್ಚೆ ನಡೆಸುತ್ತಿದ್ದಾರೆ. ಡಿಸಿಗಳು ಡಿಎಚ್ಒಗಳ ಜೊತೆ ಆರೋಗ್ಯ ಸಚಿವ ಸಭೆ ನಡೆಸುತ್ತಿದ್ದಾರೆ ವಿಡಿಯೋ ಕಾನ್ಫರೆನ್ಸ್‌ಗಳ ಮೂಲಕ ಡಿಸಿಗಳು, ಡಿಎಚ್ ಅವರ ಜೊತೆ ಚರ್ಚೆ ನಡೆಸುತ್ತಿದ್ದಾರೆ.

# ವಿನಯರೆಡ್ಡಿಗೆ ಕಠಿಣ ಶಿಕ್ಷೆಗೆ ಒಳಪಡಿಸಿ ಬಾಲಕೀಯ ಕುಟುಂಬಕ್ಕೆ ನ್ಯಾಯ ಒದಗಿಸಿ

• **ಉದಯವಾಹಿನಿ, ಸಿಂಧನೂರು**

ರಾಯಚೂರು ಇವರುಗಳು ಇಬ್ಬರೂ ಪ್ರೇಮಿಸಿದ್ದು. ಅನುರಾಧ ಮತ್ತು ವಿನಯರೆಡ್ಡಿ ಇವರು ಇಬ್ಬರು ಕೊಡಿಕೊಂಡು 20 ರಂದು ವಿನಯರಡ್ಡಿ ಇವರು ಚಿಕ್ಕಿಮ್ಮಗಳು ಕೂಡಾ ಒಪ್ಪಿಗೆ ಸೂಚಿಸಿದ್ದು. ದಿ. 21ರಂದು ವಿನಯರಡ್ಡಿ ಈತನು ಮಹಿಳಾ ಸಾಂತ್ವನ ಕೇಂದ್ರಕ್ಕೆ ಹೋಗಿ ನನ್ನ ಮನೆಯಲ್ಲಿ ನಮ್ಮ ಪ್ರೀತಿ ವಿಷಯ ಕುರಿತು ಗಲಾಟೆ ಆಗಿದೆ ನನ್ನದು ಮತ್ತು ನಿನ್ನದು ಜಾತಿ ಬೇರೆ ಬೇರೆ ಎಂದು ನಮ್ಮ ಮನೆಯಲ್ಲಿ ನಮ್ಮ ಮದುವೆಗೆ ಒಪ್ಪುತ್ತಿಲ್ಲವೆಂದು ಹೇಳಿದ್ದು ನೀನು ಒಂದು ವೇಳೆ ನನ್ನನು ಮದುವೆ ಆಗುವುದು ಬಯಸಿದರೆ ನನ್ನ ಮದುವೆಗೆ ನನ್ನ ಪಾಲಕರು ವಿರೋಧ ಕಟ್ಟಿಕೊಂಡು ಮದುವೆ ಆಗುವುದಿಲ್ಲ ಎಂದು ಹೇಳಿ ಒಂದು ವೇಳೆ ನೀನು ನನಗೆ ತೊಂದರೆ ಕೊಟ್ಟರೆ ನನ್ನ ಮತ್ತು ನಿನ್ನ ಮಧ್ಯ ನಡೆದ ಲೈಂಗಿಕ ಸಂಪರ್ಕದ ವಿಷಯವನ್ನು ನಿಮ್ಮ ಜನಾಂಗದವರಿಗೆ ತಿಳಿಸಿ ಬಹಿರಂಗ ಪಡಿಸಿ ನಿಮ್ಮ ಮಾನ ಮರ್ಯಾದೆಯನ್ನು ತೆಗೆಯುವುದಾಗಿ ಹೇಳಿ ಅಂಜಿಸಿ ಜೀವದ ಬೆದರಿಕೆ ಹಾಕಿ ಹೋಗಿದ್ದ ಇರುತ್ತದೆ ಎಂದು ಹೇಳಿದರು



ಉದಯವಾಹಿನಿ ಚಿತ್ರ

ದಿ.21ರಂದು ಅನುರಾಧ ಈಕೆಯು ಮಧ್ಯರಾತ್ರಿ ಸಾಂತ್ವನ ಕೇಂದ್ರದ ಕಟ್ಟಡದ ಮೇಲೆ ಹೋಗಿ ಅಲ್ಲಿಂದ ಕೆಳಗಡೆ ಬಿದಿದ್ದು.ಆಗ ಆಕೆಯನ್ನು ಸಾಂತ್ವನ ಕೇಂದ್ರದವರು ಆಕೆಯನ್ನು ಅಂಬುಲೆನ್ಸ್ ನಲ್ಲಿ ಕರೆದುಕೊಂಡು ಹೋಗಿ ರಾಯಚೂರು ರಿಮ್ಸ್ ಆಸ್ಪತ್ರೆಯಲ್ಲಿ ಅಡ್ಮಿಟ್ ಮಾಡಿದ್ದು ಆ ಸಮಯದಲ್ಲಿ ಆಕೆಯ ತಂದೆಯ ಕೂಡಾ ಆಸ್ಪತ್ರೆಗೆ ಕರೆಸಿಕೊಂಡಿದ್ದು ದಿ. 22 ರಂದು ಸಂಪೂರ್ಣ ಚಿಕಿತ್ಸೆಯನ್ನು. ವೈದ್ಯರು ನೀಡಿದ್ದು. ಚಿಕಿತ್ಸೆ ಫಲಕಾರಿಯಾಗದೆ ದಿ 23 ರಂದು ಬೆಳಿಗ್ಗೆ 6.15 ರ ಸುಮಾರಿಗೆ ಆಸ್ಪತ್ರೆಯಲ್ಲಿ ಮರಣ ಹೊಂದಿದ್ದು ಇರುತ್ತದೆ. ನಂತರ ತಂದೆ ವಿಷಯ ತಿಳಿದ ಪೋಲಿಸ್ ಠಾಣೆಯಲ್ಲಿ ಮನವಿ ಪತ್ರ ಸಲ್ಲಿಸಿ ವಿನಯ ರೆಡ್ಡಿ ಅವರು ಮೇಲೆ ಪ್ರಕರಣ ದಾಖಲಿಸಿ ಬಂಧಿಸಿದರು. ನಮ್ಮ ಸಾಮಾಜಿಕ ಆಘಾತರವಾಗಿದೆ.

ಈತನಿಗೆ ಅತಿ ಕಠಿಣ ಶಿಕ್ಷೆಗೆ ಒತ್ತಾಯಿಸಿ ಸೂಕ್ತ ಕ್ರಮ ಕೈ ಗೊಳ್ಳಬೇಕು ಮರಣ ಹೊಂದಿದ ಬಾಲಕೀಯ ಕುಟುಂಬದ ಸದಸ್ಯರಿಗೆ ನ್ಯಾಯ ಒದಗಿಸಿಕೊಡಬೇಕೆಂದು ಈ ಕೇಸನ್ನು ಸಿಬಿಐಗೆ ವಹಿಸಬೇಕು ಮಾನ್ಯ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರಿಗೆ ತಾಲ್ಲೂಕು ತಹಶೀಲ್ದಾರ್ ಮೂಲಕ ಮನವಿ ಪತ್ರ ಸಲ್ಲಿಸಿ ಒತ್ತಾಯಿಸಿದರು.

ಶಂಕರ ಬ್ಯಾಡಗಿ ಮರಿಯಪ್ಪ ಯಂಕೊಬಾ ಲಕ್ಷ್ಮಣ ಭೋವಿ ಗದ್ದೆಮ್ಮ. ಶ್ಯಾಮಣ್ಣ ದುರ್ಗಪ್ಪ ಹನುಮೇಶ ಪ್ರಕಾಶ್. ಶೇಖರಪ್ಪ ರವಿ ಗುಂಜಳ್ಳಿ ಇನ್ನಿತರರಿದ್ದರು.

# ರೈತಾಪಿ ವರ್ಗದ ಮಿನಿ ಸಂಕ್ರಾಂತಿ ಹಬ್ಬಕ್ಕೆ ಸಿದ್ಧತೆ

• **ಉದಯವಾಹಿನಿ, ಗದಗ**

ಉತ್ತರ ಕರ್ನಾಟಕ ರೈತಾಪಿ ವರ್ಗದ ಮಿನಿ ಸಂಕ್ರಾಂತಿ ಎಂದೇ ಕರೆಯಲ್ಪಡುವ ಮಣ್ಣೆತ್ತಿನ ಅಮವಾಸ್ಯೆ ಆಚರಣೆಗೆ ಸಕಲ ಸದ್ದತೆಗಳು ನಡೆದಿವೆ. ಮಣ್ಣೆತ್ತಿನ ಅಮವಾಸ್ಯೆಯಂದು ಮಣ್ಣಿನಿಂದ ತಯಾರಿಸಿದ ಎತ್ತುಗಳನ್ನು, ಗ್ವಾದ್ಲಿಯನ್ನು ತಂದು ಪೂಜಿಸುವ ಪದ್ಧತಿಯು ಸಾಂಪ್ರದಾಯಿಕವಾಗಿ ಮುಂದುವರಿದುಕೊಂಡು ಬಂದಿದೆ.

ಈ ಹಿನ್ನೆಲೆ ಜಿಲ್ಲಾದ್ಯಂತ ಮಾರುಕಟ್ಟೆಗಳಲ್ಲಿ ಹಾಗೂ ಕುಂಬಾರರ ಮನೆಗಳಲ್ಲಿ ವಿವಿಧ ಆಕೃತಿ ಹಾಗೂ ಬಣ್ಣಗಳಿಂದ ಕೂಡಿದ ಮಣ್ಣೆತ್ತುಗಳ ಮಾರಾಟ ಪ್ರಕ್ರಿಯೆ ಆರಂಭವಾಗಿದ್ದು, ಖರೀದಿಯು ಜೋರಾಗಿದೆ. ರೈತರು, ಸಾರ್ವಜನಿಕರು ಮಾರುಕಟ್ಟೆಗೆ ಧಾವಿಸಿ ಮಣ್ಣೆತ್ತಿನ ಖರೀದಿಯಲ್ಲಿ ನಿರತರಾಗಿದ್ದಾರೆ.



ಉದಯವಾಹಿನಿ ಚಿತ್ರ

ಕಾರಹುಣ್ಣಿಮೆ ಬಳಿಕ ಆಗಮಿಸುವ ಮಣ್ಣೆತ್ತಿನ ಅಮವಾಸ್ಯೆ ನಂತರ ಬಿತ್ತನೆ ಕಾಲವಾಗಿದ್ದರಿಂದ ರೈತರು ಸೇರಿದಂತೆ ಸಾರ್ವಜನಿಕರು, ರೈತರು ಸಂಭ್ರಮದಿಂದ ಮಣ್ಣೆತ್ತನ್ನು ಖರೀದಿಸುವುದರ ಜತೆಗೆ ಕೃಷಿ ಪರಿಕರ ಹಾಗೂ ಎತ್ತುಗಳಿಗೆ ವಿಶೇಷ ಪೂಜೆ ಸಲ್ಲಿಸುವ ರೂಢಿಯಿದೆ.

ಪ್ರಸಕ್ತ ಸಾಲಿನ ಮುಂಗಾರಿನಲ್ಲಿ ಉತ್ತಮ ಮಳೆಯಾಗುತ್ತಿರುವುದರಿಂದ ಒಂದಿಷ್ಟು ನೆಮ್ಮದಿ ವಾತಾವರಣ ಸೃಷ್ಟಿಸಿದೆ.

ಈ ಹಿನ್ನೆಲೆಯಲ್ಲಿ ಸಾಂಪ್ರದಾಯಿಕ ಮಣ್ಣೆತ್ತಿನ ಅಮವಾಸ್ಯೆ ಆಚರಣೆಯ ಮೆರುಗು ಹೆಚ್ಚಿದೆ. ಒಂದೆಡೆ ಎತ್ತುಗಳಿಗೆ ಬೇಕಾಗುವ ಮಿಣಿ, ಜತ್ತಿಗೆ, ಮೂಗುದಾರ, ಬಾರಕೋಲು, ಎತ್ತುಗಳನ್ನು ಕಟ್ಟಲು ಬೇಕಾಗುವ ಸರಪಳಿಗಳನ್ನು ರೈತರು ಖರೀದಿಸಿದರು. ಮತ್ತೊಂದೆಡೆ ಸಾರ್ವಜನಿಕರು ಮಣ್ಣೆತ್ತುಗಳನ್ನು ಖರೀದಿ ಮಾಡಿದರು.

ಮಣ್ಣೆತ್ತು ಕೂಡ ಬಲು ದುಬಾರಿ: ಮಣ್ಣೆತ್ತಿನ ಅಮವಾಸ್ಯೆ ನಿಮಿತ್ತ ನಗರದ ತೋಂಟದಾರ್ಯ ಮಠ, ಹಾತಲಗೇರಿ ನಾಕಾ, ಬೆಟಗೇರಿ ಟೆಂಗಿನಕಾಯಿ ಬಜಾರ್, ಟಾಂಗಾಕೂಟ, ಮುಳಗುಂದ ನಾಕಾ ಸೇರಿ ವಿವಿಧೆಡೆ ಮಣ್ಣೆತ್ತಿನ ಮಾರಾಟ ಜೋರಾಗಿತ್ತು.

ಕಳೆದ ಕೆಲ ವರ್ಷಗಳ ಹಿಂದೆ ಜೋಡಿ ಮಣ್ಣೆತ್ತೆ, ಗ್ವಾದ್ಲಿಗೆ 15ರಿಂದ 30 ರೂ. ದರ ನಿಗದಿಯಾಗಿರುತ್ತಿತ್ತು. ಆದರೆ, ಪ್ರಸಕ್ತ ವರ್ಷ ಜೋಡಿ ಮಣ್ಣೆತ್ತಿಗೆ ಕನಿಷ್ಠ 50 ರಿಂದ 80 ರೂ. ದರ ಇತ್ತು. ಅಲ್ಲದೇ, ಅಲಂಕಾರಿಕ ಮಣ್ಣೆತ್ತಿನ ಬೆಲೆ 400 ರೂ. ಗೆ ನಿಗದಿಪಡಿಸಲಾಗಿತ್ತು.

# ಮಣ್ಣೆತ್ತಿನ ಅಮವಾಸ್ಯೆ ಆಚರಣೆ; ಶ್ರದ್ಧಾ ಭಕ್ತಿಯಿಂದ ಪೂಜೆ, ಚಿಣ್ಣರ ಸಂಭ್ರಮ

• **ಉದಯವಾಹಿನಿ, ಬಳಗಾನೂರು**

ಗ್ರಾಮೀಣ ಭಾಗದಲ್ಲಿನ ಮಣ್ಣೆತ್ತಿನ ಹಬ್ಬಕ್ಕೆ ವಿಶೇಷತೆ ಇದೆ. ರೈತಾಪಿವರ್ಗ ಮಣ್ಣು ನಂಬಿ ಬದುಕು ಕಟ್ಟಿಕೊಂಡವರು. ಮಣ್ಣಿನ ಋಣ ತೀರಿಸಲು ಮತ್ತು ಎತ್ತಿನ ಋಣ ತೀರಿಸಲು ಶ್ರದ್ಧಾ ಭಕ್ತಿಯಿಂದ ಈ ಪದ್ಧತಿ ಅನುಸರಿಸಿಕೊಂಡಿದ್ದೇವೆ ಎಂಬುದು ಪೂರ್ವಿಕರ ಮಾತು.ಅಂತಯೇ ಮಣ್ಣೆತ್ತಿನ ಅಮಾವಾಸ್ಯೆಯ ಆಚರಣೆ ಮಕ್ಕಳಿಗೆ ಸಂಭ್ರಮವೋ ಸಂಭ್ರಮ.

ಜನತೆಗೆಲ್ಲಾ ಅನ್ನ ನೀಡುವ ಅನ್ನದಾತನಿಗೆ ಕಾರಹುಣ್ಣಿಮೆ ಮತ್ತು ಮಣ್ಣೆತ್ತಿನ ಅಮವಾಸ್ಯೆ ಶ್ರೇಷ್ಠವಾದ ಸಂಭ್ರಮದ ಹಬ್ಬಗಳು. ಈ ಹಿನ್ನಲೆಯಲ್ಲಿ ರೈತರು ಮುಂಗಾರು ಹಂಗಾಮಿನಲ್ಲಿ ಬರುವ ಕಾರಹುಣ್ಣಿಮೆ ದಿನದಂದು ಎತ್ತುಗಳನ್ನು ಕರಿ ಹರಿಯುವುದು,



ಉದಯವಾಹಿನಿ ಚಿತ್ರ

ಮಣ್ಣೆತ್ತಿನ ಅಮವಾಸ್ಯೆಯಂದು ಮಣ್ಣೆತ್ತುಗಳಿಗೆ ಪೂಜೆಗೈಯುತ್ತಾರೆ. ರೈತನ ಸಂಗಾತಿಗಳಾದ ಎತ್ತುಗಳೊಂದಿಗೆ ಹೊಲದಲ್ಲಿ ಬಿತ್ತಿದ ಬೀಜ ಮೊಳಕೆಯೊಡೆದು ಸಣ್ಣದಾಗಿ ಬೆಳೆ ಚಿಗುರೆಡೆಯುತ್ತಿದ್ದಂತೆ ಕಾರ ಹುಣಿಮೆ ಬರುತ್ತದೆ. ಎತ್ತುಗಳನ್ನು ಶೃಂಗರಿಸಿ ಕರಿ ಹರಿದಿರುತ್ತಾರೆ. ಮಣ್ಣೆತ್ತಿನ ಅಮವಾಸ್ಯೆಯಂದು ಕುಂಬಾರರು ಮಾಡಿದ ಮಣ್ಣೆತ್ತುಗಳನ್ನು ಕೃಷಿಕರು ಸೇರಿ ಪ್ರತಿಯೊಂದು ಕುಟುಂಬಗಳು ಎತ್ತುಗಳನ್ನು ಖರೀದಿಸಿ ಮನೆಯ ದೇವರ ಜಗಲಿ ಮೇಲೆ ಪ್ರತಿಷ್ಠಾಪಿಸಿ ವಿವಿಧ ಭಕ್ಷ್ಯ-ಭೋಜನಗಳನ್ನು ತಯಾರಿಸಿ ನೈವೇದ್ಯ ಸಮರ್ಪಿಸುತ್ತಾರೆ.

ಮಕ್ಕಳು ಸಾಯಂಕಾಲ ಶೃಂಗರಿಸಿ ಪೂಜಿಸಿದ್ದ ಮಣ್ಣೆತ್ತುಗಳನ್ನು ಸಾಮೂಹಿಕ ಪೂಜೆಗಾಗಿ ಭಾವಿಕಟ್ಟೆಗಳು ದೇವಸ್ಥಾನದ ಆವರಣದಲ್ಲಿ ವಿಶೇಷ ಪೂಜೆಗೈದು ಕರಿ ಹರಿದು ಮಣ್ಣೆತ್ತುಗಳನ್ನು ಮನೆ ಮಾಳಿಗೆಯ ಮೇಲಿಡುತ್ತಾರೆ. ಕಾರಣ ಮಳೆರಾಯನನ್ನು ಆ ಎತ್ತುಗಳು ಕರೆಯುತ್ತವೆಂದು ಅಪಾರ ನಂಬಿಕೆ ಇದೆ.

> **ಕುಂಬಾರರು ಮಣ್ಣೆತ್ತು ಮಾಡುವುದು ನಮ್ಮ ಕುಲ ಕಸುಬು. ಮೊದಲಿನಿಂದಲೂ ಮಣ್ಣಿನ ಗಡಿಗೆ ಇನ್ನಿತರ ವಸ್ತುಗಳನ್ನು ಮಾಡುವುದರ ಜೊತೆಗೆ ಮಣ್ಣೆತ್ತು ಮಾಡುತ್ತೇವೆ. ಪಟ್ಟಣ ಸೇರಿ ಸುತ್ತಮುತ್ತಲಿನ ಹಳ್ಳಿಗಳ ರೈತರು ಮಣ್ಣೆತ್ತುಗಳನ್ನು ತೆಗೆದುಕೊಂಡು ಪೂಜಿಸುತ್ತಾರೆ. ಪಟ್ಟಣದಲ್ಲಿ ವಿರುಪಾಕ್ಷಪ್ಪ ಕುಂಬಾರ, ಶರಭಣ್ಣ ಕುಂಬಾರ, ಪಂಪಣ್ಣ, ಚಂದ್ರಮ, ರೇಣುಕಮ್ಮ ಕುಟುಂಬಗಳು ಎತ್ತುಗಳನ್ನು ಮಾಡಿ ಸುಮಾರು 50 ರಿಂದ 60 ರೂಪಾಯಿಗಳಿಗೆ ಜೋಡಿ ಎತ್ತುಗಳನ್ನು ಮಾರಾಟ ಮಾಡಲಾಗುವುದು ಎನ್ನುತ್ತಾರೆ.**

# ಸಬ್ ಇನ್ಸ್‌ಪೆಕ್ಟರ್ ಶವ ರೈಲು ಹಳಿಯಲ್ಲಿ ಪತ್ತೆ

• **ಉದಯವಾಹಿನಿ, ಕಲಬುರಗಿ**

ಕಳೆದ ಕೆಲ ದಿನಗಳಿಂದ ಮೌತ್ ಕ್ಯಾನ್ಸರ್‌ನಿಂದ ಬಳಲುತ್ತಿದ್ದ ಇನ್ಸ್‌ಪೆಕ್ಟರ್‌ರೊಬ್ಬರ ಶವ ರೈಲು ಹಳಿಯ ಮೇಲೆ ಪತ್ತೆಯಾಗಿದೆ. ಕಾಯಿಲೆಯಿಂದಲೇ ಮಾನಸಿಕವಾಗಿ ನೊಂದು ಡಿಪ್ರೆಶನ್ ಗೊಳಗಾಗಿದ್ದರು. ಇದೇ ಕಾರಣಕ್ಕೆ ರೈಲಿಗೆ ತಲೆಕೊಟ್ಟು ಆತ್ಮಹತ್ಯೆ ಮಾಡಿಕೊಂಡಿರುವ ಶಂಕೆ ವ್ಯಕ್ತವಾಗಿದೆ. ಅದಾಗ್ಯೂ ಸಾವಿಗೆ ನಿಖರ ಕಾರಣ ಇನ್ನೂ ಗೊತ್ತಾಗಿಲ್ಲ. ರೈಲ್ವೆ ಪೊಲೀಸರು ಸ್ಥಳಕ್ಕೆ ದೌಡಾಯಿಸಿದ್ದು, ಶವವನ್ನ ಕಲಬುರಗಿ ಸರಕಾರಿ ಆಸ್ಪತ್ರೆಯ ಶವಾಗಾರಕ್ಕೆ ರವಾನೆ ಮಾಡಲಾಗಿದೆ. ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂಬ ತಿಳಿದು ಬಂದಿದೆ.


# ಬುನಾದಿ ಬಿಟ್ಟು ಮೇಲೇಳದ ಬಿಇಒ ಕಚೇರಿ ಕಾಮಗಾರಿ

## ಮಳೆ ಬಂದರೆ ಸಾಕು, ಸೋರುವ ಈ ಕಟ್ಟಡಕ್ಕೆ ಹಲವು ಸಲ ತೇಪೆ ಹಚ್ಚುವ ಕೆಲಸ ಮಾಡುತ್ತಾ ಬಳಸಿಕೊಳ್ಳಲಾಗುತ್ತಿದೆ

• **ಉದಯವಾಹಿನಿ, ಮೊಳಕಾಲ್ಮುರು**

ಇಲ್ಲಿನ ಕ್ಷೇತ್ರ ಮಾದರಿ ಸರ್ಕಾರಿ ಹಿರಿಯ ಬಾಲಕರ ಪ್ರಾಥಮಿಕ ಶಾಲಾ ಆವರಣದಲ್ಲಿ ನಿರ್ಮಿಸುತ್ತಿದ್ದ ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ ಕಟ್ಟಡ ಅನುದಾನ ಕೊರತೆಯಿಂದಾಗಿ ಅರ್ಧಕ್ಕೆ ಸ್ಥಗಿತಗೊಂಡಿದೆ. ಪ್ರಸ್ತುತ ಮಾದರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿರುವ ಶಿಥಿಲ ಕಟ್ಟಡದಲ್ಲಿ ದಶಕಗಳಿಂದ ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ ಕಾರ್ಯ ನಿರ್ವಹಿಸುತ್ತಿದೆ.

ಮಳೆ ಬಂದರೆ ಸಾಕು, ಸೋರುವ ಈ ಕಟ್ಟಡಕ್ಕೆ ಹಲವು ಸಲ ತೇಪೆ ಹಚ್ಚುವ ಕೆಲಸ ಮಾಡುತ್ತಾ ಬಳಸಿಕೊಳ್ಳಲಾಗುತ್ತಿದೆ. ಸ್ವಂತ ಕಟ್ಟಡ ನಿರ್ಮಿಸಬೇಕು ಎಂಬ ಮನವಿ ಹಲವು ಸಲ ಬಂದಿದ್ದರೂ ಕಾರ್ಯರೂಪಕ್ಕೆ ಬಂದಿರಲಿಲ್ಲ. 2021 - 22ನೇ ಸಾಲಿನಲ್ಲಿ ರಾಜ್ಯ ವಲಯ ಕಾರ್ಯಕ್ರಮ ಅಡಿಯಲ್ಲಿ ಸ್ವಂತ ಕಟ್ಟಡ ನಿರ್ಮಿಸಲು 1.35 ಕೋಟಿ ಅನುದಾನ ಮಂಜೂರಾಗಿತ್ತು. ಆಗಿನ ಕ್ಷೇತ್ರದ ಶಾಸಕರಾಗಿದ್ದ ಬಿ.ಶ್ರೀರಾಮುಲು



ಉದಯವಾಹಿನಿ ಚಿತ್ರ

ಹೊಸ ಕಟ್ಟಡಕ್ಕೆ ಶಂಕುಸ್ಥಾಪನೆ ಮಾಡಿದ್ದರು. ಒಂದು ವರ್ಷದ ಒಳಗೆ ಕಟ್ಟಡ ಪೂರ್ಣಗೊಳಿಸುವ ಭರವಸೆ ಸಿಕ್ಕಿತ್ತು. ಆದರೆ, 3 ವರ್ಷ ಕಳೆದರೂ ಕಟ್ಟಡ ಬುನಾದಿ ಬಿಟ್ಟು ಮೇಲೆ ಏಳದ ಪರಿಣಾಮ ಬಿಇಒ ಕಚೇರಿ ಕಾರ್ಯಗಳಿಗೆ ತೊಂದರೆಯಾಗುತ್ತಿದೆ ಎಂದು ಸಿಬ್ಬಂದಿ ದೂರುತ್ತಾರೆ. ಕಟ್ಟಡದ ನಿರ್ಮಾಣ ಹೊಣೆಯನ್ನು ಭೂಸೇನಾ ನಿಗಮ (ಕೆಆರ್‌ಐಎಲ್) ವಹಿಸಿಕೊಂಡಿದೆ.

ಮೊದಲ ಕಂತಾಗಿ 40 ಲಕ್ಷ ಬಿಡುಗಡೆಯಾಗಿದ್ದು, ಇದರಲ್ಲಿ ನಿರ್ಮಾಣ ಸ್ಥಳದಲ್ಲಿ ಸ್ವಲ್ಪ ಮಣ್ಣು ಕುಸಿಯುತ್ತಿದ್ದ ಕಾರಣ ಆಳವಾದ ಬುನಾದಿ ಹಾಕುವ ಅನಿವಾರ್ಯತೆ ಬಿದ್ದಿತು. ಪರಿಣಾಮ ಬಿಡುಗಡೆಯಾದ ಅನುದಾನ ಬುನಾದಿ ಮಟ್ಟಕ್ಕೆ ಖರ್ಚಾಗಿದೆ. ನಂತರ ಅನುದಾನ ಬಾರದ ಕಾರಣ ಕಾಮಗಾರಿ ಸ್ಥಗಿತಗೊಂಡಿದೆ' ಎಂದು ಭೂಸೇನಾ ನಿಗಮದ ಚಳ್ಳಕೆರೆ ಕಚೇರಿ ಎಂಜಿನಿಯರ್ ನಟರಾಜ್ ಹೇಳಿದರು. ಬಾಕಿ ಹಣ ಬಾರದ ಹೊರತು ನಿರ್ಮಾಣ ಕಾರ್ಯ ಸಾಧ್ಯವಿಲ್ಲ, ಈಚೆಗೆ ಅನುದಾನಕ್ಕೆ ಕೋರಿ ರಾಜ್ಯಮಟ್ಟದ ಕಚೇರಿಗೆ ಹೋಗಿ ಬಂದಿದ್ದೇವೆ. ಅನುದಾನ ಬಿಡುಗಡೆ ಹೊಣೆ ಶಿಕ್ಷಣ ಇಲಾಖೆಗೆ ಸಂಬಂಧಪಟ್ಟಿದ್ದು' ಎಂದು ಅವರು ತಿಳಿಸಿದರು.

ಈ ಕಟ್ಟಡದ ಜತೆಗೆ ದಾವಣಗೆರೆ ಜಿಲ್ಲೆಯ ಚನ್ನಗಿರಿ ಹಾಗೂ ಮಂಡ್ಯ ಜಿಲ್ಲೆ ಪಾಂಡವಪುರದಲ್ಲಿ ಸಹ ಬಿಇಒ ಕಚೇರಿ ನಿರ್ಮಾಣಕ್ಕೆ ಮಂಜೂರಾತಿ ಸಿಕ್ಕಿತ್ತು. ಇದರಲ್ಲಿ ಚನ್ನಗಿರಿ ಕಟ್ಟಡ ಸೇವೆಗೆ ನೀಡಲಾಗಿದೆ ಎಂದು ಅಧಿಕಾರಿಯೊಬ್ಬರು ಮಾಹಿತಿ ನೀಡಿದರು.

ತಾಲ್ಲೂಕಿನಲ್ಲಿ 150ಕ್ಕೂ ಹೆಚ್ಚು ಶಿಕ್ಷಕರ ಕೊರತೆ ಇದೆ. ಕಾಯಂ ಶಿಕ್ಷಕರು ಇಲ್ಲದ 10ಕ್ಕೂ ಹೆಚ್ಚು ಶಾಲೆಗಳಿವೆ. ಆಂಧ್ರ ಗಡಿಗೆ ಹೊಂದಿಕೊಂಡಿರುವ ಈ ತಾಲ್ಲೂಕಿನಲ್ಲಿ ಸಾಕಷ್ಟು ಶೈಕ್ಷಣಿಕ ಸಮಸ್ಯೆಗಳು ಇವೆ. ಅತಿಥಿ ಶಿಕ್ಷಕರಿಂದ ಬೋಧನಾ ಕಾರ್ಯ ನಡೆಯುತ್ತಿದೆ. ಶಿಕ್ಷಣಕ್ಕೆ ಆದ್ಯತೆ ನೀಡಿ ಎಂದು ವೇದಿಕೆಗಳಲ್ಲಿ ಕೇಳಿ ಬರುವ ಭಾಷಣಗಳು ಬಿಇಒ ಕಚೇರಿ ಕಟ್ಟಡದ ಸ್ಥಿತಿಯನ್ನು ನೋಡಿದರೆ ಅಪಹಾಸ್ಯ ಮೂಡಿಸುತ್ತಿದೆ' ಎಂದು ಕೆಲ ಶಿಕ್ಷಕರು ಹೇಳುತ್ತಾರೆ.

> **ಈಗಿರುವ ಕಟ್ಟಡ ತುಂಬಾ ಕಿಷ್ಕಿಂಧೆಯಾಗಿದ್ದು, ಮಳೆ ಬಂದರೆ ಕೆಲ ಭಾಗ ಸೋರುತ್ತದೆ. ಇದರಿಂದ ಕಡತಗಳ ಸಂರಕ್ಷಣೆ ಮಾಡುವುದು ಕಷ್ಟವಾಗಿದೆ. ಜತೆಗೆ ಸಿಬ್ಬಂದಿ ಸುಲಲಿತವಾಗಿ ಕೆಲಸ ಮಾಡಲು ಸಾಧ್ಯವಾಗುತ್ತಿಲ್ಲ. ಸಭೆಗಳನ್ನು ಮಾಡಲು ಸಾರ್ವಜನಿಕರು ಬಂದಲ್ಲಿ ಸಮಸ್ಯೆ ಆಲಿಸಲು ಆಗುತ್ತಿಲ್ಲ. ಹೊಸ ಕಟ್ಟಡ ಸ್ಥಗಿತದ ಬಗ್ಗೆ ಬಾಕಿ ಅನುದಾನ ಬಿಡುಗಡೆಗೆ ಡಿಡಿಪಿಐ ಕಚೇರಿಗೆ ಮನವಿ ಸಲ್ಲಿಸಲಾಗಿದೆ'**
>
> **-ನಿರ್ಮಲಾದೇವಿ, ಕ್ಷೇತ್ರ ಶಿಕ್ಷಣಾಧಿಕಾರಿ**

> **ಮಳೆ ಬಂದರೆ ಸೋರುತ್ತಿರುವ ಹಳೇ ಕಟ್ಟಡ ಕಡತಗಳನ್ನು ಸಂರಕ್ಷಣೆ ಮಾಡುವುದೇ ಸವಾಲು ಹಲವು ಬಾರಿಯ ಮನವಿಗೂ ಈಡೇರದ ಬೇಡಿಕೆ ಎನ್.ವೈ. ಗೋಪಾಲಕೃಷ್ಣ ಶಾಸಕ ಮೊಳಕಾಲ್ಮುರು-ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ ಕಾಮಗಾರಿ ಅರ್ಧಕ್ಕೆ ನಿಂತಿರುವ ವಿಷಯ ಗಮನಕ್ಕೆ ಬಂದಿದೆ. ಯಾವ ಕಾರಣಕ್ಕೆ ಕೆಲಸ ನಿಂತಿದೆ ಎಂಬುದನ್ನು ಪರಿಶೀಲಿಸಿ ಕ್ರಮ ವಹಿಸಲಾಗುವುದು**

# ಮಿನಿ ನ್ಯೂಸ್

## ಚರಂಡಿಯಲ್ಲಿ ಶವವಾಗಿ ನವಜಾತ ಶಿಶು ಪತ್ತೆ

• **ಉದಯವಾಹಿನಿ, ಹುಬ್ಬಳ್ಳಿ**

ರಸ್ತೆ ಪಕ್ಕದ ಚರಂಡಿವೊಂದರಲ್ಲಿ ಶವವಾಗಿ ನವಜಾತ ಶಿಶು ಪತ್ತೆ ಆಗಿರುವ ಘಟನೆ ಹುಬ್ಬಳ್ಳಿಯ ಗಾಮನಗಟ್ಟಿ ಗ್ರಾಮದ ತಾರಿಹಾಳ ಬಳಿ ನಡೆದಿದೆ. ತಾರಿಹಾಳ ಬಳಿ ಇರುವ ರಸ್ತೆ ಪಕ್ಕದ ಚರಂಡಿಯಲ್ಲಿ ನವಜಾತು ಶಿಶು ಚರಂಡಿಗೆ ಎಸೆದಿದ್ದು, ಯಾರದೆಂಬುದು ತಿಳಿದು ಬಂದಿಲ್ಲ.ಆದರೆ ನವಜಾತ ಶಿಶು ಚರಂಡಿಯಲ್ಲಿ ಶವವಾಗಿ ಪತ್ತೆ ಆಗಿರುವುದನ್ನು ಸಾರ್ವಜನಿಕರು ಎಪಿಎಂಸಿ ನವನಗರ ಠಾಣೆಯ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಘಟನೆ ಹಿನ್ನಲೆಯಲ್ಲಿ ಪೊಲೀಸರು ಸ್ಥಳಕ್ಕೆ ಹೋಗಿ ಪರಿಶೀಲನೆ ನಡೆಸಿದ್ದಾರೆ. ಸ್ಥಳಕ್ಕೆ ಆಗಮಿಸಿದ ಪೊಲೀಸರು ಮೃತ ನವಜಾತ ಶಿಶುವನ್ನು ಚರಂಡಿಯಿಂದ ತೆಗೆದು ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.

## ಭಾರಿ ಮಳೆಯಿಂದ ಕಾರಿನ ಮೇಲೆ ಬಿದ್ದ ಮರ : ತಂದೆ ಮಗನಿಗೆ ಗಾಯ

• **ಉದಯವಾಹಿನಿ, ಶಿವಮೊಗ್ಗ**

ದಕ್ಷಿಣ ಒಳನಾಡಿನ ಭಾಗದಲ್ಲಿ ಭಾರಿ ಮಳೆ ಆಗುತ್ತಿದ್ದು, ಮಂಗಳೂರು, ದಕ್ಷಿಣ ಕನ್ನಡ, ಚಿಕ್ಕಮಂಗಳೂರು, ಹಾಸನ ಶಿವಮೊಗ್ಗ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಭಾರಿ ಮಳೆ ಆಗುತ್ತಿದ್ದು ಇದೀಗ ಶಿವಮೊಗ್ಗ ಜಿಲ್ಲೆಯ ಆಗುಂಬೆಯಲ್ಲಿ ಭಾರಿ ಮಳೆಯಾಗಿದ್ದರಿಂದ, ಬೃಹತ್ ಗಾತ್ರದ ಮರ ಒಂದು ಕಾರಿನ ಮೇಲೆ ಬಿದ್ದ ಪರಿಣಾಮ, ಕಾರಿನಲ್ಲಿ ಸಂಚರಿಸುತ್ತಿದ್ದ ತಂದೆ ಮಗ ಗಂಭೀರವಾಗಿ ಕೈಗೊಂಡಿದ್ದಾರೆ.

ಹೌದು ಇಂದು ಆಗುಂಬೆಯ ಸುತ್ತಮುತ್ತ ಭಾರಿ ಮಳೆಯಾಗುತ್ತಿದ್ದೂ, ಈ ವೇಳೆ ಕಾರಿನ ಮೇಲೆ ಬೃಹತ್ ಗಾತ್ರದ ಮರ ಬಿದ್ದಿದೆ. ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ತಾಲ್ಲೂಕಿನ ಆಗುಂಬೆ ಘಾಟ್ ಬೃಹತ್ ಗಾತ್ರದ ಮರ ಉರುಳಿ ಬಿದಿದ್ದರಿಂದ ಕಾರು ನುಜ್ಜು ಗುಜ್ಜಾಗಿದೆ.

ಮಣಿಪಾಲದಿಂದ ಶಿವಮೊಗ್ಗದತ್ತ ಬರುತ್ತಿದ್ದ ಕಾರು ಸಂಪೂರ್ಣವಾಗಿ ಜಖಂಗೊಂಡಿದೆ. ಕಾರಿನಲ್ಲಿ ಪ್ರಯಾಣಿಸುತ್ತಿದ್ದ ತಂದೆ ಮಗನಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಆಗುಂಬೆಯ ನಾಲ್ಕನೇ ತಿರುವಿನಲ್ಲಿ ಮರ ಊರುಳಿದರಿಂದ ಇದೀಗ ಸಂಚಾರ ವ್ಯತಯ ಉಂಟಾಗಿದೆ. ರಸ್ತೆಗೆ ಅಡ್ಡಲಾಗಿ ಬಿದ್ದಿರುವ ಮರವನ್ನು ಇದೀಗ ಸಿಬ್ಬಂದಿ ತೆರವುಗೊಳಿಸುತ್ತಿದ್ದಾರೆ. ಅರಣ್ಯ ಇಲಾಖೆ ಸಿಬ್ಬಂದಿಗೆ ಸ್ಥಳೀಯ ನಿವಾಸಿಗಳು ಸಾಥ್ ನೀಡಿದ್ದಾರೆ.

## ಹೊನ್ನಾವರದಿಂದ ಗೇರುಸೊಪ್ಪ, ಸಾಗರ ಮಾರ್ಗದ ಸಂಚಾರ ಸ್ಥಗಿತ

• **ಉದಯವಾಹಿನಿ, ಹೊನ್ನಾವರ**

ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ 69ರ ಭಾಸ್ಕೇರಿಯ ವರ್ನಕೇರಿ ಬಳಿ ಗುಡ್ಡ ಕುಸಿತ ಉಂಟಾಗಿ ಹೊನ್ನಾವರದಿಂದ ಗೇರುಸೊಪ್ಪ, ಸಾಗರ, ಶಿವಮೊಗ್ಗ ಮಾರ್ಗದ ಸಂಚಾರ ಸ್ಥಗಿತಗೊಂಡಿದೆ.ವಾರದ ಹಿಂದೆ ಇದೆ ಸ್ಥಳದ ಹತ್ತಿರದಲ್ಲೇ ಗುಡ್ಡ ಕುಸಿತ ಉಂಟಾಗಿ, ದೊಡ್ಡ ಬಂಡೆ ಉರುಳಿ ಬಿದ್ದಿತ್ತು. ಇಂದು ಮುಂಜಾನೆ ಗುಡ್ಡದೊಂದಿಗೆ ಮರ ಕೂಡ ಬಿದ್ದಿರುವುದು ವಾಹನ ಸಂಚಾರ ಕೆಲಕಾಲ ಸ್ಥಗಿತಗೊಳಿಸುವಂತಾಗಿದೆ.

ಮೂರಕ್ಕೂ ಅಧಿಕ ವಿದ್ಯುತ್ ಕಂಬ ಮುರಿದು ತಂತಿಗಳು ಹೆದ್ದಾರಿಯಲ್ಲಿ ಚೆಲ್ಲಾಪಿಲ್ಲಿಯಾಗಿತ್ತು. ರಸ್ತೆಗೆ ಅಡ್ಡ ಬಿದ್ದಿರುವ ಮರ ತೆರವುಗೊಳಿಸಿದ ಬಳಿಕ ಏಕಮುಖ ರಸ್ತೆ ಸಂಚಾರ ಪ್ರಾರಂಭಿಸಿದ್ದಾರೆ. ಸ್ಥಳದಲ್ಲಿ ಹೆಸ್ಕಾಂ ಅಧಿಕಾರಿಗಳು ವಿದ್ಯುತ್ ಕಂಬ ತೆರವುಗೊಳಿಸಿ ಗುಡ್ಡ ಕುಸಿತದ ಮಣ್ಣು ತೆರವು ಬಳಿಕ ವಿದ್ಯುತ್ ಸಂಪರ್ಕ ಕಲ್ಪಿಸಲು ಸಜ್ಜಾಗುತ್ತಿದ್ದಾರೆ.

## ಡಿವೈಡರ್‌ಗೆ ಡಿಕ್ಕಿಯಾದ ಬಸ್

• **ಉದಯವಾಹಿನಿ, ಬಂಟ್ವಾಳ**

ರಾ.ಹೆ.75ರ ತುಂಬೆ ರಾಮಲಕಟ್ಟೆ ಬಳಿ ಖಾಸಗಿ ಬಸ್ಸೊಂದು ಚಾಲಕನ ನಿಯಂತ್ರಣ ತಪ್ಪಿ ಡಿವೈಡರ್‌ಗೆ ಢಿಕ್ಕಿಯಾದ ಘಟನೆ ನಡೆದಿದೆ. ಪ್ರಯಾಣಿಕರು ಯಾವುದೇ ಅಪಾಯಗಳಿಲ್ಲದೆ ಪಾರಾಗಿದ್ದಾರೆ.

ಬಸ್ ಬಿ.ಸಿ.ರೋಡು ಭಾಗದಿಂದ ಮಂಗಳೂರಿಗೆ ತೆರಳುತ್ತಿದ್ದು, ಚಾಲಕನ ಅತಿ ವೇಗದ ಚಾಲನೆಯೇ ಅಪಘಾತಕ್ಕೆ ಕಾರಣ ಎನ್ನಲಾಗಿದೆ.

ಘಟನೆಯಿಂದ ಕೆಲ ಹೊತ್ತು ಸಂಚಾರಕ್ಕೆ ತೊಡಕು ಉಂಟಾಗಿದ್ದು, ಬಳಿಕ ಬಸ್ ತೆರವು ಮಾಡಲಾಗಿದೆ. ಬಂಟ್ವಾಳ ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಶಿರಸಿಯಿಂದ ತೆರಳುವ ವಾಹನಗಳಿಗೆ ಬದಲಿ ಮಾರ್ಗ ವ್ಯವಸ್ಥೆ

• **ಉದಯವಾಹಿನಿ, ಶಿರಸಿ**

ಇಲ್ಲಿನ ರಾಷ್ಟ್ರೀಯ ಹೆದ್ದಾರಿ ಶಿರಸಿ-ಕುಮಟಾ ಮಾರ್ಗದಲ್ಲಿ ಕತಗಾಲ ಸಮೀಪದ ಚಂಡಿಕಾ ನದಿ ತುಂಬಿ ಹರಿಯುತ್ತಿರುವುದರಿಂದ ಶಿರಸಿಯಿಂದ ತೆರಳುವ ವಾಹನಗಳಿಗೆ ಬದಲಿ ಮಾರ್ಗ ಸೂಚಿಸಲಾಗಿದೆ. ಸಿದ್ದಾಪುರ ಭಾಗದಲ್ಲಿ ಸುರಿಯುತ್ತಿರುವ ಅತಿಯಾದ ಮಳೆಯಿಂದಾಗಿ ಸಂಚಾರ ವ್ಯತ್ಯಯವಾಗಿದ್ದು, ರಸ್ತೆ ಇಕ್ಕೆಲದಲ್ಲಿ ಅನೇಕ ವಾಹನಗಳು ನಿಂತು ಕೊಂಡಿವೆ. ಶಿರಸಿಯಿಂದ ಕರಾವಳಿ ಭಾಗಕ್ಕೆ ದೇವಿಮನೆ ಘಟ್ಟ ಪ್ರದೇಶ ಬಳಸಿ ಈ ಮಾರ್ಗ ಇದ್ದು, ನಿಲೇಕಣಿ ಬಳಿಯೇ ಯಾಣ, ಯಲ್ಲಾಪುರ ಅಂಕೋಲಾ ಮಾರ್ಗ ಬಳಸಲು ಸೂಚಿಸಿದ್ದಾರೆ. ಕರಾವಳಿ ಸಂಪರ್ಕಕ್ಕೆ ಸಿದ್ದಾಪುರ-ಮಾವಿನಗುಂಡಿ-ಹೊನ್ನಾವರ ಮಾರ್ಗದಲ್ಲೂ ಗುಡ್ಡ ಜರಿದು ಸಂಪರ್ಕಕ್ಕಾಗಿ ತೆರವಿನ ಕಾರ್ಯ ನಡೆದಿದೆ.


## ರಫೀಕ್ ಶವ ಪತ್ತೆ, ರಕ್ಷಣಾ ಕಾರ್ಯಾಚರಣೆ ಮುಕ್ತಾಯ

• **ಉದಯವಾಹಿನಿ, ವಿಜಯಪುರ**

ಮಂಗಳವಾರ ಸಂಜೆ ಜಿಲ್ಲೆಯ ಕೃಷ್ಣಾ ನದಿಯಲ್ಲಿ ಸಂಭವಿಸಿದ್ದ ತೆಪ್ಪ ದುರಂತದಲ್ಲಿ ನಾಪತ್ತೆಯಾಗಿದ್ದ ಐವರಲ್ಲಿ ಗುರುವಾರ ಪತ್ತೆಯಾದ ರಫೀಕ್ ಶವದೊಂದಿದೆ ಎಲ್ಲರ ಶವಗಳೂ ಪತ್ತೆಯಾಗಿವೆ. ಇದರೊಂದಿಗೆ ತೆಪ್ಪ ದುರಂತದ ರಕ್ಷಣಾ ಕಾರ್ಯಾಚರಣೆ ಮುಕ್ತಾಯಗೊಂಡಿದೆ. ಜುಲೈ 2 ರಂದು ಸಂಜೆ ತೆಪ್ಪ ಮುಳುಗಿ ಐವರು ನಾಪತ್ತೆ ಆಗಿದ್ದು, ಈ ವರೆಗೆ ಮೂವರ ಶವ ಪತ್ತೆಯಾಗಿದ್ದವು. ಗುರುವಾರ ಇನ್ನಿಬ್ಬರೂ ಶವವಾಗಿ ಪತ್ತೆಯಾಗಿದ್ದಾರೆ. ನಾಪತ್ತೆ ಆದವರಿಗಾಗಿ ಅಗ್ನಿಶಾಮಕ ಸೇವೆ ಠಾಣೆಗಳ 30 ಸಿಬ್ಬಂದಿ ಯಾಂತ್ರೀಕೃತ 5 ಬೋಟ್‌ಗಳಲ್ಲಿ ಶೋಧ ಕಾರ್ಯಾಚರಣೆ ನಡೆಸಿದ್ದವು.

# ಜೋ ಬೈಡನ್ ಅವರು ಡೆಮಾಕ್ರೆಟಿಕ್ ಪಕ್ಷದ ಅಭ್ಯರ್ಥಿಯಾಗಿ ಮುಂದು

## ಅಮೆರಿಕ ಅಧ್ಯಕ್ಷೀಯ ಚುನಾವಣೆ ರೇಸ್‌ನಿಂದ ಜೋ ಬೈಡನ್ ಹಿಂದೆ ಸರಿಯಲ್ಲ: ವದಂತಿ ತಳ್ಳಿ ಹಾಕಿದ ಶ್ವೇತ ಭವನ



**ಅದು ಸಂಪೂರ್ಣ ಸುಳ್ಳು**

**ವಾಷಿಂಗ್ಟನ್:** 2024ರ ಅಮೆರಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ಡೆಮಾಕ್ರೆಟಿಕ್ ಪಕ್ಷದ ಅಭ್ಯರ್ಥಿಯಾಗಿ ಜೋ ಬೈಡನ್ ಅವರೇ ಮುಂದುವರೆಯುತ್ತಾರೆ, ಅಭ್ಯರ್ಥಿ ಬದಲಾವಣೆ ಆಗುವ ಸಾಧ್ಯತೆ ಇಲ್ಲವೇ ಇಲ್ಲ ಎಂದು ಅಮೆರಿಕ ಅಧ್ಯಕ್ಷರ ಅಧಿಕೃತ ಸರ್ಕಾರಿ ನಿವಾಸ ಶ್ವೇತ ಭವನ ಸ್ಪಷ್ಟನೆ ನೀಡಿದೆ. ಜೋ ಬೈಡನ್ ಅವರು ತಮ್ಮ ಪ್ರಚಾರ ಕಾರ್ಯವನ್ನು ಎಂದಿನಂತೆಯೇ ಮುಂದುವರೆಸಿಕೊಂಡು ಹೋಗಲಿದ್ದಾರೆ ಎಂದು ಶ್ವೇತ ಭವನ ಹೊರಡಿಸಿದ ಪ್ರಕಟಣೆಯಲ್ಲಿ ಸ್ಪಷ್ಟನೆ ನೀಡಲಾಗಿದೆ.

ಅಮೆರಿಕದ ಟಿವಿ ವಾಹನಿಗಳು ನಡೆಸಿದ ಸಮೀಕ್ಷೆಯಲ್ಲಿ ಮತದಾರರ ಒಲವು ರಿಪಬ್ಲಿಕನ್ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಕಡೆಗೆ ವಾಲುತ್ತಿದೆ ಎಂಬ ವರದಿ ಲಭ್ಯವಾಗಿದೆ. ಟ್ರಂಪ್ ಅವರಿಗಿಂತ ಬೈಡನ್ 6 ಅಂಕ ಹಿಂದಿದ್ದಾರೆ ಎಂದು ಸಮೀಕ್ಷೆಗಳು ಹೇಳುತ್ತಿದೆ. ಈ ಹಂತದಲ್ಲಿ ಬೈಡನ್ ಹಿಂದೆ ಸರಿಯದಿದ್ದರೆ ಡೆಮಾಕ್ರೆಟಿಕ್ ಪಕ್ಷಕ್ಕೆ ಹಿನ್ನಡೆ ಆಗಲಿದೆ ಎಂಬ ವಿಶ್ಲೇಷಣೆಗಳು ಅಮೆರಿಕದ ರಾಜಕೀಯ ವಲಯದಲ್ಲಿ ಕೇಳಿ ಬರುತ್ತಿದೆ. ಆದಾಗ್ಯೂ ಡೆಮಾಕ್ರೆಟಿಕ್ ಪಕ್ಷದ ಹಿರಿಯ ನಾಯಕರು ತಮ್ಮ ಅಧ್ಯಕ್ಷೀಯ ಅಭ್ಯರ್ಥಿಯಾಗಿ ಜೋ ಬೈಡನ್ ಅವರೇ ಮುಂದುವರೆಯಲಿದ್ದಾರೆ ಎಂದು ಸ್ಪಷ್ಟನೆ ನೀಡಿದ್ದು, ವೈಟ್ ಹೌಸ್ (ಶ್ವೇತ ಭವನ) ಮಾಧ್ಯಮ ಕಾರ್ಯದರ್ಶಿ ಕರೈನ್ ಜೀನ್ ಅವರೂ ಕೂಡಾ ಬೈಡನ್ ಹಿಂದೆ ಸರಿಯೋದಿಲ್ಲ ಎಂದು ವದಂತಿಗಳಿಗೆ ಫುಲ್ ಸ್ಟಾಪ್ ಹಾಕಿದ್ದಾರೆ. ಅಮೆರಿಕದ ಹಾಲಿ ಅಧ್ಯಕ್ಷರಾಗಿರುವ ಜೋ ಬೈಡನ್ ಅವರು 2024ರ ನವೆಂಬರ್‌ನಲ್ಲಿ ನಡೆಯಲಿರುವ ಅಮೆರಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ಡೆಮಾಕ್ರೆಟಿಕ್ ಪಕ್ಷದ ಅಭ್ಯರ್ಥಿಯಾಗಿ ಮುಂದುವರೆಯಲಿದ್ದಾರೆ. ತಮ್ಮ ಚುನಾವಣಾ ಪ್ರಚಾರ ಕಾರ್ಯಗಳನ್ನು ಎಂದಿನಂತೆಯೇ ಮುಂದು ವರೆಸಲಿದ್ದಾರೆ. ಈ ಕುರಿತಾಗಿ ಬೇರೆ ಯಾವುದೇ ಮಾಹಿತಿ ನಿಮ್ಮ ಕಿವಿಗೆ ಬಿದ್ದಿದ್ದರೆ ಅದು ಸಂಪೂರ್ಣ ಸುಳ್ಳು ಎಂದು ಜೀನ್ ಹೇಳಿದ್ದಾರೆ.

ಈ ಸಂವಾದದ ಬಳಿಕ ಬೈಡನ್ ವಿರುದ್ಧ ಹರಿಹಾಯ್ದಿದ್ದ ಮಾಧ್ಯಮಗಳು, ಅಧ್ಯಕ್ಷೀಯ ಚುನಾವಣಾ ರೇಸ್‌ನಿಂದ ಹಿಂದೆ ಸರಿಯಿರಿ ಎಂದು ಬೈಡನ್‌ಗೆ ತಾಕೀತು ಮಾಡಿದ್ದವು. ನಿಮ್ಮ ಬದಲಿಗೆ ಬೇರೆ ಸಮರ್ಥರಿಗೆ ಅವಕಾಶ ನೀಡಿ, ಇಲ್ಲವಾದರೆ ರಿಪಬ್ಲಿಕನ್ ಪಕ್ಷದ ಅಭ್ಯರ್ಥಿ ಎದುರು ಸಮರ್ಥವಾಗಿ ಹೋರಾಡಲು ಸಾಧ್ಯ ಆಗೋದಿಲ್ಲ. ಪ್ರಜಾಪ್ರಭುತ್ವದ ಆಶಯ ಸಾಕಾರ ಆಗಬೇಕು ಎಂದು ಮಾಧ್ಯಮಗಳು ತಾಕೀತು ಮಾಡಿದ್ದವು.

### ದೈಹಿಕ ಮಾನಸಿಕ ಸ್ಥಿರತೆಯೇ ದೊಡ್ಡ ಪ್ರಶ್ನೆ!

**81 ವರ್ಷ ವಯಸ್ಸಾಗಿರುವ ಅಮೆರಿಕ ಅಧ್ಯಕ್ಷ ಜೋ ಬೈಡನ್ ಅವರ ದೈಹಿಕ ಹಾಗೂ ಮಾನಸಿಕ ಸ್ಥಿರತೆ ಹಾಗೂ ಕ್ಷಮತೆ ಕುರಿತಾಗಿ ಹಲವು ಪ್ರಶ್ನೆಗಳು ಎದ್ದಿವೆ. ಬಹುಬೇಗ ಸುಸ್ತಾಗುತ್ತಾರೆ, ಮರೆಯುತ್ತಾರೆ, ವಾಕ್ಯ ಪೂರ್ಣಗೊಳಿಸಲು ಹೆಣಗಾಡುತ್ತಾರೆ ಅನ್ನೋ ಅಪವಾದಗಳೂ ಇವೆ. ಇದಕ್ಕೆ ಪೂರಕವೆಂಬಂತೆ ಟ್ರಂಪ್ ಜೊತೆಗಿನ ಸಂವಾದದ ವೇಳೆ ತಮಗೆ ನಿದ್ರೆ ಬಂದಿತ್ತು ಎಂದು ಬೈಡನ್ ಅವರೇ ಹೇಳಿದ್ದರು. ಇನ್ನು ಸಂವಾದದಲ್ಲಿ ಟ್ರಂಪ್ ವಿರುದ್ಧ ಬೈಡನ್ ಎಷ್ಟೇ ಆರೋಪಗಳನ್ನ ಮಾಡಲಿ, ಸೂಕ್ತ ತಿರುಗೇಟು ನೀಡಿದ್ದ ಟ್ರಂಪ್, ಕಳೆದ 4 ವರ್ಷಗಳ ಬೈಡನ್ ಆಡಳಿತಾವಧಿಯ ಲೋಪಗಳನ್ನ ಒಂದೊಂದಾಗಿ ಬಿಚ್ಚಿಟ್ಟು, ಅವರ ವಿರುದ್ಧ ಮೇಲುಗೈ ಸಾಧಿಸಿದ್ದರು.**

**ಅಮೆರಿಕ ಅಧ್ಯಕ್ಷ ಜೋ ಬೈಡನ್ ಅವರಿಗೆ ವಯಸ್ಸಾಗಿದೆ, ಮರೆಯುತ್ತಾರೆ, ವಾಕ್ಯಗಳನ್ನೇ ಪೂರ್ಣಗೊಳಿಸೋದಿಲ್ಲ.. ಹೀಗೆ ಅವರ ದೈಹಿಕ ಹಾಗೂ ಮಾನಸಿಕ ಸ್ಥಿತಿಗತಿ ಕುರಿತಾಗಿ ಹಲವು ಪ್ರಶ್ನೆಗಳು, ಆರೋಪಗಳು ಇದ್ದರೂ ಕೂಡಾ ಅವರೇ ಅಧ್ಯಕ್ಷೀಯ ಚುನಾವಣಾ ಅಭ್ಯರ್ಥಿಯಾಗಿ ಮುಂದುವರೆಯುತ್ತಾರೆ ಎಂದು ಅಮೆರಿಕ ಅಧ್ಯಕ್ಷೀಯ ಕಚೇರಿ ಶ್ವೇತ ಭವನ ಸ್ಪಷ್ಟನೆ ನೀಡಿದೆ. ಅಮೆರಿಕದ ಮಾಧ್ಯಮಗಳೂ ಕೂಡಾ ಡೆಮಾಕ್ರೆಟಿಕ್ ಪಕ್ಷದ ಅಭ್ಯರ್ಥಿ ಬದಲಾವಣೆಗೆ ಸಲಹೆ ನೀಡಿರುವ ಮಧ್ಯದಲ್ಲೇ ಡೆಮಾಕ್ರೆಟಿಕ್ ಪಕ್ಷ ಈ ನಿರ್ಧಾರ ಕೈಗೊಂಡಿದೆ.**

# ಝಿಕಾ ವೈರಸ್: ಮುನ್ನೆಚ್ಚರಿಕೆ ವಹಿಸುವಂತೆ ಎಲ್ಲಾ ರಾಜ್ಯಗಳಿಗೆ ಸೂಚನೆ




**ನವದೆಹಲಿ:** ಮಹಾರಾಷ್ಟ್ರದಲ್ಲಿ ಝಿಕಾ ವೈರಸ್ ಪ್ರಕರಣಗಳು ಹೆಚ್ಚಾದ ಹಿನ್ನೆಲೆ ಕೇಂದ್ರ ಆರೋಗ್ಯ ಸಚಿವಾಲಯ ಎಲ್ಲಾ ರಾಜ್ಯಗಳಿಗೆ ಸೋಂಕಿನ ಕುರಿತು ಮುನ್ನೆಚ್ಚರಿಕೆ ಕ್ರಮ ವಹಿಸುವಂತೆ ಸೂಚಿಸಿ ಸಲಹೆಗಳನ್ನು ಬಿಡುಗಡೆ ಮಾಡಿದೆ. ದೇಶದಲ್ಲಿ ಝಿಕಾ ವೈರಸ್ ಪ್ರಕರಣಗಳು ಕಂಡು ಬಂದಿರುವ ಹಿನ್ನೆಲೆ ಎಲ್ಲಾ ರಾಜ್ಯಗಳು ನಿರಂತರವಾಗಿ ಈ ಕುರಿತು ನಿಗಾ ವಹಿಸುವಂತೆ ಆರೋಗ್ಯ ಸೇವೆಗಳ ಮಹಾನಿರ್ದೇಶಕ ಡಾ.ಅತುಲ್ ಗೋಯೆಲ್ ತಿಳಿಸಿದ್ದಾರೆ.

ಝಿಕಾ ಸೋಂಕು ಗರ್ಭಿಣಿ ಭ್ರೂಣದ ಮೈಕ್ರೊಸೆಲಿ (ತಲೆಗಾತ್ರ ಕಡಿಮೆ) ಮತ್ತು ನರವೈಜ್ಞಾನಿಕ ಸಮಸ್ಯೆಗೆ ಕಾರಣವಾಗುವ ಹಿನ್ನೆಲೆ ಅಗತ್ಯ ಮೇಲ್ವಿಚಾರಣೆಯೊಂದಿಗೆ ಮುನ್ನೆಚ್ಚರಿಕೆ ಕ್ರಮವನ್ನು ವಹಿಸುವಂತೆ ಸೂಚಿಸಲಾಗಿದೆ. ಝಿಕಾ ವೈರಸ್ ಸೋಂಕಿತ ಪ್ರದೇಶಗಳಲ್ಲಿ ಗರ್ಭಿಣಿಯರನ್ನು ಪರೀಕ್ಷೆಗೆ ಒಳಪಡಿಸುವುದು. ಇಂತಹ ಪ್ರದೇಶಗಳಲ್ಲಿ ಅಗತ್ಯ ವೈದ್ಯಕೀಯ ಸೌಲಭ್ಯವನ್ನು ನೀಡುವಂತೆ, ಗರ್ಭಿಣಿಯರಲ್ಲಿ ಝಿಕಾ ಸೋಂಕು ದೃಢಪಟ್ಟರೆ, ಕೇಂದ್ರ ಸರ್ಕಾರದ ಮಾರ್ಗಸೂಚನೆ ಅನುಸಾರ ಕ್ರಮ ನಡೆಸುವಂತೆ ಕೂಡ ರಾಜ್ಯಗಳಿಗೆ ಒತ್ತಾಯಿಸಲಾಗಿದೆ.

ಏಡಿಸ್ ಸೊಳ್ಳೆಗಳಿಂದ ಪ್ರದೇಶಗಳು ಮುಕ್ತವಾಗಿರುವಂತೆ ನೋಡಿಕೊಳ್ಳುವ ಜೊತೆಗೆ ಈ ಕುರಿತು ಮೇಲ್ವಿಚಾರಣೆಗೆ ನೋಡಲ್ ಅಧಿಕಾರಿಗಳನ್ನು ನೇಮಿಸಬೇಕು. ಅಗತ್ಯ ಆರೋಗ್ಯ ಸೌಲಭ್ಯ ಮತ್ತು ಆಸ್ಪತ್ರೆಗಳ ಕುರಿತು ಅವರು ಸಲಹೆ ನೀಡಬೇಕು. ಜನನಿಬಿಡ ಪ್ರದೇಶ, ಮನೆ ಸುತ್ತಮುತ್ತ, ಕಾರ್ಯಸ್ಥಳ, ಶಾಲೆ, ಕಟ್ಟಡ ನಿರ್ಮಾಣ ಸ್ಥಳಗಳು, ಸಂಸ್ಥೆ ಸುತ್ತಮುತ್ತ ಝಿಕಾ ಸೋಂಕಿನ ಕುರಿತು ಹೆಚ್ಚಿನ ಕಣ್ಗಾವಲು ವಹಿಸಿ, ಅಗತ್ಯ ಕ್ರಮಕ್ಕೆ ಮುಂದಾಗಬೇಕು.

ಜೊತೆಗೆ ರಾಜ್ಯಗಳು ಸಾಮಾಜಿಕ ಜಾಲತಾಣ ಮತ್ತಿತರ ವೇದಿಕೆ ಬಳಕೆ ಮಾಡಿಕೊಂಡು ಝಿಕಾ ವೈರಸ್ ಸೋಂಕಿನ ಕುರಿತು ಮುನ್ನೆಚ್ಚರಿಕೆ ಕ್ರಮದ ಅರಿವು ಮೂಡಿಸಬೇಕು. ಈ ಮೂಲಕ ಸೋಂಕಿನ ಕುರಿತು ಸಮುದಾಯದಲ್ಲಿ ಮೂಡಿರುವ ಆತಂಕ ತಗ್ಗಿಸುವ, ಅರಿವು ಮೂಡಿಸಬೇಕು. ಝಿಕಾ ಕೂಡ ಇತರೆ ಸೋಂಕಿನಂತೆ ಯಾವುದೇ ಲಕ್ಷಣ ಅಥವಾ ಸೌಮ್ಯ ಲಕ್ಷಣ ಹೊಂದಿದ್ದು, ಈ ಕುರಿತು ಜನರಿಗೆ ತಿಳಿಸಬೇಕು. ಮಹಾರಾಷ್ಟ್ರದಲ್ಲಿ ಪತ್ತೆಯಾಗಿರುವ ಝಿಕಾ ವೈರಸ್ ಸೋಂಕು ಮಗುವಿನ ಮೈಕ್ರೊಸೆಲಿಗೆ ಸಂಬಂಧಿಸಿದೆ. 2016ರಿಂದ ಮೈಕ್ರೋಸೆಲಿ ಸಂಬಂಧಿತ ಝಿಕಾ ಸೋಂಕು ದೇಶದಲ್ಲಿ ಕಂಡು ಬಂದಿರಲಿಲ್ಲ.

ಡೆಂಗ್ಯೂ, ಚಿಕನ್‌ಗುನ್ಯಾನಂತೆ ಏಡಿಸ್ ಸೊಳ್ಳೆಯಿಂದ ಹರಡುವ ಸೋಂಕು ಇದಾಗಿದೆ. ಇದು ಮಾರಣಾಂತಿಕ ಸೋಂಕು ಅಲ್ಲ. ಆದರೆ, ಝಿಕಾ ಮೈಕ್ರೊಸೆಲಿಯೊಂದಿಗೆ ಸಂಬಂಧ ಹೊಂದಿದ್ದಲ್ಲಿ, ಇದು ಗರ್ಭಿಣಿಯರ ಭ್ರೂಣದ ಮೇಲೆ ಹೆಚ್ಚಿನ ಪರಿಣಾಮ ಬೀರಲಿದೆ.


2016ರಲ್ಲಿ ಗುಜರಾತ್‌ನಲ್ಲಿ ಮೊದಲ ಬಾರಿಗೆ ಝಿಕಾ ಸೋಂಕು ಪತ್ತೆಯಾಗಿತ್ತು. ತಮಿಳುನಾಡು, ಮಧ್ಯಪ್ರದೇಶ, ರಾಜಸ್ಥಾನ್, ಕೇರಳ, ಮಹಾರಾಷ್ಟ್ರ, ಉತ್ತರ ಪ್ರದೇಶ, ದೆಹಲಿ ಮತ್ತು ಕರ್ನಾಟಕದಲ್ಲೂ ಇದರ ವರದಿಯಾಗಿದೆ. ಈ ವರ್ಷ ಜುಲೈ 2ರವರೆಗೆ ಮಹಾರಾಷ್ಟ್ರದಲ್ಲಿ ಒಟ್ಟು 8 ಪ್ರಕರಣ ವರದಿಯಾಗಿದೆ.

### ಸೂಕ್ತ ಸಮಯದಲ್ಲಿ ಪತ್ತೆ ಮತ್ತು ನಿಯಂತ್ರಣ

**ಸೂಕ್ತ ಸಮಯದಲ್ಲಿ ಪತ್ತೆ ಮತ್ತು ನಿಯಂತ್ರಣದ ಮೂಲಕ ಸೋಂಕು ಹರಡುವುದನ್ನು ತಪ್ಪಿಸಬಹುದಾಗಿದೆ. ಈ ನಿಟ್ಟಿನಲ್ಲಿ ರಾಜ್ಯಗಳಿಗೆ ಕಣ್ಗಾವಲು ವಹಿಸುವಂತೆ ಸಲಹೆ ನೀಡಲಾಗಿದ್ದು, ಎಲ್ಲಾ ಮಟ್ಟದಲ್ಲಿ ಸಿದ್ಧತೆ ಲಭ್ಯವಾಗಿರುವಂತೆ ಕ್ರಮ ಕೈಗೊಳ್ಳಬೇಕು. ರಾಜ್ಯಗಳು ಐಡಿಎಸ್‌ಪಿ, ಎನ್‌ಸಿವಿಬಿಡಿಸಿ ಕಾರ್ಯಕ್ರಮಗಳ ಮೂಲಕ ಪ್ರಕರಣದ ತಕ್ಷಣ ಪತ್ತೆಗೆ ಮುಂದಾಗಬೇಕು. ರಾಷ್ಟ್ರೀಯ ವೈರಾಲಾಜಿ ಸಂಸ್ಥೆ (ಎನ್‌ಐವಿ), ಪುಣೆಯ ರಾಷ್ಟ್ರೀಯ ರೋಗ ನಿಯಂತ್ರಣ ಕೇಂದ್ರ (ಎನ್‌ಸಿಡಿಸಿ), ದೆಹಲಿಯ ಐಸಿಎಂಆರ್‌ನಿಂದ ಕೆಲವು ಆಯ್ದ ಸಂಶೋಧನಾ, ಪತ್ತೆ ಕೇಂದ್ರದಲ್ಲಿ ಝಿಕಾ ಸೋಂಕಿನ ಪರೀಕ್ಷೆ ನಡೆಸಬಹುದಾಗಿದೆ.**

# ಬೈಡನ್‌ಗಿಂತ ಶೇ. 6ರಷ್ಟು ಮುನ್ನಡೆ ಗಳಿಸಿದ ಟ್ರಂಪ್

**ವಾಷಿಂಗ್ಟನ್:** ಅಮೆರಿಕದ ಅಧ್ಯಕ್ಷ, ಡೆಮಾಕ್ರಟಿಕ್ ಪಕ್ಷದ ಜೋ ಬೈಡನ್ ಅವರಿಗಿಂತಲೂ ರಿಪಬ್ಲಿಕನ್ ಪಕ್ಷದ ಪ್ರತಿಸ್ಪರ್ಧಿ ಡೊನಾಲ್ಡ್ ಟ್ರಂಪ್ ಅವರು ಶೇಕಡ 6ರಷ್ಟು ಮುನ್ನಡೆ ಗಳಿಸಿದ್ದಾರೆ ಎಂದು 'ದಿ ವಾಲ್ ಸ್ಟ್ರೀಟ್ ಜರ್ನಲ್' ಸಮೀಕ್ಷೆ ತಿಳಿಸಿದೆ. ಬೈಡನ್, ಟ್ರಂಪ್ ನಡುವಣ ಮುಖಾಮುಖಿ ಚರ್ಚೆಯ ಬಳಿಕ ನಡೆದ ಹೊಸ ಸಮೀಕ್ಷಾ ವರದಿ ಹೊರಬಿದ್ದಿದೆ. ಟ್ರಂಪ್ ಅವರು ಶೇಕಡ 48ರಷ್ಟು ಮತದಾರರ ಬೆಂಬಲವನ್ನು ಹೊಂದಿದ್ದು, ಬೈಡನ್ ಅವರಿಗೆ ಶೇ 42ರಷ್ಟು ಬೆಂಬಲವಿದೆ. ಕಳೆದ ಫೆಬ್ರುವರಿಯಲ್ಲಿ ಇಬ್ಬರ ನಡುವಣ ಅಂತರ ಕೇವಲ ಶೇ 2ರಷ್ಟಾಗಿತ್ತು. ಆ ಮೂಲಕ ಅಮೆರಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ಬೈಡನ್‌ಗಿಂತಲೂ ಟ್ರಂಪ್ ಮತ್ತಷ್ಟು ಮುನ್ನಡೆ ಸಾಧಿಸಿದ್ದಾರೆ ಎಂದು ವರದಿ ಹೇಳಿದೆ. 'ದಿ ವಾಲ್ ಸ್ಟ್ರೀಟ್ ಜರ್ನಲ್ ಇತ್ತೀಚೆಗಿನ ಸಮೀಕ್ಷೆಯ ಪ್ರಕಾರ, ಎರಡನೇ ಅವಧಿಗೆ ಸರ್ಕಾರ ನಡೆಸಲು ಬೈಡನ್ ಅವರಿಗೆ ತುಂಬಾ ವಯಸ್ಸಾಗಿದೆ ಎಂದು ಶೇ 80ರಷ್ಟು ಮಂದಿ ಅಭಿಪ್ರಾಯಪಡುತ್ತಾರೆ ಎಂದು ಹೇಳಿದೆ.



ಸಮೀಕ್ಷೆಯ ಪ್ರಕಾರ ಅಮೆರಿಕದ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಸಹ ಅಷ್ಟೊಂದು ಜನಪ್ರಿಯವಾಗಿಲ್ಲ ಎಂದು ಹೇಳಿದೆ. ಇವೆಲ್ಲವೂ ಅಧಿಕಾರ ಮರಳಿ ಪಡೆಯುವ ಇರಾದೆ ಹೊಂದಿರುವ ಡೆಮಾಕ್ರಟಿಕ್ ಪಕ್ಷಕ್ಕೆ ಎಚ್ಚರಿಕೆಯ ಕರೆಗಂಟೆಯಾಗಿದೆ ಎಂದು ತಿಳಿಸಿದೆ.

# ಹಾಥರಸ್ ಘಟನಾ ಸ್ಥಳಕ್ಕೆ ಭೇಟಿ ನೀಡಲಿರುವ ರಾಹುಲ್; ಸಂತ್ರಸ್ತರೊಂದಿಗೆ ಸಂವಾದ



**ಹಾಥರಸ್:** ಸತ್ಸಂಗದ ವೇಳೆ ಕಾಲ್ತುಳಿತ ಸಂಭವಿಸಿ 121 ಜನರು ಮೃಪಟ್ಟ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಜಿಲ್ಲೆಯ ಫೂಲರಾಯ್ ಗ್ರಾಮಕ್ಕೆ ಭೇಟಿ ನೀಡಲಿದ್ದಾರೆ. ಈ ದುರಂತ ಅತ್ಯಂತ ದುರದೃಷ್ಟಕರ ಎಂದ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್ ಅವರು ರಾಹುಲ್ ಗಾಂಧಿ ಫೂಲರಾಯ್ ಗ್ರಾಮಕ್ಕೆ ಭೇಟಿ ನೀಡಿ ಈ ಸಮಯದಲ್ಲಿ ಸಂತ್ರಸ್ತ ಜನರೊಂದಿಗೆ ಸಂವಾದ ನಡೆಸಲಿದ್ದಾರೆ ಎಂದು ಹೇಳಿದರು.

ಭೇಟಿಯ ಸಮಯ ಇನ್ನೂ ನಿಗದಿಯಾಗಿಲ್ಲ ಎಂದು ವರದಿಯಾಗಿದೆ. ಈಗಾಗಲೇ ಈ ಘಟನೆ ಕುರಿತಂತೆ ಉತ್ತರ ಪ್ರದೇಶ ಮುಖ್ಯಮಂತ್ರಿ, ಯೋಗಿ ಆದಿತ್ಯನಾಥ ಅವರು ಪ್ರಕರಣವನ್ನು ನ್ಯಾಯಾಂಗ ತನಿಖೆಗೆ ಆದೇಶಿಸಿದ್ದಾರೆ. ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆಯ ನಿವೃತ್ತ ಅಧಿಕಾರಿಗಳು ಸಹ ನ್ಯಾಯಾಂಗ ತನಿಖೆ ನಡೆಸುವ ಸಮಿತಿಯಲ್ಲಿ ಇರುವವರು. ಈ ದುರ್ಘಟನೆಗೆ ಕಾರಣವೇನು? ಯಾರು ಕಾರಣ ಎಂಬುದರ ಬಗ್ಗೆ ಸಮಿತಿ ಸಮಗ್ರವಾಗಿ ತನಿಖೆ ನಡೆಸಲಿದೆ ಎಂದು ಯೋಗಿ ಆದಿತ್ಯನಾಥ ಹೇಳಿದ್ದಾರೆ.

ಮೃತರ ಪೈಕಿ 6 ಮಂದಿ ಹೊರ ರಾಜ್ಯದವರು. ನಾಲ್ವರು ಹರಿಯಾಣ, ತಲಾ ಒಬ್ಬರು ಮಧ್ಯಪ್ರದೇಶ ಮತ್ತು ರಾಜಸ್ಥಾನದವರು ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಈಗಾಗಲೇ ಸತ್ಸಂಗ ಕಾರ್ಯಕ್ರಮವನ್ನು ಸಂಘಟಿಸಿದ್ದ ಸಂಘಟಕರ ವಿರುದ್ಧ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ. ಕಾರ್ಯಕ್ರಮಕ್ಕೆ 80 ಸಾವಿರ ಜನರಿಗೆ ಮಾತ್ರ ಅನುಮತಿ ನೀಡಲಾಗಿತ್ತು. ಆದರೆ ಸತ್ಸಂಗದಲ್ಲಿ 2.5 ಲಕ್ಷ ಜನರು ಬಂದಿದ್ದರು. ನಿರ್ಗಮನದ ದಾರಿ ಒಂದೇ ಇದುದ್ದರಿಂದ ಈ ಅವಘಡ ಸಂಭವಿಸಿದೆ ಎಂದು ಪ್ರಾಥಮಿಕ ತನಿಖೆಗಳು ವರದಿ ಮಾಡಿವೆ.

# ಅಜ್ಞಾತ ಸ್ಥಳದಿಂದ ಹತ್ರಾಸ್ ದುರಂತದ ಬಗ್ಗೆ ಸ್ಫೋಟಕ ಆರೋಪ

**ಲಖ್ನೋ:** ಉತ್ತರಪ್ರದೇಶದ ಹತ್ರಾಸ್ ಜಿಲ್ಲೆ ಮೊಘಲ್ ಘರಾಹಿ ಗ್ರಾಮದಲ್ಲಿ ನಡೆದ ಕಾಲ್ತುಳಿತಕ್ಕೆ ಕೆಲವು ಸಮಾಜಘಾತುಕ ಶಕ್ತಿಗಳು ಕಾರಣ ಎಂದು ನಾಪತ್ತೆಯಾಗಿರುವ ಸ್ವಯಂ ಸ್ವಯಂಘೋಷಿತ ದೇವಮಾನವ ನಾರಾಯಣ ಸಾಕಾರ್ ಹರಿ ಆಲಿ ಯಾಸ್ ಭೋಲೇ ಬಾಬಾ ಆರೋಪಿಸಿದ್ದಾರೆ.



ಬಂಧನದ ಭೀತಿಯಿಂದ ತಲೆಮರೆಸಿಕೊಂಡು ಸದ್ಯ ಅಜ್ಞಾತ ಸ್ಥಳದಲ್ಲಿರುವ ಭೋಲೇ ಬಾಬ ಹೇಳಿಕೆಯೊಂದನ್ನು ಬಿಡುಗಡೆ ಮಾಡಿದ್ದು, ಘಟನೆ ಬಗ್ಗೆ ತೀವ್ರ ಆಘಾತ ವ್ಯಕ್ತಪಡಿಸಿದ್ದಾರೆ. ಅಲ್ಲದೆ ತಾನು ಸ್ಥಳದಿಂದ ನಿರ್ಗಮಿಸಿದ ಬಹಳ ಸಮಯದ ನಂತರ ಈ ಘಟನೆ ನಡೆದಿದೆ ಎಂದು ಹೇಳಿದ್ದಾರೆ.

ನಾನು ಕುಟುಂಬಗಳಿಗೆ ಸಂತಾಪ ಸೂಚಿಸುತ್ತಿದ್ದೇನೆ. ಮೃತರ ಕುಟುಂಬಕ್ಕೆ ನೋವು ಮರೆಸುವ ಶಕ್ತಿ ಲಭಿಸಲಿ, ಗಾಯಗೊಂಡವರು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಪರಮಾತನಲ್ಲಿ ಪ್ರಾರ್ಥಿಸುತ್ತೇನೆ ಎಂದಿದ್ದಾರೆ.

ಕೆಲವು ಸಮಾಜ ವಿರೋಧಿ ಶಕ್ತಿಗಳು ಸೃಷ್ಟಿಸಿದ ಕಾಲ್ತುಳಿತಕ್ಕೆ ಸಂಬಂಧಿಸಿದಂತೆ ಮುಂದಿನ ಕಾನೂನು ಕ್ರಮ ತೆಗೆದುಕೊಳ್ಳುವಂತೆ ಸುಪ್ರೀಂ ಕೋರ್ಟ್ ವಕೀಲ ಎ.ಪಿ.ಸಿಂಗ್ ಅವರಲ್ಲಿ ವಿನಂತಿಸಿದ್ದೇನೆ ಎಂದು ಅವರು ತಿಳಿಸಿದ್ದಾರೆ. ಕಾಲ್ತುಳಿತದಿಂದ ಮೃತಪಟ್ಟವರಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಕ್ಕಳು, ಮಹಿಳೆಯರು ಸೇರಿದ್ದಾರೆ. ಘಟನೆ ಬಗ್ಗೆ ಈಗಾಗಲೇ ತನಿಖೆ ಆರಂಭವಾಗಿದೆ. ಬುಧವಾರ ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಸ್ಥಳಕ್ಕೆ ಭೇಟಿ ನೀಡಿ ಪರಿಸ್ಥಿತಿಯನ್ನು ಅವಲೋಕಿಸಿದ್ದಾರೆ ಮತ್ತು ಗಾಯಾಳುಗಳನ್ನು ಸಂತೈಸಿದ್ದಾರೆ. ಸಂತ್ರಸ್ತರಿಗೆ ಸೂಕ್ತ ವ್ಯವಸ್ಥೆ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಮೃತರ ಮತ್ತು ಗಾಯಗೊಂಡವರ ಕುಟುಂಬಕ್ಕೆ ಕ್ರಮವಾಗಿ 2 ಲಕ್ಷ ರೂ. ಮತ್ತು 50 ಸಾವಿರ ರೂ. ಪರಿಹಾರ ಧನ ಘೋಷಿಸಲಾಗಿದೆ.

### ಪ್ರಾಥಮಿಕ ವರದಿಯಲ್ಲಿ ಏನಿದೆ?

**80 ಸಾವಿರ ಜನರಿಗಾಗಿ ಅನುಮತಿ ಪಡೆದ ಸತ್ಸಂಗ ಕಾರ್ಯಕ್ರಮದಲ್ಲಿ ಸುಮಾರು 2 ಲಕ್ಷಕ್ಕೂ ಅಧಿಕ ಭಕ್ತರು ಪಾಲ್ಗೊಂಡಿದ್ದರು. ಭೋಲೆ ಬಾಬಾ ಮಧ್ಯಾಹ್ನ 12.30ರ ಸುಮಾರಿಗೆ ಸತ್ಸಂಗ ಪೆಂಡಾಲ್‌ಗೆ ಆಗಮಿಸಿದ್ದರು. ಕಾರ್ಯಕ್ರಮವು 1 ಗಂಟೆ ನಡೆಯಿತು. ನಂತರ ಮಧ್ಯಾಹ್ನ 1.40ರ ಸುಮಾರಿಗೆ ಭೋಲೆ ಬಾಬಾ ಪೆಂಡಾಲ್‌ನಿಂದ ಹೊರಬಂದರು ಎಂದು ವರದಿ ತಿಳಿಸಿದೆ. ಭೋಲೆ ಬಾಬಾ ಹೊರಡುವ ವೇಳೆ ವೇಳೆ ಲಕ್ಷಾಂತರ ಮಂದಿ ಅವರ ಪಾದ ಮುಟ್ಟಿ, ಅವರು ಮೆಟ್ಟಿದ್ದ ನೆಲದ ಮಣ್ಣನ್ನು ತೆಗೆದುಕೊಳ್ಳಲು ಓಡಿ ಹೋಗಿದ್ದಾರೆ. ಹಾಗೆ ಓಡಿ ಹೋಗುವ ಭರದಲ್ಲಿ ಕಾಲ್ತುಳಿತ ಉಂಟಾಗಿದೆ. ಒಬ್ಬರನ್ನೊಬ್ಬರು ತುಳಿದುಕೊಂಡು ಮುಂದೆ ಸಾಗಿದ್ದು, ಚರಂಡಿಯಲ್ಲಿ ಬಿದ್ದಿದ್ದು ಸಾವಿನ ಸಂಖ್ಯೆ ಜಾಸ್ತಿಯಾಗಲು ಕಾರಣ ಎಂದು ತನಿಖೆಯ ಪ್ರಾಥಮಿಕ ವರದಿಯಲ್ಲಿ ತಿಳಿಸಲಾಗಿದೆ.**

# ಅಸ್ಸಾಂ: ತೀವ್ರ ಪ್ರವಾಹ; 16.50 ಲಕ್ಷ ಜನ ಸಂಕಷ್ಟದಲ್ಲಿ



**ಗುವಾಹಟಿ:** ಅಸ್ಸಾಂನಲ್ಲಿ ಸುರಿದ ಭಾರಿ ಮಳೆಯಿಂದಾಗಿ ಪ್ರವಾಹದ ಪರಿಸ್ಥಿತಿ ಮತ್ತಷ್ಟು ತೀವ್ರಗೊಂಡಿದೆ. 29 ಜಿಲ್ಲೆಗಳಲ್ಲಿ 16.50 ಲಕ್ಷಕ್ಕೂ ಅಧಿಕ ಮಂದಿ ತೊಂದರೆಗೀಡಾಗಿದ್ದಾರೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ರಾಜ್ಯದ ಪ್ರಮುಖ ನದಿಗಳಾದ ಬ್ರಹ್ಮಪುತ್ರ, ದಿಗಾರೂ ಮತ್ತು ಕೊಲೊಂಗ್ ಅಪಾಯದ ಮಟ್ಟ ಮೀರಿ ಹರಿಯುತ್ತಿದ್ದು, ಹಲವು ಪ್ರದೇಶಗಳು ಜಲಾವೃತಗೊಂಡಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮುಖ್ಯಮಂತ್ರಿ ಹಿಮಂತ ಬಿಸ್ವ ಶರ್ಮಾ, ಗುರುವಾರ ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಲಿದ್ದು, ಪರಿಸ್ಥಿತಿಯನ್ನು ಅವಲೋಕಿಸಲಿದ್ದಾರೆ. ಬುಧವಾರ ರಾತ್ರಿ ಎಲ್ಲಾ ಜಿಲ್ಲಾಧಿಕಾರಿಗಳೊಂದಿಗೆ ಮಾತುಕತೆ ನಡೆಸಿದ್ದ ಸಿಎಂ, ಸಂತ್ರಸ್ತರಿಗೆ ಪರಿಹಾರ, ಪುನರ್ವಸತಿ ಸೇರಿದಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದ್ದರು. ಪ್ರವಾಹಪೀಡಿತ ಜಿಲ್ಲೆಗಳಲ್ಲಿ ಸಂಪುಟ ಸಚಿವರು ಮೊಕ್ಕಾಂ ಹೂಡಲಿದ್ದಾರೆ. ಪ್ರವಾಹ, ಭೂಕುಸಿತ, ಮಳೆ ಸಂಬಂಧಿತ ಅವಘಡಗಳಲ್ಲಿ ರಾಜ್ಯದಲ್ಲಿ ಈವರೆಗೆ 56 ಮಂದಿ ಮೃತಪಟ್ಟಿದ್ದು, ಮೂವರು ನಾಪತ್ತೆಯಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಧುಬ್ರಿ ಜಿಲ್ಲೆಯಲ್ಲಿ ಅತಿ ಹೆಚ್ಚು 2.23 ಲಕ್ಷಕ್ಕೂ ಅಧಿಕ, ದರಾಂಗ್‌ನಲ್ಲಿ 1.84 ಲಕ್ಷಕ್ಕೂ ಅಧಿಕ ಮತ್ತು ಲಕ್ಷ್ಮೀಪುರ ಜಿಲ್ಲೆಯಲ್ಲಿ 1.66 ಲಕ್ಷಕ್ಕೂ ಅಧಿಕ ಮಂದಿ ಸಂಕಷ್ಟಕ್ಕೆ ಸಿಲುಕಿದ್ದಾರೆ.

# ಸಚಿವ ಸ್ಥಾನಕ್ಕೆ ಕಿರೋಡಿ ಲಾಲ್ ಮೀನಾ ರಾಜೀನಾಮೆ?

**ಜೈಪುರ:** ರಾಜಸ್ಥಾನದ ಬಿಜೆಪಿಯ ನಾಯಕ ಕಿರೋಡಿ ಲಾಲ್ ಮೀನಾ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ ಎಂದು ಆಪ್ತ ಮೂಲಗಳು ತಿಳಿಸಿವೆ. ಇತ್ತೀಚೆಗೆ ನಡೆದ ಲೋಕಸಭೆ ಚುನಾವಣೆಯ ಸಂದರ್ಭದಲ್ಲಿ ತಮ್ಮ ಮುಂದಾಳತ್ವದ ಏಳು ಸ್ಥಾನಗಳ ಪೈಕಿ ಬಿಜೆಪಿ ಯಾವುದೇ ಸ್ಥಾನದಲ್ಲಿ ಸೋಲು ಕಂಡರೆ ಸಚಿವ ಸ್ಥಾನವನ್ನು ತೊರೆಯುವುದಾಗಿ 72 ವರ್ಷದ ಕಿರೋಡಿ ಲಾಲ್ ಮೀನಾ ಹೇಳಿದ್ದರು. ತವರು ದೌಸಾ ಸೇರಿದಂತೆ ಬಿಜೆಪಿ ಪಕ್ಷವು ಕೆಲವು ಸ್ಥಾನಗಳನ್ನು ಕಳೆದುಕೊಂಡಿರುವ ಹಿನ್ನೆಲೆಯಲ್ಲಿ ಅವರು ರಾಜೀನಾಮೆ ನೀಡಿದ್ದಾರೆ ಎನ್ನಲಾಗಿದೆ.

# 6 ಮಂದಿ ಸ್ವಯಂ ಸೇವಕರ ಬಂಧನ

**ಹಾಥರಸ್:** ಹಾಥರಸ್ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಆರು ಜನರನ್ನು ಬಂಧಿಸಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ಗುರುವಾರ ತಿಳಿಸಿದ್ದಾರೆ. ಈ 6 ಮಂದಿ ಭೋಲೆ ಬಾಬಾ ಅವರ ಸತ್ಸಂಗದಲ್ಲಿ ಸ್ವಯಂ ಸೇವಕರಾಗಿ ಕೆಲಸ ಮಾಡಿದ್ದರು ಎಂದು ಐಜಿ (ಅಲಿಗಢ ವಲಯ) ಶಲಭ್ ಮಾಥುರ್ ಮಾಹಿತಿ ನೀಡಿದ್ದಾರೆ. ಮುಖ್ಯ ಸ್ವಯಂ ಸೇವಕ ದೇವಪ್ರಕಾಶ್ ಮಧುಕರ್ ವಿರುದ್ಧ ಜಾಮೀನು ರಹಿತ ವಾರಂಟ್ ಜಾರಿ ಮಾಡಲಾಗುವುದು.

ಅಲ್ಲದೇ ಆತನ ಪತ್ತೆಗೆ 1 ಲಕ್ಷ ನಗದು ಬಹುಮಾನ ನೀಡಲಾಗುವುದು ಎಂದು ಅವರು ತಿಳಿಸಿದ್ದಾರೆ. ಉತ್ತರ ಪ್ರದೇಶದ ಹಾಥರಸ್ ಜಿಲ್ಲೆಯ ಫೂಲರಾಯ್ ಗ್ರಾಮದಲ್ಲಿ ಮಂಗಳವಾರ ಆಯೋಜಿಸಿದ್ದ ಸತ್ಸಂಗದ ವೇಳೆ ಕಾಲ್ತುಳಿತ ಸಂಭವಿಸಿತ್ತು. ಘಟನೆಯಲ್ಲಿ 121 ಜನರು ಮೃತಪಟ್ಟಿದ್ದರು. ಇವರಲ್ಲಿ ಮಹಿಳೆಯರೇ ಹೆಚ್ಚು ಎಂದು ವರದಿಯಾಗಿದೆ.

# ಬ್ರಿಟನ್‌ನಲ್ಲಿ ಸಾರ್ವತ್ರಿಕ ಚುನಾವಣೆ ಮತದಾನ ಆರಂಭ

## 14 ವರ್ಷಗಳ ಕನ್ಸರ್ವೇಟಿವ್ ಪಕ್ಷದ ಆಡಳಿತಕ್ಕೆ ಅಂತ್ಯ ಬೀಳಲಿದೆ ಎಂದಿರುವ ಚುನಾವಣಾ ಪೂರ್ವ ಸಮೀಕ್ಷೆಗಳು



**ರಿಷಿ ಸುನಕ್‌ಗೆ ಲೇಬರ್ ಪಕ್ಷದ ಸವಾಲು**

**ಲಂಡನ್:** ಯುನೈಟೆಡ್ ಕಿಂಗ್‌ಡಮ್ ಗುರುವಾರ ಐತಿಹಾಸಿಕ ಚುನಾವಣೆ ಎದುರಿಸುತ್ತಿದೆ. ಲಕ್ಷಾಂತರ ಮಂದಿ ಮತದಾರರು ಹೊಸ ಸರ್ಕಾರದ ಆಯ್ಕೆಗೆ ತಮ್ಮ ಹಕ್ಕು ಚಲಾಯಿಸುತ್ತಿದ್ದಾರೆ. ಭಾರತದ ಅಳಿಯ, ಹಾಲಿ ಪ್ರಧಾನಿ ರಿಷಿ ಸುನಕ್ ಅವರ ಕನ್ಸರ್ವೇಟಿವ್ ಪಾರ್ಟಿ ಮರು ಆಯ್ಕೆ ಬಯಸಿದೆ. ಆದರೆ ಕಳೆದ ಒಂದೂವರೆ ದಶಕಗಳ ಕನ್ಸರ್ವೇಟಿವ್ ಆಡಳಿತಕ್ಕೆ ಮತದಾರ ಅಂತ್ಯ ಹಾಡಲು ಬಯಸಿದ್ದು, ವಿರೋಧ ಪಕ್ಷದ ಸ್ಥಾನದಲ್ಲಿರುವ ಲೇಬರ್ ಪಾರ್ಟಿ ಅಧಿಕಾರಕ್ಕೆ ಬರಲಿದೆ ಎಂದು ಚುನಾವಣಾ ಪೂರ್ವ ಸಮೀಕ್ಷೆಗಳು ಅಂದಾಜಿಸಿವೆ.

ಕೀರ್ ಸ್ಟಾರ್ಮರ್ ನೇತೃತ್ವದ ಲೇಬರ್ ಪಕ್ಷವು ನಿಚ್ಚಳ ಬಹುಮತ ಪಡೆಯಲಿರುವ ಎಂದು ಸಮೀಕ್ಷೆಗಳು ಹೇಳಿವೆ. ಭಾರತ ಮೂಲದ ಮೊದಲ ಬ್ರಿಟಿಷ್ ಪ್ರಧಾನಿ ಎನಿಸಿರುವ ರಿಷಿ ಸುನಕ್, ಲೇಬರ್ ಪಕ್ಷ ಅಧಿಕಾರಕ್ಕೆ ಬಂದರೆ ವಿಪರೀತ ತೆರಿಗೆ ಹೊರೆಯ ಸಂಕಷ್ಟ ಎದುರಿಸಬೇಕಾಗಲಿದೆ. ಹೀಗಾಗಿ ಲೇಬರ್ ಪಾರ್ಟಿಗೆ ಬಹುಮತ ನೀಡದಂತೆ ಚುನಾವಣೆಗೂ ಮುನ್ನ ಮತದಾರರಿಗೆ ಕೊನೆಯ ಮನವಿ ಮಾಡಿದ್ದಾರೆ. ಕನ್ಸರ್ವೇಟಿವ್ ಪಕ್ಷದ ಎಚ್ಚರಿಕೆ ವಿರುದ್ಧ ಹರಿಹಾಯ್ದಿರುವ ಸ್ಟಾರ್ಮರ್, ಪ್ರಧಾನಿ ಸುನಕ್ ಅವರು ಜನರನ್ನು ಮತದಾನದಿಂದ ಹಿಂಜರಿಯುವಂತೆ ಮಾಡುವ ಮೂಲಕ ಮತದಾರರನ್ನು ಹತ್ತಿಕ್ಕಲು ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದ್ದಾರೆ. 'ನಿಮಗೆ ಬದಲಾವಣೆ ಬೇಕಿದ್ದರೆ ಅದಕ್ಕೆ ನೀವು ಮತ ಚಲಾಯಿಸಬೇಕು' ಎಂದು ಲೇಬರ್ ಪಾರ್ಟಿ ನಾಯಕ ಹೇಳಿದ್ದಾರೆ.

2019ರಲ್ಲಿ ನಡೆದ ಸಾರ್ವತ್ರಿಕ ಚುನಾವಣೆಯಲ್ಲಿ ಬೋರಿಸ್ ಜಾನ್ಸನ್ ನೇತೃತ್ವದಲ್ಲಿ ಕನ್ಸರ್ವೇಟಿವ್ ಪಕ್ಷವು ಭರ್ಜರಿ ಬಹುಮತದ ಗೆಲುವು ಸಾಧಿಸಿತ್ತು. ಆದರೆ ಅವಧಿ ಮುಗಿಯುವ ಆರು ತಿಂಗಳ ಮುನ್ನವೇ ರಿಷಿ ಸುನಕ್ ಅವರು ಸಾರ್ವತ್ರಿಕ ಚುನಾವಣೆ ಘೋಷಿಸಿದ್ದರು.

- **ಯುನೈಟೆಡ್ ಕಿಂಗ್‌ಡಮ್‌ನಲ್ಲಿ ಸಾರ್ವತ್ರಿಕ ಚುನಾವಣೆಗೆ ಗುರುವಾರ ನಡೆಯುತ್ತಿರುವ ಮತದಾನ**
- **ಕೀರ್ ಸ್ಟಾರ್ಮರ್ ನೇತೃತ್ವದ ಲೇಬರ್ ಪಕ್ಷವು 430ಕ್ಕಿಂತ ಅಧಿಕ ಸ್ಥಾನಗಳನ್ನು ಪಡೆಯುವ ಅಂದಾಜು**

ನಡು– ಎಡಪಂಥೀಯ ನಿಲುವಿನ ಲೇಬರ್ ಪಕ್ಷವು 2005ರ ಬಳಿಕ ತನ್ನ ಮೊದಲ ಗೆಲುವಿನ ನಿರೀಕ್ಷೆಯಲ್ಲಿದೆ. ಬೆಳಿಗ್ಗೆ 7 ಗಂಟೆಗೆ ದೇಶಾದ್ಯಂತ ಇರುವ 40 ಸಾವಿರಕ್ಕೂ ಅಧಿಕ ಮತಗಟ್ಟೆಗಳಲ್ಲಿ ಮತದಾನ ಆರಂಭವಾಗಿದೆ. ರಾತ್ರಿ 10 ಗಂಟೆ ಬಳಿಕ ಸುದ್ದಿವಾಹಿನಿಗಳು ಎಕ್ಸಿಟ್ ಪೋಲ್ ಸಮೀಕ್ಷೆ ವರದಿಗಳನ್ನು ಪ್ರಕಟಿಸಲಿವೆ. ಚುನಾವಣಾ ಪೂರ್ವ ಸಮೀಕ್ಷೆಗಳ ಪ್ರಕಾರ ಕೀರ್ ಸ್ಟಾರ್ಮರ್ ಮುಂದಿನ ಪ್ರಧಾನಿಯಾಗುವುದು ಖಚಿತ. ಭರವಸೆ ಹಾಗೂ ಅವಕಾಶಗಳ ಹೊಸ ಯುಗ' ಆರಂಭದ ಆಶ್ವಾಸನೆ ನೀಡಿರುವ ಸ್ಟಾರ್ಮರ್, ತಮ್ಮ ಸಂಪುಟವು ಸರ್ಕಾರ ರಚನೆಗೆ ಸಿದ್ಧ ಎಂದು ಹೇಳಿದ್ದಾರೆ.

ಇಂಗ್ಲೆಂಡ್, ಸ್ಕಾಟ್ಲೆಂಡ್, ವೇಲ್ಸ್ ಮತ್ತು ನಾರ್ದರ್ನ್ ಐರ್ಲೆಂಡ್‌ನ 650 ಸಂಸತ್ ಕ್ಷೇತ್ರಗಳ ಅಭ್ಯರ್ಥಿಗಳ ಆಯ್ಕೆಯನ್ನು ಮತದಾರರು ನಿರ್ಧರಿಸಲಿದ್ದಾರೆ. 4.60 ಕೋಟಿ ಅರ್ಹ ಮತದಾರರಿದ್ದಾರೆ.

2019ರ ಚುನಾವಣೆಯಲ್ಲಿ 27 ಸಾವಿರ ಮತಗಳಿಂದ ಗೆಲುವು ಸಾಧಿಸಿದ್ದ ರಿಚ್‌ಮಂಡ್ ಮತ್ತು ನಾರ್ಥಲೆರ್ಟನ್‌ನ ಯಾರ್ಕ್‌ಶೈರ್ ಕ್ಷೇತ್ರದಲ್ಲಿ ರಿಷಿ ಸುನಕ್ ಅವರಿಗೆ ಸೋಲಿನ ಭೀತಿ ಎದುರಾಗಿದೆ. ಇಲ್ಲಿ ಸುನಕ್ ಅವರಿಗೆ ಭಾರಿ ಪೈಪೋಟಿ ಎದುರಾಗಲಿದೆ ಎಂದು ದಿ ಗಾರ್ಡಿಯನ್ ವರದಿ ಮಾಡಿದೆ.

2019ರ ಚುನಾವಣೆಯಲ್ಲಿ ಬೋರಿಸ್ ಜಾನ್ಸನ್ ಅವರ ಕನ್ಸರ್ವೇಟಿವ್ ಪಕ್ಷವು 365 ಸೀಟುಗಳನ್ನು ಗೆಲ್ಲುವ ಮೂಲಕ ಮರಳಿ ಅಧಿಕಾರ ಹಿಡಿದಿತ್ತು. ಲೇಬರ್ ಪಕ್ಷವು 202 ಸ್ಥಾನ ಗಳಿಸಿತ್ತು. ಎಸ್‌ಎನ್‌ಪಿ 48 ಮತ್ತು ಲಿಬರಲ್ ಡೆಮಾಕ್ರಾಟ್ಸ್ 11 ಸ್ಥಾನಗಳನ್ನು ಪಡೆದಿದ್ದವು. ಕಳೆದ ಎಂಟು ವರ್ಷಗಳಲ್ಲಿ ಐದು ಬೇರೆ ಬೇರೆ ಪ್ರಧಾನಿಗಳನ್ನು ಕಂಡಿರುವ ಕನ್ಸರ್ವೇಟಿವ್ ಪಕ್ಷಕ್ಕೆ ಆಡಳಿತವಿರೋಧಿ ಅಲೆ ಎರವಾಗುವ ಭಯ ಕಾಡುತ್ತಿದೆ. ಈ ಬಾರಿ ಲೇಬರ್ ಪಕ್ಷವು ಬಹುಮತಕ್ಕೆ ಅಗತ್ಯವಿರುವ 326 ಸೀಟುಗಳನ್ನು ಸುಲಭವಾಗಿ ದಾಟುವ ನಿರೀಕ್ಷೆ ಇದೆ. 1997ರಲ್ಲಿ ಟೋನಿ ಬ್ಲೇರ್ ನೇತೃತ್ವದ ಪಕ್ಷವು 418 ಸೀಟುಗಳನ್ನು ಗೆದ್ದಿತ್ತು. ಯುವ್‌ಗೋವ್, ಫೋಕಲ್‌ಡೇಟಾ ಮತ್ತು ಮೋರ್ ಇನ್ ಕಾಮನ್ ಸಂಸ್ಥೆಗಳು ಲೇಬರ್ ಪಕ್ಷಕ್ಕೆ ಕನಿಷ್ಠ 430 ಸೀಟುಗಳನ್ನು ಅಂದಾಜಿಸಿವೆ. ಕನ್ಸರ್ವೇಟಿವ್ ಪಕ್ಷವು ಇತಿಹಾಸದಲ್ಲಿಯೇ ದಾಖಲೆ ಎನಿಸುವ 127ಕ್ಕೂ ಕಡಿಮೆ ಸ್ಥಾನ ಪಡೆಯಲಿದೆ ಎಂದು ಹೇಳಿವೆ.

### 650 ಸಂಸತ್ ಕ್ಷೇತ್ರಗಳಿಗೆ ಚುನಾವಣೆ

**ಬ್ರಿಟನ್‌ನಲ್ಲಿ ಗುರುವಾರ ಸಾರ್ವತ್ರಿಕ ಚುನಾವಣೆಗೆ ಮತದಾನ ಆರಂಭವಾಗಿದೆ. 650 ಸಂಸತ್ ಕ್ಷೇತ್ರಗಳಿಗೆ ಚುನಾವಣೆ ನಡೆಯುತ್ತಿದ್ದು, 327 ಸೀಟುಗಳ ಗಡಿ ದಾಟುವ ಪಕ್ಷ ಅಧಿಕಾರಕ್ಕೆ ಬರಲಿದೆ. ಕಳೆದ 14 ವರ್ಷಗಳಿಂದ ಅಧಿಕಾರದಲ್ಲಿರುವ ಕನ್ಸರ್ವೇಟಿವ್ ಪಕ್ಷಕ್ಕೆ ಈ ಚುನಾವಣೆಯಲ್ಲಿ ಅಗ್ನಿ ಪರೀಕ್ಷೆ ಎದುರಾಗಿದೆ. ಆದರೆ ಬಹುತೇಕ ಚುನಾವಣಾ ಪೂರ್ವ ಸಮೀಕ್ಷೆಗಳು ವಿರೋಧ ಪಕ್ಷವಾದ ಲೇಬರ್ ಪಕ್ಷವು ಐತಿಹಾಸಿಕ ಗೆಲುವು ಸಾಧಿಸಲಿವೆ ಎಂದು ಅಂದಾಜಿಸಿವೆ. ಸಮೀಕ್ಷಗಳ ಪ್ರಕಾರ ರಿಷಿ ಸುನಕ್ ಸ್ವತಃ ಸೋಲು ಅನುಭವಿಸಲಿದ್ದಾರೆ.**

## ಮಿನಿ ನ್ಯೂಸ್

### ಮಹಿಳೆ ಮೇಲೆ ರಿಯಲ್ ಎಸ್ಟೇಟ್ ಏಜೆಂಟರಿಂದ ಲೈಂಗಿಕ ದೌರ್ಜನ್ಯ

**ಹೈದರಾಬಾದ್:** ರಿಯಲ್ ಎಸ್ಟೇಟ್ ಮಾರಾಟಗಾರ ಮತ್ತು ಆತನ ಸಹಾಯಕರು ಮಹಿಳೆಯೊಬ್ಬರಿಗೆ ತಂಪು ಪಾನೀಯ ಕುಡಿಸಿ ಲೈಂಗಿಕ ದೌರ್ಜನ್ಯ ಎಸಗಿರುವ ಘಟನೆ ಹೈದರಾಬಾದ್‌ನಲ್ಲಿ ನಡೆದಿದೆ. ಜನಾರ್ದನ್ ಮತ್ತು ಸಂಗ ರೆಡ್ಡಿ ಆರೋಪಿಗಳಾಗಿದ್ದು, ಮಹಿಳೆ ನೀಡಿದ ದೂರಿನ ಮೇರೆಗೆ ಇಬ್ಬರನ್ನೂ ಬಂಧಿಸಿ ಜೈಲಿಗೆ ಕಳುಹಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಭಾನುವಾರ ಮಿಯಾಪುರಕ್ಕೆ ಭೇಟಿ ನೀಡಿದ್ದು, ಯಾದಗಿರಿ ಗುಟ್ಟಕ್ಕೆ ಭೇಟಿ ನೀಡಲು ಇಬ್ಬರು ವ್ಯಕ್ತಿಗಳು ತನ್ನನ್ನು ಕರೆದುಕೊಂಡು ಹೋಗಿದ್ದರು ಎಂದು ಸಂತ್ರಸ್ತ ಮಹಿಳೆ ದೂರಿನಲ್ಲಿ ತಿಳಿಸಿದ್ದಾರೆ. ರಾತ್ರಿ ಹಿಂತಿರುಗುವಾಗ, ಅವರು ನಿರ್ಮಾಣ ಹಂತದಲ್ಲಿರುವ ಕಟ್ಟಡದಲ್ಲಿ ನಿಲ್ಲಿಸಿ, ಕಾರು ಕೆಟ್ಟುಹೋಗಿದೆ ಎಂದರು.

ನಂತರ ಇಬ್ಬರು ಪುರುಷರು ಅವಳಿಗೆ ಆಹಾರ ನೀಡಿದರು, ಅವಳು ನಿರಾಕರಿಸಿದ್ದರಿಂದ ಅಂತಿಮವಾಗಿ ಆಕೆಗೆ ತಂಪು ಪಾನೀಯವನ್ನು ಕುಡಿಯಲು ಮನವೊಲಿಸಿದ್ದಾರೆ. ಅದನ್ನು ಕುಡಿದು ಅವಳಿಗೆ ತಲೆತಿರುದಂತಾಗಿದೆ. ಈ ಸಂದರ್ಭವನ್ನು ದುರ್ಬಳಕೆ ಮಾಡಿಕೊಂಡ ಆರೋಪಿಗಳು ಕಾರಿನಲ್ಲಿಯೇ ಆಕೆಯನ್ನು ವಿವಸ್ತ್ರಗೊಳಿಸಿ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ. ಅಲ್ಲದೆ ಆಕೆಗೆ ಥಳಿಸಿ ಮಿಯಾಪುರದ ಹಾಸ್ಟೆಲ್‌ನಲ್ಲಿ ಬಿಟ್ಟು ಪರಾರಿಯಾಗಿದ್ದಾರೆ ಎಂದು ದೂರಿನಲ್ಲಿ ಹೇಳಲಾಗಿದೆ. ಪೊಲೀಸರು ಅತ್ಯಾಚಾರ ಮತ್ತು ಇತರ ಆರೋಪಗಳ ಅಡಿಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

### ಚೀನಾದ ವಾಂಗ್ ಯೀ ಅವರೊಂದಿಗೆ ಜೈಶಂಕರ್ ಭೇಟಿ, ಮಾತುಕತೆ

**ಕಜಕಸ್ತಾನ:** ಭಾರತದ ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರು ಚೀನಾದ ವಿದೇಶಾಂಗ ಸಚಿವ ವಾಂಗ್ ಯೀ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಕಜಕಸ್ತಾನದಲ್ಲಿ ನಡೆಯುತ್ತಿರುವ ಶಾಂಘೈ ಸಹಕಾರ ಸಂಸ್ಥೆಯ (ಎಸ್‌ಸಿಒ) ನಾಯಕರ ವಾರ್ಷಿಕ ಸಭೆಯ ವೇಳೆ ಈ ಭೇಟಿ ನಡೆದಿದೆ. ಈ ಕುರಿತು ಭಾರತೀಯ ವಿದೇಶಾಂಗ ಸಚಿವಾಲಯ ಮಾಹಿತಿ ಹಂಚಿಕೊಂಡಿದೆ. 2020ರಿಂದ ಈಚೆಗೆ ಭಾರತ–ಚೀನಾ ಮಧ್ಯೆ ಪೂರ್ವ ಲಡಾಖ್ ಸೇರಿದಂತೆ ವಾಸ್ತವಿಕ ಗಡಿ ನಿಯಂತ್ರಣ ರೇಖೆ (ಎಲ್‌ಎಸಿ)ಯಲ್ಲಿ ಗಡಿ ವಿವಾದ ಉಲ್ಬಣಿಸಿದೆ. ಈ ಹಿನ್ನೆಲೆಯಲ್ಲಿ ಈ ಭೇಟಿ ಹೆಚ್ಚಿನ ಮಹತ್ವ ಗಿಟ್ಟಿಸಿಕೊಂಡಿದೆ.

ಅಸ್ತಾನದಲ್ಲಿರುವ ಮಹಾತ್ಮಗಾಂಧಿ ಅವರ ಪುತ್ಥಳಿಗೆ ವಿದೇಶಾಂಗ ಸಚಿವ ಎಸ್.ಜೈಶಂಕರ್ ಅವರು ಬುಧವಾರ ನಮನ ಸಲ್ಲಿಸಿದ್ದರು. ಅಲ್ಲದೆ ಹಲವು ಜಾಗತಿಕ ನಾಯಕರನ್ನು ಭೇಟಿಯಾಗಿ ಚರ್ಚೆ ನಡೆಸಿದ್ದರು.

### ತೆಲಂಗಾಣ ಸಿಎಂ ರೇವಂತ್ ರೆಡ್ಡಿ ಪ್ರಧಾನಿ ಭೇಟಿ: ಅಭಿವೃದ್ಧಿ ಬಗ್ಗೆ ಚರ್ಚೆ

**ನವದೆಹಲಿ:** ತೆಲಂಗಾಣ ಮುಖ್ಯಮಂತ್ರಿ ಎ. ರೇವಂತ್ ರೆಡ್ಡಿಯವರು ಗುರುವಾರ ದೆಹಲಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿ ರಾಜ್ಯದ ವಿವಿಧ ವಿಷಯಗಳ ಬಗೆ ಚರ್ಚೆ ನಡೆಸಿದರು. ಉಪಮುಖ್ಯಮಂತ್ರಿ ಭಟ್ಟಿ ವಿಕ್ರಮಾರ್ಕ ಅವರೂ ಇದೇ ವೇಳೆ ಇದ್ದರು. ಮೂರನೇ ಬಾರಿ ಪ್ರಧಾನಿಯಾಗಿ ನರೇಂದ್ರ ಮೋದಿಯವರು ಅಧಿಕಾರ ಸ್ವೀಕರಿಸಿದ ಬಳಿಕ ಇವರಿಬ್ಬರ ಮೊದಲ ಭೇಟಿ ಇದಾಗಿದೆ.

ಭೇಟಿ ವೇಳೆ ಹಲವು ಪ್ರಮುಖ ಯೋಜನೆಗಳ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅವರ ಜೊತೆ ರೇವಂತ್ ರೆಡ್ಡಿ ಮಾತುಕತೆ ನಡೆಸಿದರು ಎಂದು ಗೊತ್ತಾಗಿದೆ. ಇದಕ್ಕೂ ಮೊದಲು ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡಿ ತೆಲಂಗಾಣದ ಯೋಜನೆಗಳ ಬಗ್ಗೆ ಚರ್ಚೆ ಮಾಡಿದ್ದಾರೆ. ಭೇಟಿಯ ವೇಳೆ ನಡೆದ ಮಾತುಕತೆಯ ಬಗ್ಗೆ ಅಧಿಕೃತವಾಗಿ ಯಾವುದೇ ಮಾಹಿತಿ ಇಲ್ಲದಿದ್ದರೂ, ತೆಲಂಗಾಣದ ಅಭಿವೃದ್ಧಿ ಯೋಜನೆಗಳಿಗೆ ಸಹಾಯ ಪಡೆಯುವುದು ಭೇಟಿಯ ಉದ್ದೇಶವಾಗಿತ್ತು ಎಂದು ತಿಳಿದು ಬಂದಿದೆ.

### ಜಾರ್ಖಂಡ್ ಮುಖ್ಯಮಂತ್ರಿಯಾಗಿ ಹೇಮಂತ್ ಸೋರೇನ್ ಪ್ರಮಾಣವಚನ

**ರಾಂಚಿ:** ಜಾರ್ಖಂಡ್ ರಾಜ್ಯದ 13ನೇ ಮುಖ್ಯಮಂತ್ರಿಯಾಗಿ ಹೇಮಂತ್ ಸೋರೇನ್ ಅವರು ಗುರುವಾರ ಪ್ರಮಾಣವಚನ ಸ್ವೀಕರಿಸಿದರು. ರಾಜ್ಯಪಾಲ ಸಿ.ಪಿ.ರಾಧಾಕೃಷ್ಣನ್ ಅವರು ಪ್ರಮಾಣವಚನ ಬೋಧಿಸಿದರು. 3ನೇ ಬಾರಿಗೆ ಹೇಮಂತ್ ಸೋರೇನ್ ಜಾರ್ಖಂಡ್ ರಾಜ್ಯದ ಮುಖ್ಯಮಂತ್ರಿಯಾದರು. ಜಾರ್ಖಂಡ್ ರಾಜಧಾನಿ ರಾಂಚಿಯಲ್ಲಿ ನಡೆದ ಸಮಾರಂಭದಲ್ಲಿ ಕಾಂಗ್ರೆಸ್, ಆರ್‌ಜೆಡಿ ನಾಯಕರು ಸೇರಿದಂತೆ ಹಲವು ಪಕ್ಷಗಳ ಮುಖ್ಯಸ್ಥರು ಭಾಗಿಯಾಗಿದ್ದರು.

### 38 ಸಾವಿರ ದಾಟಿದ ಸಾವಿನ ಸಂಖ್ಯೆ

**ಗಾಜಾ:** ಇಸ್ರೇಲ್, ಹಮಾಸ್ ಬಂಡುಕೋರರ ನಡುವೆ ಯುದ್ಧ ಆರಂಭವಾದ ಬಳಿಕ ಸಾವಿಗೀಡಾದ ಪ್ಯಾಲೆಸ್ಟೀನಿಯರ ಸಂಖ್ಯೆ 38 ಸಾವಿರದ ಗಡಿ ದಾಟಿದೆ ಎಂದು ಗಾಜಾದ ಆರೋಗ್ಯ ಸಚಿವಾಲಯ ಗುರುವಾರ ಹೇಳಿದೆ. 'ಕಳೆದ 24 ಗಂಟೆಗಳ ಅವಧಿಯಲ್ಲಿ 58 ಮೃತದೇಹಗಳನ್ನು ಆಸ್ಪತ್ರೆಗೆ ತರಲಾಗಿದ್ದು, ಸಾವಿನ ಸಂಖ್ಯೆ 38,011ಕ್ಕೆ ತಲುಪಿದೆ.

ಯುದ್ಧದಲ್ಲಿ 87 ಸಾವಿರ ಮಂದಿ ಗಾಯಗೊಂಡಿದ್ದಾರೆ' ಎಂದು ತಿಳಿಸಿದೆ. ಸತ್ತವರಲ್ಲಿ ನಾಗರಿಕರು ಎಷ್ಟು ಮಂದಿ ಇದ್ದಾರೆ ಹಾಗೂ ಹಮಾಸ್ ಬಂಡುಕೋರರ ಸಂಖ್ಯೆ ಎಷ್ಟು ಎಂಬುದರ ಬಗ್ಗೆ ಸಚಿವಾಲಯವು ಮಾಹಿತಿ ನೀಡಿಲ್ಲ. ಆದರೆ ಮೃತಪಟ್ಟವರಲ್ಲಿ ಬಹುತೇಕ ಮಂದಿ ಮಹಿಳೆಯರು ಮತ್ತು ಮಕ್ಕಳು ಎಂದು ಮೂಲಗಳು ತಿಳಿಸಿವೆ.

### ಸ್ವಾಮಿ ವಿವೇಕಾನಂದರ 122ನೇ ಪುಣ್ಯತಿಥಿ: ಮೋದಿ, ಮಮತಾ ನಮನ

**ನವದೆಹಲಿ:** ಸ್ವಾಮಿ ವಿವೇಕಾನಂದರ 122ನೇ ಪುಣ್ಯತಿಥಿ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಗೌರವ ನಮನ ಸಲ್ಲಿಸಿದ್ದಾರೆ. ದೇಶದಲ್ಲಿ ಸಮೃದ್ಧ ಮತ್ತು ಪ್ರಗತಿಪರ ಸಮಾಜ ನಿರ್ಮಿಸುವ ತಮ್ಮ ಬದ್ಧತೆಯನ್ನು ಪುನರುಚ್ಚರಿಸುವುದಾಗಿ ಅವರು ಹೇಳಿದ್ದಾರೆ. ವಿವೇಕಾನಂದರ ಪುಣ್ಯತಿಥಿ ಹಿನ್ನೆಲೆಯಲ್ಲಿ ಅವರಿಗೆ ಗೌರವ ನಮನ ಸಲ್ಲಿಸುತ್ತೇನೆ. ಅವರ ಬೋಧನೆಗಳು ಲಕ್ಷಾಂತರ ಜನರಿಗೆ ಶಕ್ತಿಯನ್ನು ನೀಡಿವೆ.

ಅವರ ಜಾಣೆ ಮತ್ತು ನಿರಂತರ ಜ್ಞಾನದ ಅನ್ವೇಷಣೆ ಕೂಡ ಬಹಳ ಪ್ರೇರಕವಾಗಿದೆ ಎಂದು ಎಕ್ಸ್ ಪೋಸ್ಟ್‌ನಲ್ಲಿ ಮೋದಿ ತಿಳಿಸಿದ್ದಾರೆ. ವಿವೇಕಾನಂದರು ಒಬ್ಬ ದೊಡ್ಡ ದೇಶಭಕ್ತರಾಗಿದ್ದು, ನಮ್ಮ ಧರ್ಮ ಮತ್ತು ದೇಶವನ್ನು ಇಬ್ಭಾಗಿಸದೆ ಪ್ರೀತಿಸುವುದನ್ನು ಬೋಧಿಸಿದ್ದರು ಎಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಹೇಳಿದ್ದಾರೆ.

# 8 ತಂಡಗಳು, 2 ಗ್ರೂಪ್: ಚಾಂಪಿಯನ್ಸ್ ಟ್ರೋಫಿಗೆ ಮುಹೂರ್ತ ಫಿಕ್ಸ್

## ಮುಂದಿನ ವರ್ಷ ಫೆಬ್ರವರಿ 19 ರಿಂದ ಮಾರ್ಚ್ 9 ರವರೆಗೆ ಚಾಂಪಿಯನ್ಸ್ ಟ್ರೋಫಿ

ಬಹುನಿರೀಕ್ಷಿತ ಚಾಂಪಿಯನ್ಸ್ ಟ್ರೋಫಿ ಟೂರ್ನಿಗಾಗಿ ತಾತ್ಕಾಲಿಕ ದಿನಾಂಕ ನಿಗದಿ ಮಾಡಲಾಗಿದೆ. ಅದರಂತೆ ಮುಂದಿನ ವರ್ಷ ಫೆಬ್ರವರಿ 19 ರಿಂದ ಮಾರ್ಚ್ 9 ರವರೆಗೆ ಚಾಂಪಿಯನ್ಸ್ ಟ್ರೋಫಿ ನಡೆಯಲಿದೆ. ಪಾಕಿಸ್ತಾನ್ ಕ್ರಿಕೆಟ್ ಮಂಡಳಿ ಆಯೋಜಿಸಲಿರುವ ಈ ಟೂರ್ನಿಯಲ್ಲಿ ಒಟ್ಟು 8 ತಂಡಗಳು ಕಣಕ್ಕಿಳಿಯಲಿದೆ.

| ಚಾಂಪಿಯನ್ಸ್ ಟ್ರೋಫಿಯಲ್ಲಿ ಕಣಕ್ಕಿಳಿಯಲಿರುವ 8 ತಂಡಗಳು |
|---|
| ಭಾರತ |
| ಪಾಕಿಸ್ತಾನ್ |
| ಸೌತ್ ಆಫ್ರಿಕಾ |
| ನ್ಯೂಝಿಲೆಂಡ್ |
| ಅಫ್ಘಾನಿಸ್ತಾನ್ |
| ಇಂಗ್ಲೆಂಡ್ |
| ಬಾಂಗ್ಲಾದೇಶ್ |
| ಆಸ್ಟ್ರೇಲಿಯಾ |

ಈ ಎಂಟು ತಂಡಗಳನ್ನು ಎರಡು ಗುಂಪುಗಳಲ್ಲಿ ವಿಂಗಡಿಸಲಾಗಿದ್ದು, ಅದರಂತೆ ಎರಡು ಗ್ರೂಪ್‌ಗಳಲ್ಲಿ ತಲಾ 4 ಟೀಮ್‌ಗಳು ಕಾಣಿಸಿಕೊಳ್ಳಲಿದೆ. ಅಲ್ಲದೆ ಮೊದಲ ಸುತ್ತಿನಲ್ಲಿ ಗ್ರೂಪ್ ತಂಡಗಳ ನಡುವೆ ಪಂದ್ಯಗಳು ನಡೆಯಲಿದೆ. ಅಂದರೆ ಗ್ರೂಪ್-ಎ ನಲ್ಲಿರುವ ಭಾರತ ತಂಡವು, ಪಾಕಿಸ್ತಾನ್, ಬಾಂಗ್ಲಾದೇಶ್ ಮತ್ತು ನ್ಯೂಝಿಲೆಂಡ್ ತಂಡಗಳನ್ನು ಎದುರಿಸಲಿದೆ.




**ಐಸಿಸಿ ಗ್ರೀನ್ ಸಿಗ್ನಲ್**

• ಚಾಂಪಿಯನ್ಸ್ ಟ್ರೋಫಿ ಗ್ರೂಪ್:

| ಗ್ರೂಪ್-ಎ | ಗ್ರೂಪ್-ಬಿ |
|---|---|
| ಭಾರತ | ಆಸ್ಟ್ರೇಲಿಯಾ |
| ಪಾಕಿಸ್ತಾನ್ | ಇಂಗ್ಲೆಂಡ್ |
| ಬಾಂಗ್ಲಾದೇಶ್ | ಸೌತ್ ಆಫ್ರಿಕಾ |
| ನ್ಯೂಝಿಲೆಂಡ್ | ಅಫ್ಘಾನಿಸ್ತಾನ್. |

**ಮೂರು ಸ್ಟೇಡಿಯಂಗಳಲ್ಲಿ ಪಂದ್ಯಾಟ:** ಪಾಕಿಸ್ತಾನ್ ಕ್ರಿಕೆಟ್ ಮಂಡಳಿ ಚಾಂಪಿಯನ್ಸ್ ಟ್ರೋಫಿಗಾಗಿ ಮೂರು ಸ್ಟೇಡಿಯಂಗಳನ್ನು ಆಯ್ಕೆ ಮಾಡಿಕೊಂಡಿದೆ. ಅದರಂತೆ ಲಾಹೋರ್, ಕರಾಚಿ ಹಾಗೂ ರಾವಲ್ಪಿಂಡಿಯಲ್ಲಿ ಚಾಂಪಿಯನ್ಸ್ ಟ್ರೋಫಿ ಪಂದ್ಯಾವಳಿಗಳು ನಡೆಯಲಿದೆ. ವಿಶೇಷ ಎಂದರೆ ಭಾರತ ತಂಡದ ಎಲ್ಲಾ ಪಂದ್ಯಗಳು ಲಾಹೋರ್‌ನ ಗಡ್ಡಾಫಿ ಸ್ಟೇಡಿಯಂನಲ್ಲಿ ಆಯೋಜಿಸಲಾಗುತ್ತದೆ ಎಂದು ವರದಿಯಾಗಿದೆ. ಪಾಕಿಸ್ತಾನ್ ಕ್ರಿಕೆಟ್ ಮಂಡಳಿ ಸಲ್ಲಿಸಿರುವ ಕರುಡು ವೇಳಾಪಟ್ಟಿ ಪ್ರಕಾರ, ಭಾರತ ಮತ್ತು ಪಾಕಿಸ್ತಾನ್ ತಂಡಗಳು ಮಾರ್ಚ್ 1 ರಂದು ಮುಖಾಮುಖಿಯಾಗಲಿದೆ. ಈ ಪಂದ್ಯಕ್ಕೆ ಲಾಹೋರ್‌ನ ಗಡ್ಡಾಫಿ ಸ್ಟೇಡಿಯಂ ಆತಿಥ್ಯ ವಹಿಸಲಿದೆ.

**ಭಾರತ ತಂಡ ಪಾಕ್‌ಗೆ ತೆರಳಿದೆಯಾ:** 2006 ರ ಬಳಿಕ ಭಾರತ ತಂಡವು ಪಾಕಿಸ್ತಾನಕ್ಕೆ ತೆರಳಿಲ್ಲ. ಆದರೆ ಈ ಬಾರಿ ಪಾಕಿಸ್ತಾನದಲ್ಲಿ ಐಸಿಸಿ ಟೂರ್ನಿ ನಡೆಯುತ್ತಿದೆ. ಹೀಗಾಗಿ ಈ ಟೂರ್ನಿಯಲ್ಲಿ ಭಾರತ ಭಾಗವಹಿಸಲಿದೆಯಾ ಎಂಬ ಪ್ರಶ್ನೆಯೊಂದು ಹುಟ್ಟಿಕೊಂಡಿದೆ.

ಏಕೆಂದರೆ ಐಸಿಸಿ ಟೂರ್ನಿಗಳನ್ನು ಸ್ಥಳಾಂತರಿಸಬೇಕಿದ್ದರೆ ನಿರ್ದಿಷ್ಟ ಕಾರಣಗಳಿರಬೇಕಾಗುತ್ತದೆ. ಇಲ್ಲಿ ಬಿಸಿಸಿಐ ಟೂರ್ನಿಯನ್ನು ಸ್ಥಳಾಂತರಿಸಲು ಸುರಕ್ಷತೆಯ ಕಾರಣಗಳನ್ನು ನೀಡಿದರೂ, ಅದಕ್ಕೆ ಇತರೆ ಕ್ರಿಕೆಟ್ ಮಂಡಳಿಗಳೂ ಕೂಡ ಕೈ ಜೋಡಿಸಬೇಕಾಗುತ್ತದೆ.

ಆದರೆ ಇತ್ತೀಚಿನ ದಿನಗಳಲ್ಲಿ ಬಾಂಗ್ಲಾದೇಶ್, ಶ್ರೀಲಂಕಾ, ಅಫ್ಘಾನಿಸ್ತಾನ್, ಇಂಗ್ಲೆಂಡ್, ನ್ಯೂಝಿಲೆಂಡ್ ತಂಡಗಳು ಪಾಕಿಸ್ತಾನದಲ್ಲಿ ಕ್ರಿಕೆಟ್ ಆಡಿದೆ. ಇದೇ ವಾದವನ್ನು ಮುಂದಿಟ್ಟು ಟೂರ್ನಿಯನ್ನು ಸ್ಥಳಾಂತರಿಸಲು ಪಾಕಿಸ್ತಾನ್ ಕ್ರಿಕೆಟ್ ಮಂಡಳಿ ಹಿಂದೇಟು ಹಾಕಬಹುದು.

ಐಸಿಸಿ ಕಡೆಯಿಂದ ಗ್ರೀನ್ ಸಿಗ್ನಲ್: ಪಿಸಿಬಿ ಈಗಾಗಲೇ ಚಾಂಪಿಯನ್ಸ್ ಟ್ರೋಫಿಯ ವೇಳಾಪಟ್ಟಿಯ ಕರಡು ಪ್ರತಿಯನ್ನು ಐಸಿಸಿಗೆ ಸಲ್ಲಿಸಿದೆ. ಇದನ್ನು ಪರಿಶೀಲಿಸಿದ ಬಳಿಕ ಐಸಿಸಿ ಕಡೆಯಿಂದ ಗ್ರೀನ್ ಸಿಗ್ನಲ್ ಸಿಕ್ಕರೆ ಅಧಿಕೃತ ವೇಳಾಪಟ್ಟಿ ಹೊರ ಬೀಳಲಿದೆ. ಆದರೆ ಇತ್ತ ಪಾಕಿಸ್ತಾನದಲ್ಲಿ ಟೂರ್ನಿ ಆಡಲು ಟೀಮ್ ಇಂಡಿಯಾ ಹಿಂದೇಟು ಹಾಕುವ ಸಾಧ್ಯತೆಯಿದೆ. ಹೀಗಾಗಿ ಪ್ರಸ್ತುತ ವೇಳಾಪಟ್ಟಿಯಲ್ಲಿ ಬದಲಾವಣೆ ಕಂಡು ಬಂದರೂ ಅಚ್ಚರಿಪಡಬೇಕಿಲ್ಲ.

# ನಮೀಬಿಯಾ ವಿರುದ್ಧ ಗೆದ್ದು ಬೀಗಿದ ಪಂಜಾಬ್



ಪಂಜಾಬ್ ತಂಡವು 5 ಪಂದ್ಯಗಳ ಏಕದಿನ ಸರಣಿಗಾಗಿ ನಮೀಬಿಯಾಗೆ ತೆರಳಿದೆ. ಈ ಸರಣಿಯ ಮೊದಲ ಪಂದ್ಯದಲ್ಲಿ ಆತಿಥೇಯರ ವಿರುದ್ಧ ಪಂಜಾಬ್ ತಂಡ ಗೆಲುವು ದಾಖಲಿಸಿದೆ. ಇನ್ನು ಸರಣಿಯ ದ್ವಿತೀಯ ಏಕದಿನ ಪಂದ್ಯವು ಜುಲೈ 5 ರಂದು ನಡೆಯಲಿದ್ದು, ಈ ಪಂದ್ಯದ ಮೂಲಕ ಕಂಬ್ಯಾಕ್ ಮಾಡುವ ವಿಶ್ವಾಸದಲ್ಲಿ ನಮೀಬಿಯಾ ತಂಡ.

ನಮೀಬಿಯಾ ವಿರುದ್ಧ ಮೊದಲ ಪಂದ್ಯದಲ್ಲಿ ಪಂಜಾಬ್ ತಂಡ ರೋಚಕ ಜಯ ಸಾಧಿಸಿದೆ. ವಿಂಡ್‌ಹೋಕ್‌ನ ವಾಂಡರರ್ಸ್ ಕ್ರಿಕೆಟ್ ಗ್ರೌಂಡ್‌ನಲ್ಲಿ ನಡೆದ ಈ ಪಂದ್ಯದಲ್ಲಿ ಟಾಸ್ ಗೆದ್ದ ಪಂಜಾಬ್ ತಂಡವು ಬೌಲಿಂಗ್ ಆಯ್ದುಕೊಂಡಿತ್ತು. ಅದರಂತೆ ಮೊದಲು ಬ್ಯಾಟ್ ಮಾಡಿದ ನಮೀಬಿಯಾ ತಂಡ ಉತ್ತಮ ಆರಂಭ ಪಡೆಯಲು ಸಾಧ್ಯವಾಗಿರಲಿಲ್ಲ. ಸಿದ್ಧಾರ್ಥ್ ಕೌಲ್ ಎಸೆದ ಮೊದಲ ಓವರ್‌ನಲ್ಲೇ ನಾಯಕ ಮಲನ್ ಕ್ರುಗರ್ (0) ಔಟಾದರು. ಆ ಬಳಿಕ ಗುರ್ನೂರ್ ಬ್ರಾರ್ ಎಸೆತದಲ್ಲಿ ಲೋಹಾನ್ ಲೌರೆನ್ಸ್ (2) ಕ್ಲೀನ್ ಬೌಲ್ಡ್ ಆದರು. ಈ ಹಂತದಲ್ಲಿ ಕಣಕ್ಕಿಳಿದ ಜಾನ್ ಫ್ರೈಲಿಂಕ್ 27 ರನ್ ಬಾರಿಸಿದರೆ, ಅಲೆಕ್ಸಾಂಡರ್ ಬುಸಿಂಗ್ 39 ರನ್‌ಗಳ ಕೊಡುಗೆ ನೀಡಿದರು. ಇನ್ನು ವಿಕೆಟ್ ಕೀಪರ್ ಬ್ಯಾಟರ್ ಜೀನ್-ಪಿಯರ್ ಕೋಟ್ಜೆ 74 ಎಸೆತಗಳಲ್ಲಿ 1 ಸಿಕ್ಸ್ ಹಾಗೂ 3 ಫೋರ್‌ಗಳೊಂದಿಗೆ 51 ರನ್ ಬಾರಿಸಿದರು. ಇದಾಗ್ಯೂ ಉಳಿದ ಬ್ಯಾಟರ್‌ಗಳಿಂದ ಉತ್ತಮ ಸಾಥ್ ಸಿಕ್ಕಿರಲಿಲ್ಲ. ಅಂತಿಮವಾಗಿ ನಮೀಬಿಯಾ ತಂಡವು 41.3 ಓವರ್‌ಗಳಲ್ಲಿ 173 ರನ್‌ಗಳಿಸಿ ಆಲೌಟ್ ಆಯಿತು. ಪಂಜಾಬ್ ಪರ ಉತ್ತಮ ದಾಳಿ ಸಂಘಟಿಸಿದ ಸಿದ್ಧಾರ್ಥ್ ಕೌಲ್ 7 ಓವರ್‌ಗಳಲ್ಲಿ 28 ರನ್ ನೀಡಿ 3 ವಿಕೆಟ್ ಪಡೆದರೆ, ನಮನ್ ಧೀರ್ 2.3 ಓವರ್‌ಗಳಲ್ಲಿ 14 ರನ್ ನೀಡಿ 3 ವಿಕೆಟ್ ಕಬಳಿಸಿ ಮಿಂಚಿದರು.

**ಗೆದ್ದು ಬೀಗಿದ ಪಂಜಾಬ್:** 174 ರನ್‌ಗಳ ಸುಲಭ ಗುರಿಯನ್ನು ಬೆನ್ನತ್ತಿದ ಪಂಜಾಬ್ ಪರ ನಾಯಕ ನಮನ್ ಧೀರ್ ಅತ್ಯುತ್ತಮ ಬ್ಯಾಟಿಂಗ್ ಪ್ರದರ್ಶಿಸಿದರು. 64 ಎಸೆತಗಳನ್ನು ಎದುರಿಸಿದ ನಮನ್ 1 ಸಿಕ್ಸ್ ಹಾಗೂ 6 ಫೋರ್‌ಗಳೊಂದಿಗೆ 61 ರನ್ ಕಲೆಹಾಕಿದರು. ಇನ್ನು ಸನ್ವೀರ್ ಸಿಂಗ್ 79 ಎಸೆತಗಳಲ್ಲಿ 10 ಫೋರ್‌ಗಳೊಂದಿಗೆ 70 ರನ್ ಬಾರಿಸಿ ಮಿಂಚಿದರು. ಆದರೆ ನಮನ್ ಧೀರ್ ಹಾಗೂ ಸನ್ವೀರ್ ವಿಕೆಟ್ ಪತನಗೊಳ್ಳುತ್ತಿದ್ದಂತೆ ದಿಢೀರ್ ಕುಸಿತಕ್ಕೊಳಗಾದ ಪಂಜಾಬ್ ತಂಡವು ಬ್ಯಾಕ್ ಟು ಬ್ಯಾಕ್ ವಿಕೆಟ್ ಕಳೆದುಕೊಂಡಿತು. ಇದಾಗ್ಯೂ 33 ಓವರ್‌ಗಳಲ್ಲಿ 7 ವಿಕೆಟ್ ಕಳೆದುಕೊಂಡು 179 ರನ್ ಬಾರಿಸುವ ಮೂಲಕ ಪಂಜಾಬ್ ತಂಡವು 3 ವಿಕೆಟ್‌ಗಳ ರೋಚಕ ಜಯ ಸಾಧಿಸಿದೆ. ಈ ಮೂಲಕ ಐದು ಪಂದ್ಯಗಳ ಏಕದಿನ ಸರಣಿಯಲ್ಲಿ ಪಂಬಾಜ್ 1-0 ಅಂತರದಿಂದ ಮುನ್ನಡೆ ಸಾಧಿಸಿದೆ.

**ನಮೀಬಿಯಾ ಪ್ಲೇಯಿಂಗ್ 11:** ಜೀನ್-ಪಿಯರ್ ಕೋಟ್ಜೆ, ಲೋಹಾನ್ ಲೌರೆನ್ಸ್, ಜಾನ್ ಫ್ರೈಲಿಂಕ್, ಮಲನ್ ಕ್ರುಗರ್, ಅಲೆಕ್ಸಾಂಡರ್ ಬುಸಿಂಗ್-ವೋಲ್ಶೆಂಕ್, ಗೆರ್ಹಾರ್ಡ್ ಎರಾಸ್ಮಸ್, ಶಾನ್ ಫೌಚೆ, ತಂಗೇಣಿ ಲುಂಗಮೇನಿ, ಬೆನ್ ಶಿಕೊಂಗೊ, ಪೀಟರ್ ಡೇನಿಯಲ್ ಬ್ಲಿಗ್ನೌ, ಜೂನಿಯರ್ ಕರಿಯಾಟ.

**ಪಂಜಾಬ್ ಪ್ಲೇಯಿಂಗ್ 11:** ಪ್ರಭ್‌ಸಿಮ್ರಾನ್ ಸಿಂಗ್, ಅನ್ಮೋಲ್ ಮಲ್ಹೋತ್ರಾ, ಉದಯ್ ಸಹಾರನ್, ಪುಖರಾಜ್ ಮನ್, ರಮಣ್‌ದೀಪ್ ಸಿಂಗ್, ನಮನ್ ಧೀರ್, ಸನ್ವೀರ್ ಸಿಂಗ್, ಸಿದ್ಧಾರ್ಥ್ ಕೌಲ್, ಹರ್ಪ್ರೀತ್ ಬ್ರಾರ್, ಗುರ್ನೂರ್ ಬ್ರಾರ್, ಜಸಿಂದರ್ ಸಿಂಗ್.

# ಬಾಬರ್ ದಾಖಲೆ ಮುರಿದ ಕುಸಾಲ್




ಲಂಕಾ ಪ್ರೀಮಿಯರ್ ಲೀಗ್‌ನಲ್ಲಿ ಸ್ಫೋಟಕ ಶತಕ ಬಾರಿಸಿದ ಕುಸಾಲ್ ಪೆರೇರಾ ಹೊಸ ದಾಖಲೆ ನಿರ್ಮಿಸಿದ್ದಾರೆ. ಅದು ಕೂಡ ಬಾಬರ್ ಆಝಂ ಹೆಸರಿನಲ್ಲಿದ್ದ ದಾಖಲೆಯನ್ನು ಮುರಿಯುವ ಮೂಲಕ ಎಂಬುದು ವಿಶೇಷ. ಪಲ್ಲೆಕೆಲೆ ಇಂಟರ್‌ನ್ಯಾಷನಲ್ ಸ್ಟೇಡಿಯಂನಲ್ಲಿ ನಡೆದ ದಂಬುಲ್ಲಾ ಸಿಕ್ಸರ್ಸ್ ವಿರುದ್ಧದ ಈ ಪಂದ್ಯದಲ್ಲಿ ಟಾಸ್ ಗೆದ್ದ ಜಾಫ್ನಾ ಕಿಂಗ್ಸ್ ತಂಡವು ಬೌಲಿಂಗ್ ಆಯ್ದುಕೊಂಡಿತು.

ಅದರಂತೆ ಮೊದಲು ಬ್ಯಾಟ್ ಮಾಡಿದ ದಂಬುಲ್ಲಾ ಸಿಕ್ಸರ್ಸ್ ಪರ ಆರಂಭಿಕನಾಗಿ ಕಣಕ್ಕಿಳಿದ ಕುಸಾಲ್ ಪೆರೇರಾ ವಿಸ್ಫೋಟಕ ಬ್ಯಾಟಿಂಗ್ ಪ್ರದರ್ಶಿಸಿದರು. ಮೊದಲ ಓವರ್‌ನಿಂದಲೇ ಬಿರುಸಿನ ಬ್ಯಾಟಿಂಗ್‌ಗೆ ಒತ್ತು ನೀಡಿದ ಪೆರೇರಾ ಜಾಫ್ನಾ ಬೌಲರ್‌ಗಳ ಬೆಂಡೆತ್ತಿದರು. ಪರಿಣಾಮ ಕೇವಲ 50 ಎಸೆತಗಳಲ್ಲಿ ಶತಕ ಮೂಡಿಬಂತು. ಇದರೊಂದಿಗೆ ಲಂಕಾ ಪ್ರೀಮಿಯರ್ ಲೀಗ್‌ನಲ್ಲಿ ಅತೀ ವೇಗದ ಶತಕ ಸಿಡಿಸಿದ ದಾಖಲೆ ಕುಸಾಲ್ ಪೆರೇರಾ ಪಾಲಾಯಿತು. ಇದಕ್ಕೂ ಮುನ್ನ ಈ ದಾಖಲೆ ಬಾಬರ್ ಆಝಂ ಹೆಸರಿನಲ್ಲಿತ್ತು. 2023 ರ ಎಲ್‌ಪಿಎಲ್‌ನಲ್ಲಿ ಕೊಲಂಬೊ ಸ್ಟ್ರೈಕರ್ಸ್ ಪರ ಕಣಕ್ಕಿಳಿದಿದ್ದ ಬಾಬರ್ 57 ಎಸೆತಗಳಲ್ಲಿ ಶತಕ ಸಿಡಿಸಿದ್ದರು. ಇದೀಗ ಈ ದಾಖಲೆಯನ್ನು ಕುಸಾಲ್ ಪೆರೇರಾ ಮುರಿದಿದ್ದಾರೆ.

ಇನ್ನು ಈ ಪಂದ್ಯದಲ್ಲಿ 52 ಎಸೆತಗಳನ್ನು ಎದುರಿಸಿದ ಕುಸಾಲ್ ಪೆರೇರಾ 5 ಭರ್ಜರಿ ಸಿಕ್ಸ್ ಹಾಗೂ 10 ಫೋರ್‌ಗಳೊಂದಿಗೆ ಅಜೇಯ 102 ರನ್ ಬಾರಿಸಿದರು. ಈ ಶತಕದ ನೆರವಿನಿಂದ ದಂಬುಲ್ಲಾ ಸಿಕ್ಸರ್ಸ್ ತಂಡವು 20 ಓವರ್‌ಗಳಲ್ಲಿ 2 ವಿಕೆಟ್ ಕಳೆದುಕೊಂಡು 191 ರನ್ ಕಲೆಹಾಕಿತು.

192 ರನ್‌ಗಳ ಕಠಿಣ ಗುರಿಯನ್ನು ಬೆನ್ನತ್ತಿದ ಜಾಫ್ನಾ ಕಿಂಗ್ಸ್ ಪರ ಅವಿಷ್ಕಾ ಫೆರ್ನಾಂಡೋ ಸಿಡಿಲಬ್ಬರದ ಬ್ಯಾಟಿಂಗ್ ಪ್ರದರ್ಶಿಸಿದರು. ಅವಿಷ್ಕಾ 34 ಎಸೆತಗಳಲ್ಲಿ 6 ಸಿಕ್ಸ್ ಹಾಗೂ 7 ಫೋರ್‌ಗಳೊಂದಿಗೆ 80 ರನ್ ಚಚ್ಚಿದರೆ, ಚರಿತ್ ಅಸಲಂಕಾ 36 ಎಸೆತಗಳಲ್ಲಿ ಅರ್ಧಶತಕ ಬಾರಿಸಿದರು. ಈ ಮೂಲಕ ಜಾಫ್ನಾ ಕಿಂಗ್ಸ್ ತಂಡವು 20 ಓವರ್‌ಗಳಲ್ಲಿ 6 ವಿಕೆಟ್ ಕಳೆದುಕೊಂಡು 197 ರನ್ ಬಾರಿಸಿ ಭರ್ಜರಿ ಜಯ ಸಾಧಿಸಿತು.

# ರಾಬಿನ್ ಉತ್ತಪ್ಪ ಸಿಡಿಲಬ್ಬರ ಇಂಡಿಯಾ ಚಾಂಪಿಯನ್ಸ್‌ಗೆ ಜಯ



ವರ್ಲ್ಡ್ ಚಾಂಪಿಯನ್‌ಶಿಪ್ ಆಫ್ ಲೆಜೆಂಡ್ಸ್ ಟೂರ್ನಿಯ ಮೊದಲ ಪಂದ್ಯದಲ್ಲೇ ಇಂಡಿಯಾ ಚಾಂಪಿಯನ್ಸ್ ಜಯಭೇರಿ ಬಾರಿಸಿದೆ. ಬರ್ಮಿಂಗ್ ಹ್ಯಾಮ್‌ನ ಎಡ್ಜ್‌ಬಾಸ್ಟನ್‌ನಲ್ಲಿ ನಡೆದ ಈ ಪಂದ್ಯದಲ್ಲಿ ಇಂಡಿಯಾ ಚಾಂಪಿಯನ್ಸ್ ಮತ್ತು ಇಂಗ್ಲೆಂಡ್ ಚಾಂಪಿಯನ್ಸ್ ತಂಡಗಳು ಮುಖಾಮುಖಿಯಾಗಿದ್ದವು. ಟಾಸ್ ಗೆದ್ದ ಇಂಡಿಯಾ ತಂಡದ ನಾಯಕ ಯುವರಾಜ್ ಸಿಂಗ್ ಬೌಲಿಂಗ್ ಆಯ್ದುಕೊಂಡರು. ಅದರಂತೆ ಮೊದಲು ಬ್ಯಾಟ್ ಮಾಡಿದ ಇಂಗ್ಲೆಂಡ್ ಚಾಂಪಿಯನ್ಸ್ ಪರ ಇಯಾನ್ ಬೆಲ್ ಉತ್ತಮ ಬ್ಯಾಟಿಂಗ್ ಪ್ರದರ್ಶಿಸಿದರು. 44 ಎಸೆತಗಳನ್ನು ಎದುರಿಸಿದ ಬೆಲ್ 9 ಫೋರ್‌ಗಳೊಂದಿಗೆ 59 ರನ್ ಬಾರಿಸಿದರು. ಇನ್ನು ಅಂತಿಮ ಓವರ್‌ಗಳ ವೇಳೆ ಅಬ್ಬರಿಸಿದ ಸಮಿತ್ ಪಟೇಲ್ ಕೇವಲ 25 ಎಸೆತಗಳಲ್ಲಿ 3 ಭರ್ಜರಿ ಸಿಕ್ಸ್ ಹಾಗೂ 5 ಫೋರ್‌ಗಳೊಂದಿಗೆ 51 ರನ್ ಚಚ್ಚಿದರು. ಈ ಮೂಲಕ ಇಂಗ್ಲೆಂಡ್ ಚಾಂಪಿಯನ್ಸ್ ತಂಡವು 20 ಓವರ್‌ಗಳಲ್ಲಿ 4 ವಿಕೆಟ್ ಕಳೆದುಕೊಂಡು 165 ರನ್ ಕಲೆಹಾಕಿತು.

**166 ರನ್‌ಗಳ ಟಾರ್ಗೆಟ್:** ಇಂಗ್ಲೆಂಡ್ ಚಾಂಪಿಯನ್ಸ್ ನೀಡಿದ ಸ್ಪರ್ಧಾತ್ಮಕ ಗುರಿಯನ್ನು ಬೆನ್ನತ್ತಿದ ಇಂಡಿಯಾ ಚಾಂಪಿಯನ್ಸ್ ತಂಡಕ್ಕೆ ರಾಬಿನ್ ಉತ್ತಪ್ಪ ಸ್ಫೋಟಕ ಆರಂಭ ಒದಗಿಸಿದರು. ಮೊದಲ ಓವರ್‌ನಿಂದಲೇ ಬಿರುಸಿನ ಬ್ಯಾಟಿಂಗ್ ಪ್ರದರ್ಶಿಸಿದ ಉತ್ತಪ್ಪ ಸಿಕ್ಸ್-ಫೋರ್‌ಗಳ ಸುರಿಮಳೆಗೈದರು. ಅಲ್ಲದೆ 32 ಎಸೆತಗಳಲ್ಲಿ 2 ಸಿಕ್ಸ್ ಹಾಗೂ 4 ಫೋರ್‌ಗಳೊಂದಿಗೆ 50 ರನ್ ಬಾರಿಸಿ ಔಟಾದರು. ಇನ್ನು ಒಮನ್ ಓಜಾ 25 ರನ್ ಬಾರಿಸಿದರೆ, ಗುರುಕೀರತ್ ಸಿಂಗ್ ಮಾನ್ 33 ರನ್‌ಗಳ ಕೊಡುಗೆ ನೀಡಿದರು. ಇನ್ನು ಇರ್ಫಾನ್ ಪಠಾಣ್ 22 ರನ್‌ಗಳ ಕೊಡುಗೆ ನೀಡಿದರು. ಈ ಮೂಲಕ ಇಂಡಿಯಾ ಚಾಂಪಿಯನ್ಸ್ ತಂಡವು 19 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 166 ರನ್ ಬಾರಿಸುವ ಮೂಲಕ 3 ವಿಕೆಟ್‌ಗಳ ರೋಚಕ ಜಯ ಸಾಧಿಸಿತು.

# ಸದ್ದು ಮಾಡುತ್ತಿದೆ ತೂಫಾನ್ ಸಿನಿಮಾ



**ಒತ್ತಾಯದ ಮೇರೆಗೆ ಗ್ಲಿಂಪ್ಸ್**

'ತೂಫಾನ್' ಕನ್ನಡ ಮತ್ತು ಹಿಂದಿ ಚಿತ್ರದ ಫಸ್ಟ್ ಗ್ಲಿಂಪ್ಸ್ ಬಿಡುಗಡೆಯಾಗಿದ್ದು, ಅಭಿಮಾನಿಗಳಿಂದ ಪ್ರಶಂಸೆ ವ್ಯಕ್ತವಾಗಿದೆ. ಕಲಾವಿದರ ಸಂಘದಲ್ಲಿ ತುಣುಕುಗಳ ಬಿಡುಗಡೆ ಸಮಾರಂಭವು ಅದ್ದೂರಿಯಾಗಿ ನಡೆಯಿತು.

ಎಸ್.ಆರ್.ಮೂವೀಸ್ ಲಾಂಛನದಲ್ಲಿ ಬೆಳಗಾವಿ ಮೂಲದ ಕನ್ನಡ ಅಭಿಮಾನಿ ಷರೀಫ ಬೇಗಂ ನಡಾಫ್ ಬಂಡವಾಳ ಹೂಡುತ್ತಿದ್ದಾರೆ. ಚಿತ್ರಕಥೆ, ಸಂಭಾಷಣೆ ಬರೆದು ನಿರ್ದೇಶನ ಮಾಡುತ್ತಿರುವುದು ಆರ್.ಚಂದ್ರಕಾಂತ್. ಹೊಸ ಪ್ರತಿಭೆ ರೋಶನ್ ಕಥೆ ಬರೆದು ನಾಯಕನಾಗಿ ಅಭಿನಯಿಸುತ್ತಿದ್ದಾರೆ. ಚಾಲೆಂಜಿಂಗ್ ಸ್ಟಾರ್ ದರ್ಶನ್ ಪರ ವಕೀಲ ನಾರಾಯಣಸ್ವಾಮಿ ಮತ್ತು ಮಿಲಿಟರಿ ನಿವೃತ್ತ ಅಧಿಕಾರಿಗಳು ಆಗಮಿಸಿ ತಂಡದ ಕೆಲಸವನ್ನು ಶ್ಲಾಘಿಸಿದರು.

ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಸಾಹಿತಿ ಕವಿರಾಜ್, ತಮ್ಮ ಶಿಷ್ಯ ಆರ್.ಚಂದ್ರಕಾಂತ್ ನಿರ್ದೇಶನ ಮಾಡಿರುವುದು ಸಂತಸ ತಂದಿದೆ. ಲೈಟಿಂಗ್, ಮೇಕಿಂಗ್ ಎಲ್ಲಾವನ್ನು ದೊಡ್ಡ ಪರದೆ ಮೇಲೆ ನೋಡುವುದೇ ಚೆಂದ. ಬೇರೆ ಲೋಕ ಸೃಷ್ಟಿಸುವಂತ ಮಾತು ಕೇಳಿ ಬರುತ್ತಿದೆ. ಅದೇ ರೀತಿ ಇದು ಆಗಲಿ. ನಿರ್ದೇಶಕರಿಗೆ ದೊಡ್ಡ ಮಟ್ಟದ ಯಶಸ್ಸು ಸಿಗಲೆಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಆರ್.ಚಂದ್ರಕಾಂತ್, ಸಿನಿಮಾವು ನನ್ನದು ಅನ್ನುವುದಕ್ಕಿಂತ ರೋಷನ್ ಕನಸು ಎಂದು ಹೇಳಬೇಕು. ಅವರು ಕಥೆ ಹೇಳಿ ನಾನೇ ನಿರ್ದೇಶನ ಮಾಡಬೇಕೆಂದು ಕೋರಿಕೊಂಡರು. 1994ರಲ್ಲಿ ಮಗ ತಂದೆಗೋಸ್ಕರ ಸೇಡು ತೀರಿಸಿಕೊಳ್ಳುವ ಕಥೆ ಹೊಂದಿದೆ. ಶೇಕಡ 50ರಷ್ಟು ಚಿತ್ರೀಕರಣ ಮುಗಿದಿದೆ. ನಿರ್ಮಾಪಕರ ಒತ್ತಾಯದ ಮೇರೆಗೆ ಗ್ಲಿಂಪ್ಸ್ ತೋರಿಸಲಾಗಿದೆ. ಇದು ಟೀಸರ್, ಟ್ರೈಲರ್ ಅಲ್ಲ. ಇದೊಂದು ಪ್ಯಾನ್ ಇಂಡಿಯಾ ಸಿನಿಮಾದ 'ತೂಫಾನ್' ಸ್ಪಾರ್ಕ್ ಎನ್ನಬಹುದು. ನಮ್ಮ ಚಿತ್ರ ಹೇಗೆ ಬರುತ್ತಿದೆ, ಯಾವ ತರಹದಲ್ಲಿ ಇದೆ ಎಂಬುದನ್ನು ತೋರಿಸಲು ಇದನ್ನು ಸಿದ್ಧಪಡಿಸಲಾಗಿದೆ. ಹಿಂದೆ 'ಭೈರ್ಯ-07' ಹೆಸರು ಇತ್ತು. ಭೈರ್ಯ ನಾಯಕನ ಹೆಸರು ಆಗಿದ್ದು, ಬೇರೆ ತಿರುವು ಇರಲಿ ಅಂತ 'ತೂಫಾನ್' ಟೈಟಲ್ ಇಡಲಾಗಿದೆ. ಮುಖ್ಯ ಖಳನಾಯಕನಾಗಿ ಭೀಷ್ಮ ರಾಮಯ್ಯ ಉಳಿದಂತೆ ರಂಗಾಯಣ ರಘು, ಅಶ್ವಿನ್ ಹಾಸನ್, ಸೂರ್ಯಪ್ರವೀಣ್, ಅಯ್ಯಪ್ಪ ಶರ್ಮ, ಬಿ.ಸುರೇಶ್, ಉಗ್ರಂ ರವಿ ರೋಲ್‌ನ್ನು ಗೌಪ್ಯವಾಗಿಡಲಾಗಿದೆ. ಮುಂದೆ ಎಲ್ಲಾವನ್ನು ತಿಳಿಸುತ್ತೇನೆಂದು ಹೇಳಿದರು.

# ಬಬನ್ ಪ್ಯಾನ್ ಇಂಡಿಯಾ ಚಿತ್ರ



ಕೆಜಿಎಫ್, ಕಾಂತಾರ ಚಿತ್ರಗಳ ಯಶಸ್ಸಿನ ನಂತರ ಪ್ಯಾನ್ ಇಂಡಿಯಾ ಸಿನಿಮಾ ನಿರ್ಮಾಣದತ್ತ ಬಹುತೇಕ ನಿರ್ಮಾಪಕರು ಒಲವು ತೋರುತ್ತಿದ್ದಾರೆ. ಅಂಥದ್ದೇ ಹೊಸ ಚಿತ್ರವೊಂದು ಇತ್ತೀಚೆಗೆ ಸೆಟ್ಟೇರಿದೆ. ಅದರ ಶೀರ್ಷಿಕೆ ಬಬನ್. ಚಿತ್ರದಲ್ಲಿ ಇದು ನಾಯಕನ ಹೆಸರು. ನೈಟ್ ಹುಡ್ ಪ್ರೊಡಕ್ಷನ್ಸ್ ಅಡಿ ಈ ಚಿತ್ರವನ್ನು ಮಾಲಾ ರಮೇಶ್ ಅವರು ಬಿಗ್ ಬಜೆಟ್‌ನಲ್ಲಿ ನಿರ್ಮಿಸುತ್ತಿದ್ದಾರೆ.

ನಾಗರಭಾವಿಯ ಶ್ರೀ ವೆಂಕಟೇಶ್ವರ ವಿನಾಯಕ ದೇವಸ್ಥಾನದಲ್ಲಿ ಈ ಚಿತ್ರದ ಮುಹೂರ್ತ ಸಮಾರಂಭ ನೆರವೇರಿದ್ದು, ಆಷಾಢ ಕಳೆದ ನಂತರ ಆಗಸ್ಟ್‌ನಲ್ಲಿ ಚಿತ್ರದ ಚಿತ್ರೀಕರಣ ಶುರುವಾಗಲಿದೆ. ಕನ್ನಡ, ತೆಲುಗು ತಮಿಳು ಸೇರಿದಂತೆ 5 ಭಾಷೆಗಳಲ್ಲಿ ನಿರ್ಮಾಣವಾಗುತ್ತಿರುವ ಈ ಚಿತ್ರಕ್ಕೆ ಕುಶಾಲ್ ರಾಘವೇಂದ್ರ, ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. ಜೊತೆಗೆ ಚಿತ್ರದ ನಾಯಕನಾಗೂ ಕಾಣಿಸಿಕೊಳ್ಳುತ್ತಿದ್ದಾರೆ. ಚೆನ್ನೈನ ಇಂಡಿಯನ್ ಸ್ಕೂಲ್ ಆಫ್ ಡ್ರಾಮಾದಲ್ಲಿ ಅಭಿನಯ, ನಿರ್ದೇಶನ ಪಾಠ ಕಲಿತ ಕುಶಾಲ್, ಗಂಗೋತ್ರಿ, ಸಾಗುತ ದೂರ ಸೇರಿ ಹಲವಾರು ಕನ್ನಡ, ಹಿಂದಿ ಸೀರಿಯಲ್‌ಗಳಲ್ಲಿ ಹಾಗೂ ಸಿನಿಮಾಗಳಲ್ಲೂ ಸಹ ಬಣ್ಣ ಹಚ್ಚಿದ್ದಾರೆ. ಇವರ ನಿರ್ದೇಶನದ ತಮಿಳು ಚಿತ್ರವಿನ್ನೂ ರಿಲೀಸಾಗಬೇಕಿದೆ. ತಮ್ಮ ಎರಡನೇ ಪ್ರಯತ್ನದಲ್ಲೇ ಪ್ಯಾನ್ ಇಂಡಿಯಾ ಬಬನ್ ಚಿತ್ರಕ್ಕೆ ಆಕ್ಷನ್ ಕಟ್ ಹೇಳುತ್ತಿದ್ದಾರೆ. ಇನ್ನು ಈ ಚಿತ್ರದ ನಾಯಕಿಯಾಗಿ ರಾಧಾ ಭಗವತಿ ಕಾಣಿಸಿಕೊಳ್ಳುತ್ತಿದ್ದು, ಇವರೂ ಸಹ ರಾಮಾಚಾರಿ, ಅಮೃತಧಾರೆ ಸೀರಿಯಲ್ ಅಲ್ಲದೆ ವಸಂತ ಕಾಲದ ಹೂಗಳು ಚಿತ್ರದಲ್ಲಿ ನಟಿಸಿದ್ದಾರೆ.

ಸಿನಿ ವಾಹಿನಿ

# ಶೀಘ್ರದಲ್ಲೇ ಬಿಗ್ ಬಾಸ್ ಶೋ ಶುರು

ಕಿರುತೆರೆಯ ಅತೀ ದೊಡ್ಡ ರಿಯಾಲಿಟಿ ಶೋ ಬಿಗ್ ಬಾಸ್ ಮತ್ತೆ ಶುರುವಾಗುತ್ತಿದೆ. ಶೀಘ್ರದಲ್ಲೇ ತೆಲುಗಿನ ಬಿಗ್ ಬಾಸ್ ಸೀಸನ್ 8 ಶುರುವಾಗಲಿದೆ. ಈ ಮೂಲಕ ಫ್ಯಾನ್ಸ್‌ಗೆ ಸಿಹಿಸುದ್ದಿ ಸಿಕ್ಕಿದೆ. ಅದಷ್ಟೇ ಅಲ್ಲ, ದೊಡ್ಮನೆ ಆಟಕ್ಕೆ ಬರಲಿರುವ ಸ್ಪರ್ಧಿಗಳು ಕೂಡ ಫೈನಲ್ ಆಗಿದ್ದಾರೆ.

ಕನ್ನಡದ ಬಿಗ್ ಬಾಸ್ ಮತ್ತು ತೆಲುಗಿನ ಬಿಗ್ ಬಾಸ್‌ಗಾಗಿ ಫ್ಯಾನ್ಸ್ ಕಾತರದಿಂದ ಕಾಯುತ್ತಾರೆ. ಬಿಗ್ ಬಾಸ್‌ಗೆ ದೊಡ್ಡಮಟ್ಟದ ಫ್ಯಾನ್ ಬೇಸ್ ಕೂಡ ಇದೆ. ಅಂದಹಾಗೆ, ಇದೇ ಆಗಸ್ಟ್ 4ರಂದು ತೆಲುಗಿನ ಬಿಗ್ ಬಾಸ್ ಪ್ರಸಾರವಾಗಿದೆ. ಇನ್ನೂ ಸ್ಪರ್ಧಿಗಳ ವಿಚಾರಕ್ಕೆ ಬಂದರೆ, ಕುಮಾರಿ ಆಂಟಿ ಎಂಬುವರು ರಸ್ತೆ ಬದಿ ಫುಡ್ ಟ್ರಕ್ ಇಟ್ಟುಕೊಂಡಿದ್ದಾರೆ. ಇವರು ಬಿಗ್‌ಬಾಸ್‌ಗೆ ಬರಲಿದ್ದಾರೆ ಎನ್ನಲಾಗಿದೆ. ರೇವ್ ಪಾರ್ಟಿ ಪ್ರಕರಣದ ಆರೋಪಿ ಹೇಮಾ, ಅಮೃತಾ ಪ್ರಣಯ್, ಯೂಟ್ಯೂಬರ್ ನೇತ್ರಾ ಮತ್ತು ವಂಶಿ ಸೇರಿದಂತೆ ಅನೇಕರ ಹೆಸರುಗಳು ವೈರಲ್ ಆಗಿದೆ. ಅಧಿಕೃತ ಮಾಹಿತಿಗಾಗಿ ಕಾಯಬೇಕಿದೆ.

ಅಂದಹಾಗೆ, ಈ ಸೀಸನ್ ಕೂಡ ಅಕ್ಕಿನೇನಿ ನಾಗಾರ್ಜುನ ಅವರೇ ನಿರೂಪಣೆ ಮಾಡಲಿದ್ದಾರೆ. ಸದ್ಯ ಈ ಸುದ್ದಿ ಕೇಳಿ ಬಿಗ್ ಬಾಸ್ ಫ್ಯಾನ್ಸ್ ಥ್ರಿಲ್ ಆಗಿದ್ದಾರೆ.





# ಪುಷ್ಪ 2 ಹಾಡಿಗೆ ದಿಲ್ ಖುಷ್ ಆಗಿ ಕುಣಿದ ಆಶಿಕಾ

**ವಿಡಿಯೋ ಈಗ ಭಾರಿ ವೈರಲ್**

ಪುಷ್ಪ 2 ಸಿನಿಮಾದ ಸೂಸೇನೆ ಹಾಡಿಗೆ ಆಶಿಕಾ ರಂಗನಾಥ್ ಅವರು ಹೆಜ್ಜೆ ಹಾಕಿದ್ದಾರೆ. ಸಾಂಪ್ರದಾಯಿಕ ಉಡುಗೆಯಲ್ಲಿ ಆಶಿಕಾ ರಂಗನಾಥ್ ಅವರು ನವಿಲಿನಂತೆ ಹೆಜ್ಜೆ ಹಾಕಿರುವುದನ್ನು ನೋಡಿ ಅವರ ಅಭಿಮಾನಿಗಳು ಖುಷಿಯಾಗಿದ್ದಾರೆ. ಮಿಲ್ಕಿ ಬ್ಯೂಟಿ ಮಾಡಿದ ಡಾನ್ಸ್‌ನ ವಿಡಿಯೋ ಈಗ ಭಾರಿ ವೈರಲ್ ಆಗಿದೆ.

ಅಲ್ಲು ಅರ್ಜುನ್ ಹಾಗೂ ರಶ್ಮಿಕಾ ಮಂದಣ್ಣ ಅಭಿನಯದ ಪುಷ್ಪ 2 ಸಿನಿಮಾದ ಸೂಸೇನೆ ಹಾಡು ಎಲ್ಲಾರ ಮನೆಮಾತಾಗಿದೆ. ಸಾಮಾಜಿಕ ಜಾಲತಾಣಗಳಲ್ಲಂತೂ ಹಾಡು ವೈರಲ್ ಆಗುವ ಜತೆಗೆ ಯುವತಿಯರಿಂದ ಹಿಡಿದು ಸೆಲೆಬ್ರಿಟಿಗಳವರೆಗೆ ಈ ಹಾಡಿಗೆ ಡಾನ್ಸ್ ಮಾಡಿದ ವಿಡಿಯೋ ಪೋಸ್ಟ್ ಮಾಡಿದ್ದಾರೆ. ಅಷ್ಟರಮಟ್ಟಿಗೆ ಈ ಹಾಡು ಎಲ್ಲಾರ ಗಮನ ಸೆಳೆದಿದೆ. ಇದಕ್ಕೆ ನಿದರ್ಶನ ಎಂಬಂತೆ, ಸ್ಯಾಂಡಲ್‌ವುಡ್‌ನ ಮಿಲ್ಕಿ ಬ್ಯೂಟಿ ಎಂದೇ ಖ್ಯಾತಿಯಾದ, ನಟಿ ಆಶಿಕಾ ರಂಗನಾಥ್ ಅವರು ಕೂಡ ಸೂಸೇನೆ ಹಾಡಿಗೆ ಡಾನ್ಸ್ ಮಾಡಿದ್ದಾರೆ. ಡಾನ್ಸ್ ಮಾಡಿದ ವಿಡಿಯೊವನ್ನು ಅವರು ಇನ್‌ಸ್ಟಾಗ್ರಾಂನಲ್ಲಿ ಹಂಚಿಕೊಂಡಿದ್ದು, ಈ ವಿಡಿಯೊ ಕೂಡ ವೈರಲ್ ಆಗಿದೆ.

ಸಾಂಪ್ರದಾಯಿಕ ಉಡುಗೆಯಲ್ಲಿ ಆಶಿಕಾ ರಂಗನಾಥ್ ಅವರು ಪುಷ್ಪ 2 ಹಾಡಿಗೆ ಹೆಜ್ಜೆ ಹಾಕಿದ್ದು, ಅವರ ಅಭಿಮಾನಿಗಳು ಖುಷಿಯಾಗಿದ್ದಾರೆ. ''ನಾನು ಈ ಹಾಡಿಗೆ ತುಂಬ ತಡವಾಗಿ ಕುಣಿಯುತ್ತಿರಬಹುದು, ಆದರೆ, ನೀವು ನನ್ನ ನೃತ್ಯವನ್ನು ಇಷ್ಟಪಡುತ್ತೀರಿ ಎಂಬ ಭರವಸೆ ಇದೆ'' ಎಂಬುದಾಗಿ ಆಶಿಕಾ ರಂಗನಾಥ್ ಅವರು ಬರೆದುಕೊಂಡಿದ್ದಾರೆ. ವಿಡಿಯೋಗೆ ಅಭಿಮಾನಿಗಳು ಪ್ರತಿಕ್ರಿಯಿಸಿದ್ದು, ''ತುಂಬ ಚೆನ್ನಾಗಿ ಡಾನ್ಸ್ ಮಾಡಿದ್ದೀರಿ'' ಎಂದಿದ್ದಾರೆ. ಇನ್ನೊಂದಿಷ್ಟು ಕಿಡಿಗೇಡಿಗಳು, ''ನೀವು ರಶ್ಮಿಕಾ ಮಂದಣ್ಣ ಅವರಿಗಿಂತ ಚೆನ್ನಾಗಿ ಹೆಜ್ಜೆ ಹಾಕಿದ್ದೀರಿ'' ಎಂದಿದ್ದಾರೆ.

ಪುಷ್ಪ 1 ಸಿನಿಮಾದ ಸಾಮಿ ಹಾಡನ್ನೂ ಮೀರಿಸುವಂತಿದೆ ಸೂಸೇನೆ ಹಾಡು. ಅ ದೇವಿಶ್ರೀ ಪ್ರಸಾದ್ ಸಂಗೀತ ನಿರ್ದೇಶನದಲ್ಲಿ ಶ್ರೇಯಾ ಘೋಷಾಲ್ ಈ ಹಾಡಿಗೆ ಧ್ವನಿಯಾಗಿದ್ದಾರೆ. ಹಾಡಿಗೆ ಬಾಲಿವುಡ್ ಗಣೇಶ್ ಆಚಾರ್ಯ ಕೊರಿಯೋಗ್ರಫಿ ಇದೆ. ಈ ಹಾಡು 6 ಭಾಷೆಗಳಲ್ಲಿ ಮೂಡಿ ಬಂದಿದೆ. ಎಲ್ಲಾ ಭಾಷೆಗಳಲ್ಲಿಯೂ ಶ್ರೇಯಾ ಘೋಷಾಲ್ ಹಾಡಿಗೆ ಧ್ವನಿ ನೀಡುತ್ತಿರುವುದು ವಿಶೇಷ. ಸೂಸೆಕಿ (ತೆಲುಗು), ನೋಡೋಕ (ಕನ್ನಡ), ಅಂಗಾರೋನ್ (ಹಿಂದಿ), ಸೂಡಾನ (ತಮಿಳು), ಕಂಡಾಲೋ (ಮಲಯಾಳಂ) ಮತ್ತು ಆಗುನೆರ್ (ಬಂಗಾಳಿ) ಎಂದು ಆರಂಭವಾಗುವ ಹಾಡನ್ನು ಶ್ರೇಯಾ ಘೋಷಾಲ್ ಹಾಡಿದ್ದಾರೆ.

**ಡಿಸೆಂಬರ್ 6ಕ್ಕೆ ಸಿನಿಮಾ ಬಿಡುಗಡೆ:** ಟಾಲಿವುಡ್ ಐಕಾನ್ ಸ್ಟಾರ್ ಅಲ್ಲು ಅರ್ಜುನ್ ನಟನೆಯ ಬಹುನಿರೀಕ್ಷಿತ ಪುಷ್ಪ 2 ಸಿನಿಮಾದ ಬಿಡುಗಡೆಯನ್ನು ಐದು ತಿಂಗಳು ಮುಂದೂಡಲಾಗಿದೆ. ಪುಷ್ಪ 2 ಸಿನಿಮಾವನ್ನು ಆಗಸ್ಟ್ 5ರ ಬದಲಾಗಿ ಇದೇ ವರ್ಷದ ಡಿಸೆಂಬರ್ 6ರಂದು ಬಿಡುಗಡೆ ಮಾಡಲು ಚಿತ್ರತಂಡವು ತೀರ್ಮಾನಿಸಿದೆ. ಈ ಕುರಿತು ಅಲ್ಲು ಅರ್ಜುನ್ ಅವರೇ ಎಕ್ಸ್ ಸಾಮಾಜಿಕ ಜಾಲತಾಣದಲ್ಲಿ ಸ್ಪಷ್ಟನೆ ನೀಡಿದ್ದಾರೆ. ನಿರ್ದೇಶಕ ಸುಕುಮಾರ್ ಇನ್ನೂ ಚಿತ್ರದ ಶೂಟಿಂಗ್ ಮತ್ತು ಪೋಸ್ಟ್ ಪ್ರೊಡಕ್ಷನ್ ಹಂತದ ಕೆಲಸಗಳಲ್ಲಿ ನಿರತರಾಗಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966